24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 5 | ನವದೆಹಲಿ | ಬೆಲೆ ₹10 | ಜುಲೈ 1 2026, ಬುಧವಾರ

### ಬಿಡಿಎ ಆಯುಕ್ತರಾದ ಮೇಜರ್ ಪಿ.ಮಣಿವಣ್ಣನ್ ಪರಿಶ್ರಮದಿಂದ

## ಒಂದೇ ದಿನ 12 ಗಂಟೆಯಲ್ಲಿ 14.95 ಲಕ್ಷ ಸಸಿಗಳ ನಾಟಿ

# ಬಿಡಿಎದಿಂದ ಗಿನ್ನಿಸ್ ದಾಖಲೆ

**ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಹಮ್ಮಿಕೊಂಡಿದ್ದ ಹಸಿರು ಅಭಿಯಾನದಲ್ಲಿ ಒಂದೇ ದಿನ 12 ಗಂಟೆಗಳಲ್ಲಿ 14,95,550 ಸಸಿಗಳನ್ನು ನೆಡುವ ಮೂಲಕ ಗಿನ್ನಿಸ್ ದಾಖಲೆ ನಿರ್ಮಿಸಿದೆ.**

**ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಬಿಡಿಎ ಅಧ್ಯಕ್ಷ ಎನ್.ಎ.ಹ್ಯಾರಿಸ್ ಅವರು ಈ ಗಿನ್ನಿಸ್ ವರ್ಲ್ಡ್ ರೆಕಾರ್ಡ್ ತೀರ್ಪುಗಾರ ರಿಷಿ ನಾಥ ಅವರಿಂದ ಗಿನ್ನಿಸ್ ದಾಖಲೆಯ ಫಲಕ ಸ್ವೀಕರಿಸಿದರು. ಬೆಂಗಳೂರು ಉದ್ಯಾನ ನಗರಿ ಎಂದು ಹೆಸರಾಗಿದೆ. ಆದರೆ ಇತ್ತೀಚಿನ ವರ್ಷಗಳಲ್ಲಿ ಮಾಹಿತಿ ತಂತ್ರಜ್ಞಾನದ ಕೇಂದ್ರವಾಗಿ ವಿಶ್ವದ ಗಮನ ಸೆಳೆದಿದೆ. ಹೀಗಾಗಿ ಬೆಂಗಳೂರು ನಿರಂತರ ಶೀಘ್ರ ಗತಿಯಲ್ಲಿ ಬೆಳೆಯುತ್ತಿದೆ. ಅದಕ್ಕೆ ಅನುಗುಣವಾಗಿ ವಸತಿ ಮತ್ತಿತರ ಕಟ್ಟಡಗಳು ಭರದಿಂದ ನಿರ್ಮಾಣವಾಗುತ್ತಿವೆ.**



■ ಕಟ್ಟಡಗಳು ಮತ್ತು ಜನವಸತಿ ಬೆಳೆಯುತ್ತಿರುವಂತೆ ಅದಕ್ಕೆ ಅನುಗುಣವಾಗಿ ಹಸಿರೀಕರಣವೂ ಅಷ್ಟೇ ವೇಗದಿಂದ ಬೆಳೆಸುವುದು ಅಗತ್ಯ ಎಂದು ಪರಿಗಣಿಸಿದ ಬಿಡಿಎ ಆಯುಕ್ತರಾಗಿರುವ ಹಿರಿಯ ಐಎಎಸ್ ಅಧಿಕಾರಿ ಮೇಜರ್ ಮಣಿವಣ್ಣನ್ ಅವರು, ಇಲಾಖೆಯ ಹೆಚ್ಚುವರಿ ಜವಾಬ್ದಾರಿಗಳನ್ನು ನಿರ್ವಹಿಸುವ ಜತೆಗೆ ಉದ್ಯಾನ ನಗರಿ ಬೆಂಗಳೂರು ಹಸಿರೀಕರಣಕ್ಕೆ ಆದ್ಯತೆ ನೀಡುವ ದಿಸೆಯಲ್ಲಿ ನಗರದಲ್ಲಿ 15 ಲಕ್ಷ ಸಸಿಗಳನ್ನು ನೆಡುವ ಗುರಿಹಾಕಿಕೊಂಡಿದ್ದರು. ಅದರಂತೆ ನಾಡಪ್ರಭು ಕೆಂಪೇಗೌಡ ಬಡಾವಣೆ 6,90,000, ಶಿವರಾಮ ಕಾರಂತ ಬಡಾವಣೆ 7,05,000, ಬನಶಂಕರಿ 1,05,000 ಸೇರಿ ಒಟ್ಟು 15 ಲಕ್ಷ ಸಸಿಗಳನ್ನು ಒಂದೇ ದಿನ ನೆಡುವ ಸಿದ್ಧತೆ ಮಾಡಿಕೊಂಡಿದ್ದರು. ಅದರಂತೆ ಮುಖ್ಯಮಂತ್ರಿಗಳ ನೇತೃತ್ವದಲ್ಲಿ ಒಂದೇ ದಿನದಲ್ಲಿ 14,95,550 ಸಸಿಗಳನ್ನು ನೆಡುವ ಮೂಲಕ ನಿಗದಿತ ಗುರಿಯ ಶೇ.99.70 ರಷ್ಟು ಗುರಿ ಸಾಧನೆಯೊಂದಿಗೆ ಗಿನ್ನಿಸ್ ದಾಖಲೆ ಸೇರುವಂತೆ ಮಾಡುವಲ್ಲಿ ಅವಿರತ ಶ್ರಮಿಸಿದ್ದು ಬಿಡಿಎ ಆಯುಕ್ತ ಮಣಿವಣ್ಣನ್ ಅವರು.

■ ವಿಶ್ವದ ಗಮನ ಸೆಳೆದಿರುವ ಬೆಂಗಳೂರು ಉದ್ಯಾನ ನಗರಿ ಎಂಬ ಹೆಸರಿಗೆ ಅನ್ವರ್ಥವಾಗುವಂತೆಯೇ ಇರಬೇಕೆಂಬುದು ಮಣಿವಣ್ಣನ್ ಅವರ ಅಭಿಲಾಷೆ. ಸಾಕಷ್ಟು ಮುಂಚಿತವಾಗಿ ಬೆಂಗಳೂರು ನಗರದಾದ್ಯಂತ ಸಸಿ ನೆಡುವ ಯೋಜನೆ ರೂಪಿಸಿ, ಸಸಿಗಳನ್ನೂ ಬೆಳೆಸಿ ಸಿದ್ದವಾಗಿಟ್ಟುಕೊಂಡು, ಮುಂಗಾರು ಆರಂಭವಾಗುತ್ತಲೇ 15 ಲಕ್ಷ ಸಸಿ ನೆಡುವ ಯೋಜನೆ ರೂಪಿಸಿದ್ದರು. ಅದರಂತೆ ಮಣಿವಣ್ಣನ್ ಅವರು ಒಂದೇ ದಿನ 12 ಗಂಟೆಗಳಲ್ಲಿ ಸಸಿಗಳನ್ನು ನೆಟ್ಟು ಗಿನ್ನಿಸ್ ದಾಖಲೆಗೆ ಕಾರಣವಾದರು.

■ ಬೆಂಗಳೂರು ನಗರ ಮತ್ತೆ ಉದ್ಯಾನ ನಗರಿಯಗಿ ಪರಿವರ್ತಿಸಲು ನಾಡಪ್ರಭು ಕೆಂಪೇಗೌಡ ಜಯಂತಿಯ ದಿನದಂದೇ ಹಸಿರು ಬೆಂಗಳೂರು ಅಭಿಯಾನದಡಿ ಸುಮಾರು 250 ಎಕರೆ ಪ್ರದೇಶದಲ್ಲಿ ಸ್ಥಳೀಯ ಜಾತಿಯ 15 ಲಕ್ಷ ಸಸಿಗಳನ್ನು ಸಿದ್ಧಪಡಿಸಿಟ್ಟುಕೊಂಡು ನೆಡುವ ಗುರಿಯನ್ನು ಬಿಡಿಎ ಹೊಂದಿತ್ತು.

■ ಅಂದುಕೊಂಡಂತೆ ಒಂದೇ ದಿನ 12 ಗಂಟೆಗಳಲ್ಲಿ ಗಿಡಗಳನ್ನು ನೆಟ್ಟಿರುವ ಬಗ್ಗೆ ಗಿನ್ನಿಸ್ ವರ್ಲ್ಡ್ ರೆಕಾರ್ಡ್ ಸಂಸ್ಥೆಯ ಸುಮಾರು ಒಂದು ಸಾವಿರ ಮಂದಿ ದಾಖಲೆಗಳನ್ನು ಸಂಗ್ರಹಿಸಿದರು. ಈ ಕಾರ್ಯಕ್ರಮದಲ್ಲಿ ಬಿಡಿಎ ಅಧಿಕಾರಿಗಳು, ಸಿಬ್ಬಂದಿಗಳು, ಅರಣ್ಯ ಇಲಾಖೆ, ಸರ್ಕಾರೇತರ ಸಂಘ ಸಂಸ್ಥೆಗಳು, ಶಾಲಾ ಕಾಲೇಜು ವಿದ್ಯಾರ್ಥಿಗಳು, ಸ್ವಯಂಸೇವಕರು ಸೇರಿದಂತೆ 60 ಸಾವಿರ ಮಂದಿ ಭಾಗವಹಿಸಿ ಬೆಳಗ್ಗೆ 7 ಗಂಟೆಯಿಂದ ಸಂಜೆ 7 ಗಂಟೆಯವರೆಗೆ ನಿರಂತರ 12ಗಂಟೆಯ ವರೆಗೆ ಸಸಿಗಳನ್ನು ನೆಟ್ಟು ಸಂಭ್ರಮಿಸಿದರು.

■ ಮಧ್ಯಪ್ರದೇಶದ ಇಂದೋರ್‌ನಲ್ಲಿ 2024ರ ಜುಲೈ ತಿಂಗಳಲ್ಲಿ 24 ಗಂಟೆಗಳಲ್ಲಿ 11 ಲಕ್ಷ ಗಿಡಗಳನ್ನು ನೆಟ್ಟಿರುವುದು ಈವರೆಗಿನ ಗಿನ್ನಿಸ್ ದಾಖಲೆಯಾಗಿತ್ತು. ಬಿಡಿಎ ಅಧ್ಯಕ್ಷ ಎನ್.ಎ.ಹ್ಯಾರಿಸ್ ಅವರ ಪ್ರಕಾರ, ಗಿನ್ನಿಸ್ ದಾಖಲೆ ನಗರದ ಪ್ರತಿಯೊಬ್ಬ ನಾಗರಿಕರಿಗೂ ಸೇರಿದ್ದು, ಪರಿಸರ ಸಂರಕ್ಷಣೆ ಸಾಮೂಹಿಕ ಹೊಣೆಗಾರಿಕೆ ಯಿಂದ ಆರಂಭವಾಗುತ್ತದೆ ಎಂಬುದನ್ನು ಇದು ಸಾಬೀತು ಪಡಿಸುತ್ತದೆ. ಬಿಡಿಎ ಆಯುಕ್ತ ಮಣಿವಣ್ಣನ್ ಅವರ ನಿರಂತರ ಪರಿಶ್ರಮ ಸಾರ್ಥಕಗೊಳಿಸಿದೆ ಎಂದು ಬಣ್ಣಿಸಿದರು.



■ ಮುಖ್ಯಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್, ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅವರು ಸಹ ಈ ಯೋಜನೆಗೆ ಸಹಕರಿಸುವ ಮೂಲಕ ಗಿನ್ನಿಸ್ ದಾಖಲೆ ನಿರ್ಮಿಸುವಲ್ಲಿ ಮಹತ್ತರ ಕಾಣಿಕೆ ನೀಡಿದ್ದಾರೆ. ಗಿನ್ನಿಸ್ ವರ್ಲ್ಡ್ ರೆಕಾರ್ಡ್ ಸಲಹೆಗಾರರಾದ ಶೈಲಜಾ ಅವರು, ಪ್ರತಿಯೊಂದು ಯಶಸ್ಸಿಗೆ ಸಾಮೂಹಿಕ ಪ್ರಯತ್ನ ಅಗತ್ಯ. ಈ ದಿಸೆಯಲ್ಲಿ ಬಿಡಿಎ ಆಯುಕ್ತ ಮಣಿವಣ್ಣನ್ ಅವರು ಎಲ್ಲರ ಸಹಕಾರ ಪಡೆದುಕೊಂಡು ಈ ದಾಖಲೆಗೆ ಕಾರಣರಾಗಿದ್ದಾರೆ ಎಂದು ಮುಕ್ತಕಂಠದಿಂದ ಬಣ್ಣಿಸಿದರು.

■ ಹಿರಿಯ ಐಎಎಸ್ ಅಧಿಕಾರಿ ಮೇಜರ್ ಪಿ.ಮಣಿವಣ್ಣನ್ ಎಂದಾಕ್ಷಣ ಹಿಂದೆ ಹುಬ್ಬಳ್ಳಿ–ಧಾರವಾಡ ಪಾಲಿಕೆ ಆಯುಕ್ತರಾಗಿದ್ದಾಗ, ಅವರು ಕೈಗೊಂಡ ಅಕ್ರಮ ತೆರವು ಕಾರ್ಯಾಚರಣೆ ಇಡೀ ರಾಜ್ಯಕ್ಕೆ ಮಾದರಿಯಾಗಿತ್ತು. ಅನಂತರ ಇಡೀ ರಾಜ್ಯದಲ್ಲಿ ತೆರವು ಕಾರ್ಯಾಚರಣೆ ನಡೆಯಿತು. ಈ ಮೂಲಕ ರಾಜ್ಯದಾದ್ಯಂತ ಸಾಕಷ್ಟು ಹೆಸರು ಮಾಡಿರುವ ಮಣಿವಣ್ಣನ್ ಅವರಿಗೆ ದೊಡ್ಡ ಪ್ರಮಾಣದಲ್ಲಿ ಜನಬೆಂಬಲ ವ್ಯಕ್ತವಾಗಿತ್ತು. ನಗರ ಪ್ರದೇಶಗಳ ಅಗತ್ಯಗಳು ಮತ್ತು ಅಭಿವೃದ್ಧಿ ಬಗ್ಗೆ ಸ್ಪಷ್ಟವಾದ ಒಂದು ಕಲ್ಪನೆಯನ್ನು ಹೊಂದಿರುವ ಅವರು, ಬೆಂಗಳೂರು ನಗರವನ್ನೂ ಕೂಡ ಉದ್ಯಾನ ನಗರಿಯ ಹೆಸರು ಅನ್ವರ್ಥವಾಗುವಂತೆ ಮಾಡುವ ಕನಸು ಕಂಡ ಅವರು, ಈ ಕಾರ್ಯವನ್ನು ಒಂದೇ ದಿನದಲ್ಲಿ ಅದೂ ಕೇವಲ 12 ಗಂಟೆಗಳಲ್ಲಿ ಸಾಕಾರಗೊಳಿಸುವ ಮೂಲಕ ಇಡೀ ಬೆಂಗಳೂರಿಗರ ಮಾತ್ರವಲ್ಲದೇ ರಾಜ್ಯದ ಗಮನ ಸೆಳೆಯುವಂಥ ಅದ್ಭುತ ಕೆಲಸವನ್ನು ಮಾಡಿದ್ದಾರೆ.

■ ಪ್ರಾಮಾಣಿಕತೆ ಮತ್ತು ದಕ್ಷತೆಗೆ ಹೆಸರಾಗಿರುವ ಹಿರಿಯ ಐಎಎಸ್ ಅಧಿಕಾರಿ ಮೇಜರ್ ಪಿ.ಮಣಿವಣ್ಣನ್ ಅವರು, ಹಿಂದೆ ಸಮಾಜಕಲ್ಯಾಣ ಇಲಾಖೆ ಪ್ರಧಾನ ಕಾರ್ಯದರ್ಶಿಯಾಗಿದ್ದ ಸಂದರ್ಭದಲ್ಲಿ ಸಂವಿಧಾನ ದಿನಾಚರಣೆ ಕೂಡ ವಿಶಿಷ್ಟ ರೀತಿಯಲ್ಲಿ ಎಲ್ಲರೂ ಭಾಗವಹಿಸುವಂತೆ ಆಚರಿಸುವ ಮೂಲಕ ಮೆಚ್ಚುಗೆಗೂ ಪಾತ್ರವಾಗಿತ್ತು.

■ ಸಮಾಜ ಕಲ್ಯಾಣ ಇಲಾಖೆ ಅತ್ಯಂತ ದಕ್ಷತೆಯಿಂದ ನಡೆಯಬೇಕು. ಬಡ ವಿದ್ಯಾರ್ಥಿಗಳು ಸಮಾಜ ಕಲ್ಯಾಣ ಇಲಾಖೆ ಅಡಿಯಲ್ಲಿ ನಡೆಯುವ ವಸತಿ ಗೃಹದಲ್ಲಿದ್ದು ಅಭ್ಯಾಸ ಮಾಡುತ್ತಾರೆ. ಅವರ ಜೀವನ ಬೆಳಗಬೇಕು. ಸರ್ಕಾರ ಅವರಿಗಾಗಿ ವಿನಿಯೋಗಿಸುವ ಹಣ ಸಾರ್ಥಕ ವಾಗಬೇಕು ಎಂದು ಬಯಸಿದವರು. ಹಾಗಾಗಿ ಅವರು ವಿದ್ಯಾರ್ಥಿಗಳೊಂದಿಗೆ ವಿದ್ಯಾರ್ಥಿಯಾಗಿ ಹೇಗೆ ಜೀವನ ನಡೆಸಬೇಕೆಂದು ಸ್ವತಃ ವಿದ್ಯಾರ್ಥಿಗಳೊಂದಿಗೆ ವಸತಿ ಗೃಹದಲ್ಲಿದ್ದು ನಿತ್ಯ ಬೆಳಗ್ಗೆ ತಣ್ಣೀರು ಸ್ನಾನ ಮಾಡುವುದರೊಂದಿಗೆ ತಮ್ಮ ದಿನಚರಿ ಆರಂಭಿಸುತ್ತಿದ್ದರು. ತಾವೊಬ್ಬ ಐಎಎಸ್ ಅಧಿಕಾರಿ ಎಂಬ ಯಾವುದೇ ಬಿಗುಮಾನವಿಲ್ಲದೇ ಎಲ್ಲರಂತೆ ಹೋಟೆಲ್, ಖಾನಾವಳಿಗಳಲ್ಲಿ ಉಪಾಹಾರ, ಭೋಜನ ಸ್ವೀಕರಿಸುವ ಮೂಲಕ ಹೋಟೆಲ್‌ನವರಿಗೂ ಗುಣಮಟ್ಟದ ಬಗ್ಗೆ ಮನದಟ್ಟು ಮಾಡಿದವರು ಈ ಮಣಿವಣ್ಣನ್.




ವಿಶ್ವದಾಖಲೆಯ ತೀರ್ಪುಗಾರ ರಿಷಿನಾಥ್ ಅವರಿಂದ ಗಿನ್ನಿಸ್ ದಾಖಲೆ ಸ್ವೀಕರಿಸಿದ ಬಿಡಿಎ ಆಯುಕ್ತ ಮೇಜರ್ ಪಿ. ಮಣಿವಣ್ಣನ್, ಬಿಡಿಎ ಅಧ್ಯಕ್ಷ ಎನ್.ಎ.ಹ್ಯಾರಿಸ್ ಮೊದಲಾದವರು ಜತೆಯಲ್ಲಿದ್ದರು

**ಆ**ರೋಗ್ಯಕರ ಬೆಂಗಳೂರು ನಿರ್ಮಿಸಲು ಪ್ರಾಧಿಕಾರ ಬದ್ಧವಾಗಿದೆ. ನಗರದಲ್ಲಿ ಹಸಿರು ಹೊದಿಕೆ ವಿಸ್ತರಿಸುವುದು, ಜೀವವೈವಿಧ್ಯವನ್ನು ಉತ್ತೇಜಿಸುವುದು, ವಾಯುಮಾಲಿನ್ಯ ತಡೆದು ಮಾಲಿನ್ಯದ ಗುಣಮಟ್ಟ ಸುಧಾರಿಸುವ ಹಾಗೂ ಹವಾಮಾನ ಬದಲಾವಣೆಗೆ ಹೊಂದಿಕೊಳ್ಳುವ ನಗರವನ್ನಾಗಿ ನಿರ್ಮಿಸುವುದು ನಮ್ಮ ಉದ್ದೇಶವಾಗಿದೆ ಎನ್ನುವ ಆಯುಕ್ತ ಮಣಿವಣ್ಣನ್ ಅವರು, ಈಗ ನೆಟ್ಟಿರುವ ಪ್ರತಿಯೊಂದು ಸಸಿಯ ಸಂರಕ್ಷಣೆ. ನಿರ್ವಹಣೆ ಹಾಗೂ ಆರೋಗ್ಯಕರ ಬೆಳವಣಿಗೆಯನ್ನು ಖಚಿತಪಡಿಸಿಕೊಳ್ಳಬೇಕಾಗಿದೆ. ವಿಶ್ವ ದಾಖಲೆಯಷ್ಟೇ ಅಲ್ಲ, ಈ ಸಸಿಗಳು ಭವಿಷ್ಯದಲ್ಲಿ ಸಮೃದ್ಧ ನಗರ ಅರಣ್ಯಗಳಾಗಿ ಬೆಳೆಯುವುದೇ ಯಶಸ್ಸಿನ ಮಾನದಂಡವಾಗಲಿದೆ ಎನ್ನುತ್ತಾರೆ.

■ ಅವರು ಪ್ರವಾಸಕ್ಕೆ ಹೋದಾಗ ಎಂದೂ ಹೋಟೆಲ್ ಅಥವಾ ಸರ್ಕಾರಿ ಅತಿಥಿಗೃಹದಲ್ಲಿ ಉಳಿದುಕೊಳ್ಳುವ ಬದಲಾಗಿ ವಿದ್ಯಾರ್ಥಿ ನಿಲಯಗಳಿಗೆ ಹೋಗಿ ಅಲ್ಲೇ ವಿದ್ಯಾರ್ಥಿಗಳೊಂದಿಗೆ ವಾಸ್ತವ್ಯ ಮತ್ತು ವಿದ್ಯಾರ್ಥಿಗಳೊಂದಿಗೇ ಭೋಜನ ಸವಿಯುವ ಮೂಲಕ ವಿದ್ಯಾರ್ಥಿ ನಿಲಯಗಳು ಸರಿಯಾಗಿ ನಡೆಯುವಂತೆ ಮಾಡುವ ಜಾಣತನ ತೋರಿದವರು. ಅಲ್ಲದೇ ವಿದ್ಯಾರ್ಥಿಗಳೊಂದಿಗೆ ಮುಕ್ತವಾಗಿ ಬೆರೆತು, ಅವರೂ ಕೂಡ ಮುಂದೆ ಐಎಎಸ್–ಐಪಿಎಸ್‌ನಂಥ ಉನ್ನತ ಹುದ್ದೆಗಳನ್ನು ಪಡೆಯುವಂತೆ ಅಭ್ಯಾಸ ಮಾಡಬೇಕು. ಸರ್ಕಾರ ನಿಮಗಾಗಿ ವಿನಿಯೋಗಿಸುವ ಹಣ ಸಾರ್ಥಕಗೊಳಿಸಬೇಕೆಂದು ವಿದ್ಯಾರ್ಥಿಗಳಿಗೆ ಪ್ರೇರಣೆ ನೀಡುವ ಮೂಲಕ ಮಣಿವಣ್ಣನ್ ಅವರು, ಒಬ್ಬ ಅಧಿಕಾರಿಯಾಗದೇ ಸಹಪಾಠಿಯಂತೆ ವಿದ್ಯಾರ್ಥಿಗಳೊಂದಿಗೆ ಬೆರೆಯುತ್ತಿದ್ದರು.

■ ಎಲ್ಲರೂ ಡಾಕ್ಟರ್–ಎಂಜಿನಿಯರ್ ಆಗುತ್ತಾರೆ. ಐಎಎಸ್ – ಐಪಿಎಸ್ ಉನ್ನತ ಅಧಿಕಾರಿಗಳಾಗಿ ದೇಶಕ್ಕೆ ಉತ್ತಮ ದಕ್ಷತೆಯ ಮತ್ತು ಪ್ರಾಮಾಣಿಕತೆಯ ಆಡಳಿತ ನೀಡಿ ಎಂದು ವಿದ್ಯಾರ್ಥಿಗಳಿಗೆ ಪ್ರೋತ್ಸಾಹಿಸುತ್ತ ಬಂದವರು ಮೇಜರ್ ಪಿ.ಮಣಿವಣ್ಣನ್. ಅವರ ಪ್ರೇರಣೆಯಿಂದಲೇ ಅನೇಕ ವಿದ್ಯಾರ್ಥಿಗಳು ಐಎಎಸ್ ಕೋಚಿಂಗ್ ಸೇರಿದ್ದೂ ಉಂಟು. ಮತ್ತೆ ಕೆಲವರು ಯುಪಿಎಸ್‌ಸಿ ಪರೀಕ್ಷೆ ಪಾಸಾಗಿದ್ದು, ತಮಗೆಲ್ಲ ಮಣಿವಣ್ಣನ್ ಸರ್ ಅವರೇ ಪ್ರೇರಣೆ ಎಂದು ಹೇಳುವ ಮಟ್ಟಿಗೆ ಅವರ ಸೇವೆ ಶ್ಲಾಘನೀಯವಾಗಿತ್ತು.


■ ಈ ಎಲ್ಲ ಹಿನ್ನೆಲೆ ಹೊಂದಿರುವ ಮೇಜರ್ ಪಿ.ಮಣಿವಣ್ಣನ್ ಅವರು, ಯಾವುದೇ ಇಲಾಖೆಯಲ್ಲಿ ಕೆಲಸ ಮಾಡಿದರೂ, ಆ ಇಲಾಖೆಯ ದಕ್ಷತೆ ಹೆಚ್ಚಿಸುವಂತೆ ಮಾಡುವಂತೆ ಕ್ರಮ ವಹಿಸುವುದು, ಅದರಂತೆ ತಾವೂ ನಡೆದುಕೊಂಡು ಇತರರಿಗೆ ಪ್ರೇರಣೆಯಾಗುವುದು ಅವರ ಸ್ವಭಾವ. ಹೀಗಾಗಿ ಅವರು ಬಿಡಿಎ ಆಯುಕ್ತರಾಗಿ ಬಂದಾಗ, ಅನೇಕರಿಗೆ ಸಂತಸ ಉಂಟುಮಾಡಿದ್ದಲ್ಲದೇ, ಇಲಾಖೆಯ ದಕ್ಷತೆ ಹೆಚ್ಚಿದ್ದಂತೂ ನಿಜ.

■ ಬಿಡಿಎಗೆ ಅಯುಕ್ತರಾಗಿ ಬಂದ ನಂತರ ಏನಾದರೊಂದು ಹೊಸತನ್ನು ಮಾಡಬೇಕೆನ್ನುವ ಬದಲು ಇರುವುದನ್ನು ಸರಿಪಡಿಸುವುದು ಅವರ ಗುರಿಯಾಗಿತ್ತು. ಅದುವೇ ಉದ್ಯಾನ ನಗರಿಯನ್ನು ಕಂಗೊಳಿಸುವಂತೆ ಮಾಡುವುದು. ಈ ಯೋಚನೆ ಬಂದದ್ದೇ ತಡ, ಅವರು ಅರಣ್ಯ ಇಲಾಖೆಯವರೊಂದಿಗೆ ಸಮಾಲೋಚನೆ ನಡೆಸಿ, ಇಡೀ ಬೆಂಗಳೂರಲ್ಲಿ ಸಸಿಗಳನ್ನು ನೆಡಬೇಕಾಗಿದೆ. ಎಷ್ಟು ಸಸಿಗಳನ್ನು ನೆಡಬೇಕು? ಎಷ್ಟು ಸಸಿಗಳನ್ನು ನೀವು ಸಿದ್ಧಪಡಿಸಿದ್ದೀರಿ, ಎಂಬಿತ್ಯಾದಿ ವಿಚಾರಿಸಿದರು. ಅಷ್ಟೇ ಅಲ್ಲದೇ ನನಗೆ 15 ಲಕ್ಷ ಸಸಿಗಳು ಬೇಕು. ಅಷ್ಟನ್ನು ಸಿದ್ಧಪಡಿಸಿ ನೀಡಬೇಕೆಂದು ಸೂಚಿಸಿದರು.

■ ಅಂದುಕೊಂಡಂತೆ ಮಾಡುವುದು ಅವರ ಜಾಯಮಾನ. ಅದನ್ನು ಸಾಧಿಸುವ ಛಲ ಅವರಲ್ಲಿತ್ತು. ಅದರಂತೆ ಬೆಂಗಳೂರು ನಗರದಲ್ಲಿ 14,95,550 ಸಸಿಗಳನ್ನು ಒಂದೇ ದಿನ ಅದೂ ಕೇವಲ 12 ಗಂಟೆಗಳಲ್ಲಿ ನೆಡುವ ಮೂಲಕ ಗಿನ್ನಿಸ್ ದಾಖಲೆ ನಿರ್ಮಿಸುವ ಮೂಲಕ ಎಲ್ಲರೂ ಬೆರಗಾಗುವಂತೆ ಮಾಡಿದ್ದು ಮೇಜರ್ ಮಣಿವಣ್ಣನ್ ಅವರು.

■ ಈಗ ನೆಟ್ಟಿರುವ ಸಸಿಗಳು ಮುಂದಿನ ಐದರಿಂದ ಹತ್ತು ವರ್ಷಗಳಲ್ಲಿ ಮರಗಳಾಗಿ ಉದ್ಯಾನ ನಗರಿಗೆ ತಮ್ಮ ಕೊಡುಗೆ ನೀಡಲಿವೆ. ಮರಗಳನ್ನು ಉಳಿಸಿಕೊಂಡು ಹೋಗುವುದು ಮತ್ತು ಹೊಸ ಅರಣ್ಯ ಬೆಳೆಸುವುದು ಜನರ ಕರ್ತವ್ಯವಾಗಿದ್ದು, ಜನರ ಸಹಕಾರದಿಂದ ಇಡೀ ಬೆಂಗಳೂರು ವಿಶ್ವದ ಗಮನ ಸೆಳೆಯುವಂತೆ ಮಡಬಹುದು ಎಂದು ಮಣಿವಣ್ಣನ್ ಅವರು ವಿಶ್ವಾಸದಿಂದ ಹೇಳುತ್ತಾರೆ. ಅವರ ಈ ಮಾತು ಇಡೀ ಬೆಂಗಳೂರಿಗರಲ್ಲಿ ಅದಮ್ಯ ಚೇತನ ಮೂಡಿಸಿದ್ದಂತೂ ನಿಜ. ಪ್ರಾಮಾಣಿಕ ಅಧಿಕಾರಿ ಮನಸ್ಸು ಮಾಡಿದರೆ ಏನು ಬೇಕಾದರೂ ಸಾಧಿಸಬಹುದು ಎಂಬುದಕ್ಕೆ ಮೇಜರ್ ಮಣಿವಣ್ಣನ್ ಸಾಧಿಸಿ ತೋರಿಸಿದ್ದಾರೆ.

## ನಿತ್ಯ ಪಂಚಾಂಗ 1.07.2026 ಬುಧವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ–ವಸಂತ/ಗ್ರೀಷ್ಮ ಋತು, ಚಾಂದ್ರಮಾನ, ವೈಶಾಖ – ಜ್ಯೇಷ್ಠ ಮಾಸ

ನಿಜ ಜ್ಯೇಷ್ಠ ಬಹುಳ, ಪಾಡ್ಯ, ಪೂರ್ವಾಷಾಢ ನಕ್ಷತ್ರ, ರಾಷ್ಟ್ರೀಯ ವೈದ್ಯರ ದಿನ, ಚಾರ್ಟರ್ಡ್ ಅಕೌಂಟೆಂಟ್ ದಿನ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ.5.04–6.33 | 12.00–1.30 | 3.00–4.00 |
| ಸೋಮ | ಬೆ.7.20–9.04 | 10.30–12.00 | 1.30–12.00 |
| ಮಂಗಳ | ಮ.3.25–4.59 | 9.00–10.30 | 12.00–1.30 |
| ಬುಧ | ಮ.12.16–1.50 | 7.30–9.00 | 10.30–12.00 |
| ಗುರು | ಮ.1.50–3.29 | 6.00–7.30 | 9.00–10.30 |
| ಶುಕ್ರ | ಬೆ.10.42–12.16 | 3.00–4.30 | 7.30–9.00 |
| ಶನಿ | ಬೆ.9.07–10.41 | 1.30–3.00 | 6.00–7.30 |

## ಗಾಂಧಿ ಭವನದಲ್ಲಿ ಇಂದು ಪತ್ರಿಕಾ ದಿನಾಚರಣೆ: ಮುಖ್ಯಮಂತ್ರಿ ಉದ್ಘಾಟನೆ

ವಿಜಯವಾಣಿ ಸುದ್ದಿಜಾಲ, ಬೆಂಗಳೂರು: ಮಾಧ್ಯಮ ಅಕಾಡೆಮಿ, ವಾರ್ತಾ ಇಲಾಖೆ ಹಾಗೂ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯೂಜೆ) ಸಂಯುಕ್ತ ಆಶ್ರಯದಲ್ಲಿ ಜು.1 ರಂದು ಪತ್ರಿಕಾ ದಿನಾಚರಣೆಯನ್ನು ಗಾಂಧಿ ಭವನದಲ್ಲಿ ಬೆಳಿಗ್ಗೆ 11ಕ್ಕೆ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಉದ್ಘಾಟನೆ ಹಾಗೂ ಅಕಾಡೆಮಿಯ ವಾರ್ಷಿಕ ವರದಿ ಬಿಡುಗಡೆಯನ್ನು ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್ ಅವರು ನೆರವೇರಿಸಲಿದ್ದಾರೆ. ಸಂಸದ ಪಿ.ಸಿ. ಮೋಹನ್ ಹಾಗೂ ತೆಲಂಗಾಣ ಮಾಧ್ಯಮ ಅಕಾಡೆಮಿಯ ಅಧ್ಯಕ್ಷರಾದ ಕೆ.ಶ್ರೀನಿವಾಸ ರೆಡ್ಡಿ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಗಾಂಧಿ ನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ದಿನೇಶ್ ಗುಂಡೂರಾವ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಪತ್ರಿಕಾ ದಿನಾಚರಣೆಯ ಅಂಗವಾಗಿ ಡಿಜಿಟಲ್ ಯುಗದಲ್ಲಿ ನಿಜ ಪತ್ರಕರ್ತರು ಯಾರು? ಎಂಬ ವಿಷಯದ ಕುರಿತು ವಿಶೇಷ ವಿಚಾರ ಸಂಕಿರಣ ಆಯೋಜಿಸಲಾಗಿದೆ. ?ವಾರ್ತಾ ಭಾರತಿ?ಯ ಹಿರಿಯ ಪತ್ರಕರ್ತರಾದ ಅಬ್ದುಸ್ಸಲಾಂ ಪುತ್ತಿಗೆ ಅವರು ಪ್ರಧಾನ ಭಾಷಣ ಮಾಡಲಿದ್ದಾರೆ. ಮಾಧ್ಯಮ ಅಕಾಡೆಮಿ ಅಧ್ಯಕ್ಷೆ ಆಯೇಶಾ ಖಾನಂ ಪ್ರಾಸ್ತಾವಿಕವಾಗಿ ಮಾತನಾಡುವರು. ಕಾರ್ಯಕ್ರಮದಲ್ಲಿ ವಾರ್ತಾ ಇಲಾಖೆಯ ಆಯುಕ್ತರಾದ ಎಂ.ಎನ್. ಅನುಚೇತ್, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು, ಕರ್ನಾಟಕ ಪತ್ರಕರ್ತೆಯರ ಸಂಘದ ಅಧ್ಯಕ್ಷ ಡಾ. ಆರ್. ಪೂರ್ಣಿಮಾ ಉಪಸ್ಥಿತರಿರಲಿದ್ದಾರೆ.

# 2028ರ ವೇಳೆಗೆ ನಶೆಮುಕ್ತ ಕರ್ನಾಟಕ ನಿರ್ಮಾಣ ಗುರಿ: ಸಿಎಂ

## ಸರ್ಕಾರದ ಜತೆ ಕೈಜೋಡಿಸುವಂತೆ ಯುವಜನತೆ, ವಿದ್ಯಾರ್ಥಿಗಳಿಗೆ ಕರೆ



ಕರ್ನಾಟಕ ರಾಜ್ಯ ಪೊಲೀಸ್ ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ಮಂಗಳವಾರ ಏರ್ಪಡಿಸಿದ್ದ ಅಂತಾರಾಷ್ಟ್ರೀಯ ಮಾದಕ ವ್ಯಸನ ಮತ್ತು ಕಳ್ಳಸಾಗಣೆ ವಿರೋಧಿ ದಿನ ಕಾರ್ಯಕ್ರಮವನ್ನು ಸಿಎಂ ಡಿ.ಕೆ.ಶಿವಕುಮಾರ್ ಅವರು ಉದ್ಘಾಟಿಸಿದರು. ಸಚಿವ ಪ್ರಿಯಾಂಕ್ ಖರ್ಗೆ, ಶಾಸಕ ರಿಜ್ವಾನ್ ಅರ್ಷದ್, ಎಂಎಲ್‌ಸಿ ಗೋವಿಂದರಾಜು, ರಾಜ್ಯ ಪೊಲೀಸ್ ಮಹಾ ನಿರ್ದೇಶಕ ಎಂ ಎ ಸಲೀಮ್, ಅಪರ ಮುಖ್ಯ ಕಾರ್ಯದರ್ಶಿ ರಾಜೇಂದ್ರ ಕುಮಾರ್ ಕಟಾರಿಯ, ಬೆಂಗಳೂರು ಪೊಲೀಸ್ ಆಯುಕ್ತ ಸೀಮಂತ್‌ಕುಮಾರ್ ಸಿಂಗ್, ಎಡಿಜಿಪಿ ಹಿತೇಂದ್ರ, ಆದರ್ಶ್‌ಗ್ರೂಪ್ ಸಿಎಂಡಿ ಜಯಶಂಕರ್ ಮತ್ತಿತರರು ಭಾಗವಹಿಸಿದ್ದರು.

**ಬೆಂಗಳೂರು, ಜೂ.30:** 2028ರ ವೇಳೆಗೆ ಮಾದಕವಸ್ತು ಮುಕ್ತ– ನಶೆಮುಕ್ತ ಕರ್ನಾಟಕ ರೂಪಿಸುವುದು ನಮ್ಮ ಗುರಿ. ಇದರ ಸಲುವಾಗಿ ಪ್ರತಿಜ್ಞೆ ಮಾಡಿದ್ದೇವೆ. ಸಾರ್ವಜನಿಕರು, ಯವಜನತೆ ಮತ್ತು ವಿದ್ಯಾರ್ಥಿಗಳು ಸರ್ಕಾರದ ಜೊತೆ ಕೈಜೋಡಿಸಿದರೆ ಈ ದಂಧೆಯನ್ನು ಇಲ್ಲವಾಗಿಸಬಹುದು ಎಂದು ಸಿಎಂ ಡಿ.ಕೆ. ಶಿವಕುಮಾರ್ ಕರೆ ನೀಡಿದರು.

ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯಿಂದ ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ಮಂಗಳವಾರ ಏರ್ಪಡಿಸಿದ್ದ ಅಂತಾರಾಷ್ಟ್ರೀಯ ಮಾದಕ ವ್ಯಸನ ಮತ್ತು ಕಳ್ಳ ಸಾಗಣೆ ವಿರೋಧಿ ದಿನ – 2026 ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ನಶೆ ಬಿಡಿ ಖುಷಿ ಪಡಿ ಇದು ನಮ್ಮ ಚಿಂತನೆ. ನಮ್ಮ ಆದರ್ಶಗಳನ್ನು ನಾವೇ ರೂಪಿಸಿಕೊಳ್ಳಬೇಕು. ನಾವು ಇಂದು ಮಾಡಿರುವ ಸಂಕಲ್ಪ, ಪ್ರತಿಜ್ಞೆಯು ನಮ್ಮ ಜೀವನದ ಉದ್ದಕ್ಕೂ ರೂಡಿಸಿಕೊಳ್ಳಬೇಕು. ನಮ್ಮ ಸುತ್ತಲಿನ ಪರಿಸರದಲ್ಲೂ ಇದರ ಬಗ್ಗೆ ಜಾಗೃತಿ ಮೂಡಿಸಬೇಕು. ಅನೇಕರು ನಮ್ಮ ಮೇಲೆ ಒತ್ತಡ ಹೇರಬಹುದು. ಅದಕ್ಕೆ ವಿದ್ಯಾರ್ಥಿ, ಯುವಜನತೆ ಮಣಿಯಬಾರದು. ನಿಮ್ಮ ದೇಹ ಮನಸ್ಸನ್ನು ನಿಯಂತ್ರಣದಲ್ಲಿ ಇಟ್ಟುಕೊಳ್ಳಬೇಕು. ಮಾನಸಿಕ ಸ್ಥಿಮಿತತೆ ಕಳೆದುಕೊಳ್ಳಬಾರದು? ಎಂದು ಕರೆ ನೀಡಿದರು. ಕಳೆದ ಮೂರು ವರ್ಷಗಳಲ್ಲಿ ಹಿಂದಿನ ಗೃಹಸಚಿವರಾಗಿದ್ದ ಪರಮೇಶ್ವರ್ ಅವರ ನೇತೃತ್ವದಲ್ಲಿ 89 ಕೋಟಿ ರೂ. ಮೊತ್ತದ ಮಾದಕವಸ್ತುಗಳನ್ನು ನಾಶಪಡಿಸಲಾಗಿದೆ. ಈ ಜಾಲವನ್ನು ಬೇಧಿಸಿದ ಎಲ್ಲಾ ಉನ್ನತ ಪೊಲೀಸ್ ಅಧಿಕಾರಿಗಳು, ಕಾನ್ಸ್ಟೇಬಲ್ ಹಾಗೂ ಎಲ್ಲಾ ಸಿಬ್ಬಂದಿಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದರು. ಸಮಾಜದಲ್ಲಿ ಗೌರವ ಹಾಳಾಗಲಿದೆ ಎಂದು ಮಕ್ಕಳ ಪೊ?ಷಕರು ಯಾವುದೇ ವಿಚಾರವನ್ನು ಮುಚ್ಚಿಟ್ಟುಕೊಳ್ಳಬೇಡಿ. ನೀವು ಮಕ್ಕಳ ದುರಭ್ಯಾಸವನ್ನು ಮುಚ್ಚಿಟ್ಟಷ್ಟು ಅವರ ಭವಿಷ್ಯವೇ ಹಾಳಾಗಲಿದೆ. ನೀವು ತಿಳಿವಳಿಕೆ ನೀಡಿ. ಪೊಲೀಸರನ್ನು ವಿಶ್ವಾಸಕ್ಕೆ ಪಡೆದು ಇದರ ಮೂಲವನ್ನು ಕಂಡುಹಿಡಿಯಲು ಸಹಾಯ ಮಾಡಬೇಕು. ಈ ಜಾಲದಿಂದ ನಿಮ್ಮ ಮಕ್ಕಳನ್ನು ಕಾಪಾಡಬಹುದು. ನಿಮ್ಮ ಮಕ್ಕಳ ಹೆಸರು ಬಹಿರಂಗಗೊಳ್ಳದಂತೆ ಪೊಲೀಸ್ ಇಲಾಖೆಗೆ ನಾನು ನಿರ್ದೇಶನ ನೀಡುತ್ತೇನೆ ಎಂದರು.

### ಘೋಷಣೆಯಲ್ಲ, ಸಂಕಲ್ಪ

ಮಾದಕವಸ್ತುಗಳ ಸೇವನೆ ಬಗ್ಗೆ ಸಾರ್ವಜನಿಕರು, ಪೋಷಕರು ಗುಪ್ತ ಮಾಹಿತಿ ನೀಡಿದರೆ ಅವರಿಗೆ ಪೊಲೀಸ್ ಇಲಾಖೆಯಿಂದ ಬಹುಮಾನ ನೀಡುವ ತೀರ್ಮಾನ ಮಾಡಲಾಗಿದೆ. ಡ್ರಗ್ಸ್ ಮುಕ್ತ ಕರ್ನಾಟಕ ಎನ್ನುವುದು ಕೇವಲ ಸರ್ಕಾರ ಘೋಷಣೆಯಲ್ಲ. ಇದು ಪ್ರತಿಯೊಬ್ಬ ಕನ್ನಡಿಗರ ಸಂಕಲ್ಪ. ನಾವೆಲ್ಲರೂ ಮನುಷ್ಯರಾಗಿ ಹುಟ್ಟಿದ್ದೇವೆ. ಸಾಧನೆ ಇಲ್ಲದೇ ಸತ್ತರೇ ಸಾವಿಗೆ ಅವಮಾನ, ಆದರ್ಶ ಇಲ್ಲದೇ ಬದುಕಿದರೆ ಬದುಕಿಗೆ ಅವಮಾನ. ನಾವೆಲ್ಲರೂ ಜೀವನದಲ್ಲಿ ಆದರ್ಶ ಅಳವಡಿಸಿಕೊಂಡು ಮುನ್ನಡೆಯಬೇಕು. ಮಾದಕವಸ್ತುಗಳ ಕಂಟಕವನ್ನು ಸಮಾಜದಿಂದ ಕಿತ್ತುಹಾಕಬೇಕು ಎಂದು ನಾವೆಲ್ಲರೂ ಪ್ರತಿಜ್ಞೆ ಮಾಡಿದ್ದೇವೆ. ವಿದ್ಯಾರ್ಥಿಗಳು ಮಾದಕವಸ್ತು ವಿರೋಧಿಯಾಗಿ ಪ್ರತಿಜ್ಞೆ ತೆಗೆದುಕೊಂಡಿದ್ದೀರಿ. ನನ್ನ ಹೃದಯದಿಂದ ಎಲ್ಲಾ ವಿದ್ಯಾರ್ಥಿಗಳಿಗೆ, ಪೋಷಕರಿಗೆ, ವಿದ್ಯಾಸಂಸ್ಥೆಗಳಿಗೆ ವಂದನೆ ಸಲ್ಲಿಸುತ್ತೇನೆ ಎಂದು ಡಿ.ಕೆ. ಶಿವಕುಮಾರ್ ತಿಳಿಸಿದರು. ವಿಶ್ವ ಆರೋಗ್ಯ ಸಂಸ್ಥೆ ವರದಿ ಪ್ರಕಾರ ದೇಶದಲ್ಲಿ ತಂಬಾಕು ಸೇವನೆ ಮಾಡಿ ಪ್ರತಿವರ್ಷ 13– 14 ಲಕ್ಷ ಜನರು ಸಾಯುತ್ತಿದ್ದಾರೆ ಎಂದು ವರದಿ ನೀಡಿತ್ತು. ನಮ್ಮ ದೇಶದ ಸಂಸ್ಕೃತಿ, ಭಾಷೆ, ವೈವಿಧ್ಯವನ್ನು ಇಡೀ ಪ್ರಪಂಚ ಗಮನಿಸುತ್ತಿದೆ. ಇದು ಮಾದರಿಯಾಗಬಾರದು ಎಂದು ಹೇಳಿದರು. ಪೊಲೀಸ್ ವ್ಯವಸ್ಥೆ ಮೇಲೆ ನಂಬಿಕೆ ಇರಬೇಕು. ಇವರು ಸಹ ನಿಮ್ಮ ಕುಟುಂಬವಿದ್ದಂತೆ. ಯಾವುದೇ ಪೊಲೀಸ್ ಆಗಲಿ ಕುಟುಂಬ ವ್ಯವಸ್ಥೆಗೆ ಧಕ್ಕೆ ತರುವುದಿಲ್ಲ. ಇವರು ರಾಜ್ಯದ ಹಿತಕ್ಕಾಗಿ ದುಡಿಯುತ್ತಿದ್ದಾರೆ. ಎಲ್ಲಾ ಜನಪ್ರತಿನಿಧಿಗಳು ನಶೆ ಮುಕ್ತ ಕರ್ನಾಟಕಕ್ಕೆ ಕೈ ಜೋಡಿಸಲಿದ್ದಾರೆ ಎಂದು ಸಿಎಂ ಹೇಳಿದರು.



ಬೆಂಗಳೂರಿನ ಬಸವೇಶ್ವರ ನಗರದ ಕಾರ್ಮೆಲ್ ಶಾಲೆಯಲ್ಲಿ ತಮ್ಮ ಶಿಕ್ಷಕಿ ಆಗಿದ್ದ ಧಾತ್ರಿ ಮೆನೆಂಜಸ್ ಅವರ ಪಾರ್ಥಿವ ಶರೀರಕ್ಕೆ ಸಿಎಂ ಡಿ ಕೆ ಶಿವಕುಮಾರ್ ಅವರು ರೆಸಿಡೆನ್ಸಿ ರಸ್ತೆಯ ಸೇಂಟ್ ಪ್ಯಾಟ್ರಿಕ್ ಚರ್ಚ್‌ನಲ್ಲಿ ಮಂಗಳವಾರ ಅಂತಿಮ ನಮನ ಸಲ್ಲಿಸಿದರು. ಶಾಸಕ ರಿಜ್ವಾನ್ ಅರ್ಷದ್ ಜತೆಗಿದ್ದರು.



ಎಐಸಿಸಿ ಪರಿಶಿಷ್ಟ ವಿಭಾಗದ ರಾಷ್ಟ್ರೀಯ ಸಂಯೋಜಕ ಡಾ. ಆನಂದಕುಮಾರ್ ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಅವರನ್ನು ಭೇಟಿ ಮಾಡಿ ಅಭಿನಂದನೆ ಸಲ್ಲಿಸಿದರು ಕಾಂಗ್ರೆಸ್ಸಿನ ಹಿರಿಯ ಮುಖಂಡ ವೆಂಕಟೇಶ್‌ಮೂರ್ತಿ, ವೆಂಕಟರಾಮು, ಯುವರಾಜ್, ಹರೀಶ್ ನಾಯಕ್ ಮತ್ತಿತರರು ಹಾಜರಿದ್ದರು

# ಎಸ್‌ಐಆರ್‌ಗೆ ಕಾಂಗ್ರೆಸ್ ಅಡ್ಡಗಾಲು, ಬಿಎಲ್‌ಓಗಳನ್ನು ನೇಮಿಸದ ಸರ್ಕಾರ: ಪ್ರತಿಪಕ್ಷ ನಾಯಕ ಅಶೋಕ್

**ಬೆಂಗಳೂರು, ಜೂ.30:** ಎಸ್‌ಐಆರ್ ವಿರೋಧಿಸುತ್ತಿರುವ ಕಾಂಗ್ರೆಸ್ ಸರ್ಕಾರ, ಬಿಎಲ್‌ಓಗಳನ್ನು ನೇಮಿಸಲು ಕೂಡ ಅಡ್ಡಗಾಲು ಹಾಕಿದೆ. ಅನೇಕ ಕಡೆ ಅಧಿಕಾರಿಗಳನ್ನು ನೇಮಿಸದೆ ಎಸ್‌ಐಆರ್ ನಡೆಯದಂತೆ ಮಾಡಲಾಗಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆಕ್ರೋಶ ವ್ಯಕ್ತಪಡಿಸಿದರು.



ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೇಂದ್ರ ಸರ್ಕಾರದಿಂದ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ಆರಂಭವಾಗಿದೆ. ಆದರೆ ಕಾಂಗ್ರೆಸ್ ಸರ್ಕಾರ ಬಿಎಲ್‌ಓಗಳನ್ನು ಸರಿಯಾಗಿ ನೇಮಿಸಿಲ್ಲ. ಮೂವತ್ತು ಬಿಎಲ್‌ಓ ಇರಬೇಕಾದಲ್ಲಿ ಕೇವಲ ಹತ್ತು ಮಂದಿ ಕಾಣಿಸುತ್ತಿದ್ದಾರೆ. ಸರ್ಕಾರ ಟಿಎ, ಡಿಎ ನೀಡಿಲ್ಲ, ಹಾಜರಾಗಲು ಅನುಮತಿ ನೀಡಿಲ್ಲ ಎಂದು ಅಧಿಕಾರಿಗಳು ಹೇಳುತ್ತಿದ್ದಾರೆ ಎಂದು ದೂರಿದರು.

ಮತದಾರರ ಪಟ್ಟಿಯಲ್ಲಿ ನೈಜ ಮತದಾರರ ಹೆಸರು ಮಾತ್ರ ಇರಬೇಕೆಂಬುದು ಎಸ್‌ಐಆರ್‌ನ ಉದ್ದೇಶ. ಜಯನಗರದಲ್ಲಿ 29 ಕಡೆ ಅಧಿಕಾರಿ ಅಲ್ಲದ ಕಾಂಗ್ರೆಸ್ ಮುಖಂಡರನ್ನು ಬಿಎಲ್‌ಓ ಆಗಿ ನೇಮಿಸಲಾಗಿದೆ. ಚಾಮರಾಜಪೇಟೆಯಲ್ಲಿ ಮನೆ ಮನೆಗೆ ಹೋಗುವಾಗ ಕಾಂಗ್ರೆಸ್ ಶಾಸಕ ಜಮೀರ್ ಅಹ್ಮದ್ ಖಾನ್ ಫೋಟೊ ತೋರಿಸಿದ್ದಾರೆ. ಬಿಎಲ್‌ಓಗಳು ಯಾವುದೇ ಪಕ್ಷದ ಗುರುತು ತೋರಿಸಬಾರದು ಎಂದರು.

**ಕಾಂಗ್ರೆಸ್ ಶಾಸಕರ ಕ್ಷೇತ್ರಕ್ಕೆ ಹೆಚ್ಚು ಅನುದಾನ**

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕಾಂಗ್ರೆಸ್ ಶಾಸಕರಿರುವ ಕಡೆ ಮಾತ್ರ ಹೆಚ್ಚು ಅನುದಾನ ನೀಡಿದ್ದಾರೆ. ಕಾಂಗ್ರೆಸ್ ಶಾಸಕರಿರುವ ಕಡೆ 100 ಕೋಟಿ ರೂ. ನೀಡಿದರೆ, ಬಿಜೆಪಿ ಶಾಸಕರಿರುವ ಕಡೆ 40–50 ಲಕ್ಷ ರೂ. ನೀಡಿದ್ದಾರೆ. ಈ ರೀತಿಯ ತಾರತಮ್ಯ ಮಾಡಿ ಅಭಿವೃದ್ಧಿ ಕುಂಠಿತವಾಗುವಂತೆ ಮಾಡಿದ್ದಾರೆ. ಬೆಂಗಳೂರಿನಲ್ಲಿ ಬಿಜೆಪಿ ಶಾಸಕರು ಹೆಚ್ಚಿದ್ದಾರೆ. ಕೂಡಲೇ ಈ ತಾರತಮ್ಯವನ್ನು ನಿವಾರಿಸಬೇಕು. ಸಚಿವ ಎಂ.ಬಿ.ಪಾಟೀಲ್ ಅವರಿಗೆ ಬೆಂಗಳೂರಿನ ಬಗ್ಗೆ ತಿಳಿದಿಲ್ಲ. ಬಿಜೆಪಿ ಸರ್ಕಾರ ಇದ್ದಾಗ ಕಾಂಗ್ರೆಸ್ ಶಾಸಕರಿರುವ ಕಡೆ ಹೆಚ್ಚು ಅನುದಾನ ನೀಡಲಾಗಿತ್ತು. ಶಿವಾಜಿನಗರ ಕ್ಷೇತ್ರ, ಹೆಬ್ಬಾಳ ಕ್ಷೇತ್ರಕ್ಕೆ ನಾನೇ 100 ಕೋಟಿ ರೂ. ಅನುದಾನ ಕೊಡಿಸಿದ್ದೆ. ಕಾಂಗ್ರೆಸ್ ಸರ್ಕಾರ ತಾರತಮ್ಯ ಮಾಡಿದರೆ ಬ್ರ್ಯಾಂಡ್ ಬೆಂಗಳೂರು ಆಗುವುದಿಲ್ಲ ಎಂದು ಅಶೋಕ್ ಹೇಳಿದರು.

### ಜಿಬಿಎ 5 ಪಾಲಿಕೆ ಗೆಲ್ಲಲು ಸಿದ್ಧತೆ

ಜಿಬಿಎ ಚುನಾವಣೆಗೆ ಸಂಬಂಧಿಸಿದ ಉಸ್ತುವಾರಿಗಳ ಸಭೆ ನಡೆಸಿ, ಎಸ್‌ಐಆರ್, ಅಭ್ಯರ್ಥಿ ಆಯ್ಕೆ ಮೊದಲಾದ ವಿಷಯಗಳ ಬಗ್ಗೆ ಚರ್ಚಿಸಲಾಗಿದೆ. ಜಿಬಿಎ ಚುನಾವಣೆಯನ್ನು ಕಾಂಗ್ರೆಸ್ ಸರ್ಕಾರ ನಡೆಸುತ್ತದೆಯೋ ಇಲ್ಲವೋ ಗೊತ್ತಿಲ್ಲ. ಆದರೆ ಬಿಜೆಪಿಯಿಂದ ಐದು ಮಹಾನಗರಪಾಲಿಕೆಗಳನ್ನು ಗೆಲ್ಲಬೇಕೆಂಬ ಉದ್ದೇಶದಿಂದ ಸಿದ್ಧತೆ ಮಾಡಿಕೊಳ್ಳಲಾಗಿದೆ. ಮೂರು ವರ್ಷದಲ್ಲಿ ಬೆಂಗಳೂರಿಗೆ ಕಾಂಗ್ರೆಸ್ ಮಾಡಿದ ಅನ್ಯಾಯ, ರಸ್ತೆಗುಂಡಿ, ತೆರಿಗೆ ಹೆಚ್ಚಳ ಮೊದಲಾದ ಸಮಸ್ಯೆಗಳನ್ನು ತೋರಿಸಲು ಸಮಿತಿ ರಚಿಸಲಾಗುತ್ತಿದೆ. ಪ್ರಣಾಳಿಕೆ ರೂಪಿಸಲು ಕೂಡ ಸಮಿತಿ ರಚಿಸಲಾಗುತ್ತಿದೆ ಎಂದು ಅಶೋಕ್ ಹೇಳಿದರು.

### ರಾಜ್ಯಾಧ್ಯಕ್ಷರ ಬದಲಾವಣೆ ವರಿಷ್ಠರ ತೀರ್ಮಾನ

ತಾವು ಏನೂ ಹೇಳಿಲ್ಲ ಎಂದು ಮಾಜಿ ಸಿಎಂ ಡಿ.ವಿ.ಸದಾನಂದಗೌಡರು ಹೇಳಿದ್ದಾರೆ. ಯಾರು ಏನು ಹೇಳಿದರೂ ಬಿಜೆಪಿ ರಾಜ್ಯಾಧ್ಯಕ್ಷರ ಬದಲಾವಣೆ ಸಾಧ್ಯವಿಲ್ಲ. ಅದನ್ನು ವರಿಷ್ಠರು ಮಾತ್ರ ತೀರ್ಮಾನಿಸುತ್ತಾರೆ. ಎಲ್ಲರ ಮನೆಯಲ್ಲಿ ದೋಸೆ ತೂತಾದರೆ ಕಾಂಗ್ರೆಸ್‌ನವರದ್ದು ಹಂಚು ತೂತಾಗಿರುವುದರಿಂದ ಅವರ ಬಗ್ಗೆ ಹೇಳಲು ಸಾಧ್ಯವಿಲ್ಲ. ಶಾಸಕ ಎಸ್.ಆರ್.ವಿಶ್ವನಾಥ್ ಕೆಂಪೇಗೌಡ ಜಯಂತಿ ವಿಚಾರದಲ್ಲಿ ಹೇಳಿಕೆ ನೀಡಿದ್ದಾರೆ. ಅದನ್ನು ಅಲ್ಲಿಗೆ ಮುಕ್ತಾಯ ಮಾಡಿದ್ದು, ಆ ರೀತಿ ಯಾರೂ ಮಾತಾಡಬಾರದು ಎಂದು ಸಂದೇಶ ನೀಡಲಾಗಿದೆ. ಅವರು ಪಕ್ಷ ಮುಖ್ಯ ಎಂಬ ಅರ್ಥದಲ್ಲಿ ಹೇಳಿಕೆ ನೀಡಿದ್ದು, ಇದನ್ನು ಇಲ್ಲಿಗೇ ಅಂತ್ಯ ಮಾಡುತ್ತೇವೆ ಎಂದಿದ್ದಾರೆ ಎಂದು ಅಶೋಕ್ ಹೇಳಿದರು.

# ಸುರಕ್ಷತಾ ಕ್ರಮಗಳೊಂದಿಗೆ ಬಂಡಿಪುರ, ನಾಗರಹೊಳೆ ಸಫಾರಿ ಆರಂಭಿಸಿ: ಸಿಎಂ ಡಿ.ಕೆ.ಶಿವಕುಮಾರ್ ಸೂಚನೆ



**ಬೆಂಗಳೂರು, ಜೂ.30:** ಅಗತ್ಯ ಸುರಕ್ಷತಾ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ ಬಂಡಿಪುರ ಹಾಗೂ ನಾಗರಹೊಳೆ ರಾಷ್ಟ್ರೀಯ ಉದ್ಯಾನಗಳಲ್ಲಿನ ಸಫಾರಿ ಮತ್ತು ಪರಿಸರ ಪ್ರವಾಸೋದ್ಯಮ ಚಟುವಟಿಕೆಗಳನ್ನು ಪುನರಾರಂಭಿಸಲು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಹಾಗೆಯೇ ಮೇಕೆದಾಟು ಯೋಜನೆಗೆ ಸಣ್ಣ ಪುಟ್ಟ ನೆಪಗಳನ್ನು ಮುಂದಿಟ್ಟು ಸುಪ್ರೀಂಕೋರ್ಟ್‌ನಲ್ಲಿ ತಕರಾರು ಮಾಡಲು ತಮಿಳುನಾಡು ಪ್ರಯತ್ನಿಸುತ್ತಿದೆ. ಈ ಸಣ್ಣ ಪುಟ್ಟ ತಾಂತ್ರಿಕ ಸಮಸ್ಯೆ ಇದೆಯಾ ಎಂದು ಪರಿಶೀಲಿಸಿ ಪರಿಣಾಮಕಾರಿಯಾಗಿ ಬಗೆಹರಿಸಲು ಮುಖ್ಯಮಂತ್ರಿಗಳು ಸೂಚನೆ ನೀಡಿದರು.

ವಿಧಾನಸೌಧದ ಸಮಿತಿ ಕೊಠಡಿಯಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅಧ್ಯಕ್ಷತೆಯಲ್ಲಿ ನಡೆದ ಕರ್ನಾಟಕ ರಾಜ್ಯ ವನ್ಯಜೀವಿ ಮಂಡಳಿಯ ಸ್ಥಾಯಿ ಸಮಿತಿ ಸಭೆಯಲ್ಲಿ ಅವರು ಈ ನಿರ್ದೇಶನ ನೀಡಿದರು.

ಸಭೆಯಲ್ಲಿ ಅಧಿಕಾರಿಗಳು ನೀಡಿದ ಮಾಹಿತಿಯಂತೆ, ಬಂಡಿಪುರ ಮತ್ತು ನಾಗರಹೊಳೆ ಪರಿಸರ ಪ್ರವಾಸೋದ್ಯಮ ಹಾಗೂ ಸಫಾರಿ ಪ್ರದೇಶಗಳಲ್ಲಿ ಹುಲಿಗಳು ಮತ್ತು ಚಿರತೆಗಳ ಸಾಂದ್ರತೆ, ಮಾನವ–ವನ್ಯಜೀವಿ ಸಂಘರ್ಷ ಹೆಚ್ಚಿರುವ ಪ್ರದೇಶಗಳಿಗಿಂತ ಅಧಿಕವಾಗಿದೆ. ಈ ಹಿನ್ನೆಲೆಯಲ್ಲಿ ಪ್ರವಾಸಿಗರ ಸುರಕ್ಷತೆಗೆ ಯಾವುದೇ ಧಕ್ಕೆಯಾಗದಂತೆ ಮುನ್ನೆಚ್ಚರಿಕೆ ಹಾಗೂ ಸುರಕ್ಷತಾ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ ಸಫಾರಿ ಚಟುವಟಿಕೆಗಳನ್ನು ಆರಂಭಿಸುವಂತೆ ಮುಖ್ಯಮಂತ್ರಿ ಸೂಚಿಸಿದರು.


ಸಭೆಯಲ್ಲಿ ಬಿಎಂಐಸಿ ಕಾರಿಡಾರ್ ನಿರ್ಮಾಣದಿಂದ ಆನೆ, ಹುಲಿ ಹಾಗೂ ಚಿರತೆಗಳ ಸಾಂಪ್ರದಾಯಿಕ ಸಂಚಾರ ಮಾರ್ಗಗಳಿಗೆ ಅಡ್ಡಿಯಾಗಿದೆ ಎಂದು ಅಧಿಕಾರಿಗಳು ವಿವರಿಸಿದರು. ಇದರ ಪರಿಣಾಮವಾಗಿ ವನ್ಯಜೀವಿಗಳು ಅರಣ್ಯ ಪ್ರದೇಶಗಳಿಂದ ಹೊರಬಂದು ಚನ್ನಪಟ್ಟಣ ಹಾಗೂ ರಾಮನಗರ ಭಾಗಗಳತ್ತ ಚಲಿಸುತ್ತಿದ್ದು, ಮಾನವ–ವನ್ಯಜೀವಿ ಸಂಘರ್ಷ ಹೆಚ್ಚಾಗಲು ಇದೂ ಪ್ರಮುಖ ಕಾರಣವಾಗಿದೆ ಎಂದು ಸಭೆಗೆ ತಿಳಿಸಲಾಯಿತು.

ಅಧಿಕಾರಿಗಳ ಪ್ರಕಾರ, ಬೆಂಗಳೂರು–ಮೈಸೂರು ಎಕ್ಸ್‌ಪ್ರೆಸ್‌ವೇ ನಿರ್ಮಾಣಕ್ಕೆ ಅನುಮತಿ ನೀಡುವ ಸಂದರ್ಭದಲ್ಲಿ ವನ್ಯಜೀವಿಗಳ ಸುರಕ್ಷಿತ ಸಂಚಾರಕ್ಕಾಗಿ ಅಗತ್ಯ ಅಂಡರ್‌ಪಾಸ್, ಓವರ್‌ಪಾಸ್ ಹಾಗೂ ವನ್ಯಜೀವಿ ಕಾರಿಡಾರ್‌ಗಳನ್ನು ನಿರ್ಮಿಸುವ ಷರತ್ತು ವಿಧಿಸಲಾಗಿತ್ತು. ಆದರೆ ರಸ್ತೆ ನಿರ್ಮಾಣದ ವೇಳೆ ಈ ಷರತ್ತುಗಳನ್ನು ಸಮರ್ಪಕವಾಗಿ ಪಾಲಿಸಲಾಗಿಲ್ಲ ಎಂಬ ವಿಚಾರವನ್ನು ಅಧಿಕಾರಿಗಳು ಸಭೆಯ ಗಮನಕ್ಕೆ ತಂದರು.

ಸಭೆಯಲ್ಲಿ ಬಿಬಿಎಂಪಿ ವ್ಯಾಪ್ತಿಯಲ್ಲಿ ಒಣಗಿರುವ ಹಾಗೂ ಅಪಾಯದ ಸ್ಥಿತಿಯಲ್ಲಿರುವ ಮರಗಳು ಮತ್ತು ಕೊಂಬೆಗಳನ್ನು ತೆರವುಗೊಳಿಸುವ ಕುರಿತು ಈಗಾಗಲೇ ಸ್ಪಷ್ಟ ಸೂಚನೆ ನೀಡಲಾಗಿದ್ದರೂ, ಅದರ ಪರಿಣಾಮಕಾರಿ ಅನುಷ್ಠಾನವಾಗದ ಹಿನ್ನೆಲೆಯಲ್ಲಿ ಮಳೆ ಮತ್ತು ಗಾಳಿಯಿಂದ ಮರಗಳು ಹಾಗೂ ಕೊಂಬೆಗಳು ಬಿದ್ದು ಅಪಘಾತಗಳು ಸಂಭವಿಸುತ್ತಿವೆ ಎಂದು ಸ್ಥಾಯಿ ಸಮಿತಿ ಸದಸ್ಯರು ಮುಖ್ಯಮಂತ್ರಿಗಳ ಗಮನಕ್ಕೆ ತಂದರು. ಇದಕ್ಕೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿ, ಸಾರ್ವಜನಿಕರ ಸುರಕ್ಷತೆಗೆ ಆದ್ಯತೆ ನೀಡಿ ಅಪಾಯಕಾರಿಯಾಗಿರುವ ಮರಗಳು ಮತ್ತು ಕೊಂಬೆಗಳ ಗುರುತು ಪತ್ತೆ, ತೆರವು ಹಾಗೂ ತಡೆಗಟ್ಟುವ ಕ್ರಮಗಳನ್ನು ತುರ್ತಾಗಿ ಕೈಗೊಳ್ಳುವಂತೆ ಸಂಬಂಧಪಟ್ಟ

# ಬಿಜೆಪಿ ಬೆಂಬಲಿಗರಿಗೆ ಎಸ್‌ಐಆರ್ ಫಾರ್ಮ್–6 ಸಿಗದಂತೆ ಮಾಡಲು ತಂತ್ರ

### ಅಧಿಕಾರಿಗಳ ಮೇಲೆ ಸರ್ಕಾರ ಒತ್ತಡ: ಸಂಸದ ಬಸವರಾಜ ಬೊಮ್ಮಾಯಿ ಆರೋಪ



**ಬೆಂಗಳೂರು, ಜೂ.30:** ರಾಜ್ಯದಲ್ಲಿ ಮಂಗಳವಾರದಿಂದ ಎಸ್‌ಐಆರ್ ಆರಂಭವಾಗಿದೆ. ಈ ಪರಿಷ್ಕರಣೆಯನ್ನು ಮೊದಲಿನಿಂದಲೂ ಕಾಂಗ್ರೆಸ್ ನಾಯಕರು ವಿರೋಧಿಸುತ್ತಲೇ ಬಂದಿದ್ದಾರೆ. ಇದೀಗ ಬಿಜೆಪಿ ಬೆಂಬಲಿಗರಿಗೆ ಎಸ್‌ಐಆರ್ ಫಾರ್ಮ್ 6 ಸಿಗದಂತೆ ಮಾಡುವ ಸಾಧ್ಯತೆ ಇದೆ. ಅಲ್ಲದೇ ಸರ್ಕಾರ ಅಧಿಕಾರಿಗಳ ಮೇಲೆ ಒತ್ತಡ ಹಾಕುತ್ತಿದೆ ಎಂದು ಬಿಜೆಪಿ ಸಂಸದ ಬಸವರಾಜ ಬೊಮ್ಮಾಯಿ ಅವರು ಸರ್ಕಾರದ ಮೇಲೆ ಗಂಭೀರ ಆರೋಪ ಮಾಡಿದರು.

ಎಸ್‌ಐಆರ್ ಕುರಿತು ಹೇಳಿಕೆ ನೀಡಿರುವ ಅವರು, ಮೊದಲನೇ ಹಂತದಲ್ಲಿ ಬಿಎಲ್‌ಓಗಳು ಮನೆ ಮನೆಗೆ ಬಂದು ಫಾರ್ಮ್ 6 ವಿತರಣೆ ಮಾಡುವ ಕಾರ್ಯಕ್ರಮ ಆರಂಭವಾಗಿದೆ. ರಾಜ್ಯ ಕಾಂಗ್ರೆಸ್ ಸರ್ಕಾರ ಫಾರ್ಮ್ ವಿತರಣೆಯಲ್ಲಿಯೇ ತಾರತಮ್ಯ ಮಾಡಿ ಬಿಜೆಪಿಯ ಬೆಂಬಲಿಗರಿಗೆ ವಿತರಣೆಯಾಗದಂತೆ ನೋಡಿಕೊಳ್ಳುವ ಸಾಧ್ಯತೆಗಳಿವೆ. ಸರ್ಕಾರದ ಈ ತಾರತಮ್ಯದ ಪ್ಲ್ಯಾನ್ ಕುರಿತು ಜಾಗೃತಿ ವಹಿಸಬೇಕೆಂದು ಬಿಜೆಪಿ ಕಾರ್ಯಕರ್ತರು ಮತ್ತು ಮತಗಟ್ಟೆ ಮಟ್ಟದ ಏಜೆಂಟ್ (ಬಿಎಲ್‌ಎ) ಅತ್ಯಂತ ಜಾಗೃತವಾಗಿ ಕರ್ತವ್ಯ ನಿರ್ವಹಿಸಬೇಕೆಂದು ಕರೆ ನೀಡಿದರು.

ಬಿಜೆಪಿ ನಮ್ಮ ಪಕ್ಷದ ಎಲ್ಲ ಬಿಎಲ್‌ಎಗಳಿಗೆ ವಿನಂತಿಸಿಕೊಳ್ಳುವುದೇನೆಂದರೆ ಬಿಎಲ್‌ಓಗಳ ಜೊತೆಗೆ ಪ್ರತಿ ಬೂತ್‌ನಲ್ಲಿ ಫಾರ್ಮ್ ನಂಬರ್ 6 ವಿತರಣೆಯಾಗುವಂತೆ ನೊಡಿಕೊಳ್ಳಬೇಕು. ಅವುಗಳನ್ನು ಸರಿಯಾದ ರೀತಿ ಭರ್ತಿ ಮಾಡುವಂತೆ ನೋಡಿಕೊಳ್ಳಬೇಕು ಎಂದು ವಿನಂತಿಸಿಕೊಂಡಿದ್ದಾರೆ.

ಮೊದಲನೆ ಹಂತದ ಈ ಕಾರ್ಯಕ್ರಮ ನಡೆಸುತ್ತಿರುವ ಅಧಿಕಾರಿಗಳ ಮೇಲೆ ಸಿಎಂ ಡಿ.ಕೆ.ಶಿವಕುಮಾರ್, ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಹಾಗೂ ಮಾಜಿ ಸಿಎಂ ಸಿದ್ದರಾಮಯ್ಯ ನಿರಂತರವಾಗಿ ಹೇಳಿಕೆ ಕೊಡುತ್ತಿದ್ದಾರೆ. ಇದೆಲ್ಲ ನೋಡಿದಾಗ ಪ್ರತ್ಯಕ್ಷವಾಗಿ ಮತ್ತು ಪರೋಕ್ಷವಾಗಿ ಒತ್ತಡ ಹಾಕುತ್ತಿದ್ದಾರೆ. ಎಸ್‌ಐಆರ್ ಫಾರ್ಮ್ ವಿತರಣೆಯಲ್ಲಿಯೇ ತಾರತಮ್ಯ ಮಾಡಿ ಬಿಜೆಪಿಯ ಬೆಂಬಲಿಗರಿಗೆ ವಿತರಣೆಯಾಗದಂತೆ ನೋಡಿಕೊಳ್ಳುವ ಸಾಧ್ಯತೆಗಳಿವೆ. ಆದ್ದರಿಂದ ನಮ್ಮ ಬಿಎಲ್‌ಎಗಳು ಅತ್ಯಂತ ಜಾಗೃತವಾಗಿ ತಮ್ಮ ಕರ್ತವ್ಯ ನಿರ್ವಹಿಸಬೇಕು. ಅಲ್ಲದೇ ಫಾರ್ಮ್ ನಂಬರ್ 6 ಹಂಚುವಿಕೆ, ಅರ್ಹ ಮತದಾರರ ಹೆಸರು ಬಿಟ್ಟು ಹೋಗದಂತೆ ನೋಡುವುದು, ಅನರ್ಹ ಮತದಾರರ ಹೆಸರು ಸೇರಿಸದಂತೆ ನೋಡುವುದು ಮುಂದಿನ ಎಲ್ಲ ಕಾರ್ಯಗಳಲ್ಲಿ ಸಕ್ರಿಯವಾಗಿ ಭಾಗವಹಿಸಲು ಅವರು ಮನವಿ ಮಾಡಿದ್ದಾರೆ.

# ಕೇರಳದ ವರ್ಕಳದ ಐತಿಹಾಸಿಕ ಶಿವಗಿರಿ ಮಠಕ್ಕೆ ಭೇಟಿ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಭೇಟಿ



**ಬೆಂಗಳೂರು, ಜೂ.30:** ಕೇರಳದ ಐತಿಹಾಸಿಕ ಶ್ರೀ ನಾರಾಯಣಗುರು ಸ್ಥಾಪಿತ ವರ್ಕಳದ ಶಿವಗಿರಿ ಮಠಕ್ಕೆ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಅವರು ಭೇಟಿನೀಡಿ, ಬ್ರಹ್ಮಶ್ರೀ ನಾರಾಯಣಗುರುಗಳ ಪುತ್ಥಳಿಗೆ ಪುಷ್ಪನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ಶಿವಗಿರಿ ಮಠದ ಮಹಾಗುರುಗಳಾದ ಬ್ರಹ್ಮಶ್ರೀ ಸಚ್ಚಿದಾನಂದಶ್ರೀ ಅವರ ಆಶೀರ್ವಾದ ಪಡೆದರು. ಸಮಾಜದಲ್ಲಿ ಸಮಾನತೆ, ಸಹೋದರತೆ, ಮಾನವೀಯತೆ ಹಾಗೂ ಸಾಮಾಜಿಕ ನ್ಯಾಯದ ಮೌಲ್ಯಗಳನ್ನು ಪ್ರತಿಪಾದಿಸಿದ ನಾರಾಯಣ ಗುರುಗಳ ಆದರ್ಶ ಇಂದಿಗೂ ದೇಶಕ್ಕೆ ಮಾರ್ಗದರ್ಶಿಯಾಗಿದೆ ಎಂದು ಹರಿಪ್ರಸಾದ್ ಅವರು ಅಭಿಪ್ರಾಯಪಟ್ಟರು.

ಬಳಿಕ ಶಿವಗಿರಿ ಮಠದಲ್ಲಿ ಆಯೋಜಿಸಲಾದ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಗೌರವಯುತ ಬದುಕು ಮತ್ತು ಸಮಾನ ಅವಕಾಶಗಳು ದೊರೆಯಬೇಕೆಂಬ ನಾರಾಯಣ ಗುರುಗಳ ಸಂದೇಶವು ಇಂದಿನ ಭಾರತಕ್ಕೂ ಅತ್ಯಂತ ಪ್ರಸ್ತುತವಾಗಿದೆ ಎಂದು ಹೇಳಿದರು.

ಜಾತಿ, ಧರ್ಮ ಮತ್ತು ಭಾಷೆಯ ಭೇದಗಳನ್ನು ಮೀರಿ ಮಾನವೀಯ ಮೌಲ್ಯಗಳನ್ನು ಬೆಳೆಸುವಲ್ಲಿ ಇಂತಹ ಆಧ್ಯಾತ್ಮಿಕ ಮತ್ತು ಸಾಮಾಜಿಕ ಸಂಸ್ಥೆಗಳ ಪಾತ್ರ ಮಹತ್ವದ್ದಾಗಿದೆ ಎಂದು ಅವರು ಬಿ.ಕೆ.ಹರಿಪ್ರಸಾದ್ ತಿಳಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಗುರುಧರ್ಮ ಪ್ರಚಾರ ಯುವಜನ ಸಭೆಯ ಅಧ್ಯಕ್ಷ ಗೋಪಿಕೃಷ್ಣ, ಕೇರಳ ಪ್ರದೇಶ ಕಾಂಗ್ರೆಸ್ ಸಮಿತಿಯ ಮುಖಂಡರು, ಸ್ಥಳೀಯ ಕಾಂಗ್ರೆಸ್ ನಾಯಕರು, ಶಿವಗಿರಿ ಮಠದ ಗಣ್ಯರು ಹಾಗೂ ಭಕ್ತರು ಹಾಜರಿದ್ದರು.

# ಅಡ್ಡಮತದಾನ: ಬೇಲೂರು ಬಿಜೆಪಿ ಶಾಸಕರಿಂದ ಧರ್ಮಸ್ಥಳದಲ್ಲಿ ಆಣೆ–ಪ್ರಮಾಣ



ಉಜಿರೆ (ದಕ್ಷಿಣ ಕನ್ನಡ), ಜೂ.30: ರಾಜ್ಯ ವಿಧಾನ ಪರಿಷತ್ ಚುನಾವಣೆಯಲ್ಲಿ ಅಡ್ಡಮತದಾನ ಮಾಡಿದ ವಿಚಾರಕ್ಕೆ ಸಂಬಂಧಿಸಿ ತಮ್ಮ ವಿರುದ್ಧ ಆರೋಪ ಕೇಳಿ ಬಂದಿದ್ದರಿಂದ ಬೇಲೂರು ಶಾಸಕ ಎಚ್.ಕೆ. ಸುರೇಶ್ ಬೆಂಬಲಿಗರೊಂದಿಗೆ ಧರ್ಮಸ್ಥಳಕ್ಕೆ ಮಂಗಳವಾರ ಭೇಟಿ ನೀಡಿ ಮಂಜುನಾಥಸ್ವಾಮಿ ಸನ್ನಿಧಿಯಲ್ಲಿ ಆಣೆ ಪ್ರಮಾಣ ಮಾಡಿದರು.

ನಾನು ಬಿಜೆಪಿಯ ನಿಷ್ಠಾವಂತ ಕಾರ್ಯಕರ್ತ. ಪಕ್ಷಕ್ಕೆ ಯಾವತ್ತೂ ದ್ರೋಹ ಬಗೆದಿಲ್ಲ. ವಿಧಾನ ಪರಿಷತ್ ಚುನಾವಣೆಯಲ್ಲಿ ಅಡ್ಡಮತದಾನ ಮಾಡಿಲ್ಲ. ಪಕ್ಷದ ವರಿಷ್ಠರು ಸೂಚಿಸಿದ ವ್ಯಕ್ತಿಗೆ ಮತದಾನ ಮಾಡಿದ್ದೇನೆ ಎಂದು ಮಂಜುನಾಥಸ್ವಾಮಿ ಸನ್ನಿಧಿಯಲ್ಲಿ ಪ್ರಮಾಣ ಮಾಡುತ್ತೇನೆ ಎಂದು ಹೇಳಿದರು. ನೇತ್ರಾವತಿಯಲ್ಲಿ ತೀರ್ಥ ಪ್ರೋಕ್ಷಣೆ ಮಾಡಿ, ವಂದಿಸಿ, ದೇವರ ದರ್ಶನ ಮಾಡಿ, ವಿಶೇಷ ಪೂಜೆ ಸಲ್ಲಿಸಿದ ಅವರು, ನನ್ನ ವಿರುದ್ಧ ಅಪಪ್ರಚಾರ ಮಾಡಿದವರಿಗೆ ಒಳ್ಳೆಯದಾಗಲಿ ಎಂದು ಪ್ರಾರ್ಥಿಸಿ ಹುಂಡಿಗೆ ಕಾಣಿಕೆ ಹಾಕಿದರು. ಅದಕ್ಕೂ ಮುನ್ನ ಅಣ್ಣಪ್ಪಸ್ವಾಮಿ ಬೆಟ್ಟದಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸಿ, ನಾನು ಪಕ್ಷಕ್ಕೆ ಮೋಸ ಮಾಡಿಲ್ಲ. ಅಪಪ್ರಚಾರ ಮಾಡಿದವರಿಗೆ ದೇವರು ಒಳ್ಳೆಯ ಬುದ್ಧಿ ಕೊಡಲಿ ಎಂದು ಹೇಳಿ ತೆಂಗಿನಕಾಯಿ ಒಡೆದರು. ಬಳಿಕ ಕ್ಷೇತ್ರದ ಧರ್ಮಾಧಿಕಾರಿ ಡಿ. ವೀರೇಂದ್ರ ಹೆಗ್ಗಡೆ ಅವರನ್ನು ಭೇಟಿಯಾಗಿ ಆಶೀರ್ವಾದ ಪಡೆದರು.

ನನ್ನ ಬೆಳವಣಿಗೆಯನ್ನು ಸಹಿಸದ ಕೆಲವರು ಆಧಾರರಹಿತವಾಗಿ ನನ್ನ ವಿರುದ್ಧ ಆರೋಪ ಮಾಡಿದ್ದಾರೆ ಎಂದು ಮಾಧ್ಯಮಗಳಿಗೆ ತಿಳಿಸಿದರು.ಅವರ ಅಭಿಮಾನಿಗಳು ನೂರಕ್ಕೂ ಹೆಚ್ಚು ಕಾರುಗಳಲ್ಲಿ ಧರ್ಮಸ್ಥಳಕ್ಕೆ ಬಂದರು. ಅವರು ಪ್ರಮಾಣ ಮಾಡುವಾಗ ನೂರಾರು ಬೆಂಬಲಿಗರು ಜೊತೆಯಲ್ಲಿದ್ದರು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20

Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

ಜುಲೈ 01 2026, ಬುಧವಾರ

## ಒಳಪುಟಗಳಲ್ಲಿ

ನೀಟ್, ಜೆಇಇ ಪರೀಕ್ಷಾ ಸ್ವರೂಪ ಬದಲಾವಣೆಗೆ ಕೇಂದ್ರದ ಒಲವು - ಪು.4

ಸಿದ್ದರಾಮಯ್ಯ ದೂರವಿಟ್ಟು ಪಕ್ಷ ಸಂಘಟನೆ ಸಾಧ್ಯವಿಲ್ಲ, ಅವರೊಬ್ಬ ಮಾಸ್ ಲೀಡರ್ - ಪು.5

ಮಳೆಗಾಗಿ ಕಿಗ್ಗದ ಋಷ್ಯಶೃಂಗದಲ್ಲಿ ವಿಶೇಷ ಪೂಜೆಗೆ ಸಿಎಂ ಆದೇಶ -ಪು.6

# 2028ರ ಬಳಿಕ ದೆಹಲಿಯಲ್ಲಿ ಎಲೆಕ್ಟ್ರಿಕ್ ದ್ವಿಚಕ್ರ ವಾಹನಗಳಿಗೆ ಮಾತ್ರ ಅವಕಾಶ

- ವಾಯುಮಾಲಿನ್ಯಕ್ಕೆ ಕಡಿವಾಣ ಹಾಕಲು ದೆಹಲಿ ಸರ್ಕಾರ ತೀರ್ಮಾನ
- ಪೆಟ್ರೋಲ್‌ಚಾಲಿತ ದ್ವಿಚಕ್ರ ವಾಹನಗಳ ಹೊಸ ನೋಂದಣಿಗೆ ಬ್ರೇಕ್

**ನವದೆಹಲಿ, ಜೂ. 30:** ದಿನೇದಿನೇ ಏರಿಕೆಯಾಗುತ್ತಿರುವ ವಾಯುಮಾಲಿನ್ಯ ನಿಯಂತ್ರಿಸುವ ಉದ್ದೇಶದಿಂದ ದೆಹಲಿ ಸರ್ಕಾರವು ವಾಹನ ಸಂಚಾರ ನಿಯಮಗಳಲ್ಲಿ ಮಹತ್ವದ ಮಾರ್ಪಾಡು ತರಲು ಮುಂದಾಗಿದೆ. 2028ರ ನಂತರ ರಾಜಧಾನಿಯಲ್ಲಿ ಕೇವಲ ವಿದ್ಯುತ್ ದ್ವಿಚಕ್ರ ವಾಹನಗಳ (ಇವಿ) ಮಾರಾಟ ಹಾಗೂ ಬಳಕೆಗೆ ಮಾತ್ರ ಅವಕಾಶ ನೀಡಲು ಸರ್ಕಾರ ತೀರ್ಮಾನಿಸಿದೆ. ಪೆಟ್ರೋಲ್ ಚಾಲಿತ ದ್ವಿಚಕ್ರ ವಾಹನಗಳ ಬಳಕೆಯನ್ನು ಹಂತಹಂತವಾಗಿ ತಗ್ಗಿಸುವ ನಿಟ್ಟಿನಲ್ಲಿ ಈ ಆಡಳಿತಾತ್ಮಕ ಕ್ರಮ ಕೈಗೊಳ್ಳಲಾಗಿದೆ.

ಸಾರಿಗೆ ಇಲಾಖೆಯ ಅಧಿಕೃತ ಅಂಕಿ-ಅಂಶಗಳ ಪ್ರಕಾರ, ಸದ್ಯ ದೆಹಲಿಯ ರಸ್ತೆಗಳಲ್ಲಿ ಸಂಚರಿಸುತ್ತಿರುವ ಹಾಗೂ ನೋಂದಣಿಯಾಗಿರುವ ಒಟ್ಟು ವಾಹನಗಳ ಪೈಕಿ ದ್ವಿಚಕ್ರ ವಾಹನಗಳ ಪಾಲು ಅತಿ ಹೆಚ್ಚಿದ್ದು, ಅದು ಶೇ.67ರಷ್ಟಿದೆ. ದಿನನಿತ್ಯದ ಓಡಾಟಕ್ಕೆ ಲಕ್ಷಾಂತರ ಮಂದಿ ಬಳಸುತ್ತಿರುವ ಈ ಪೆಟ್ರೋಲ್‌ಚಾಲಿತ ಬೈಕ್ ಹಾಗೂ ಸ್ಕೂಟರ್‌ಗಳು ಹೊರಸೂಸುವ ಹೊಗೆ ರಾಜಧಾನಿಯಲ್ಲಿ ವಾಯುಮಾಲಿನ್ಯದ ಮಟ್ಟ ಹೆಚ್ಚಲು ಕಾರಣವಾಗಿದೆ ಎಂದು ಪರಿಸರ ಇಲಾಖೆ ವರದಿಗಳು ಉಲ್ಲೇಖಿಸಿವೆ.



ಹೊಸ ನಿಯಮದ ಅನ್ವಯ 2028ರ ವೇಳೆಗೆ ಪೆಟ್ರೋಲ್ ಆಧಾರಿತ ದ್ವಿಚಕ್ರ ವಾಹನಗಳ ಹೊಸ ನೋಂದಣಿಯನ್ನು ಸಂಪೂರ್ಣವಾಗಿ ನಿಲ್ಲಿಸುವ ಗುರಿ ಹೊಂದಲಾಗಿದೆ. ಇದರ ಜೊತೆಗೆ, ನಗರದಲ್ಲಿ ಕಾರ್ಯಾಚರಿಸುತ್ತಿರುವ ವಿವಿಧ ಡೆಲಿವರಿ ಸೇವೆಗಳು, ಇ-ಕಾಮರ್ಸ್ ಸಂಸ್ಥೆಗಳು ಹಾಗೂ ವಾಣಿಜ್ಯ ಉದ್ದೇಶಗಳಿಗೆ ಬಳಸುವ ಎಲ್ಲ ದ್ವಿಚಕ್ರ ವಾಹನಗಳನ್ನು ಕಡ್ಡಾಯವಾಗಿ ಎಲೆಕ್ಟ್ರಿಕ್ ವಾಹನಗಳಾಗಿ ಪರಿವರ್ತಿಸಲು ಈಗಾಗಲೇ ಸರ್ಕಾರದ ಮಟ್ಟದಲ್ಲಿ ಸೂಚನೆ ರವಾನಿಸಲಾಗಿದೆ.

ಪೆಟ್ರೋಲ್ ವಾಹನಗಳ ಮೇಲಿನ ಅವಲಂಬನೆಯನ್ನು ತಗ್ಗಿಸುವ ಈ ನೀತಿಯನ್ನು ಜಾರಿಗೊಳಿಸುವ ಮುನ್ನ, ಎಲೆಕ್ಟ್ರಿಕ್ ವಾಹನಗಳ ಬಳಕೆಗೆ ಪೂರಕವಾದ ಮೂಲಸೌಕರ್ಯ ನಗರದಾದ್ಯಂತ ಅಭಿವೃದ್ಧಿಪಡಿಸುವ ಕಾರ್ಯವು ಪ್ರಗತಿಯಲ್ಲಿದೆ. ಸಾರ್ವಜನಿಕ ಸ್ಥಳಗಳು, ಪ್ರಮುಖ ವೃತ್ತಗಳು, ಮೆಟ್ರೋ ನಿಲ್ದಾಣಗಳು ಮತ್ತು ವಸತಿ ಪ್ರದೇಶಗಳಲ್ಲಿ ಸುಸಜ್ಜಿತ ಚಾರ್ಜಿಂಗ್ ಸ್ಟೇಷನ್‌ಗಳ ಸಂಖ್ಯೆಯನ್ನು ಗಣನೀಯವಾಗಿ ಹೆಚ್ಚಿಸಲು ಸರ್ಕಾರದ ವಿವಿಧ ಇಲಾಖೆಗಳು ಹಾಗೂ ಖಾಸಗಿ ಪಾಲುದಾರರೊಂದಿಗೆ ಸೇರಿ ಕ್ರಮ ಕೈಗೊಳ್ಳಲಾಗುತ್ತಿದೆ.

ವಾಹನ ಸವಾರರು ಎಲೆಕ್ಟ್ರಿಕ್ ವಾಹನಗಳತ್ತ ಮುಖ ಮಾಡಿದಾಗ ಆರ್ಥಿಕ ಹೊರೆ ಉಂಟಾಗದಂತೆ ನೋಡಿಕೊಳ್ಳಲು, ಹಾಲಿ ಇರುವ ಇವಿ ಸಬ್ಸಿಡಿ ಯೋಜನೆಗಳನ್ನು ಮರುಪರಿಶೀಲಿಸಿ ಮುಂದುವರಿಸುವ ಸಾಧ್ಯತೆಯಿದೆ. ಮಾರುಕಟ್ಟೆಯಲ್ಲಿ ಇ-ವಾಹನಗಳಿಗೆ ಬೇಡಿಕೆ ಹೆಚ್ಚಾಗಲಿರುವುದರಿಂದ, ದ್ವಿಚಕ್ರ ವಾಹನ ತಯಾರಕ ಕಂಪನಿಗಳು ಕೂಡ ಸುದೀರ್ಘ ಮೈಲೇಜ್ ಮತ್ತು ಬ್ಯಾಟರಿ ಸಾಮರ್ಥ್ಯ ಹೊಂದಿರುವ, ಗ್ರಾಹಕರಿಗೆ ಆರ್ಥಿಕವಾಗಿ ಹೊರೆಯಾಗದಂತಹ ಇ.ವಿ ಮಾದರಿಗಳನ್ನು ತಯಾರಿಸಬೇಕಾದ ಅನಿವಾರ್ಯತೆ ನಿರ್ಮಾಣವಾಗಿದೆ.

ಪ್ರತಿವರ್ಷ ಚಳಿಗಾಲದ ಅವಧಿಯಲ್ಲಿ ದೆಹಲಿಯಲ್ಲಿ ಎದುರಾಗುವ ತೀವ್ರ ಸ್ವರೂಪದ ಮಾಲಿನ್ಯವನ್ನು ಹಾಗೂ ಹೊಗೆಯ ಮಂಜನ್ನು (ಸ್ಮಾಗ್) ತಗ್ಗಿಸಲು ವಾಹನ ದಟ್ಟಣೆಯ ನಿರ್ವಹಣೆ ಅತ್ಯಗತ್ಯವಾಗಿದೆ. 2028ರೊಳಗೆ ಶೇ. 100ರಷ್ಟು ದ್ವಿಚಕ್ರ ವಾಹನಗಳನ್ನು ಎಲೆಕ್ಟ್ರಿಕ್ ವಾಹನಗಳನ್ನಾಗಿ ಪರಿವರ್ತಿಸುವ ಸರ್ಕಾರದ ಗುರಿ ತಲುಪಲು ಆಡಳಿತ ಯಂತ್ರದ ಸಿದ್ಧತೆಗಳ ಜೊತೆಗೆ ಸಾರ್ವಜನಿಕರ ಸಹಕಾರವೂ ನಿರ್ಣಾಯಕವಾಗಲಿದೆ. ಇದು ಮಾಲಿನ್ಯ ನಿಯಂತ್ರಣದ ನಿಟ್ಟಿನಲ್ಲಿ ಜಾರಿಗೊಳಿಸುತ್ತಿರುವ ದೀರ್ಘಾವಧಿಯ ಯೋಜನೆಯಾಗಿದೆ.

# ಮತದಾರ ಪಟ್ಟಿಯಲ್ಲಿ ಹೆಸರಿದೆಯೇ ಖಚಿತಪಡಿಸಿಕೊಳ್ಳಿ: ಸಿಎಂ ಸೂಚನೆ

**ಬೆಂಗಳೂರು, ಜೂ.30:** ರಾಜ್ಯದಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಮಂಗಳವಾರದಿಂದ ಆರಂಭವಾಗಿದ್ದು, ಪ್ರತಿಯೊಬ್ಬರೂ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ಇರುವುದನ್ನು ಖಚಿತಪಡಿಸಿಕೊಳ್ಳಬೇಕು. ಇಲ್ಲವಾದರೆ ಮತದಾನದ ಹಕ್ಕಿನ ಜೊತೆಗೆ ಸರ್ಕಾರಿ ಸೌಲಭ್ಯಗಳನ್ನೂ ಕಳೆದುಕೊಳ್ಳುವ ಸಾಧ್ಯತೆ ಇದೆ ಎಂದು ಸಿಎಂ ಡಿ.ಕೆ. ಶಿವಕುಮಾರ್ ಎಚ್ಚರಿಸಿದ್ದಾರೆ.

ಮತದಾನದ ಹಕ್ಕು ಎಂದರೆ ಬದುಕುವ ಹಕ್ಕು. ಪಶ್ಚಿಮ ಬಂಗಾಳದಲ್ಲಿ ಎಸ್‌ಐಆರ್ ಪ್ರಕ್ರಿಯೆಯ ಆಧಾರದ ಮೇಲೆ ಅನರ್ಹ ಪಡಿತರ ಚೀಟಿದಾರರನ್ನು ಗುರುತಿಸಿ ಕ್ರಮ ಕೈಗೊಳ್ಳಲಾಗಿದೆ. ಇತರ ರಾಜ್ಯಗಳಲ್ಲಿಯೂ ಇದೇ ರೀತಿಯ ಕ್ರಮಗಳು ನಡೆಯುತ್ತಿವೆ. ಆದ್ದರಿಂದ ಮತದಾರರ ಪಟ್ಟಿಯಲ್ಲಿ ಹೆಸರು ಉಳಿಯುವುದು ಅತ್ಯಂತ ಮುಖ್ಯ ಎಂದು

ತಮ್ಮ ಎನ್ಯುಮರೇಶನ್ ಫಾರಂ (ಗಣತಿ ನಮೂನೆ) ಭರ್ತಿ ಮಾಡುವ ಮೂಲಕ ಸಿಎಂ ಡಿ.ಕೆ.ಶಿವಕುಮಾರ್ ಅವರು ರಾಜ್ಯದಲ್ಲಿ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಗೆ ಚಾಲನೆ ನೀಡಿದರು. ಸದಾಶಿವನಗರ ನಿವಾಸದಲ್ಲಿ ಮಂಗಳವಾರ ಬೆಂಗಳೂರು ದಕ್ಷಿಣ ಜಿಲ್ಲೆಯ ಜಿಲ್ಲಾಧಿಕಾರಿಗಳು ಹಾಗೂ ಅಧಿಕಾರಿಗಳ ಸಮ್ಮುಖದಲ್ಲಿ ಶಿವಕುಮಾರ್ ಹಾಗೂ ಅವರ ಪತ್ನಿ ಉಷಾ ಶಿವಕುಮಾರ್ ಅವರು ಗಣತಿ ನಮೂನೆ ತುಂಬಿದರು.

ನಂತರ ಮಾಧ್ಯಮಗಳ ಜತೆ ಮಾತನಾಡಿ, ರಾಜ್ಯದಲ್ಲಿ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಆರಂಭವಾಗಿದ್ದು, ನನ್ನ ಮನೆಯಿಂದಲೇ ಈ ಪ್ರಕ್ರಿಯೆಗೆ ಚಾಲನೆ ನೀಡಲಾಗಿದೆ. ನನ್ನ ಎನ್ಯುಮರೇಷನ್ ಅರ್ಜಿಯನ್ನು ಭರ್ತಿಮಾಡಿ ಸಹಿಮಾಡಿ ಸಲ್ಲಿಕೆ ಮಾಡಿರುವೆ. ನೀವು ನಿಮ್ಮ ಹೆಸರಿನ ಜೊತೆಗೆ ಈ ಹಿಂದೆ ಮತದಾರ ಪಟ್ಟಿ ಸಮಯದಲ್ಲಿ ನೀಡಲಾಗಿದ್ದ ದೂರವಾಣಿ ಸಂಖ್ಯೆಯನ್ನು ನಮೂದಿಸಬೇಕಾಗುತ್ತದೆ. ಇಲ್ಲವಾದರೆ ಹೊಸ ಮೊಬೈಲ್ ಸಂಖ್ಯೆಯನ್ನು ಅಧಿಕಾರಿಗಳ ಮೂಲಕ ಸೇರ್ಪಡೆ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗುವುದು. ಯಾವ ಸಂಖ್ಯೆ ನೀಡಿರುತ್ತಿರೋ ಅದೇ ಸಂಖ್ಯೆಗೆ ಓಟಿಪಿ ಬರಲಿದೆ ಎಂದು ಮಾಹಿತಿ ನೀಡಿದರು.

- ಎನ್ಯುಮರೇಶನ್ ಫಾರಂ (ಗಣತಿ ನಮೂನೆ) ಭರ್ತಿ ಮಾಡುವ ಮೂಲಕ ಎಸ್‌ಐಆರ್ ಪ್ರಕ್ರಿಯೆಗೆ ಡಿ.ಕೆ. ಶಿವಕುಮಾರ್ ಚಾಲನೆ



### ಶಾಶ್ವತ ನಿವಾಸ ಪ್ರಮಾಣಪತ್ರ ನೀಡಲು ಸರ್ಕಾರ ತೀರ್ಮಾನ

ರಾಜ್ಯ ಚುನಾವಣಾ ಆಯೋಗದ ಮನೆ ಮನೆಗೆ ತೆರಳಿ ಮಾಹಿತಿ ಸಂಗ್ರಹಿಸುವ ಪ್ರಕ್ರಿಯೆ ಜುಲೈ 29ರವರೆಗೆ ನಡೆಯಲಿದೆ. ಈ ಅಭಿಯಾನದಲ್ಲಿ ರಾಜ್ಯದ 5.5 ಕೋಟಿಗೂ ಹೆಚ್ಚು ಮತದಾರರನ್ನು ಒಳಗೊಳ್ಳಲಾಗುತ್ತಿದೆ. ಎಸ್‌ಐಆರ್ ಪ್ರಕ್ರಿಯೆಗೆ ನೆರವಾಗಲು ರಾಜ್ಯ ಸರ್ಕಾರ ಶಾಶ್ವತ ನಿವಾಸ ಪ್ರಮಾಣಪತ್ರ ನೀಡಲು ತೀರ್ಮಾನಿಸಿದೆ. ಈ ಪ್ರಮಾಣಪತ್ರವನ್ನು ನಿವಾಸದ ಸಾಕ್ಷ್ಯವಾಗಿ ಬಳಸಬಹುದು. ನಾಗರಿಕರು ಸೇವಾ ಸಿಂಧು ಪೋರ್ಟಲ್ ಮೂಲಕ ಆನ್‌ಲೈನ್‌ನಲ್ಲಿ ಅಥವಾ ಅಟಲ್ ಜನಸ್ನೇಹಿ ಕೇಂದ್ರ, ನಾಡಕಚೇರಿ, ಬೆಂಗಳೂರು ಒನ್, ಕರ್ನಾಟಕ ಒನ್ ಹಾಗೂ ಗ್ರಾಮ ಒನ್ ಕೇಂದ್ರಗಳಲ್ಲಿ ಆಫ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

### ಕುಟುಂಬದ ಪರವಾಗಿ ಒಬ್ಬರು ಸಹಿ ಮಾಡಿದರೂ ಸ್ವೀಕಾರ

ನೀವು ನಿಮ್ಮ ಹೆಸರಿನಲ್ಲಿ ತಿದ್ದುಪಡಿ ಮಾಡಿಕೊಳ್ಳಲು ಅವಕಾಶವಿದೆ. ಬಿಎಲ್ಎ, ಬಿಎಲ್‌ಓ ಹಾಗೂ ಮೇಲ್ವಿಚಾರಕರು ಈಗಾಗಲೇ ವಾಟ್ಸಪ್ ಗ್ರೂಪ್ ಮಾಡಿ ಕೊಂಡಿದ್ದಾರೆ. ಕುಟುಂಬದ ಸದಸ್ಯರ ಪೈಕಿ ಒಬ್ಬರು ಸಹಿ ಮಾಡಿದರೂ ಸಾಕು. ಒಬ್ಬರೇ ಎಲ್ಲರ ಅರ್ಜಿ ತುಂಬಬಹುದು. ಅದನ್ನು ಸ್ವೀಕಾರ ಮಾಡಿಕೊಳ್ಳಲಾಗುವುದು. ಫೋಟೋ ಬದಲಾಯಿಸಿಕೊಳ್ಳಬೇಕಾದರೆ ಹೊಸ ಫೋಟೋ ನೀಡಬಹುದು. ಹೊಸ ಮತದಾರರು ನಿವಾಸ ದೃಢೀಕರಣ ಪತ್ರ ನೀಡಬೇಕು. ಕರ್ನಾಟಕ ಸರ್ಕಾರ ರಾಜ್ಯದ ಜನರಿಗೆ ಪ್ರಮಾಣಪತ್ರ ನೀಡಲು ಮುಂದಾಗಿದೆ. ಎಲ್ಲರೂ ತಮ್ಮ ಮತದಾನದ ಹಕ್ಕು ಉಳಿಸಿಕೊಳ್ಳಬೇಕು. ಉಳಿಸಿಕೊಳ್ಳದಿದ್ದರೆ ಸರ್ಕಾರ ಸೌಲಭ್ಯ, ಕಾರ್ಯಕ್ರಮಗಳನ್ನು ಪಡೆಯುವುದು ಕಷ್ಟವಾಗಲಿದೆ ಎಂದು ಮಾಹಿತಿ ನೀಡಿದರು.

### ನಮ್ಮ ರಾಜ್ಯದ ಜನರಿಗೆ ಮಾತ್ರ ಖಾತರಿ

ಕರ್ನಾಟಕದ ವಿಚಾರದಲ್ಲಿ ಈ ಪ್ರಕ್ರಿಯೆ ಬಹಳ ಪ್ರಮುಖವಾಗಿದೆ ಎಂದು ಕೇಳಿದಾಗ, ಬೇರೆ ರಾಜ್ಯಗಳಲ್ಲಿ ಸರ್ಕಾರದ ಸೌಲಭ್ಯಗಳನ್ನು ಕೇವಲ ಮತದಾರರಿಗೆ ಮಾತ್ರ ನೀಡುತ್ತಿದ್ದು, ಮತದಾನ ಹಕ್ಕು ಇಲ್ಲದವರಿಗೆ ಸೌಲಭ್ಯ ಹಿಂಪಡೆಯಲಾಗುತ್ತಿದೆ. ಅದೇ ವ್ಯವಸ್ಥೆ ರಾಜ್ಯದಲ್ಲೂ ಬರಬಹುದು" ಎಂದು ತಿಳಿಸಿದರು. "ಇಲ್ಲಿನ ಮತದಾರರಿಗೆ ನಾವು ಗ್ಯಾರಂಟಿ ನೀಡಬಹುದು. ಬೇರೆ ರಾಜ್ಯದ ಮತದಾರರಿಗೆ ನಾವು ಯಾಕೆ ಗ್ಯಾರಂಟಿ ನೀಡಬೇಕು. ನಮ್ಮ ರಾಜ್ಯದವರಿಗೆ ಮಾತ್ರ ಗ್ಯಾರಂಟಿ ನೀಡಬೇಕು ಎಂಬುದು ನಮ್ಮ ಆಲೋಚನೆ. ಎಂದು ತಿಳಿಸಿದರು.

# ಮೈಸೂರಿಗೆ ಇಂದು ರಾಷ್ಟ್ರಪತಿ ದ್ರೌಪದಿ ಮುರ್ಮು



**ಬೆಂಗಳೂರು, ಜೂ.30:** ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಕರ್ನಾಟಕ ಮತ್ತು ತಮಿಳುನಾಡಿಗೆ ಮೂರು ದಿನಗಳ ಪ್ರವಾಸ ಕೈಗೊಂಡಿದ್ದು, ಬುಧವಾರ ಮೈಸೂರಿನಲ್ಲಿ ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆಯ ವಜ್ರಮಹೋತ್ಸವ ಉದ್ಘಾಟಿಸಲಿದ್ದಾರೆ. ನಂತರ ತಮಿಳುನಾಡಿಗೆ ತೆರಳಲಿರುವ ರಾಷ್ಟ್ರಪತಿಗಳು, ಚೆನ್ನೈನಲ್ಲಿ ಸಿಟಿ ಯೂನಿಯನ್ ಬ್ಯಾಂಕ್‌ನ 120ನೇ ಸಂಸ್ಥಾಪನಾ ದಿನಾಚರಣೆಯಲ್ಲಿ ಭಾಗವಹಿಸಲಿದ್ದಾರೆ. ಬಳಿಕ ತಿರುವಾರೂರಿನಲ್ಲಿ ನಡೆಯಲಿರುವ ತಮಿಳುನಾಡು ಕೇಂದ್ರೀಯ ವಿಶ್ವವಿದ್ಯಾಲಯದ 10ನೇ ಘಟಿಕೋತ್ಸವದಲ್ಲಿ ಭಾಗಿಯಾಗಲಿದ್ದಾರೆ. ಭಾರತೀಯ ವಾಯುಸೇನೆಯ ವಿಶೇಷ ವಿಮಾನದ ಮೂಲಕ ಹೆಚ್.ಎ.ಎಲ್. ವಿಮಾನ ನಿಲ್ದಾಣಕ್ಕೆ ಮಂಗಳವಾರ ಆಗಮಿಸಿದ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್ ಹಾಗೂ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸ್ವಾಗತಿಸಿದರು. ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್, ಕರ್ನಾಟಕ ಪೊಲೀಸ್ ಮಹಾನಿರ್ದೇಶಕ ಡಾ. ಎಂ.ಎ. ಸಲೀಂ, ಏರ್‌ವೈಸ್ ಮಾರ್ಷಲ್ ಡಿ.ಎಸ್. ಡಂಗಿ, ಮೇಜರ್ ಜನರಲ್ ಮೋಹಿತ್ ಮಹೇಂದ್ರು, ಬೆಂಗಳೂರು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್, ಬೆಂ.ನಗರ ಡಿಸಿ ಪಿ.ಎಸ್.ಕಾಂತರಾಜು ಮತ್ತಿತರರು ಇದ್ದರು.

# ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ



- ಕಾಂಗ್ರೆಸ್ ಸರ್ಕಾರದ ವಿರುದ್ಧ ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಕಿಡಿ
- ಕಾರ ಹುಣ್ಣಿಮೆ ದಿನ ಕರಾಳ ಕೃತ್ಯ; ದುಷ್ಕರ್ಮಿಗಳ ಬಂಧನಕ್ಕೆ ಆಗ್ರಹ

**ನವದೆಹಲಿ, ಜೂ.30:** ಕಾರ ಹುಣ್ಣಿಮೆ ಸಂಭ್ರಮದಲ್ಲಿ ಪಟಾಕಿ ಸಿಡಿಸಿದ್ದಕ್ಕೆ ರೈತರ ಕೈ ಕತ್ತರಿಸುತ್ತಾರೆ ಎಂದರೆ ರಾಜ್ಯ ಕಾಂಗ್ರೆಸ್ ಸರ್ಕಾರದ ಆಡಳಿತದಲ್ಲಿ ಕಾನೂನು ಸುವ್ಯವಸ್ಥೆ ಎಷ್ಟರಮಟ್ಟಿಗೆ ಹದಗೆಟ್ಟಿರಬೇಡ ಎಂದು ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕಾರ ಹುಣ್ಣಿಮೆ ದಿನ ಎತ್ತುಗಳ ಮೆರವಣಿಗೆ ನಡೆಸುವುದು ಹಳ್ಳಿ ಸಂಪ್ರದಾಯ. ಹಬ್ಬದ ಸಂಭ್ರಮಕ್ಕೆ ಪಟಾಕಿ ಸಿಡಿಸುವುದೂ ಸಹಜವೇ. ಆದರೆ, ಮಸೀದಿ ಬಳಿ ಏಕೆ ಪಟಾಕಿ ಸಿಡಿಸುತ್ತೀರಿ ಎಂದು ಅನ್ಯ ಕೋಮಿನವರು ಕ್ಯಾತೆ ತೆಗೆದದ್ದು ದುರುದ್ದೇಶ ಪೂರಕವಾಗಿದೆ. ಈ ಘಟನೆ ನೋಡಿದರೆ ದುಷ್ಕರ್ಮಿಗಳಿಗೆ ಕಾಂಗ್ರೆಸ್ ಸರ್ಕಾರದ ರಕ್ಷಣೆ ಅದೆಷ್ಟರ ಮಟ್ಟಿಗಿದೆ ಎಂಬ ಆತಂಕ ಮೂಡಿಸಿದೆ. ಕಾಂಗ್ರೆಸ್ ಆಡಳಿತದಲ್ಲಿ ರೈತರ ಕೈಯನ್ನೇ ಕತ್ತರಿಸುವ ಮಟ್ಟಿಗೆ ದುಷ್ಕರ್ಮಿಗಳು ಪೋಷಣೆಗೆ ಒಳಪಟ್ಟಿದ್ದಾರೆ ಎಂದು ತೀವ್ರ ಕಳವಳ ವ್ಯಕ್ತಪಡಿಸಿದ್ದಾರೆ. ರಾಜ್ಯದಲ್ಲಿ ಕಿಡಿಗೇಡಿಗಳಿಗೆ ಕಾನೂನಿನ ಭಯವೇ ಇಲ್ಲದಂತಾಗಿದೆ. ಸಮಾಜದಲ್ಲಿ ಶಾಂತಿ ಸುವ್ಯವಸ್ಥೆ ಕಾಪಾಡುವ ಬದಲು ಪ್ರಚೋದನಕಾರಿ ನೀತಿ ಮೂಲಕ ಸಂಘರ್ಷಕ್ಕೆ ದಾರಿ ಮಾಡಿಕೊಡುತ್ತಿದೆ ಎಂದು ಜೋಶಿ ಖಂಡಿಸಿದ್ದಾರೆ.

ರಾಜ್ಯದಲ್ಲಿ ದಿನಬೆಳಗಾದರೆ ಕೊಲೆ, ಹಲ್ಲೆ, ಕೋಮು ಪ್ರಚೋದಿತ ಕೃತ್ಯಗಳು ಘಟಿಸುತ್ತಿದ್ದರೂ ಗೃಹ ಇಲಾಖೆ ಮಾತ್ರ ಕಣ್ಣುಮುಚ್ಚಿ ಕುಳಿತಿದೆ. ರಾಜ್ಯ ಸರ್ಕಾರ ಸಂಪೂರ್ಣ ಸಚಿವ ಸಂಪುಟ ರಚನೆ, ದಕ್ಷ ಆಡಳಿತದ ಬದಲು ಅಧಿಕಾರಿಗಳ ವರ್ಗಾವಣೆ, ಗ್ಯಾರಂಟಿ ನಿರ್ವಹಣೆಯತ್ತ ಕೇಂದ್ರೀಕರಿಸಿದೆ ಎಂದು ಸಚಿವರು ಆರೋಪಿಸಿದ್ದಾರೆ.

ಇನ್ನಾದರೂ ರಾಜ್ಯ ಸರ್ಕಾರ ತಕ್ಷಣವೇ ಎಚ್ಚೆತ್ತುಕೊಂಡು ಈ ಜಾನಪದ ಹಬ್ಬದ ದಿನದಂದು ಕರಾಳ ಕೃತ್ಯವೆಸಗಿದ ಎಲ್ಲಾ ದುಷ್ಕರ್ಮಿಗಳನ್ನು ಬಂಧಿಸಿ ಶಿಕ್ಷೆಗೆ ಗುರಿಪಡಿಸಬೇಕು. ಕಟ್ಟುನಿಟ್ಟಿನ ಕಾನೂನು ಕ್ರಮ ಜರುಗಿಸಬೇಕು. ನೊಂದ ರೈತ ಕುಟುಂಬಕ್ಕೆ ನ್ಯಾಯ ಮತ್ತು ಪರಿಹಾರ ನೀಡಬೇಕು ಎಂದು ಸಚಿವ ಪ್ರಲ್ಹಾದ ಜೋಶಿ ಆಗ್ರಹಿಸಿದ್ದಾರೆ.


# ಮತ್ತೆ ವಾಣಿಜ್ಯ ಸಿಲಿಂಡರ್ ದರ ಏರಿಕೆಗೆ ತೈಲ ಕಂಪನಿಗಳ ನಿರ್ಧಾರ

- ಇಂದಿನಿಂದಲೇ ಬೆಲೆ ಏರಿಕೆ ಬಿಸಿ

**ನವದೆಹಲಿ, ಜೂ.30:** ಮತ್ತೆ ವಾಣಿಜ್ಯ ಹಾಗೂ ಇಂಡಸ್ಟ್ರಿಯಲ್ ಗ್ಯಾಸ್ ಸಿಲಿಂಡರ್ ದರ ಏರಿಕೆಗೆ ತೈಲ ಕಂಪನಿಗಳು ನಿರ್ಧರಿಸಿವೆ. ಜುಲೈ 1ರಿಂದ ವಾಣಿಜ್ಯ ಹಾಗೂ ಇಂಡಸ್ಟ್ರಿಯಲ್ ಗ್ಯಾಸ್ ಸಿಲಿಂಡರ್ ದರ ಏರಿಕೆಯಾಗಲಿದೆ ಎಂದು ವರದಿಯಾಗಿದೆ. ವಾಣಿಜ್ಯ ಸಿಲಿಂಡರ್ (19 ಕೆಜಿ, 14.2 ಕೆಜಿ) 30 ರೂ. ಹಾಗೂ ಇಂಡಸ್ಟ್ರಿಯಲ್ ಸಿಲಿಂಡರ್ (40ಕೆಜಿ) 1300 ರೂ. ಏರಿಕೆಗೆ ನಿರ್ಧರಿಸಲಾಗಿದೆ. ಜೂ.1ರಂದು ಸಹ ಸಿಲಿಂಡರ್ ದರ ಏರಿಕೆಯಾಗಿತ್ತು. ದೆಹಲಿಯಲ್ಲಿ 19 ಕೆಜಿ ವಾಣಿಜ್ಯ ಸಿಲಿಂಡರ್ ದರ 42 ರೂ. ಹೆಚ್ಚಾಗಿತ್ತು, ಪ್ರತಿ ಸಿಲಿಂಡರ್ ಬೆಲೆ 3,113.5 ರೂ.ತಲುಪಿದ್ದರೆ, ಬೆಂಗಳೂರಿನಲ್ಲಿ 46 ರೂ.ಹೆಚ್ಚಳವಾಗಿ ಪ್ರತಿ ಸಿಲಿಂಡರ್ ದರ 3,198 ರೂ.ಗೆ ಏರಿಕೆಯಾಗಿತ್ತು. ಕೋಲ್ಕತ್ತಾದಲ್ಲಿ 19 ಕೆಜಿ ಸಿಲಿಂಡರ್ ದರ 53.5 ರೂ. ಹೆಚ್ಚಾಗಿ, 3,255.5 ರೂ. ತಲುಪಿತ್ತು. ಇದರೊಂದಿಗೆ 5 ಕೆಜಿ ಫ್ರೀ ಟ್ರೇಡ್ ಎಲ್‌ಪಿಜಿ ಸಿಲಿಂಡರ್ ಬೆಲೆ 11 ರೂ. ಹೆಚ್ಚಿಸಿದ್ದು, ಪ್ರತಿಪ್ರತಿ ಸಿಲಿಂಡರ್ ಬೆಲೆ 821.5 ರೂ.ಗಳಿಗೆ ತಲುಪಿತ್ತು.

### ಆಪರೇಷನ್ ಸಿಂಧೂರ್‌ನಲ್ಲಿ ಯೋಧರ ಸಾವಿನ ಬಗ್ಗೆ ತಪ್ಪು ಮಾಹಿತಿ

# ರಾಜನಾಥ್ ವಿರುದ್ಧ ಕಾಂಗ್ರೆಸ್ ಹಕ್ಕುಚ್ಯುತಿ



- ರಾಜೀನಾಮೆಗೆ ಕೈ ಮುಖಂಡರ ಆಗ್ರಹ

**ನವದೆಹಲಿ, ಜೂ.30:** ಆಪರೇಷನ್ ಸಿಂಧೂರ್ ಸೇನಾ ಕಾರ್ಯಾಚರಣೆಯಲ್ಲಿ ಸಂಭವಿಸಿದ ಯೋಧರ ಸಾವು-ನೋವುಗಳ ಕುರಿತು ಸಂಸತ್ತಿಗೆ ತಪ್ಪು ಮಾಹಿತಿ ನೀಡಿದ್ದಾರೆ ಎಂದು ಆರೋಪಿಸಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ವಿರುದ್ಧ ಕಾಂಗ್ರೆಸ್ ಪಕ್ಷವು ಲೋಕಸಭೆಯಲ್ಲಿ ಹಕ್ಕುಚ್ಯುತಿ ನೋಟಿಸ್ ಮಂಡಿಸಿದೆ.

ಕಳೆದ ವರ್ಷ ಜುಲೈ 28ರಂದು ಲೋಕಸಭೆಯಲ್ಲಿ ಹೇಳಿಕೆ ನೀಡಿದ್ದ ರಕ್ಷಣಾ ಸಚಿವರು, ಆಪರೇಷನ್ ಸಿಂಧೂರ್ ಕಾರ್ಯಾಚರಣೆಯಲ್ಲಿ ನಮ್ಮ ಯಾವುದೇ ಯೋಧರು ಮೃತಪಟ್ಟಿಲ್ಲ ಎಂದು ಸ್ಪಷ್ಟಪಡಿಸಿದ್ದರು. ಆದರೆ, ಇದೀಗ ನವದೆಹಲಿಯ ರಾಷ್ಟ್ರೀಯ ಯುದ್ಧ ಸ್ಮಾರಕದಲ್ಲಿ ಇದೇ ಕಾರ್ಯಾಚರಣೆಯಲ್ಲಿ ವೀರ ಮರಣವನ್ನಪ್ಪಿದ ಆರು ಯೋಧರ (ಐವರು ಭೂಸೇನೆ ಹಾಗೂ ಒಬ್ಬರು ವಾಯುಪಡೆ) ಹೆಸರುಗಳನ್ನು ಕೆತ್ತಲಾಗಿದೆ. ಸರ್ಕಾರದ ಈ ದ್ವಂದ್ವ ನಿಲುವನ್ನು ಕಾಂಗ್ರೆಸ್ ಕಟುವಾಗಿ ಟೀಕಿಸಿದೆ.

ಈ ವಿಚಾರವಾಗಿ ಆಕ್ರೋಶ ವ್ಯಕ್ತಪಡಿಸಿರುವ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ಹಿರಿಯ ನಾಯಕ ಕೆ.ಸಿ. ವೇಣುಗೋಪಾಲ್, ರಕ್ಷಣಾ ಸಚಿವರು ಉದ್ದೇಶಪೂರ್ವಕವಾಗಿ ಸದನದ ದಾರಿತಪ್ಪಿಸಿದ್ದಾರೆ ಎಂದು ಆರೋಪಿಸಿದ್ದಾರೆ. ದೇಶದ ರಕ್ಷಣೆಗಾಗಿ ಶತ್ರುಗಳ ವಿರುದ್ಧ ಹೋರಾಡಿ ಪ್ರಾಣತೆತ್ತ ವೀರ ಯೋಧರ ಬಲಿದಾನವನ್ನು ದೇಶದ ಜನರಿಂದ ಮುಚ್ಚಿಟ್ಟಿರುವುದು, ಆ ಹುತಾತ್ಮರ ಕುಟುಂಬಗಳಿಗೆ ಹಾಗೂ ಇಡೀ ಸಶಸ್ತ್ರ ಪಡೆಗಳಿಗೆ ಮಾಡಿದ ಘೋರ ಅಪಮಾನವಾಗಿದೆ ಎಂದು ವಾಗ್ದಾಳಿ ನಡೆಸಿದ್ದಾರೆ.

ಸದನಕ್ಕೆ ಸುಳ್ಳು ಮಾಹಿತಿ ನೀಡಿರುವುದು ಸಂಸತ್ತಿನ ನಿಂದನೆ ಹಾಗೂ ಹಕ್ಕುಚ್ಯುತಿಯಾಗಿದೆ ಎಂದು ಸ್ಪೀಕರ್ ಓಂ ಬಿರ್ಲಾ ಅವರಿಗೆ ಸಲ್ಲಿಸಿರುವ ನೋಟಿಸ್‌ನಲ್ಲಿ ಉಲ್ಲೇಖಿಸಲಾಗಿದೆ. ಸತ್ಯವನ್ನು ಮರೆಮಾಚಿ ಯೋಧರಿಗೆ ಅಪಮಾನ ಮಾಡಿರುವ ರಕ್ಷಣಾ ಸಚಿವರು ತಕ್ಷಣವೇ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಹಾಗೂ ಈ ವಿಚಾರವಾಗಿ ಪ್ರಧಾನಿಯವರು ದೇಶದ ಕ್ಷಮೆಯಾಚಿಸಬೇಕು ಎಂದು ಕಾಂಗ್ರೆಸ್ ಆಗ್ರಹಿಸಿದೆ.

# ಎತ್ತಿನಹೊಳೆಗೆ ಜೆಜೆಎಂನಲ್ಲಿ 4,708 ಕೋಟಿ ರೂ. ವೆಚ್ಚ ಭರಿಸಿ: ಕೇಂದ್ರಕ್ಕೆ ಈಶ್ವರ ಖಂಡ್ರೆ ಮನವಿ

**ನವದೆಹಲಿ, ಜೂ.30:** ಬರಪೀಡಿತ ಜಿಲ್ಲೆಗಳಿಗೆ ಕುಡಿಯುವ ನೀರು ಪೂರೈಸುವ ಎತ್ತಿನಹೊಳೆ ಯೋಜನೆಯ ವೆಚ್ಚದ ಪೈಕಿ 4,708.14 ಕೋಟಿ ರೂ.ಗಳನ್ನು ಜಲಜೀವನ್ ಮಿಷನ್ ಅಡಿಯಲ್ಲಿ ಭರಿಸುವಂತೆ ಕೇಂದ್ರ ಸರ್ಕಾರಕ್ಕೆ ಕೋರಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ತಿಳಿಸಿದ್ದಾರೆ.

ದೆಹಲಿಯ ಅಧಿಕೃತ ಪ್ರವಾಸದಲ್ಲಿರುವ ಅವರು, ಕೇಂದ್ರ ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್ ಹಾಗೂ ರಾಜ್ಯ ಸಚಿವ ವಿ. ಸೋಮಣ್ಣ ಅವರನ್ನು ಭೇಟಿಮಾಡಿ, ನೀರಿನ ಕೊರತೆಯಿರುವ ಕೋಲಾರ, ಚಿಕ್ಕಬಳ್ಳಾಪುರ, ಹಾಸನ, ಬೆಂಗಳೂರು ಗ್ರಾಮಾಂತರ, ಚಿಕ್ಕಮಗಳೂರು, ಚಿತ್ರದುರ್ಗ, ತುಮಕೂರು ಜಿಲ್ಲೆಗಳ ಸುಮಾರು 6,657 ಹಳ್ಳಿಗಳು ಮತ್ತು 38 ಪಟ್ಟಣಗಳ 75.59 ಲಕ್ಷ ಜನರಿಗೆ ಸುಸ್ಥಿರ ಕುಡಿಯುವ ನೀರು ಪೂರೈಸುವ ಈ ಯೋಜನೆಯನ್ನು ಜೆಜೆಎಂ ಯೋಜನೆಯಡಿ ಪರಿಗಣಿಸುವಂತೆ ಕೋರಲಾಗಿದೆ ಎಂದರು.

ಪ್ರಸ್ತುತ ಕರ್ನಾಟಕ ರಾಜ್ಯದ ಜಲಸಂಪನ್ಮೂಲ ಇಲಾಖೆಯ ವಿಶ್ವೇಶ್ವರಯ್ಯ ಜಲ ನಿಗಮದಿಂದ ಅನುಷ್ಠಾನಗೊಳಿಸಲಾಗುತ್ತಿರುವ ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯನ್ನು ರಾಜ್ಯ ಸರ್ಕಾರವೇ ಬಹುತೇಕ ಪೂರ್ಣಗೊಳಿಸಿದೆ. ಇನ್ನೂ 9,416.28 ಕೋಟಿ ರೂ. ಉಳಿಕೆ ಕಾಮಗಾರಿಗಳನ್ನು ಪೂರ್ಣಗೊಳಿಸಲು ಕೇಂದ್ರ ಸರ್ಕಾರದಿಂದ ಶೇ.50ರಷ್ಟು ತನ್ನ ಪಾಲು ನೀಡುವಂತೆ ಕೋರಿ ಈ ಮನವಿ ಪತ್ರ ಸಲ್ಲಿಸಲಾಗಿದೆ ಎಂದು ಈಶ್ವರ ಖಂಡ್ರೆ ವಿವರಿಸಿದರು.

### ಕೇಂದ್ರ ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್ ಹಾಗೂ ರಾಜ್ಯ ಸಚಿವ ವಿ. ಸೋಮಣ್ಣ ಜತೆ ಚರ್ಚೆ



ಪಶ್ಚಿಮ ಘಟ್ಟಗಳ ಮೇಲ್ಭಾಗದಿಂದ ಬರಪೀಡಿತ ಜಿಲ್ಲೆಗಳಿಗೆ 24.01 ಟಿಎಂಸಿ ನೀರನ್ನು ಎತ್ತುವಳಿ ಮಾಡಲು ಎತ್ತಿನಹೊಳೆ ಯೋಜನೆಯನ್ನು ವಿನ್ಯಾಸಗೊಳಿಸಲಾಗಿದ್ದು, ಇದರಲ್ಲಿ 14.056 ಟಿಎಂಸಿ ಕುಡಿಯುವ ನೀರು ಪೂರೈಕೆಗೆ ಸಂಬಂಧಿಸಿದ್ದಾಗಿದೆ. ಈ ಪೈಕಿ ಗ್ರಾಮೀಣ ಪ್ರದೇಶಕ್ಕೆ 8.393 ಟಿಎಂಸಿ ಮತ್ತು ನಗರಕ್ಕೆ 5.538 ಟಿಎಂಸಿ ನೀರು ಪೂರೈಕೆ ಆಗುತ್ತದೆ. 9.953 ಟಿಎಂಸಿ ನೀರನ್ನು ಅಂತರ್ಜಲ ಮರುಪೂರಣಕ್ಕಾಗಿ 527 ಕೆರೆಗಳನ್ನು ತುಂಬಿಸಲುದ್ದೇಶಿಸಲಾಗಿದೆ ಎಂದು ಪತ್ರದಲ್ಲಿ ತಿಳಿಸಿದ್ದಾರೆ.

7 ಜಿಲ್ಲೆಗಳ ಗ್ರಾಮೀಣ ವಸತಿಗಳಿಗೆ 8.393 ಟಿಎಂಸಿ ನೀರನ್ನು ಮೀಸಲಿಡಲಾಗಿದೆ ಎಂಬ ವಿಷಯವನ್ನು ಕೇಂದ್ರ ಸಚಿವರ ಗಮನಕ್ಕೆ ತರಲಾಗಿದೆ. ರಾಜ್ಯ ಸರ್ಕಾರ ಜೆಜೆಎಂ ಅಂದರೆ ಜಲಜೀವನ ಮಿಷನ್ ಅಡಿಯಲ್ಲಿ ಗ್ರಾಮೀಣ ಪ್ರದೇಶದ ಜನರಿಗೆ ಕೊಳವೆ ಮೂಲಕ ಶುದ್ಧ ಕುಡಿಯುವ ನೀರು ಪೂರೈಸಲು ಮತ್ತು ಪ್ರತಿ ಗ್ರಾಮೀಣ ಮನೆಗಳಿಗೆ ಸುರಕ್ಷಿತ ಮತ್ತು ಸುಸ್ಥಿರ ಕುಡಿಯುವ ನೀರು ಸರಬರಾಜು ಮಾಡಲು ಬದ್ಧವಾಗಿದೆ ಎಂದು ಈಶ್ವರ ಖಂಡ್ರೆ ತಿಳಿಸಿದರು.

### ಬೀದರ್, ಕಲಬುರಗಿ ಕುಡಿಯುವ ನೀರು ಯೋಜನೆಗೂ ಬೇಡಿಕೆ

ಕಲ್ಯಾಣ ಕರ್ನಾಟಕದ ಬೀದರ್ ಮತ್ತು ಕಲಬುರಗಿ ಜಿಲ್ಲೆಗಳಿಗೆ ಸುಸ್ಥಿರ ಕುಡಿಯುವ ನೀರು ಖಾತ್ರಿಪಡಿಸುವ ಯೋಜನೆ ಕುರಿತಂತೆಯೂ ಕೇಂದ್ರ ಸಚಿವ ಸಿ.ಆರ್. ಪಾಟೀಲ್ ಜತೆ ಸಚಿವ ಈಶ್ವರ ಖಂಡ್ರೆ ಚರ್ಚಿಸಿದ್ದಾರೆ. ಈ ಎರಡು ಜಿಲ್ಲೆಗಳು ಕುಡಿಯುವ ನೀರಿನ ಕೊರತೆ ಎದುರಿಸುತ್ತಿವೆ, ಅಂತರ್ಜಲ ಮಟ್ಟವೂ ಕುಸಿದಿದೆ. ಹೀಗಾಗಿ ಮುಂದಿನ 30 ವರ್ಷಗಳವರೆಗೆ ಶಾಶ್ವತ, ಸುಸ್ಥಿರ ಮತ್ತು ಮೇಲ್ಮೈ ನೀರು ಆಧಾರಿತ ಕುಡಿಯುವ ನೀರಿನ ಪರಿಹಾರ ಒದಗಿಸಲು ರಾಜ್ಯ ಸರ್ಕಾರವು ಸಮಗ್ರ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆ ಜಾರಿಗೊಳಿಸಲು ಪ್ರಾಥಮಿಕ ಯೋಜನಾ ವರದಿಯನ್ನು ಅಂತಿಮಗೊಳಿಸಿದೆ ಎಂದು ವಿವರಿಸಿ ಮನವಿ ಸಲ್ಲಿಸಿದರು. ಕೃಷ್ಣಾ ನದಿಗೆ ಅಡ್ಡಲಾಗಿ ನಿರ್ಮಿಸಿರುವ ನಾರಾಯಣಪುರ ಜಲಾಶಯದ ಸುಸ್ಥಿರ ಮತ್ತು ದೀರ್ಘಕಾಲಿಕ ಸಂಗ್ರಹಣೆಯಿಂದ ನೀರನ್ನು ಎತ್ತುವಳಿ ಮಾಡುವ ಉದ್ದೇಶ ಹೊಂದಿದ್ದು, ಇದರ ಒಟ್ಟು ಅಂದಾಜು ವೆಚ್ಚ 7200 ಕೋಟಿ ರೂ. ಆಗುತ್ತದೆ. ಎರಡೂ ಜಿಲ್ಲೆಗಳ ಒಟ್ಟು 28.09 ಲಕ್ಷ ಜನರಿಗೆ ನೀರು ಪೂರೈಸಲು ಈ ಯೋಜನೆ ಸಹಕಾರಿ ಆಗಲಿದೆ ಎಂದು ವಿವರಿಸಿದ್ದಾರೆ. 18 ತಾಲ್ಲೂಕುಗಳು ಮತ್ತು 943 ಗ್ರಾಮಗಳನ್ನು ಒಳಗೊಂಡ ಈ ಉಪಕ್ರಮವು ಸುಮಾರು 200 ಎಂಎಲ್.ಡಿ. ನೀರಿನ ಅಗತ್ಯವನ್ನು ಪೂರೈಸುವ ಗುರಿಯನ್ನು ಹೊಂದಿದೆ. ಒಟ್ಟು ಫಲಾನುಭವಿಗಳ ಜನಸಂಖ್ಯಾ ವಿಭಜನೆಯಲ್ಲಿ ಪರಿಶಿಷ್ಟ ಜಾತಿ (ಎಸ್‌ಸಿ) 6.76 ಲಕ್ಷ ಮತ್ತು ಪರಿಶಿಷ್ಟ ಪಂಗಡದ (ಎಸ್‌ಟಿ) 1.84 ಲಕ್ಷ ಸೇರಿವೆ ಎಂಬ ವಿವರವನ್ನು ಮನವಿ ಪತ್ರದಲ್ಲಿ ತಿಳಿಸಲಾಗಿದೆ.ಕೇಂದ್ರ ಜಲಶಕ್ತಿ ಮತ್ತು ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಹಾಜರಿದ್ದರು.

# ನೀಟ್, ಜೆಇಇ ಪರೀಕ್ಷಾ ಸ್ವರೂಪ ಬದಲಾವಣೆಗೆ ಕೇಂದ್ರದ ಒಲವು




**ನವದೆಹಲಿ, ಜೂ. 30:** ವಿದ್ಯಾರ್ಥಿಗಳ ಮೇಲೆ ತೀವ್ರ ಮಾನಸಿಕ ಒತ್ತಡ ಹೇರುತ್ತಿರುವ ಹಾಗೂ ಶಿಕ್ಷಣವನ್ನು ಸಂಪೂರ್ಣವಾಗಿ ವ್ಯಾಪಾರೀಕರಣಗೊಳಿಸುತ್ತಿರುವ ಖಾಸಗಿ ಕೋಚಿಂಗ್ ಕೇಂದ್ರಗಳಿಗೆ ಮೂಗುದಾರ ಹಾಕಲು ಕೇಂದ್ರ ಸರ್ಕಾರವು ಗಂಭೀರ ಚಿಂತನೆ ನಡೆಸಿದೆ. ಇದರ ಪ್ರಮುಖ ಹೆಜ್ಜೆಯಾಗಿ, ಕೋಚಿಂಗ್ ಕೇಂದ್ರಗಳ ಮೇಲಿನ ವಿದ್ಯಾರ್ಥಿಗಳ ಅವಲಂಬನೆಯನ್ನು ಗಣನೀಯವಾಗಿ ತಗ್ಗಿಸುವ ಏಕೈಕ ಉದ್ದೇಶದಿಂದ ನೀಟ್ ಮತ್ತು ಜೆಇಇ ಸೇರಿದಂತೆ ದೇಶದ ಪ್ರಮುಖ ಸ್ಪರ್ಧಾತ್ಮಕ ಪರೀಕ್ಷೆಗಳ ಸ್ವರೂಪವನ್ನು ಸಂಪೂರ್ಣವಾಗಿ ಪುನಾರಚಿಸಲು ಕೇಂದ್ರ ಶಿಕ್ಷಣ ಸಚಿವಾಲಯವು ಆಲೋಚಿಸುತ್ತಿದೆ.

ಪ್ರಸ್ತುತ ನಡೆಯುತ್ತಿರುವ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಕೇಳಲಾಗುತ್ತಿರುವ ಪ್ರಶ್ನೆಗಳ ಕಾಠಿಣ್ಯವು ಸಾಮಾನ್ಯ ಶಾಲಾ ಕಾಲೇಜುಗಳ ಪಠ್ಯಕ್ರಮಕ್ಕಿಂತ ತೀರಾ ಭಿನ್ನವಾಗಿರುವುದರಿಂದ ವಿದ್ಯಾರ್ಥಿಗಳು ಅನಿವಾರ್ಯವಾಗಿ ದುಬಾರಿ ಕೋಚಿಂಗ್ ಕೇಂದ್ರಗಳ ಮೊರೆಹೋಗುತ್ತಿದ್ದಾರೆ. ಇದನ್ನು ಕಟ್ಟುನಿಟ್ಟಾಗಿ ತಪ್ಪಿಸಲು, ಮುಂಬರುವ ದಿನಗಳಲ್ಲಿ ಪರೀಕ್ಷೆಯ ಪ್ರಶ್ನೆಪತ್ರಿಕೆಗಳನ್ನು ನೇರವಾಗಿ ಪಿಯುಸಿ ಅಥವಾ ಹನ್ನೆರಡನೇ ತರಗತಿಯ ಮೂಲ ಪಠ್ಯಕ್ರಮಕ್ಕೆ ಮಾತ್ರ ಅನುಗುಣವಾಗಿ ರೂಪಿಸಲು ತಜ್ಞರ ಸಮಿತಿಯು ಶಿಫಾರಸು ಮಾಡುತ್ತಿದೆ. ಇದರಿಂದಾಗಿ, ತರಗತಿಯಲ್ಲಿ ಶ್ರದ್ಧೆಯಿಂದ ಕಲಿಯುವ ಸಾಮಾನ್ಯ ವಿದ್ಯಾರ್ಥಿಯೂ ಸಹ ಯಾವುದೇ ದುಬಾರಿ ಖಾಸಗಿ ತರಬೇತಿ ಇಲ್ಲದೆ ಪರೀಕ್ಷೆಯನ್ನು ಎದುರಿಸಲು ಸಾಧ್ಯವಾಗುವಂತೆ ಪರೀಕ್ಷಾ ವ್ಯವಸ್ಥೆಯನ್ನು ಮಾರ್ಪಡಿಸುವ ಸ್ಪಷ್ಟ ಗುರಿಯನ್ನು ಹೊಂದಲಾಗಿದೆ.

ಪರೀಕ್ಷಾ ಸ್ವರೂಪದ ಸುಧಾರಣೆಯ ಜೊತೆಗೆ, ಕೋಚಿಂಗ್ ಕೇಂದ್ರಗಳ ದಿನನಿತ್ಯದ ಕಾರ್ಯನಿರ್ವಹಣೆಗೂ ಕಟ್ಟುನಿಟ್ಟಾದ ನಿಯಮಾವಳಿಗಳನ್ನು ಜಾರಿಗೆ ತರಲು ಸಿದ್ಧತೆ ಬಿರುಸಿನಿಂದ ನಡೆದಿದೆ. 16 ವರ್ಷದೊಳಗಿನ ವಿದ್ಯಾರ್ಥಿಗಳಿಗೆ ಯಾವುದೇ ಕಾರಣಕ್ಕೂ ಪ್ರವೇಶ ನೀಡದಿರುವುದು, ಮನಬಂದಂತೆ ಇಚ್ಛಾನುಸಾರ ಶುಲ್ಕ ವಸೂಲಿ ಮಾಡುವುದನ್ನು ತಡೆಯುವುದು ಹಾಗೂ ಆಕರ್ಷಕ ಸುಳ್ಳು ಜಾಹೀರಾತುಗಳ ಮೂಲಕ ಮುಗ್ಧ ಪೋಷಕರನ್ನು ದಾರಿತಪ್ಪಿಸುವುದನ್ನು ನಿರ್ಬಂಧಿಸುವ ಕಠಿಣ ನಿಯಮಗಳನ್ನು ಜಾರಿಗೊಳಿಸಲು ಒತ್ತು ನೀಡಲಾಗುತ್ತಿದೆ. ನಿಯಮ ಉಲ್ಲಂಘಿಸುವ ಕೇಂದ್ರಗಳ ಮಾನ್ಯತೆಯನ್ನು ಮುಲಾಜಿಲ್ಲದೆ ರದ್ದುಪಡಿಸುವ ಎಚ್ಚರಿಕೆಯನ್ನೂ ಸರ್ಕಾರ ನೀಡಿದೆ.

ದೇಶದ ವಿವಿಧೆಡೆ, ವಿಶೇಷವಾಗಿ ರಾಜಸ್ಥಾನದ ಕೋಟಾದಂತಹ ಪ್ರಸಿದ್ಧ ಶೈಕ್ಷಣಿಕ ನಗರಗಳಲ್ಲಿ ಕೋಚಿಂಗ್ ಪಡೆಯುತ್ತಿರುವ ವಿದ್ಯಾರ್ಥಿಗಳ ಆತ್ಮಹತ್ಯೆ ಪ್ರಕರಣಗಳು ದಿನೇ ದಿನೇ ಹೆಚ್ಚುತ್ತಿರುವುದು ಸರ್ಕಾರದ ಈ ಕಠಿಣ ನಿರ್ಧಾರಕ್ಕೆ ಬಹುಮುಖ್ಯ ಕಾರಣವಾಗಿದೆ. ಇದರ ಜೊತೆಗೆ, ಲಕ್ಷಾಂತರ ರೂಪಾಯಿ ದುಬಾರಿ ಶುಲ್ಕ ಭರಿಸಲಾಗದ ಬಡ ಮತ್ತು ಗ್ರಾಮೀಣ ಭಾಗದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ವೈದ್ಯಕೀಯ ಮತ್ತು ಎಂಜಿನಿಯರಿಂಗ್ ಪ್ರವೇಶಾತಿಯಲ್ಲಿ ಭಾರೀ ಹಿನ್ನಡೆಯಾಗುತ್ತಿದೆ ಎಂಬ ಟೀಕೆಗಳು ವ್ಯಾಪಕವಾಗಿ ವ್ಯಕ್ತವಾಗಿದ್ದವು. ಈ ಶೈಕ್ಷಣಿಕ ಅಸಮಾನತೆಯನ್ನು ಹೋಗಲಾಡಿಸಲು ಕೇವಲ ಬಾಯಿಪಾಠಕ್ಕೆ ಮನ್ನಣೆ ನೀಡುವ ಬದಲು, ವಿಷಯದ ನೈಜ ತಿಳಿವಳಿಕೆಯನ್ನು ಒರೆಗೆ ಹಚ್ಚುವ ಪಾರದರ್ಶಕ ಪರೀಕ್ಷಾ ವಿಧಾನವನ್ನು ಅಳವಡಿಸಿಕೊಳ್ಳುವುದು ಅತ್ಯಂತ ಅನಿವಾರ್ಯವಾಗಿದೆ.

ಈ ಮಹತ್ವದ ಬದಲಾವಣೆಯ ಕುರಿತು ಶಿಕ್ಷಣ ಸಚಿವಾಲಯವು ಪ್ರಸ್ತುತ ವಿವಿಧ ರಾಜ್ಯ ಸರ್ಕಾರಗಳು, ಹಿರಿಯ ಶಿಕ್ಷಣ ತಜ್ಞರು ಮತ್ತು ಪೋಷಕರ ಪ್ರತಿನಿಧಿಗಳೊಂದಿಗೆ ನಿರಂತರ ಸಮಾಲೋಚನೆ ನಡೆಸುತ್ತಿದೆ. ಪರೀಕ್ಷಾ ವ್ಯವಸ್ಥೆಯ ಸಮಗ್ರ ಪುನಾರಚನೆ ಮತ್ತು ಕೋಚಿಂಗ್ ನಿಯಂತ್ರಣ ಕಾಯ್ದೆಯು ಶೀಘ್ರದಲ್ಲೇ ಅಂತಿಮ ರೂಪ ಪಡೆಯುವ ನಿರೀಕ್ಷೆಯಿದೆ. ಈ ಕಠಿಣ ನಿಯಮಗಳು ಯಶಸ್ವಿಯಾಗಿ ಜಾರಿಯಾದರೆ, ಇಂದಿನ ಶಿಕ್ಷಣ ವ್ಯವಸ್ಥೆಯಲ್ಲಿ ಶಾಲಾ–ಕಾಲೇಜುಗಳ ನೈಜ ಪ್ರಾಮುಖ್ಯತೆ ಮರುಸ್ಥಾಪನೆಯಾಗಲಿದ್ದು, ಸ್ಪರ್ಧಾತ್ಮಕ ವಿದ್ಯಾರ್ಥಿಗಳ ಮೇಲಿನ ಮಾನಸಿಕ ಒತ್ತಡ ಹಾಗೂ ಪೋಷಕರ ಮೇಲಿನ ಆರ್ಥಿಕ ಹೊರೆಯು ಗಣನೀಯ ಪ್ರಮಾಣದಲ್ಲಿ ಕಡಿಮೆಯಾಗುವ ಸಾಧ್ಯತೆಯಿದೆ ಎಂದು ಅಂದಾಜಿಸಲಾಗಿದೆ.

# ಇಂದಿನಿಂದ ಪೆಟ್ರೋಲ್–ಡೀಸೆಲ್ ಮಾರಾಟ ಮಿತಿ ರದ್ದು




**ನವದೆಹಲಿ, ಜೂ.30:** ದೇಶದಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಪೂರೈಕೆ ವ್ಯವಸ್ಥೆ ಸಂಪೂರ್ಣವಾಗಿ ಸುಧಾರಿಸಿದೆ ಎಂದು ಕೇಂದ್ರ ಸರ್ಕಾರ ಹೇಳಿಕೊಂಡಿದೆ. ವಾಣಿಜ್ಯ ಮತ್ತು ಕೈಗಾರಿಕಾ ಬಳಕೆದಾರರಿಗೆ ವಿಧಿಸಲಾಗಿದ್ದ ಇಂಧನ ಖರೀದಿ ಮೇಲಿನ ಎಲ್ಲ ತಾತ್ಕಾಲಿಕ ನಿರ್ಬಂಧಗಳನ್ನು ತೆರವುಗೊಳಿಸಿದೆ. ಈ ಹಿಂದೆ ಇದ್ದ ದಿನಕ್ಕೆ ಗರಿಷ್ಠ 200 ಲೀಟರ್ ಡೀಸೆಲ್ ಮಾರಾಟದ ಮಿತಿಯನ್ನು ಸಂಪೂರ್ಣವಾಗಿ ರದ್ದುಪಡಿ ಸಲಾಗಿದ್ದು, ಜುಲೈ 1ರಿಂದ ಜಾರಿಗೆ ಬರುವಂತೆ ದೇಶದ ಎಲ್ಲ ಚಿಲ್ಲರೆ ಪೆಟ್ರೋಲ್ ಬಂಕ್ಗಳಲ್ಲಿ ಮುಕ್ತ ಮಾರಾಟಕ್ಕೆ ಅವಕಾಶ ಕಲ್ಪಿಸಲಾಗಿದೆ ಎಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ಪ್ರಕಟಿಸಿದೆ.

ಕೇಂದ್ರ ಇಂಧನ ಸಚಿವಾಲಯ ಹೊರಡಿಸಿರುವ ನೂತನ ಆದೇಶದ ಪ್ರಕಾರ, ಸಾರ್ವಜನಿಕ ಹಿತದೃಷ್ಟಿಯಿಂದ ಜೂನ್ 12ರಂದು ಜಾರಿಗೆ ತರಲಾಗಿದ್ದ ತುರ್ತು ನಿಯಮಗಳು ತಮ್ಮ ಉದ್ದೇಶವನ್ನು ಯಶಸ್ವಿಯಾಗಿ ಪೂರೈಸಿವೆ. ಪ್ರಸ್ತುತ ಪರಿಸ್ಥಿತಿಯಲ್ಲಿ ಈ ತುರ್ತು ನಿಮಯಗಳ ಅಗತ್ಯವಿಲ್ಲದ ಕಾರಣ ಅವುಗಳನ್ನು ಹಿಂಪಡೆಯಲಾಗುತ್ತಿದೆ. ಈ ಹೊಸ ನಿರ್ಧಾರದಿಂದಾಗಿ ದೊಡ್ಡ ಕೈಗಾರಿಕೆಗಳು, ಖಾಸಗಿ ಸಾರಿಗೆ ಸಂಸ್ಥೆಗಳು ಹಾಗೂ ಸಾಂಸ್ಥಿಕ ಬಳಕೆದಾರರು ಮತ್ತೆ ಎಂದಿನಂತೆ ಸಾಮಾನ್ಯಬಂಕ್ಗಳಿಂದಲೇ ಮುಕ್ತವಾಗಿ ಇಂಧನ ಖರೀದಿಸಬಹುದಾಗಿದೆ ಎಂದು ಹೇಳಿದೆ. ಇತ್ತೀಚೆಗೆ, ಮಧ್ಯಪ್ರಾಚ್ಯ ರಾಷ್ಟ್ರಗಳಲ್ಲಿ ಉಂಟಾಗಿದ್ದ ಭೌಗೋಳಿಕ ರಾಜಕೀಯ ಉದ್ವಿಗ್ನತೆ ಮತ್ತು ಕಚ್ಚಾತೈಲ ಪೂರೈಕೆಯಲ್ಲಿನ ವ್ಯತ್ಯಯದಿಂದಾಗಿ ಜಾಗತಿಕ ಇಂಧನ ಮಾರುಕಟ್ಟೆಯಲ್ಲಿ ತೀವ್ರ ಅಸ್ಥಿರತೆ ಸೃಷ್ಟಿಯಾಗಿತ್ತು. ಇದರ ನೇರ ಪರಿಣಾಮ ಭಾರತದ ಮೇಲೂ ಬೀರಿತ್ತು. ಸಾಮಾನ್ಯ ಗ್ರಾಹಕರಿಗೆ ಮತ್ತು ವಾಹನ ಸವಾರರಿಗೆ ತೈಲ ಕೊರತೆಯಾಗದಂತೆ ತಡೆಯಲು ಕೇಂದ್ರ ಸರ್ಕಾರವು, ವಾಣಿಜ್ಯ ಮತ್ತು ಕೈಗಾರಿಕಾ ಬಳಕೆದಾರರು ಚಿಲ್ಲರೆ ಬಂಕ್ಗಳಿಂದ ನೇರವಾಗಿ ತೈಲ ಪಡೆಯುವುದನ್ನು ನಿರ್ಬಂಧಿಸಿತ್ತು.

ಪ್ರಸ್ತುತ ಜಾಗತಿಕ ಮಟ್ಟದಲ್ಲಿ ಎದುರಾಗಿದ್ದ ಇಂಧನ ಪೂರೈಕೆ ಬಿಕ್ಕಟ್ಟು ತಿಳಿಯಾಗಿದೆ. ಹಾರ್ಮುಜ್ ಜಲಸಂಧಿಯ ಮೂಲಕ ಕಚ್ಚಾತೈಲ ಸಾಗಣೆ ಹಂತ ಹಂತವಾಗಿ ಸಹಜ ಸ್ಥಿತಿಗೆ ಮರಳಿದೆ. ಗಲ್ಫ್ ರಾಷ್ಟ್ರಗಳಿಂದ ತೈಲ ಆಮದು ಸುಗಮವಾಗಿರುವುದರಿಂದ ದೇಶೀಯ ಮಾರುಕಟ್ಟೆಯಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ದಾಸ್ತಾನು ಹೆಚ್ಚುತ್ತಿದೆ. ಹೀಗಾಗಿ, ಜುಲೈ 1ರಿಂದ ಇಂಧನ ವಿತರಣಾ ವ್ಯವಸ್ಥೆಯು ಹಳೆಯ ನಿಯಮಗಳ ಅಡಿಯಲ್ಲಿ ಸಂಪೂರ್ಣವಾಗಿ ಸಹಜ ಸ್ಥಿತಿಗೆ ಮರಳಲಿದ್ದು, ಆರ್ಥಿಕ ಮತ್ತು ವಾಣಿಜ್ಯ ಚಟುವಟಿಕೆಗಳಿಗೆ ಮತ್ತಷ್ಟು ವೇಗ ಸಿಗಲಿದೆ ಎಂದು ವ್ಯಾಪಾರ ವಲಯ ನಿರೀಕ್ಷಿಸುತ್ತಿದೆ.

# ಕರ್ನಾಟಕಕ್ಕೂ ತಲುಪಿದ ರಾಮಮಂದಿರ ದೇಣಿಗೆ ಕಳ್ಳತನದ ನಂಟು: ಅಖಿಲೇಶ್ ಸ್ಫೋಟಕ ಹೇಳಿಕೆ

ನವದೆಹಲಿ : ಅಯೋಧ್ಯೆಯ ಶ್ರೀರಾಮ ಮಂದಿರಾದಲ್ಲಿ ನಡೆದ ದೇಣಿಗೆ ಕಳ್ಳತನ ಪ್ರಕರಣ ದೇಶದಲ್ಲೇ ಸಂಚಲನ ಸೃಷ್ಟಿಸಿದೆ. ಈವರೆಗೂ ಉತ್ತರ ಪ್ರದೇಶಕ್ಕೆ ಸೀಮಿತವಾಗಿದ್ದ ಈ ಪ್ರಕರಣದ ನಂಟು ಈಗ ಕರ್ನಾಟಕವನ್ನ ತಲುಪಿದೆ. ದೇಣಿಗೆ ಕಳ್ಳತನ ಪ್ರಕರಣದ ನಂಟು ಕರ್ನಾಟಕದವರೆಗೂ ಇದೆ, ಅದು ಭೂಗತ ವ್ಯಕ್ತಿಗಳಿಗೂ ವಿಸ್ತರಿಸಿದೆ ಎಂದು ಮಾಜಿ ಸಿಎಂ ಅಖಿಲೇಶ್ ಯಾದವ್ ಹೊಸ ಬಾಂಬ್ ಸಿಡಿಸಿದ್ದು, ಬಿಜೆಪಿ ದೇಶಕ್ಕಿಂತ ದೇಣಿಗೆಗೆ ಹೆಚ್ಚು ಆದ್ಯತೆ ನೀಡುತ್ತಿದೆ ಎಂದು ಟೀಕಿಸಿದ್ದಾರೆ.

ಪ್ರಯಾಗ್‌ರಾಜ್‌ನಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಅಯೋಧ್ಯೆಯ ಜನರು ಕಳ್ಳತನದ ನಂಟು ಕರ್ನಾಟಕಕ್ಕೂ ವಿಸ್ತರಿಸಿದೆ ಎಂದು ಹೇಳುತ್ತಿದ್ದಾರೆ. ಕರ್ನಾಟಕದ ಭೂಗತ ಮತ್ತು ನೋಂದಾಯಿಸಲ್ಪಡದ ಜನರು ಚುನಾವಣೆಗೆ ಸಂಬಂಧಿಸಿದ ಪಿತೂರಿಗಳಲ್ಲಿ ಭಾಗಿಯಾಗಿದ್ದಾರೆ. ಅವರ ಚಟುವಟಿಕೆಗಳು ಈಗ ಬಹಿರಂಗಗೊಂಡಿವೆ ಎಂದು ಆರೋಪಿಸಿದರು. ಆದರೆ ಕರ್ನಾಟಕದ ಆ ನೋಂದಾಯಿತವಲ್ಲದ ವ್ಯಕ್ತಿಗಳು ಯಾರು ಎಂಬುದನ್ನು ಅವರು ಹೇಳಿಲ್ಲ..

**ಚಂಪತ್ ರಾಯ್ ವಿಚಾರಣೆ**

ಎಂಟು ಆರೋಪಿಗಳ ಬಂಧನ ಬೆನ್ನಲ್ಲೇ ಈಗ ಟ್ರಸ್ಟ್ ನ ಮಾಜಿ ಪ್ರಧಾನ ಕಾರ್ಯದರ್ಶಿ ಚೆಂಪತ್ ರಾಯ್ ಮೇಲೆ ಅನುಮಾನ ಹೆಚ್ಚುತ್ತಿದೆ. ಈ ಹಿನ್ನೆಲೆಯಲ್ಲಿ ಎರಡನೇ ಹಂತದ ತನಿಖೆ ಆರಂಭಿಸಿರುವ ಎಸ್‌ಐಟಿ ಅಧಿಕಾರಿಗಳು ಮೂರು ಗಂಟೆಗಳ ಕಾಲ ಚಂಪತ್ ರಾಯ್ ಅವರನ್ನು ವಿಚಾರಣೆ ನಡೆಸಿದ್ದಾರೆ. ವಿಚಾರಣೆಯ ಸಮಯದಲ್ಲಿ ಕಾಣಿಕೆಗಳ ಕಳ್ಳತನದಲ್ಲಿ ನನ್ನ ಪಾತ್ರ ಇಲ್ಲ ವೆಂದಿರುವ ರಾಯ್ ಹೀಗೆ ಮಾಡಬಹುದು ಎಂದು ಅಂದುಕೊಂಡಿರಲಿಲ್ಲ,

ನನ್ನ ಕಣ್ತಪ್ಪಿನಿಂದ ಈ ಅಕ್ರಮ ನಡೆದಿದೆ ಆದರೆ ಈ ವಿಚಾರಗಳು ನನ್ನ ಗಮನಕ್ಕೆ ಬಂದಿರಲಿಲ್ಲ ಎಂದು ಸಮರ್ಥನೆ ಮಾಡಿಕೊಂಡಿದ್ದಾರೆ. ಅದಾಗ್ಯೂ ಹಲವು ಪ್ರಶ್ನೆಗಳಿಗೆ ಉತ್ತರಿಸಲು ವಿಫಲರಾದ ಚಂಪತ್ ರಾಯ್ ಬ್ಯಾಂಕ್ ವರ್ಗಾವಣೆಗಳು, ಭೂಮಿ ಖರೀದಿ ಸೇರಿದಂತೆ ಹಲವು ಪ್ರಶ್ನೆಗಳಿಗೆ ಚಂಪತ್ ರಾಯ್‌ಉತ್ತರಿಸಿಲ್ಲ ಹೀಗಾಗೀ ಮತ್ತೊಮ್ಮೆ ವಿಚಾರಣೆಗೆ ಒಳಪಡಿಸಲು ಎಸ್‌ಐಟಿ ಅಧಿಕಾರಿಗಳು ನಿರ್ಧರಿಸಿದ್ದಾರೆ.

ದೇಣಿಗೆ ಎಣಿಕೆಗೆ ಪರಿಚಯಸ್ಥರ ನೇಮಕ ವಿಚಾರ ಮಾಡಿಕೊಂಡ ವಿಚಾರಕ್ಕೆ ಎಸ್‌ಐಟಿ ಅಧಿಕಾರಿಗಳು ಪ್ರಶ್ನಿಸಿದಾದ ಇದಕ್ಕೆ ಉತ್ತರಿಸಿರುವ ಚಂಪತ್ ರಾಯ್ ಎಲ್ಲ ಸದಸ್ಯರು ತಮ್ಮ ಬೇಕಾದ ಜನರಿಗೆ ಕೆಲಸ ನೀಡಿದ್ದಾರೆ, ತಪ್ಪು ನನ್ನೊಂದೊಬ್ಬದಲ್ಲ, ಟ್ರಸ್ಟ್ ನ ಎಲ್ಲ ಸದಸ್ಯರದು ಎಲ್ಲ ಸದಸ್ಯರು ತಮ್ಮ ಬೇಕಾದ ಜನರಿಗೆ ಕೆಲಸ ನೀಡಿದ್ದಾರೆ ಅನಿಲ್ ಮಿಶ್ರಾ, ಗೋಪಾಲ್ ಕೂಡಾ ಪರಿಚಯಸ್ಥರಿಗೆ ಕೆಲಸ ನೀಡಿದ್ದಾರೆ ಈ ವಿಚಾರದಲ್ಲಿ ನನ್ನ ತಪ್ಪು



ಮಾತ್ರ ಇಲ್ಲ ಎಂದಿದ್ದಾರೆ.

**ಎಸ್‌ಬಿಐ ಅಯೋಧ್ಯಾ ಧಾಮ್ ಶಾಖೆಯ ಮ್ಯಾನೇಜರ್ ವಿಚಾರಣೆ**

ತನಿಖೆ ಮುಂದುವರಿಸಿರುವ ಎಸ್‌ಐಟಿ ಅಧಿಕಾರಿಗಳು ಎಸ್‌ಬಿಐ ಅಯೋಧ್ಯಾ ಧಾಮ್ ಶಾಖೆಯ ಮ್ಯಾನೇಜರ್ ಅನ್ನು ವಿಚಾರಣೆ ನಡೆಸಿದ್ದಾರೆ. ಎರಡು ಗಂಟೆಗಳ ಕಾಲ ವಿಚಾರಣೆಗೆ ಒಳಪಡಿಸಿದ ಎಸ್‌ಐಟಿ ಅಧಿಕಾರಿಗಳು ದೇವಸ್ಥಾನದ ಠೇವಣಿಗಳು, ಬಂಧಿತ ಆರೋಪಿಗಳ ಬ್ಯಾಂಕ್ ವಿವರಗಳು ಆರೋಪಿಗಳ ಖಾತೆಯಿಂದ ಇತರ ಖಾತೆಗೆ ವರ್ಗಾವಣೆಯಾದ ಮಾಹಿತಿ ಐದು ವರ್ಷಗಳ ವಿವರವಾದ ಸ್ಟೇಟ್ಮೆಂಟ್ ಪಡೆದುಕೊಂಡಿದ್ದಾರೆ. ವಿಚಾರಣೆ ಸಮಯದಲ್ಲಿ ಹೊರ ಬಂದ ಸ್ಫೋಟಕ ಮಾಹಿತಿ ಏನಂದರೆ ದೇಣಿಗೆ ಹಣ ಕಳ್ಳತನ ಬಗ್ಗೆ ಎಸ್‌ಬಿ ಐ ಅಧಿಕಾರಿಗಳಿಗೆ ಮೂರು ತಿಂಗಳ ಹಿಂದೆ ಅನುಮಾನ ಬಂದಿತ್ತು ಈ ಬೆನ್ನಲೆ ಸಿಬ್ಬಂದಿ ಬದಲಾಯಿಸಲು ಮುಂದಾಗಿತ್ತು ಆದರೆ ಸಿಬ್ಬಂದಿಯನ್ನು ಬದಲಿಸಲು ಟ್ರಸ್ಟ್ ಆಕ್ಷೇಪ ವ್ಯಕ್ತಪಡಿಸಿತ್ತು ಸಿಬ್ಬಂದಿ ಬದಲಿಸಲು ಅವಕಾಶ ಮಾಡಿಕೊಟ್ಟಿರಲಿಲ್ಲ ಎಂದು ತಿಳಿದು ಬಂದಿದೆ.

**17 ವರ್ಷಗಳ ಬಳಿಕ ಆರ್‌ಎಂಓ ಅರ್ಜುನ್ ದೇವ್ ವರ್ಗಾವಣೆ**

ಕಳೆದ 17 ವರ್ಷಗಳಿಂದ ರಾಮ ಮಂದಿರಾದಲ್ಲಿ ರೇಡಿಯೋ ನಿರ್ವಹಣಾಧಿಕಾರಿ ಕೆಲಸ ಮಾಡ್ತಿದ್ದ ಪೊಲೀಸ್ ಇಲಾಖೆಯ ಅರ್ಜುನ್ ದೇವ್ ವರ್ಗಾವಣೆಯಾಗಿದೆ. ಪ್ರಕರಣ ಬೆಳಕಿಗೆ ಬಂದ ಬೆನ್ನಲ್ಲೇ ಚೆಂಪತ್ ರಾಯ್ ಗೆ ಅತ್ಯಾಪ್ತನಾಗಿದ್ದ ಅರ್ಜುಮ್ ದೇವ್ ನನ್ನು ಇಲಾಖೆ ವರ್ಗಾವಣೆ ಮಾಡಿದೆ. ಅರ್ಜುನ್ ದೇವ್ ರಾಮಮಂದಿರಾದ 1600 ಸಿಸಿಟಿವಿಗಳ ಮೇಲ್ವಿಚಾರಣೆ ಹಾಗೂ ರೇಡಿಯೋ ಸಿಗ್ನಲ್ ಜವಾಬ್ದಾರಿ ಹೊತ್ತಿದ್ದ. 2009 ರಲ್ಲಿ ಅಯೋಧ್ಯೆಗೆ ಪೊಲೀಸ್ ಇಲಾಖೆಯಿಂದ ನಿಯೋಜನೆಯಾಗಿದ್ದರು ಅಲ್ಲಿಂದ ಈವರೆಗೂ ಅವರು ವರ್ಗಾವಣೆಯಾಗಿಲ್ಲ ಹಲವು ಬಾರಿ ವರ್ಗಾವಣೆಯಾದರೂ ಚೆಂಪತ್ ರಾಯ್ ಪ್ರಭಾವ ಬಳಸಿ ವರ್ಗಾವಣೆ ಆದೇಶ ರದ್ದುಗೊಳಿಸಲಾಗಿತ್ತು ಈಗ ದೇಣಿಗೆ ಅಕ್ರಮ ಹೊರಬರುತ್ತಿದ್ದಂತೆ ಗೋರಖಪುರಕ್ಕೆ ವರ್ಗಾವಣೆ ಮಾಡಿರುವುದು ಹಲವು ಅನುಮಾನಕ್ಕೆ ಕಾರಣವಾಗಿದೆ.


**ಶೇ.40ರಷ್ಟು ಕಮೀಷನ್ ದಂಧೆಗಿಳಿದ ಅನಿಲ್ ಮಿಶ್ರಾ**

ವಾಯ್ಸ್: ದೇವಸ್ಥಾನದ ಟ್ರಸ್ಟ್ ಸದಸ್ಯರಾಗಿದ್ದ ಅನಿಲ್ ಮೀಶ್ರಾ 40% ಕಮೀಷನ್ ದಂಧೆಗೆ ಇಳಿದಿದ್ದರು ಎನ್ನುವುದು ತನಿಖೆಯಲ್ಲಿ ತಿಳಿದಿದೆ.. ಟ್ರಸ್ಟ್ ಕಡೆಯಿಂದ ನೀಡಲಾಗುತ್ತಿದ್ದ ಟೆಂಡರ್ ಗಳಲ್ಲಿ 40% ಕಮೀಷನ್ ಪಡೆಯುತ್ತಿದ್ದ ಅದನ್ನು ಇತರರೊಂದಿಗೆ ಹಂಚಿಕೆ ಮಾಡಿಕೊಳುತ್ತಿದ್ದ ಎನ್ನಲಾಗಿದೆ.

**ಅಜಯ್ ರಾಯ್ ಗೃಹ ಬಂಧನ**

ಲಾಮಲಲ್ಲಾ ದರ್ಶನಕ್ಕೆ ತೆರಳಿದ್ದ ಉತ್ತರ ಪ್ರದೇಶ ಕಾಂಗ್ರೆಸ್ ಅಧ್ಯಕ್ಷ ಅಜಯ್ ರಾಯ್ ಅವರನ್ನು ಗೃಹ ಬಂಧನದಲ್ಲಿ ಇರಿಸಿದೆ. ಅಯೋಧ್ಯೆ ಕಣಿಗಂಜ್‌ನಲ್ಲಿರುವ ಪದ್ಮಶ್ರೀ ಅರಮನೆಯಲ್ಲಿ ತಂಗಿದ್ದ ಅವರನ್ನು ನಿನ್ನೆ ರಾತ್ರಿ 11:40 ರ ಸುಮಾರಿಗೆ ಪೊಲೀಸ್ ತಂಡ ಆಗಮಿಸಿ ಕರೆದೊಯ್ದಿದೆ. ಬಳಿಕ ಆಚಾರ್ಯ ನರೇಂದ್ರ ದೇವ್ ಕೃಷಿ ಮತ್ತು ತಂತ್ರಜ್ಞಾನ ವಿಶ್ವವಿದ್ಯಾಲಯದಲ್ಲಿ ರಾತ್ರಿಯಿಡೀ ಇರಿಸಲಾಗಿತ್ತು. ಅಯೋಧ್ಯೆಯ ಇನ್ಸ್‌ಪೆಕ್ಟರ್ ಜನರಲ್ ಪಂಕಜ್ ಸಿಂಗ್ ಸೇರಿದಂತೆ ಹಲವಾರು ಅಧಿಕಾರಿಗಳು ಸ್ಥಳಕ್ಕೆ ಆಗಮಿಸಿ ಕಾಂಗ್ರೆಸ್ ನಾಯಕರೊಂದಿಗೆ ಮಾತುಕತೆ ನಡೆಸಿದರು, ಈ ಬೆಳವಣಿಗೆ ಸಾಕಷ್ಟು ವಿವಾದಕ್ಕೆ ಕಾರಣವಾಗಿದೆ.

# ಜು.3ರಂದು ಪವಿತ್ರ ಅಮರನಾಥ ಯಾತ್ರೆ ಆರಂಭ



**ನವದೆಹಲಿ, ಜೂ.30:** ಲಕ್ಷಾಂತರ ಶಿವಭಕ್ತರು ವರ್ಷಪೂರ್ತಿ ಕಾತರದಿಂದ ಕಾಯುವ ಪವಿತ್ರ ಅಮರನಾಥ ಯಾತ್ರೆಗೆ ದಿನಗಣನೆ ಆರಂಭವಾಗಿದೆ. ಜುಲೈ 3 ರಂದು ಅಧಿಕೃತವಾಗಿ ಆರಂಭವಾಗಲಿರುವ ಈ ಪವಿತ್ರ ಯಾತ್ರೆಯು ಆಗಸ್ಟ್ 28ರಂದು ಮುಕ್ತಾಯಗೊಳ್ಳಲಿದೆ. ಯಾತ್ರೆ ಆರಂಭಕ್ಕೂ ಮುನ್ನವೇ ಜಮ್ಮು ಮತ್ತು ಕಾಶ್ಮೀರದ ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ಅವರು ಜ್ಯೇಷ್ಠ ಪೌರ್ಣಿಮಿಯ ಶುಭ ಸಂದರ್ಭದಲ್ಲಿ ಸಾಂಪ್ರದಾಯಿಕ ಪ್ರಥಮ ಪೂಜೆಯನ್ನು ನೆರವೇರಿಸಿ, ಬಾಬಾ ಬರ್ಫಾನಿ ಯಾತ್ರೆಯನ್ನು ಉದ್ಘಾಟಿಸಿದ್ದಾರೆ. ದೇಶಾದ್ಯಂತದ ಲಕ್ಷಾಂತರ ಭಕ್ತರು ಈಗಾಗಲೇ ಈ ಹಿಮಾಲಯದ ದುರ್ಗಮ ಹಾದಿಯ ಪಯಣಕ್ಕೆ ಸಿದ್ಧತೆ ನಡೆಸುತ್ತಿದ್ದಾರೆ. ಒಂದು ವೇಳೆ ನೀವು ಸಹ ಈ ಬಾರಿ ಅಮರನಾಥ ಯಾತ್ರೆಗೆ ಹೋಗಲು ಯೋಜಿಸುತ್ತಿದ್ದರೆ, ಮುಂಚಿತವಾಗಿ ಸರಿಯಾದ ಸಿದ್ಧತೆಗಳನ್ನು ಮಾಡಿಕೊಳ್ಳುವುದು ಅತ್ಯಗತ್ಯ. ಏಕೆಂದರೆ, ಎತ್ತರದ ಪ್ರದೇಶಗಳಲ್ಲಿ ಹವಾಮಾನವು ಕೆಲವೇ ಸೆಕೆಂಡುಗಳಲ್ಲಿ ಬದಲಾಗುತ್ತದೆ. ಹೀಗಾಗಿ ಪ್ರಯಾಣದ ವೇಳೆ ನಿಮ್ಮ ಬ್ಯಾಗ್‌ನಲ್ಲಿ ಏನಿರಬೇಕು ಮತ್ತು ಏನಿರಬಾರದು ಎಂಬ ಸಂಪೂರ್ಣ ಮಾಹಿತಿ ಇಲ್ಲಿದೆ. ಅಮರನಾಥದ ಸುತ್ತಮುತ್ತಲಿನ ಪ್ರದೇಶಗಳಲ್ಲಿ ತಾಪಮಾನವು ಹಠಾತ್ ಆಗಿ ತೀವ್ರ ಕುಸಿತ ಕಾಣುತ್ತದೆ. ಆದ್ದರಿಂದ ನಿಮ್ಮ ಚೀಲದಲ್ಲಿ ಥರ್ಮಲ್ ಒಳ ಉಡುಪು, ಉಣ್ಣೆ ಸ್ವೆಟರ್ ಹಾಗೂ ಕೈಗವಸುಗಳು, ಜಲನಿರೋಧಕ ಅಥವಾ ವಿಂಡ್ ಬ್ರೇಕರ್ ಜಾಕೆಟ್, ಉಣ್ಣೆಯ ಟೋಪಿ, ಮಫ್ಲರ್ ಮತ್ತು ಹೆಚ್ಚುವರಿ ಉಣ್ಣೆಯ ಸಾಕ್ಸ್, ರೇನ್ ಕೋಟ್ ಈ ವಸ್ತುಗಳನ್ನು ಪ್ಯಾಕ್ ಮಾಡಲು ಮರೆಯದಿರಿ.

ಬಿಪಿ, ಮಧುಮೇಹ, ಆಸ್ತಮಾ ಅಥವಾ ಇತರ ದೀರ್ಘಕಾಲದ ಕಾಯಿಲೆಗಳಿಗೆ ನಿಯಮಿತವಾಗಿ ಔಷಧಿ ತೆಗೆದುಕೊಳ್ಳುವವರು ಸಾಕಷ್ಟು ಪ್ರಮಾಣದ ಬ್ಯಾಕಪ್ ಮಾತ್ರೆಗಳನ್ನು ಕೊಂಡೊಯ್ಯಬೇಕು. ಇದರೊಂದಿಗೆ ಪ್ರಥಮ ಚಿಕಿತ್ಸಾ ಕಿಟ್‌ನಲ್ಲಿ ಸಾಮಾನ್ಯ ಜ್ವರ, ಮೈಕೈ ನೋವು, ವಾಂತಿ ಮತ್ತು ಗಾಯಗಳಿಗೆ ಬಳಸುವ ಮುಲಾಮುಗಳನ್ನು ಇಟ್ಟುಕೊಳ್ಳಿ. ಪ್ರಯಾಣದ ಸಮಯದಲ್ಲಿ ಯಾವುದೇ ತೊಂದರೆಗಳನ್ನು ತಪ್ಪಿಸಲು ಈ ಕೆಲವು ದಾಖಲೆಗಳ ಹಾರ್ಡ್ ಕಾಪಿ ಮತ್ತು ಮೊಬೈಲ್ನಲ್ಲಿ ಡಿಜಿಟಲ್ ಪ್ರತಿಗಳನ್ನು ಸುರಕ್ಷಿತವಾಗಿ ಇಟ್ಟುಕೊಳ್ಳಿ. ಉದಾಹರಣೆಗೆ ಅಮರನಾಥ ಯಾತ್ರೆ ನೋಂದಣಿ ಚೀಟಿ, ಕಡ್ಡಾಯ ಆರೋಗ್ಯ ಪ್ರಮಾಣಪತ್ರ, ಆಧಾರ್ ಕಾರ್ಡ್ ಅಥವಾ ಇತರ ಮಾನ್ಯವಾದ ಸರ್ಕಾರಿ ಫೋಟೋ ಗುರುತಿನ ಚೀಟಿ ಮತ್ತು ತುರ್ತು ಸಂಪರ್ಕ ಸಂಖ್ಯೆಗಳ ಪಟ್ಟಿ. ಎತ್ತರದ ಬೆಟ್ಟಗಳ ಮೇಲೆ ಸೂರ್ಯನ ಕಿರಣಗಳ ತೀವ್ರತೆ ಹೆಚ್ಚಾಗಿರುತ್ತದೆ. ಆದ್ದರಿಂದ ಸನ್ ಗ್ಲಾಸ್, ಸನ್ಸ್ಕ್ರೀನ್ ಲೋಶನ್ ಮತ್ತು ಲಿಪ್ ಬಾಮ್ ಬಳಸಿ. ಇದರೊಂದಿಗೆ ಟಾರ್ಚ್ ಲೈಟ್, ಪವರ್ ಬ್ಯಾಂಕ್, ಮೊಬೈಲ್ ಚಾರ್ಜರ್, ನೀರಿನ ಬಾಟಲ್, ಡ್ರೈ ಫ್ರೂಟ್ಸ್, ಎನರ್ಜಿ ಬಾರ್ಗಳು ಹಾಗೂ ಗ್ಲೂಕೋಸ್ ಪಾಕೆಟ್‌ಗಳನ್ನು ಜೊತೆಯಲ್ಲಿಟ್ಟುಕೊಳ್ಳಿ. ದುರ್ಗಮ ಹಾದಿಯಲ್ಲಿ ಸಾಗುವಾಗ ಲಗೇಜ್ ತೂಕ ಕಡಿಮೆ ಇದ್ದಷ್ಟು ಪ್ರಯಾಣ ಸುಲಭವಾಗುತ್ತದೆ. ಇದಲ್ಲದೆ ದುಬಾರಿ ಆಭರಣಗಳು ಮತ್ತು ಬೆಲೆಬಾಳುವ ವಸ್ತುಗಳು, ದೊಡ್ಡ ಪ್ರಮಾಣದ ನಗದು ಹಣ (ಡಿಜಿಟಲ್ ಪೇಮೆಂಟ್ ಅಥವಾ ಲಿಮಿಟೆಡ್ ಕ್ಯಾಶ್ ಬಳಸಿ), ಪರಿಸರಕ್ಕೆ ಹಾನಿ ಮಾಡುವ ಪ್ಲಾಸ್ಟಿಕ್ ತ್ಯಾಜ್ಯಗಳು, ಮದ್ಯ, ತಂಬಾಕು ಮತ್ತು ಯಾವುದೇ ರೀತಿಯ ಮಾದಕ ವಸ್ತುಗಳು, ವೈದ್ಯರ ಅಧಿಕೃತ ಸಲಹೆಯಿಲ್ಲದೆ ಆಮ್ಲಜನಕ ಸಿಲಿಂಡರ್ಗಳು ಅಥವಾ ಪ್ರತ್ಯೇಕ ಔಷಧಿಗಳನ್ನು ಕೊಂಡೊಯ್ಯಬೇಡಿ.

ಅಮರನಾಥ ಯಾತ್ರೆಯು ಸಮುದ್ರ ಮಟ್ಟದಿಂದ ಗಣನೀಯ ಎತ್ತರದಲ್ಲಿ ನಡೆಯುವುದರಿಂದ ಅಲ್ಲಿ ಆಮ್ಲಜನಕದ ಮಟ್ಟ ಕಡಿಮೆಯಿರುತ್ತದೆ. ಇದು ದೈಹಿಕ ತೊಂದರೆಗಳನ್ನು ಉಂಟುಮಾಡಬಹುದು. ಆದ್ದರಿಂದ ಭಕ್ತರು ಈ ನಿಯಮಗಳನ್ನು ಪಾಲಿಸಬೇಕು. ಬೆಟ್ಟ ಹತ್ತುವಾಗ ವೇಗವಾಗಿ ನಡೆಯಬೇಡಿ, ನಿಧಾನವಾಗಿ ಮತ್ತು ಸ್ಥಿರವಾಗಿ ಪ್ರಯಾಣಿಸಿ. ದೇಹದಲ್ಲಿ ನೀರಿನ ಅಂಶ ಕಡಿಮೆಯಾಗದಂತೆ ನೋಡಿಕೊಳ್ಳಲು ನಿಯಮಿತವಾಗಿ ನೀರು ಕುಡಿಯುತ್ತಿರಿ. ನಿರಂತರವಾಗಿ ನಡೆಯುವ ಬದಲು, ಮಧ್ಯೆ ಮಧ್ಯೆ ಸಣ್ಣ ವಿರಾಮ ತೆಗೆದುಕೊಳ್ಳಿ, ಸ್ಥಳೀಯ ಆಡಳಿತ ಮತ್ತು ಭದ್ರತಾ ಸಿಬ್ಬಂದಿ ನೀಡುವ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸಿ. ಉಸಿರಾಟದ ತೊಂದರೆ, ತಲೆತಿರುಗುವಿಕೆ ಅಥವಾ ಎದೆ ನೋವು ಮುಂತಾದ ಲಕ್ಷಣಗಳು ಕಂಡುಬಂದರೆ, ತಕ್ಷಣ ಹತ್ತಿರದ ವೈದ್ಯಕೀಯ ಕೇಂದ್ರವನ್ನು ಸಂಪರ್ಕಿಸಿ.

ಅಮರನಾಥ ಯಾತ್ರೆ ಕೇವಲ ಆಧ್ಯಾತ್ಮಿಕ ಪ್ರಯಾಣವಲ್ಲ, ದೈಹಿಕವಾಗಿಯೂ ಅತ್ಯಂತ ಸವಾಲಿನ ಪಯಣವಾಗಿದೆ. ಸರಿಯಾದ ಯೋಜನೆ, ಸೂಕ್ತ ಸಿದ್ಧತೆ ಮತ್ತು ಆರೋಗ್ಯ ಮುನ್ನೆಚ್ಚರಿಕೆಗಳೊಂದಿಗೆ ಈ ಪವಿತ್ರ ಪ್ರಯಾಣವನ್ನು ಕೈಗೊಂಡರೆ ಸುರಕ್ಷಿತವಾಗಿರುತ್ತದೆ.




ನ್ಯಾಷನಲ್ ಕಾನ್ಫರೆನ್ಸ್ ಸರ್ಕಾರದ ಹೊರಗುತ್ತಿಗೆ ನೀತಿ ಮತ್ತು ಹಿಂಬಾಗಿಲಿನ ನೇಮಕಾತಿಗಳ ವಿರುದ್ಧ ಜಮ್ಮು–ಕಾಶ್ಮೀರದ ಅನಂತ್‌ನಾಗ್‌ನಲ್ಲಿ ಪಿಡಿಪಿ ಪ್ರತಿಭಟನೆ ನಡೆಸಿತು.

# ಎಥೆನಾಲ್ ಹಂಚಿಕೆ ಹೆಚ್ಚಳಕ್ಕೆ ಕರ್ನಾಟಕ ಹೈಕೋರ್ಟ್ ಆದೇಶ ಯಥಾಸ್ಥಿತಿ ಕಾಯ್ದುಕೊಳ್ಳಲು ಸುಪ್ರೀಂ ಕೋರ್ಟ್ ನಿರ್ದೇಶನ

**ನವದೆಹಲಿ, ಜೂ.30:** ಎಥೆನಾಲ್ ಸರಬರಾಜು ವರ್ಷ 2025–26ಕ್ಕೆ ಎಥೆನಾಲ್ ಹಂಚಿಕೆಯನ್ನು ಹೆಚ್ಚಿಸುವಂತೆ ಕರ್ನಾಟಕ ಹೈಕೋರ್ಟ್ ನೀಡಿದ್ದ ಆದೇಶಕ್ಕೆ ತಡೆ ನೀಡಿರುವ ಸುಪ್ರೀಂ ಕೋರ್ಟ್ ಯಥಾಸ್ಥಿತಿ ಕಾಯ್ದುಕೊಳ್ಳುವಂತೆ ಆದೇಶಿಸಿದೆ.

BPCL ಸಲ್ಲಿಸಿದ್ದ ಅರ್ಜಿಯನ್ನು ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳಾದ ಎಂ.ಎಂ ಸುಂದರೇಶ ನೇತೃತ್ವದ ದ್ವಿ ಸದಸ್ಯ ಪೀಠ ಪ್ರತಿವಾದಿಗಳಿಗೆ ನೋಟಿಸ್ ಜಾರಿಗೊಳಿಸಿದೆ.

ಕರ್ನಾಟಕ ಹೈಕೋರ್ಟ್, ಎಥೆನಾಲ್ ಉತ್ಪಾದಕ ಸಂಸ್ಥೆಯಾದ ವಿಐಎನ್‌ಪಿ ಡಿಸೇಲರ್‌ಸಿ ಆ್ಯಂಡ್ ಶುಗರ್ಸ್ ಸಲ್ಲಿಸಿದ್ದ ಮನವಿಯನ್ನು ಪರಿಗಣಿಸಿ ಬಿಪಿಸಿಎಲ್, ಹೆಚ್‌ಪಿಸಿಎಲ್, ಇಂಡಿಯನ್ ಆಯಿಲ್ ಕಾರ್ಪೊರೇಷನ್ ಸಂಸ್ಥೆಗಳು ಎಥೆನಾಲ್ ಹಂಚಿಕೆಯನ್ನು ಹೆಚ್ಚಿಸುವ ಕುರಿತು ಮನವಿಯನ್ನು ಪರಿಶೀಲಿಸಿ ತೀರ್ಮಾನ ಕೈಗೊಳ್ಳುವಂತೆ ನಿರ್ದೇಶಿಸಿತ್ತು. ಹೈಕೋರ್ಟ್ ತನ್ನ ಆದೇಶದಲ್ಲಿ, ಸರ್ಕಾರದ ನೀತಿಯಡಿ ಸ್ಥಾಪನೆಯಾಗಿ, ದೀರ್ಘಾವಧಿಯ ಖರೀದಿ ಒಪ್ಪಂದ ಅಡಿಯಲ್ಲಿ ತೈಲ ಮಾರುಕಟ್ಟೆ ಕಂಪನಿಗಳಿಗೆ ಮಾತ್ರ ಎಥೆನಾಲ್ ಪೂರೈಸುವ ಬದ್ಧತೆ ಹೊಂದಿರುವ ಘಟಕಗಳಿಗೆ ಆದ್ಯತೆಯ ಹಂಚಿಕೆ ಸೌಲಭ್ಯವನ್ನು ನಿರಾಕರಿಸಲು ಸಾಧ್ಯವಿಲ್ಲ ಎಂದು ಹೇಳಿತ್ತು. ವಿಚಾರಣೆ ವೇಳೆ ಭಾರತದ ಅಟಾರ್ನಿ ಜನರಲ್ , ಹೈಕೋರ್ಟ್ ಆದೇಶ ಜಾರಿಯಾದರೆ ದೇಶದ ಪೆಟ್ರೋಲ್‌ನಲ್ಲಿ 20 ಶೇಕಡಾ ಎಥೆನಾಲ್ ಮಿಶ್ರಣ ಗುರಿಯ ರಾಷ್ಟ್ರೀಯ ನೀತಿಯ ಅನುಷ್ಠಾನ ಅಸ್ತವ್ಯಸ್ತವಾಗುವ ಸಾಧ್ಯತೆ ಇದೆ ಎಂದು ಸುಪ್ರೀಂ ತಿಳಿಸಿದರು. ಎಥೆನಾಲ್ ಮಿಶ್ರಣ ಯೋಜನೆ ಇನ್ನೂ ಪ್ರಗತಿಯಲ್ಲಿರುವ ಕಾರ್ಯಕ್ರಮವಾಗಿದ್ದು, ಅದರ ಸಂಪೂರ್ಣ ಪರಿಣಾಮ ಮುಂದಿನ ವರ್ಷ ಸ್ಪಷ್ಟವಾಗಲಿದೆ ಎಂದು ವಾದಿಸಿದರು.

2025ರ ಅಕ್ಟೋಬರ್‌ನಲ್ಲಿ ಎಥೆನಾಲ್ ಪೂರೈಕೆ ಒಪ್ಪಂದಗಳು ಪೂರ್ಣಗೊಂಡಿದ್ದು, ಅಕ್ಟೋಬರ್ 17, 2025ರಂದು ಒಟ್ಟು 378 ಪೂರೈಕೆದಾರರಿಗೆ 1,050 ಕೋಟಿ ಲೀಟರ್ ಎಥೆನಾಲ್ ಪೂರೈಕೆಯ ಹಂಚಿಕೆ ಅಂತಿಮಗೊಳಿಸಲಾಗಿತ್ತು ಎಂದು ತಿಳಿಸಿದರು. ಇದರಲ್ಲಿ ಜೂನ್ 18ರವರೆಗೆ ಸುಮಾರು 680 ಕೋಟಿ ಲೀಟರ್ ಎಥೆನಾಲ್ ಈಗಾಗಲೇ ಪೂರೈಕೆಯಾಗಿದೆ ಎಂದರು.

ಒಬ್ಬ ಪೂರೈಕೆದಾರನಿಗೆ ಹೆಚ್ಚುವರಿ ಹಂಚಿಕೆ ನೀಡಿದರೆ, ಇದೇ ರೀತಿಯ ಇತರ ಪೂರೈಕೆದಾರರೂ ಸಮಾನ ಅವಕಾಶಕ್ಕಾಗಿ ನ್ಯಾಯಾಲಯದ ಮೊರೆ ಹೋಗುವ ಸಾಧ್ಯತೆ ಇದ್ದು, ಇದರಿಂದ ವ್ಯಾಪಕ ಪ್ರಮಾಣದ ನ್ಯಾಯಾಂಗ ವ್ಯಾಜ್ಯಗಳಿಗೆ ದಾರಿ ತೆರೆಯಬಹುದು ಎಂದು ಸರ್ಕಾರದ ಪರ ವಾದಿಸಲಾಯಿತು. ಇದೇ ವೇಳೆ, ಃಕಅಐ ತನ್ನ ಅರ್ಜಿಯಲ್ಲಿ, ಉತ್ಪಾದನಾ ಸಾಮರ್ಥ್ಯವಿದೆ ಎಂಬ ಕಾರಣಕ್ಕೆ ಮಾತ್ರ VINP ಡಿಸಲಿರ್‌ಸಿಗೆ ಹೆಚ್ಚುವರಿ ಎಥೆನಾಲ್ ಪೂರೈಸುವ ಸಂಪೂರ್ಣ ಹಕ್ಕು ನೀಡಲು ಸಾಧ್ಯವಿಲ್ಲ. ಈಗಾಗಲೇ ಎಲ್ಲಾ ಪೂರೈಕೆದಾರರಿಗೆ ನಿಗದಿತ ಹಂಚಿಕೆ ಮಾಡಲಾಗಿ ರುವುದರಿಂದ, ಒಂದು ಸಂಸ್ಥೆಗೆ ವಿಶೇಷ ಸೌಲಭ್ಯ ನೀಡುವುದು ನ್ಯಾಯಸಮ್ಮತವಾಗುವುದಿಲ್ಲ ಎಂದು ವಾದಿಸಿದೆ.

# ಆಯೋಗದ ಪಕ್ಷಪಾತದ ವಿರುದ್ಧ ಸಿಜೆಐಗೆ ಪ್ರತಿಪಕ್ಷಗಳ ಪತ್ರ

**ನವದೆಹಲಿ, ಜೂ. 30:** ಚುನಾವಣಾ ಆಯೋಗದ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯಲ್ಲಿನ ಪಕ್ಷಪಾತದ ನಡೆ ಹಾಗೂ ಚುನಾವಣಾ ಫಲಿತಾಂಶಗಳ ತಿರುಚುವಿಕೆಯನ್ನು ಪ್ರಶ್ನಿಸಿ 23 ಪ್ರತಿಪಕ್ಷಗಳು ಹಾಗೂ ಓರ್ವ ಪಕ್ಷೇತರ ಸಂಸದರು ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಅವರಿಗೆ ಜಂಟಿ ಪತ್ರ ಬರೆದಿದ್ದಾರೆ.

ಪ್ರಜಾಪ್ರಭುತ್ವದ ಹಿತದೃಷ್ಟಿಯಿಂದ ಚುನಾವಣಾ ಪ್ರಕ್ರಿಯೆಯಲ್ಲಿ ನ್ಯಾಯಾಂಗವು ಮಧ್ಯಪ್ರವೇಶ ಮಾಡಬೇಕು ಎಂದು ಒತ್ತಾಯಿಸಿ ಈ ನಾಲ್ಕು ಪುಟಗಳ ಪತ್ರವನ್ನು ರವಾನಿಸಲಾಗಿದೆ. ಜೂನ್ 8ರಂದು ನಡೆದ ಇಂಡಿಯಾ ಒಕ್ಕೂಟದ ಸಭೆಯಲ್ಲಿ ಈ ಕುರಿತು ನಿರ್ಣಯ ಕೈಗೊಳ್ಳಲಾಗಿತ್ತು. ಅಚ್ಚರಿಯ ಬೆಳವಣಿಗೆಯಲ್ಲಿ, ಇತ್ತೀಚೆಗಷ್ಟೇ ಮೈತ್ರಿಕೂಟದಿಂದ ಅಂತರ ಕಾಯ್ದುಕೊಂಡಿದ್ದ ಎಎಪಿ ಹಾಗೂ ಡಿಎಂಕೆ ಪಕ್ಷಗಳು ಕೂಡ ಈ ಜಂಟಿ ಪತ್ರಕ್ಕೆ ಸಹಿ ಹಾಕಿವೆ. ತಮಿಳುನಾಡಿನಲ್ಲಿ ಕಾಂಗ್ರೆಸ್ ಪಕ್ಷವು ಇತ್ತೀಚೆಗೆ ವಿಜಯ್ ನೇತೃತ್ವದ ಟಿ.ವಿ.ಕೆ ಸರ್ಕಾರವನ್ನು ಬೆಂಬಲಿಸಿದ್ದನ್ನು ವಿರೋಧಿಸಿ ಡಿಎಂಕೆ ಮೈತ್ರಿಯಿಂದ ಹೊರಬಂದಿತ್ತು. ಆದರೂ, ಚುನಾವಣಾ ಅಕ್ರಮಗಳ ವಿರುದ್ಧದ ಈ ಹೋರಾಟದಲ್ಲಿ ಒಕ್ಕೂಟದೊಂದಿಗೆ ಕೈಜೋಡಿಸಿದೆ. ಬೆಳವಣಿಗೆ ಕುರಿತು ಪ್ರತಿಕ್ರಿಯಿಸಿರುವ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ಕಾಂಗ್ರೆಸ್ ಮುಖಂಡ ಕೆ.ಸಿ. ವೇಣುಗೋಪಾಲ್, ಪ್ರತಿಪಕ್ಷಗಳು SURE Solidarity (ಸಹಮತ/ಬೆಂಬಲ), Unity (ಒಗ್ಗಟ್ಟು) ಹಾಗೂ Resistance (ಪ್ರತಿರೋಧ) ತತ್ವಕ್ಕೆ ಬಲವಾಗಿ ಅಂಟಿಕೊಂಡಿವೆ, ಎಂದು ಸ್ಪಷ್ಟಪಡಿಸಿದ್ದಾರೆ. ಚುನಾವಣಾ ಯಂತ್ರಾಂಗವು ಆಡಳಿತ ಪಕ್ಷದ ಪರವಾಗಿ ಕೆಲಸ ಮಾಡುತ್ತಿರುವಾಗ ನ್ಯಾಯಾಂಗದ ಮೊರೆ ಹೋಗುವುದು ಅನಿವಾರ್ಯವಾಗಿದೆ ಎಂದು ಅವರು ಪ್ರತಿಪಾದಿಸಿದ್ದಾರೆ.

23 ರಾಜಕೀಯ ಪಕ್ಷಗಳು ಹಾಗೂ ಓರ್ವ ಪಕ್ಷೇತರ ಸಂಸದ ಕಪಿಲ್ ಸಿಬಲ್ ಅವರು ಸುಪ್ರೀಂ ಕೋರ್ಟ್‌ನ ಮುಖ್ಯ ನ್ಯಾಯಮೂರ್ತಿಗಳಿಗೆ (ಸಿಜೆಐ) 4 ಪುಟಗಳ ಜಂಟಿ ಪತ್ರವನ್ನು ಸಲ್ಲಿಸಿದ್ದಾರೆ.

ಚುನಾವಣಾ ಆಯೋಗವು ಖಖಖ ಪ್ರಕ್ರಿಯೆಯನ್ನು ದುರ್ಬಳಕೆ ಮಾಡಿಕೊಳ್ಳುತ್ತಿದೆ ಎಂದು ಆರೋಪಿಸಿರುವ ನಾಯಕರು, ತಮ್ಮ ಪತ್ರದಲ್ಲಿ ವಿವಿಧ ರಾಜ್ಯಗಳಲ್ಲಿ ನಡೆದಿರುವ ನಿರ್ದಿಷ್ಟ ಉದಾಹರಣೆಗಳನ್ನು ಉಲ್ಲೇಖಿಸಿ ನ್ಯಾಯಾಂಗದ ಮಧ್ಯಪ್ರವೇಶಕ್ಕೆ ಕೋರಿದ್ದಾರೆ.


ಇತ್ತೀಚಿನ ಭಿನ್ನಾಭಿಪ್ರಾಯಗಳ ನಡುವೆಯೂ ಆಮ್ ಆದ್ಮಿ ಪಾರ್ಟಿ ಹಾಗೂ ಡಿಎಂಕೆ ಪಕ್ಷಗಳು ಈ ಜಂಟಿ ಪತ್ರಕ್ಕೆ ಸಹಿ ಹಾಕುವ ಮೂಲಕ ಪ್ರತಿಪಕ್ಷಗಳಲ್ಲಿ ಮತ್ತೆ ಒಗ್ಗಟ್ಟು ಮೂಡಿದೆ. ತೃಣಮೂಲ ಕಾಂಗ್ರೆಸ್ ಮುಖಂಡ ಡೆರೆಕ್ ಒಬ್ರಿಯಾನ್ ಕೂಡ ಈ ಒಮ್ಮತದ ಬೆಳವಣಿಗೆಯನ್ನು ಸ್ವಾಗತಿಸಿದ್ದಾರೆ. ಇತರ ಎಲ್ಲಾ ಸಾಂವಿಧಾನಿಕ ಮಾರ್ಗಗಳು ವಿಫಲವಾದಾಗ ಭಾರತೀಯ ಪ್ರಜಾಪ್ರಭುತ್ವವು ನ್ಯಾಯಾಂಗದತ್ತ ನೋಡುತ್ತದೆ ಎಂಬ ಆಶಯದೊಂದಿಗೆ, ಪ್ರಜಾಪ್ರಭುತ್ವದ ರಕ್ಷಣೆಗಾಗಿ ಸುಪ್ರೀಂ ಕೋರ್ಟ್‌ಗೆ ಈ ತುರ್ತು ಮನವಿಯನ್ನು ಸಲ್ಲಿಸಲಾಗಿದೆ.

# ಜಿಬಿಎ ವ್ಯಾಪ್ತಿಯಲ್ಲಿ ಶೇ.100 ಎಬಿಸಿ ಗುರಿಸಾಧಿಸಲು ಕಾರ್ಯಸೂಚಿ ಸಿದ್ಧಪಡಿಸಿ: ಕೃಷ್ಣಬೈರೇಗೌಡ ಸೂಚನೆ

**ಬೆಂಗಳೂರು, ಜೂ.30:** ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲಿ ಮುಂದಿನ ಮೂರು ವರ್ಷಗಳಲ್ಲಿ ಶೇ.100 ಎಬಿಸಿ ಕಾರ್ಯ ಪೂರ್ಣಗೊಳಿಸಲು ಸಮಗ್ರ ಕಾರ್ಯಸೂಚಿ ಸಿದ್ಧಪಡಿಸುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ ಎಂದು ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಹೇಳಿದರು.

ಜಿಬಿಎ ವ್ಯಾಪ್ತಿಯಲ್ಲಿ ಪಶುಸಂಗೋಪನೆ ಹಾಗೂ ನಗರ ಸಸಿ ನೆಡುವುದಕ್ಕೆ ಸಂಬಂಧಿಸಿದಂತೆ ಮಂಗಳವಾರ ನಡೆದ ಸಭೆಯ ಬಳಿಕ ಮಾಧ್ಯಮ ಪ್ರತಿನಿಧಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ನಗರದಲ್ಲಿ ಬೀದಿ ನಾಯಿಗಳ ಸಮಸ್ಯೆಯನ್ನು ಕಳೆದ 50 ವರ್ಷಗಳಿಂದ ಪರಿಹರಿಸಲು ಹಲವು ಪ್ರಯತ್ನಗಳು ನಡೆದಿದ್ದರೂ, ಸಮಸ್ಯೆ ನಿರೀಕ್ಷಿತ ಮಟ್ಟದಲ್ಲಿ ನಿಯಂತ್ರಣಕ್ಕೆ ಬಂದಿಲ್ಲ. ನಾಗರಿಕರ ಆತಂಕ ಮತ್ತು ಅಭಿಪ್ರಾಯಗಳಿಗೆ ಸರ್ಕಾರವೂ ಸ್ಪಂದಿಸುತ್ತಿದ್ದು, ಪರಿಣಾಮಕಾರಿ ಪರಿಹಾರ ಕಂಡುಕೊಳ್ಳಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಹೇಳಿದರು.

ಬೆಂಗಳೂರು ನಗರದಲ್ಲಿ 2000ನೇ ಸಾಲಿನಿಂದಲೇ ಎಬಿಸಿ ಕಾರ್ಯ ಆರಂಭವಾಗಿದೆ. 2007ರಲ್ಲಿ ಬಿಬಿಎಂಪಿ ರಚನೆಯಾದ ಬಳಿಕ ಇದುವರೆಗೆ ಸುಮಾರು 8.80 ಲಕ್ಷ ನಾಯಿಗಳಿಗೆ ಎಬಿಸಿ ಶಸ್ತ್ರಚಿಕಿತ್ಸೆ ನಡೆಸಲಾಗಿದೆ. 2019ರ ಸಮೀಕ್ಷೆ ಪ್ರಕಾರ ನಗರದಲ್ಲಿ 3.10 ಲಕ್ಷ ಹಾಗೂ 2023ರ ಅಂದಾಜು ಪ್ರಕಾರ 2.79 ಲಕ್ಷ ಬೀದಿ ನಾಯಿಗಳಿವೆ. 2016ರಿಂದ 2023ರವರೆಗೆ 3.33 ಲಕ್ಷ ನಾಯಿಗಳಿಗೆ ಎಬಿಸಿ ಚಿಕಿತ್ಸೆ ನೀಡಲಾಗಿದೆ. ಆದರೂ, ಬೀದಿ ನಾಯಿಗಳ ಸಂಖ್ಯೆಯಲ್ಲಿ ನಿರೀಕ್ಷಿತ ಇಳಿಕೆ ಕಂಡುಬಂದಿಲ್ಲ. ಇದೇ ರೀತಿಯಲ್ಲಿ ಮುಂದುವರಿದರೆ ಇನ್ನೂ ಹಲವು ವರ್ಷಗಳಾದರೂ ಸಮಸ್ಯೆಗೆ ಶಾಶ್ವತ ಪರಿಹಾರ ಸಿಗುವುದಿಲ್ಲ. ಆದ್ದರಿಂದ ಕಟ್ಟುನಿಟ್ಟಿನ ಕಾರ್ಯತಂತ್ರ ರೂಪಿಸಿ ಸಮಸ್ಯೆಯನ್ನು ನಿಯಂತ್ರಣಕ್ಕೆ ತರಲು ಸೂಚಿಸಲಾಗಿದೆ ಎಂದು ಹೇಳಿದರು.



ಪಾದಚಾರಿ ಮಾರ್ಗಗಳ ಒತ್ತುವರಿ ತೆರವು ಕಾರ್ಯಾಚರಣೆ ಯಾರನ್ನೂ ಒಕ್ಕಲೆಬ್ಬಿಸುವ ಕೆಲಸವನ್ನು ಮಾಡುತ್ತಿಲ್ಲ. ಪಾದಚಾರಿಗಳಿಗೆ ಸುಗಮ ಸಂಚಾರ ಕಲ್ಪಿಸಲು ಸಹಕರಿಸಬೇಕು. ಅಂಗಡಿ ಮುಂಭಾಗದಲ್ಲಿ ಅಕ್ರಮ ಒತ್ತುವರಿ ಮಾಡಿಕೊಂಡಿರುವವರು ಸ್ವಯಂಪ್ರೇರಿತವಾಗಿ ತೆರವುಗೊಳಿಸಬೇಕು. ಇಲ್ಲದಿದ್ದರೆ ನಿಯಮಾನುಸಾರ ತೆರವುಗೊಳಿಸಿ ದಂಡ ವಿಧಿಸಲಾಗುವುದು.

–ಕೃಷ್ಣ ಬೈರೇಗೌಡ, ಬೆಂಗಳೂರು ನಗರಾಭಿವೃದ್ಧಿ ಸಚಿವ

ಸಭೆಯಲ್ಲಿ ಮುಖ್ಯ ಆಯುಕ್ತರಾದ ಮಹೇಶ್ವರ್ ರಾವ್, ಪಾಲಿಕೆ ಆಯುಕ್ತರಾದ ರಮೇಶ್ ಡಿ.ಎಸ್., ಪೊಮ್ಮಲ ಸುನೀಲ್ ಕುಮಾರ್, ಜಿ. ಜಗದೀಶ್, ರಮೇಶ್ ಕೆ.ಎನ್., ಡಾ. ರಾಜೇಂದ್ರ ಕೆ.ವಿ., ವಿಶೇಷ ಆಯುಕ್ತರಾದ ವೆಂಕಟಾ ಚಲಪತಿ, ಅರಣ್ಯ ವಿಭಾಗ, ಪಶುಪಾಲನಾ ವಿಭಾಗ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ಸಸಿ ನೆಡುವ ಕಾರ್ಯಕ್ಕೆ ಸಾರ್ವಜನಿಕರ ಸಹಭಾಗಿತ್ವ

ಪ್ರಸಕ್ತ ಸಾಲಿನಲ್ಲಿ 64,130 ಸಸಿಗಳನ್ನು ನೆಡುವ ಗುರಿ ಹೊಂದಲಾಗಿದೆ. ಸಾರ್ವಜನಿಕರು ಹಾಗೂ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘಗಳ ಸಹಭಾಗಿತ್ವದಲ್ಲಿ ಸಸಿನೆಟ್ಟು ಅವುಗಳ ಪೋಷಣೆಗೆ ಆದ್ಯತೆ ನೀಡಬೇಕು. ನಗರದಲ್ಲಿ ಸಸಿ ನೆಡುವ ಕಾರ್ಯದಲ್ಲಿ ನಾಗರಿಕರಿಗೆ ಆದ್ಯತೆ ನೀಡಲಾಗುವುದು. ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘಗಳು ಅಗತ್ಯವಿರುವ ಸಸಿಗಳ ಕುರಿತು ಮನವಿ ಸಲ್ಲಿಸಿದರೆ, ಅವುಗಳನ್ನು ಪೂರೈಸಿ ನೆಡುವ ವ್ಯವಸ್ಥೆ ಮಾಡಲಾಗುವುದು. 2008ರಿಂದ ಇದುವರೆಗೆ ಸುಮಾರು 20 ಲಕ್ಷ ಸಸಿಗಳನ್ನು ನೆಟ್ಟಿರುವುದಾಗಿ ದಾಖಲೆಗಳಿವೆ. ಆದರೆ ಮರಗಳ ಗಣತಿ ಪ್ರಕಾರ ಶೇ.85ರಷ್ಟು ಸಮೀಕ್ಷೆ ಪೂರ್ಣಗೊಂಡಿದ್ದು, ಸುಮಾರು 11 ಲಕ್ಷ ಮರಗಳು ಮಾತ್ರ ಇರುವ ಸಾಧ್ಯತೆ ಕಂಡುಬಂದಿದೆ. ಉಳಿದ ಸಸಿಗಳ ಕುರಿತು ಸ್ಪಷ್ಟ ಮಾಹಿತಿ ಲಭ್ಯವಿಲ್ಲ. ಪ್ರತಿಯೊಂದು ಸಸಿ ನೆಡುವ ಕಾರ್ಯಕ್ಕೂ ಸಂಪೂರ್ಣ ಉತ್ತರದಾಯಿತ್ವ ಮತ್ತು ದಾಖಲೆ ನಿರ್ವಹಣೆ ಕಡ್ಡಾಯವಾಗಬೇಕು ಎಂದು ಕೃಷ್ಣಬೈರೇಗೌಡ ಸೂಚಿಸಿದರು.

## 45 ಸಾವಿರ ಬೀದಿನಾಯಿಗಳಿಗೆ ಶಸ್ತ್ರಚಿಕಿತ್ಸೆ

ಕಳೆದ ಐದು ವರ್ಷಗಳಲ್ಲಿ ಎಬಿಸಿ ಶಸ್ತ್ರಚಿಕಿತ್ಸೆಗಾಗಿ ಸುಮಾರು 42 ಕೋಟಿ ರೂ. ವೆಚ್ಚ ಮಾಡಲಾಗಿದೆ. ಸಾರ್ವಜನಿಕರ ತೆರಿಗೆ ಹಣವನ್ನು ವ್ಯಯಿಸುತ್ತಿದ್ದರೂ ನಿರೀಕ್ಷಿತ ಫಲಿತಾಂಶ ದೊರೆತಿಲ್ಲ. ಬೀದಿ ನಾಯಿಗಳಿಂದ ಸಾರ್ವಜನಿಕರು ಎದುರಿಸುತ್ತಿರುವ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಲು ಸೂಚಿಸಲಾಗಿದೆ. ಪ್ರಸ್ತುತ ವರ್ಷಕ್ಕೆ ಸುಮಾರು 45 ಸಾವಿರ ಬೀದಿ ನಾಯಿಗಳಿಗೆ ಎಬಿಸಿ ಶಸ್ತ್ರಚಿಕಿತ್ಸೆ ನಡೆಸಲಾಗುತ್ತಿದೆ. ಅಗತ್ಯ ಮೂಲಸೌಕರ್ಯ ಮತ್ತು ಸಂಪನ್ಮೂಲಗಳನ್ನು ಹೆಚ್ಚಿಸಿ ಈ ಸಾಮರ್ಥ್ಯವನ್ನು ದ್ವಿಗುಣಗೊಳಿಸಿ ವರ್ಷಕ್ಕೆ 90 ಸಾವಿರ ನಾಯಿಗಳಿಗೆ ಎಬಿಸಿ ನಡೆಸುವ ಗುರಿ ಹೊಂದಲಾಗಿದೆ. ಈ ರೀತಿಯಾಗಿ ಮೂರು ವರ್ಷಗಳ ಕಾಲ ನಿರಂತರವಾಗಿ ಕಾರ್ಯನಿರ್ವಹಿಸಿ ನಗರದಲ್ಲಿ ಶೇ.100 ಎಬಿಸಿ ಸಾಧಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದು ಹೇಳಿದರು. ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಪಶುವೈದ್ಯರ ಜೊತೆಗೆ ಹೊರಗುತ್ತಿಗೆ ಆಧಾರದ ಮೇಲೆ ಹೆಚ್ಚುವರಿ ವೈದ್ಯರನ್ನು ನೇಮಕ ಮಾಡಿಕೊಂಡು ಎಬಿಸಿ ಶಸ್ತ್ರಚಿಕಿತ್ಸೆಯ ಪ್ರಮಾಣವನ್ನು ಹೆಚ್ಚಿಸುವಂತೆ ಸೂಚಿಸಲಾಗಿದೆ ಎಂದು ಕೃಷ್ಣಬೈರೇಗೌಡ ಹೇಳಿದರು.

# ಎಸ್‌ಐಆರ್ ಅರ್ಜಿ ಭರ್ತಿ ಮಾಡುವುದು ಕಡ್ಡಾಯ

**ಬೆಂಗಳೂರು, ಜೂ.30:** ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ–2026ರ ಅಂಗವಾಗಿ ಮತಗಟ್ಟೆ ಮಟ್ಟದ ಅಧಿಕಾರಿಗಳು (ಬಿಎಲ್‌ಓಗಳು) ಮಂಗಳವಾರದಿಂದ ಮನೆ–ಮನೆಗೆ ಭೇಟಿ ನೀಡಿ ಗಣತಿ ನಮೂನೆಗಳನ್ನು ವಿತರಿಸುತ್ತಿದ್ದು, ಈ ಸಂಬಂಧ ಬೆಂಗಳೂರು ನಗರ ಜಿಲ್ಲೆ 152– ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರದ ಮತದಾರರಾಗಿರುವ ರಾಜ್ಯ ಮುಖ್ಯ ಚುನಾವಣಾಧಿಕಾರಿ ಅನ್ಬುಕುಮಾರ್ ಅವರ ಮನೆಗೆ ಭೇಟಿ ನೀಡಿದ ಬಿಎಲ್‌ಓ ಎಂಕಣ್ಣ ಅವರು ನಮೂನೆಯನ್ನು ನೀಡಿ ಮಾಹಿತಿಯನ್ನು ಪಡೆದುಕೊಂಡರು.

ನಮೂನೆ ಭರ್ತಿ ಮಾಡಿ ನಂತರ ಮಾತನಾಡಿದ ಅನ್ಬುಕುಮಾರ್, ಅಕ್ರಮ ಮತದಾರರಿಗೆ ಕಡಿವಾಣ ಹಾಕುವ ಉದ್ದೇಶದಿಂದ ಹಾಗೂ ಯಾವುದೇ ಮತದಾರರು ಹಕ್ಕನ್ನು ಕಳೆದುಕೊಳ್ಳದಂತೆ ನೋಡಿಕೊಳ್ಳುವ ಉದ್ದೇಶದಿಂದ ರಾಜ್ಯಾದ್ಯಂತ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆ ಪ್ರಾರಂಭವಾಗಿದೆ. ಬೂತ್ ಮಟ್ಟದ ಅಧಿಕಾರಿಗಳು ಮನೆ ಮನೆಗೆ ಭೇಟಿ ನೀಡಿ ಮತದಾರರ ವಿವರಗಳನ್ನು ಪರಿಶೀಲಿಸಲಿದ್ದಾರೆ. ಈ ವೇಳೆ ಬಿಎಲ್‌ಓಗಳು ಎಸ್‌ಐಆರ್ ಅರ್ಜಿಯನ್ನು ನೀಡಲಿದ್ದು, ಮತದಾರರು ಅರ್ಜಿಯನ್ನು ಭರ್ತಿಮಾಡಿ ಸಹಿಮಾಡಿ ಅಗತ್ಯ ದಾಖಲೆಗಳೊಂದಿಗೆ ಸಲ್ಲಿಸಬೇಕಾಗಿದೆ ಎಂದರು.

ಮತದಾರರ ಪಟ್ಟಿಯಲ್ಲಿರುವ ಹೆಸರುಗಳ ಪರಿಶೀಲನೆ, ತಿದ್ದುಪಡಿ, ಹೊಸ ಮತದಾರರ ಹೆಸರು ಸೇರ್ಪಡೆ, ಮೃತಪಟ್ಟವರು ಹಾಗೂ ಸ್ಥಳಾಂತರಗೊಂಡವರ ಹೆಸರುಗಳನ್ನು ಪಟ್ಟಿಯಿಂದ ತೆಗೆದುಹಾಕುವ ಪ್ರಕ್ರಿಯೆಯೂ ಇದೇ ಅವಧಿಯಲ್ಲಿ ನಡೆಯಲಿದೆ. ಫೋಟೋ ಕಡ್ಡಾಯವಲ್ಲ, ಆದರೆ, ಹಳೆಯ ಫೋಟೋ ಇದ್ದರೆ



■ ಮ್ಯಾಪಿಂಗ್ ಆಗದವರ ಮನೆಗೂ ಭೇಟಿ ನೀಡಿ ಬಿಎಲ್‌ಒಗಳಿಂದ ಮಾಹಿತಿ ಸಂಗ್ರಹ: ರಾಜ್ಯ ಮುಖ್ಯ ಚುನಾವಣಾಧಿಕಾರಿ ಅನ್ಬುಕುಮಾರ್

ಇತ್ತೀಚಿನ ಹೊಸ ಫೋಟೋ ನೀಡುವಂತೆ ಅನ್ಬುಕುಮಾರ್ ಸೂಚಿಸಿದರು. ಫೋಟೋ ಇಲ್ಲದಿದ್ದ ಸಂದರ್ಭದಲ್ಲಿ ಬಿಎಲ್‌ಓಗಳು ತಮ್ಮ ಮೊಬೈಲ್‌ನಲ್ಲಿ ಫೋಟೋ ತೆಗೆಯಲಿದ್ದು ಅದನ್ನ ಆಪ್‌ನಲ್ಲಿ ಅಪ್‌ಲೋಡ್ ಮಾಡುವರು. ಮ್ಯಾಪಿಂಗ್ ಆಗದಿದ್ದರೂ ಎನ್ಯುಮರೇಷನ್ ಫಾರ್ಮ್ ಬರುತ್ತದೆ. ಸಾರ್ವಜನಿಕರಲ್ಲಿ ಮ್ಯಾಪಿಂಗ್ ಆಗಿಲ್ಲವೆಂಬ ಗೊಂದಲ ಬೇಡ, ಮ್ಯಾಪಿಂಗ್ ಆಗದವರ ಮನೆಗೂ ಬಿಎಲ್‌ಓಗಳು ಬರಲಿದ್ದಾರೆ. ಪ್ರತಿಯೊಬ್ಬ ಮತದಾರರು ಅರ್ಜಿ ತುಂಬಿಕೊಡುವುದು ಕಡ್ಡಾಯ ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ ಸಹಾಯಕ ಚುನಾವಣಾ ನೊಂದಣಿ ಅಧಿಕಾರಿ ಕೃಷ್ಣಪ್ಪ ಹಾಗೂ ಇತರ ಅಧಿಕಾರಿಗಳು ಉಪಸ್ಥಿತರಿದ್ದರು.

## ಎಸ್‌ಐಆರ್ ಪ್ರಕ್ರಿಯೆ ಹೇಗೆ?

ರಾಜ್ಯದಾದ್ಯಂತ 59,050 ಬೂತ್ ಮಟ್ಟದ ಅಧಿಕಾರಿಗಳು 7,556 ಮೇಲ್ವಿಚಾರಕರು, 224 ಚುನಾವಣಾ ನೋಂದಣಿ ಅಧಿಕಾರಿಗಳು ಹಾಗೂ 336 ಸಹಾಯಕ ಚುನಾವಣಾ ನೋಂದಣಿ ಅಧಿಕಾರಿಗಳನ್ನು ಎಸ್‌ಐಆರ್ ಕಾರ್ಯಕ್ಕೆ ನಿಯೋಜಿಸಲಾಗಿದೆ. ಜೊತೆಗೆ ರಾಜಕೀಯ ಪಕ್ಷಗಳು ನೇಮಿಸಿರುವ 1.1 ಲಕ್ಷಕ್ಕೂ ಹೆಚ್ಚು ಬೂತ್‌ಮಟ್ಟದ ಏಜೆಂಟರಿಗೆ ತರಬೇತಿ ನೀಡಲಾಗಿದೆ. ಜೂ.16, 2026ರ ಮತದಾರರ ಪಟ್ಟಿಯಲ್ಲಿ ಹೆಸರು ಹೊಂದಿರುವ ಪ್ರತಿಯೊಬ್ಬರ ಮನೆಗೆ ಬಿಎಲ್‌ಓಗಳು ಭೇಟಿ ನೀಡಿ ಎನ್ಯುಮರೇಷನ್ ಫಾರ್ಮ್ ವಿತರಿಸಲಿದ್ದಾರೆ. ಫಾರ್ಮ್ ನೀಡಿದ ಮನೆಗಳಿಗೆ ನೇರಳೆ ಬಣ್ಣದ ಚೌಕಾಕಾರದ ಸ್ಟಿಕ್ಕರ್ ಅಂಟಿಸಲಾಗುತ್ತದೆ. ಮನೆ ಬೀಗ ಹಾಕಿದ್ದರೆ ಕೆಂಪುಬಣ್ಣದ ವೃತ್ತಾಕಾರದ ಸ್ಟಿಕ್ಕರ್ ಅಂಟಿಸಲಾಗುತ್ತದೆ. ಅಗತ್ಯವಿದ್ದರೆ ಭರ್ತಿ ಮಾಡಿದ ಫಾರ್ಮ್ ಪಡೆಯಲು ಮೂರು ಬಾರಿ ಭೇಟಿ ನೀಡಲಾಗುತ್ತದೆ. ಚುನಾವಣಾ ಆಯೋಗದ ಸ್ಪಷ್ಟೀಕರಣದಂತೆ, ಈ ಹಂತದಲ್ಲಿ ಯಾವುದೇ ದಾಖಲೆಗಳನ್ನು ಸಂಗ್ರಹಿಸಲಾಗುವುದಿಲ್ಲ. ಮತದಾರರು ಫಾರ್ಮ್ ಸ್ವೀಕರಿಸಿ, ಭರ್ತಿ ಮಾಡಿ, ಸಹಿಮಾಡಿ ಬಿಎಲ್‌ಓಗಳಿಗೆ ಹಿಂತಿರುಗಿಸಿದರೆ ಸಾಕು ಎಂದು ಮುಖ್ಯ ಚುನಾವಣಾಧಿಕಾರಿ ಅನ್ಬುಕುಮಾರ್ ತಿಳಿಸಿದ್ದಾರೆ.ಅಲ್ಲದೆ, ಸಂಪೂರ್ಣ ಪ್ರಕ್ರಿಯೆ ಭಾರತ ಚುನಾವಣಾ ಆಯೋಗದ ಮಾರ್ಗಸೂಚಿ ಹಾಗೂ ಕಾನೂನುಬದ್ಧವಾಗಿ ನಡೆಯಲಿದ್ದು, ಸಾರ್ವಜನಿಕರು ಯಾವುದೇ ಆತಂಕಕ್ಕೆ ಒಳಗಾಗಬಾರದು ಎಂದು ಅವರು ಮನವಿ ಮಾಡಿದ್ದಾರೆ.

# ಅನುದಾನ ಹಂಚಿಕೆಯಲ್ಲಿ ತಾರತಮ್ಯ ಬೇಡ: ಡಾ.ಸಿ.ಎನ್.ಅಶ್ವತ್ಥನಾರಾಯಣ್

**ಬೆಂಗಳೂರು, ಜೂ.30:** ಕಾಂಗ್ರೆಸ್ ಸರಕಾರವು ಬೆಂಗಳೂರಿನ ಅಭಿವೃದ್ಧಿ ವಿಚಾರದಲ್ಲಿ ಸಂಪೂರ್ಣವಾಗಿ ವಿಫಲವಾಗಿದೆ ಎಂದು ಮಾಜಿ ಉಪ ಮುಖ್ಯಮಂತ್ರಿ ಮತ್ತು ಶಾಸಕ ಡಾ.ಸಿ.ಎನ್. ಅಶ್ವಥ್ಥನಾರಾಯಣ್ ಅವರು ಟೀಕಿಸಿದ್ದಾರೆ.



ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಪ್ರಶ್ನೆಗೆ ಉತ್ತರ ನೀಡಿದರು. ಬೆಂಗಳೂರಿನ ಅಭಿವೃದ್ಧಿಗೆ ಬೇಕಾದ ಅನುದಾನವನ್ನು ಸಾಕಷ್ಟು ಕೊಟ್ಟಿಲ್ಲ. ಅದರಲ್ಲೂ ತಾರತಮ್ಯ ಮಾಡಿದೆ ಎಂದು ಆರೋಪಿಸಿದರು. ಕಾಂಗ್ರೆಸ್ ಶಾಸಕರಿಗೆ ಹೆಚ್ಚು ಹಾಗೂ ಬಿಜೆಪಿ ಶಾಸಕರಿಗೆ ಕಡಿಮೆ ಅನುದಾನ ನೀಡಿದ್ದಾರೆ. ಈ ತಾರತಮ್ಯ ನಿಲ್ಲಬೇಕು ಎಂದು ಒತ್ತಾಯಿಸಿದರು.

ಕಸದ ತೆರಿಗೆ, ಆಸ್ತಿ ತೆರಿಗೆ, ಜಾಹೀರಾತು ಮೂಲಕ ಸಂಗ್ರಹ, ವಿದ್ಯುತ್ ದರ ಹೆಚ್ಚಳ, ಬಿಡಬ್ಲ್ಯುಎಸ್‌ಎಸ್‌ಬಿಯಲ್ಲೂ ಹೆಚ್ಚು ದರ ವಿಧಿಸಿ ಹಣ ಸಂಗ್ರಹಿಸಿದ್ದಾರೆ. ವಿದ್ಯುತ್ ಮೇಲೆ ಐದಾರು ದರ ವಿಧಿಸುತ್ತಿದ್ದಾರೆ ಎಂದು ಗಮನ ಸೆಳೆದರು.

ಬಿಜೆಪಿ ಸರಕಾರವು ಹೆಚ್ಚಿನ ಅನುದಾನವನ್ನು ಬೆಂಗಳೂರಿಗೆ ನೀಡಿತ್ತು. ಅದಕ್ಕೆ ಹೋಲಿಸಿದರೆ ಕಾಂಗ್ರೆಸ್ಸಿನ ಸರಕಾರದ ಅವಧಿಯಲ್ಲಿ ಕಡಿಮೆ ಅನುದಾನ ನೀಡಿದ್ದಾರೆ. ಸರಕಾರ ತಾರತಮ್ಯ ಮಾಡದೇ ಪ್ರತಿಯೊಂದು ಕ್ಷೇತ್ರಕ್ಕೂ ಸಮಾನವಾಗಿ, ಅವಶ್ಯಕತೆ ಆಧರಿತವಾಗಿ ಅನುದಾನ ಕೊಡಬೇಕು ಎಂದು ಆಗ್ರಹಿಸಿದರು.

## ರಾಜ್ಯದಲ್ಲಿದ್ದಾರೆ 25 ಲಕ್ಷ ಬಾಂಗ್ಲಾದೇಶಿಯರು

ಎಸ್‌ಐಆರ್ ಇತಿಹಾಸದಲ್ಲಿ ಮೊದಲ ಬಾರಿ ಆಗುತ್ತಿಲ್ಲ; ಇದು 8–10ನೇ ಬಾರಿ ಆಗುತ್ತಿದೆ. 2002ರಲ್ಲಿ ಆಗಿತ್ತು, ಈಗ 2026ರಲ್ಲಿ ಆಗುತ್ತಿದೆ. ಕಳ್ಳ ಮತದಾನ ಆಗಬಾರದು; ಎರಡೆರಡು ಹೆಸರು ಇರಬಾರದು ಎಂಬ ಉದ್ದೇಶವಿದೆ. ಇದನ್ನು ಸರಿಪಡಿಸುವ ಸಮಯ ಬಂದಾಗ ಜವಾಬ್ದಾರಿಯುತ ಸ್ಥಾನದಲ್ಲಿ ಇರುವ ಕಾಂಗ್ರೆಸ್ಸಿನ ಸಚಿವರು ತಪ್ಪು ಹೇಳಿಕೆ ಕೊಡುವುದನ್ನು ನಿಲ್ಲಿಸಬೇಕು. ಮತದಾರರ ಪಟ್ಟಿ ಸ್ವಚ್ಛತೆ, ಪರಿಷ್ಕರಣೆಗೆ ಅವಕಾಶ ಮಾಡಿಕೊಡಲಿ ಎಂದು ಡಾ.ಸಿ.ಎನ್. ಅಶ್ವತ್ಥನಾರಾಯಣ ಆಗ್ರಹಿಸಿದರು. ನಮ್ಮ ರಾಜ್ಯದಲ್ಲಿ 25 ಲಕ್ಷ ಬಾಂಗ್ಲಾದೇಶೀಯರು ಇದ್ದಾರೆ ಎಂದು ಗುಪ್ತಚರ ಇಲಾಖೆ ಹೇಳುತ್ತದೆ. ಬೇರೆ ದೇಶದವರೂ ಇಲ್ಲಿ ಮತದಾರರಾಗಬೇಕೇ ಎಂದು ಪ್ರಶ್ನಿಸಿದರು.

## ತೆರಿಗೆ ಕಟ್ಟೋದು 700 ಕೋಟಿ, ಅನುದಾನ 65 ಕೋಟಿ: ಶಾಸಕ ಎಸ್.ರಘು ಆಕ್ಷೇಪ


ಜಿಬಿಎ ವ್ಯಾಪ್ತಿಯಲ್ಲಿ ಶಾಸಕರ ಅನುದಾನದಲ್ಲಿ ತಾರತಮ್ಯ ಮಾಡಿದ್ದಾರೆ ಎಂದು ಶಾಸಕ ಎಸ್. ರಘು ಅವರು ಆಕ್ಷೇಪಿಸಿದ್ದಾರೆ.



ನಗರದಲ್ಲಿ ಇಂದು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಶಾಸಕರಿಗೆ 100 ಕೋಟಿ ಅನುದಾನ ನೀಡಿದ್ದಾರೆ. ಬಿಜೆಪಿ ಶಾಸಕರಿಗೆ 16 ಕ್ಷೇತ್ರಕ್ಕೆ 40 ಕೋಟಿಯಂತೆ ಕೊಟ್ಟಿದ್ದಾರೆ. ಇವತ್ತು ಆದೇಶ ಸಿಗುತ್ತಿದೆ ಎಂದು ವಿವರಿಸಿದರು. ಸಿದ್ದರಾಮಯ್ಯನವರು ಕಳೆದ ನವೆಂಬರ್‌ನಲ್ಲಿ ಇದ್ದಾಗ ಕೊಟ್ಟ 25 ಕೋಟಿಗೆ ಸಂಬಂಧಿಸಿ ಈಗ ಟೆಂಡರ್ ಆಗುತ್ತಿದೆ ಎಂದರು.

ಸರ್ ಸಿ.ವಿ.ರಾಮನ್ ನಗರ ವಿಧಾನಸಭಾ ಕ್ಷೇತ್ರದಲ್ಲಿ ಸುಮಾರು 700 ಕೋಟಿಯಷ್ಟು ತೆರಿಗೆಯನ್ನು ಜಿಬಿಎಗೆ ತುಂಬಿದ್ದೇವೆ. ಸರಕಾರ ಕೊಡುತ್ತಿರುವ ಅನುದಾನ ಕೇವಲ 65 ಕೋಟಿ. ಅಂದರೆ ಅದು ಶೇ 10ರಷ್ಟು. ಉಳಿದ 90 ಶೇ ಮೊತ್ತ ಸರಕಾರಕ್ಕೆ ಹೋಗುತ್ತಿದೆ. 2023ರಲ್ಲಿ ಸರಕಾರ ಅಧಿಕಾರ ಸ್ವೀಕರಿಸಿದೆ. ಇದೀಗ ಅನುದಾನ ಸಿಕ್ಕಿದೆ. ಇದು ಏನೇನೂ ಸಾಲದು. ಎಲ್ಲ ವಿಧಾನಸಭಾ ಕ್ಷೇತ್ರಕ್ಕೂ ಸಮಾನ ಅನುದಾನ ಕೊಡಿ ಎಂದು ಮುಖ್ಯಮಂತ್ರಿಗಳಿಗೆ ರಘು ವಿನಂತಿಸಿದರು.

# ರಾಜಕಾರಣದಲ್ಲಿ ಇಂತಹ ಘಟನೆಗಳು ಸಾಮಾನ್ಯ, ಧೈರ್ಯದಿಂದ ಎದುರಿಸಬೇಕುಚಿ



**ಬೆಂಗಳೂರು, ಜೂ.30:** ಚಿಕ್ಕಬಳ್ಳಾಪುರ ಶಾಸಕ ಪ್ರದೀಪ್ ಈಶ್ವರ್ ಅವರು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಮಂಗಳವಾರ ಭೇಟಿ ಮಾಡಿ ಕೆಂಪೇಗೌಡ ಜಯಂತಿ ಕಾರ್ಯಕ್ರಮದ ವೇಳೆ ಬಿಜೆಪಿ ಹಾಗೂ ಜೆಡಿಎಸ್ ಕಾರ್ಯಕರ್ತರು ತಮ್ಮ ಚಪ್ಪಲಿ ಎಸೆದು, ಅವರ ಕುಟುಂಬದವರ ವಿರುದ್ಧವೂ ಅವಾಚ್ಯ ಶಬ್ದಗಳಿಂದ ನಿಂದನೆ ಮಾಡಿರುವ ಬಗ್ಗೆ ನೋವು ಹಂಚಿಕೊಂಡರು.

ಇದಕ್ಕೆ ಪ್ರತಿಕ್ರಿಯಿಸಿದ ಸಿದ್ದರಾಮಯ್ಯ, ರಾಜಕಾರಣದಲ್ಲಿ ಇಂತಹ ಘಟನೆಗಳು ಸಾಮಾನ್ಯ. ಇಂತಹ ಸವಾಲುಗಳನ್ನು ಧೈರ್ಯದಿಂದ ಎದುರಿಸಬೇಕು. ಯಾವುದೇ ಕಾರಣಕ್ಕೂ ಧೃತಿಗೆಡಬೇಡಿ, ನಿಮ್ಮೊಂದಿಗೆ ನಾವು ಇದ್ದೇವೆ ಎಂದು ಧೈರ್ಯ ತುಂಬಿದ್ದೇನೆ ಎಂದರು.

ಇದೇ ವೇಳೆ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ದೂರವಾಣಿ ಮೂಲಕ ಮಾತನಾಡಿ, ಘಟನೆ ಕುರಿತು ಸಮಗ್ರ ತನಿಖೆ ನಡೆಸುವಂತೆ ಸೂಚಿಸಿದರು. ಹಾಗೂ ಪೊಲೀಸರ ಸಮ್ಮುಖದಲ್ಲೇ ಆಡಳಿತ ಪಕ್ಷದ ಶಾಸಕರಿಗೆ ಈ ರೀತಿಯ ಘಟನೆ ನಡೆದಿರುವುದು ಅಕ್ಷಮ್ಯ. ಘಟನೆಯ ಸಂಬಂಧ ಹೊಣೆಗಾರ ಅಧಿಕಾರಿಗಳ ವಿರುದ್ಧ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಸಿದ್ದರಾಮಯ್ಯ ಆಗ್ರಹಿಸಿದರು.

ನಗರಾಭಿವೃದ್ಧಿ ಸಚಿವರಾದ ಡಾ. ಯತೀಂದ್ರ ಸಿದ್ದರಾಮಯ್ಯ, ಮಾಜಿ ಸಚಿವರಾದ ಮಧು ಬಂಗಾರಪ್ಪ ಅವರು ಈ ಸಂದರ್ಭದಲ್ಲಿ ಹಾಜರಿದ್ದರು.

# ಸಿದ್ದರಾಮಯ್ಯ ದೂರವಿಟ್ಟು ಪಕ್ಷ ಸಂಘಟನೆ ಸಾಧ್ಯವಿಲ್ಲ, ಅವರೊಬ್ಬ ಮಾಸ್ ಲೀಡರ್

**ಬೆಂಗಳೂರು, ಜೂ.30:** ಸಿಎಂ ಸ್ಥಾನದಿಂದ ಕೆಳಗಿಳಿದ ನಂತರ ರಾಜ್ಯ ಕಾಂಗ್ರೆಸ್‌ನಲ್ಲಿ ಸಿದ್ದರಾಮಯ್ಯನವರನ್ನು ಕಡೆಗಣಿಸಲಾಗುತ್ತಿದೆ ಎಂಬ ವಿಚಾರಕ್ಕೆ ಸಂಬಂಧಿಸಿದಂತೆ ಮಾಜಿ ಸಚಿವ ಕೆ.ಎನ್.ರಾಜಣ್ಣ ಪ್ರತಿಕ್ರಿಯಿಸಿದ್ದು, ಸರ್ಕಾರಿ ಕಾರ್ಯಕ್ರಮಕ್ಕೆ ಶಿಷ್ಟಾಚಾರವಿರುತ್ತೆ, ಅದನ್ನು ಫಾಲೋ ಮಾಡಬೇಕು.



ಸಿದ್ದರಾಮಯ್ಯ ಮಾಸ್ ಲೀಡರ್, ಅವರನ್ನು ಸೈಡ್ಲೈನ್ ಮಾಡಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರೋಟೋಕಾಲ್ ಫಾಲೋ ಆಗದಿದ್ರೆ ಲೋಪವಾಗಲಿದೆ. ಸಂಬಂಧಪಟ್ಟವರ ಮೇಲೆ ಕ್ರಮ ಆಗುತ್ತದೆ. ಬೇರೆಯವರ ವಿಚಾರ ನನಗೆ ಗೊತ್ತಿಲ್ಲ ಎಂದಿದ್ದಾರೆ. ಇನ್ನು ನನ್ನ ಬಗ್ಗೆ ಹೇಳಬೇಕೆಂದ್ರೆ, ನಾನು ಯಾರ ನೆರಳಿನಲ್ಲೂ ಇಲ್ಲ. ಎಲ್ಲಿರುತ್ತೇವೆಯೋ ಅಲ್ಲಿಯೇ ಇರ್ತೇವೆ. ಸಿದ್ದರಾಮಯ್ಯ ಈಸ್ ಎ ಮಾಸ್ ಲೀಡರ್. ಅವರನ್ನು ಮೂಲೆಗುಂಪು ಮಾಡೋಕೆ ಆಗಲ್ಲ. ಅವರನ್ನ ದೂರ ಇಟ್ಟು ಪಕ್ಷ ಸಂಘಟನೆ ಕಷ್ಟ. ಆ ರೀತಿ ಮಾಡ್ತಾರೆ ಅಂದ್ರೆ ಅದೊಂದು ದೊಡ್ಡ ಬ್ಲಂಡರ್. ಏನೇ ಮಾಡಿದ್ರೂ ಅವರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಮಾಡಬೇಕು ಎಂದು ಎಚ್ಚರಿಕೆ ನೀಡಿದ್ದಾರೆ. ಈಗ ಜಿಬಿಎ ಎಲೆಕ್ಷನ್ ಬರ್ತಿದೆ. ಸಿದ್ದರಾಮಯ್ಯನವರನ್ನು ಮೂಲೆಗುಂಪು ಮಾಡೋಕೆ ಆಗಲ್ಲ. ಮಾಸ್ ಲೀಡರ್ ಆದವರನ್ನು ಏನೂ ಮಾಡೋಕೆ ಆಗಲ್ಲ. ಅವರನ್ನೂ ತುಳಿಯೋಕೆ ಆಗಲ್ಲ. ಹಿಂದೆ ಇಂದಿರಾ ಗಾಂಧಿ ಕೇಸಾ ಪ್ರಕರಣದಲ್ಲಿ ಜೈಲಿಗೆ ಹೋದರು. ಬಳಿಕ 1979ರಲ್ಲಿ ಚುನಾವಣೆ ಬಂತು. ಅವರು ಮರಳಿ ಗೆದ್ದು ಅಧಿಕಾರಕ್ಕೆ ಬಂದರು. ಮಾಸ್ ಲೀಡರ್‌ಗಳ ಶಕ್ತಿ ಅಳಿಯೋಕೆ ಆಗಲ್ಲ ಎಂದು ಪ್ರತಿಪಾದಿಸಿದ್ದಾರೆ.

# ಬಸ್ ಓಡಿದರೂ, ಓಡದಿದ್ದರೂ ದುಡ್ಡು ಕೊಡಲು ಸಾಧ್ಯವೇ: ಬೈರತಿ ಸುರೇಶ್ ಪ್ರಶ್ನೆ

**ಬೆಂಗಳೂರು, ಜೂ.30:** ಬಸ್ ಓಡಲಿ, ಬಿಡಲಿ ದುಡ್ಡು ಕೊಡಲು ಸಾಧ್ಯವೇ ಎಂದು ಸಾರಿಗೆ ಸಚಿವ ಬೈರತಿ ಸುರೇಶ್ ಖಾರವಾಗಿ ಪ್ರಶ್ನಿಸಿದ್ದಾರೆ. ಕೇಂದ್ರ ಸರ್ಕಾರದ ಅನುದಾನದ ಎಲೆಕ್ಟ್ರಿಕ್ ಬಸ್‌ಗಳ ಗುತ್ತಿಗೆಗೆ ರಾಜ್ಯ ಸರ್ಕಾರ ಅನುಮೋದನೆ ನೀಡುತ್ತಿಲ್ಲ ಎಂಬ ಸಂಸದ ತೇಜಸ್ವಿ ಸೂರ್ಯ ಅವರ ಹೇಳಿಕೆಗೆ ಪ್ರತಿಕ್ರಿಯಿಸಿರುವ ಸಾರಿಗೆ ಸಚಿವರು, ಸಾಧಕ–ಬಾಧಕಗಳ ಬಗ್ಗೆ ಸರ್ಕಾರ ಪರಿಶೀಲನೆ ನಡೆಸಬೇಕು ಎಂದರು.



■ ಸಂಸದ ತೇಜಸ್ವಿಸೂರ್ಯಗೆ ತಿರುಗೇಟು

■ ಎಲೆಕ್ಟ್ರಿಕ್ ಬಸ್‌ಗೆ ಕೇಂದ್ರ ಸಂಪೂರ್ಣ ಹಣ ನೀಡಲ್ಲ

ಒಟ್ಟು 4500 ಎಲೆಕ್ಟ್ರಿಕ್ ಬಸ್‌ಗಳನ್ನು ಎಂಟು ವರ್ಷಗಳ ಅವಧಿಯಲ್ಲಿ ಗುತ್ತಿಗೆ ಪಡೆಯಬೇಕಾಗಿದೆ. ಈ ಬಸ್‌ಗಳಿಗೆ ಕೇಂದ್ರ ಸರ್ಕಾರವೇನೂ ಸಂಪೂರ್ಣ ಅನುದಾನ ನೀಡುತ್ತಿಲ್ಲ. ಕೇಂದ್ರ ಸರ್ಕಾರ ಒಂದು ಬಸ್‌ಗೆ ಕೇವಲ 30ರಿಂದ 35 ಲಕ್ಷ ರೂ. ನೀಡುತ್ತದೆ. ರಾಜ್ಯ ಸರ್ಕಾರ ವಾರ್ಷಿಕ ಕಿಲೋಮೀಟರ್ ಆಧಾರದಲ್ಲಿ ಸುಮಾರು 2850ರಿಂದ 3000 ಕೋಟಿ ರೂಪಾಯಿ ಹಣವನ್ನು ಗುತ್ತಿಗೆದಾರ ಸಂಸ್ಥೆಗೆ ನೀಡಬೇಕಾಗುತ್ತದೆ. ಆದರೆ, ಈ ಅಂಶವನ್ನು ಹೇಳದೇ ತೇಜಸ್ವಿ ಸೂರ್ಯ ಅವರು ಎಲ್ಲವನ್ನೂ ಕೇಂದ್ರ ಸರ್ಕಾರ ನೀಡುತ್ತದೆ ಎಂಬ ರೀತಿಯಲ್ಲಿ ಹೇಳಿಕೆ ನೀಡಿ ಜನರನ್ನು ತಪ್ಪು ದಾರಿಗೆ ಎಳೆಯುವ ಪ್ರಯತ್ನ ಮಾಡಿದ್ದಾರೆ ಎಂದು ತಿರುಗೇಟು ನೀಡಿದರು.

**ಕೇಂದ್ರದ ನೀತಿಯಲ್ಲಿ ಸ್ಪಷ್ಟತೆ ಇಲ್ಲ:** ಗುತ್ತಿಗೆಗೆ ಪಡೆಯುವ ಎಲೆಕ್ಟ್ರಿಕ್ ಬಸ್‌ಗಳಿಗೆ ಕಿಲೋಮೀಟರ್ ಆಧಾರದಲ್ಲಿ ಲೆಕ್ಕ ಹಾಕಿ ರಾಜ್ಯ ಸರ್ಕಾರ ಪ್ರತಿವರ್ಷ 2850 ರಿಂದ 3000 ಕೋಟಿ ರೂಪಾಯಿ ಹಣವನ್ನು ಇದಕ್ಕಾಗಿ ವ್ಯಯಿಸಬೇಕಾಗಿದೆ. ರಾಜ್ಯಕ್ಕೆ ಎಲೆಕ್ಟ್ರಿಕ್ ಬಸ್‌ಗಳ ಅಗತ್ಯವಿದೆ. ಈ ಎಲೆಕ್ಟ್ರಿಕ್ ಬಸ್‌ಗಳು ಓಡಲಿ ಬಿಡಲಿ ರಾಜ್ಯ ಸರ್ಕಾರ ದುಡ್ಡು ಕೊಡಲೇಬೇಕೆಂಬ ನಿಬಂಧನೆ ಹಾಕಲಾಗಿದೆ. ಅಂದರೆ, ಬಸ್ ಕೆಟ್ಟು ಹೋದರೂ ಅಥವಾ ಇನ್ನಿತರ ತಾಂತ್ರಿಕ ಕಾರಣಗಳಿಂದ ಸಂಚರಿಸದಿದ್ದರೂ ಹಣ ಕೊಡಲೇಬೇಕಾಗಿದೆ. ಇದು ಹೇಗೆ ಸಾಧ್ಯ ಎಂದು ಪ್ರಶ್ನಿಸಿದ ಸಚಿವರು, ಈ ವಿಚಾರದಲ್ಲಿ ಕೇಂದ್ರ ಸರ್ಕಾರದ ನೀತಿಯಲ್ಲಿ ಅಸ್ಪಷ್ಟತೆ ಇದೆ. ಈ ಹಿನ್ನೆಲೆಯಲ್ಲಿ ಇದರ ಸಾಧಕ – ಬಾಧಕಗಳನ್ನು ಮುಖ್ಯಮಂತ್ರಿಗಳ ಜೊತೆ ಚರ್ಚಿಸಿ ಮುಂದಿನ ನಿರ್ಧಾರ ಕೈಗೊಳ್ಳಲಾಗುತ್ತದೆ ಎಂದು ಸ್ಪಷ್ಟಪಡಿಸಿದರು.

**ಪ್ರಯಾಣ ದರ ಪರಿಷ್ಕರಣೆಗೆ ಲೆಕ್ಕಾಚಾರ:** ಕಳೆದ ಐದಾರು ತಿಂಗಳಲ್ಲಿ 4 ಬಾರಿ ಪೆಟ್ರೋಲ್, ಡೀಸೆಲ್ ಬೆಲೆ ಹೆಚ್ಚಳವಾಗಿದೆ. ಆದರೆ, ಜನಸಾಮಾನ್ಯರ ಹಿತದೃಷ್ಟಿಯಿಂದ ಪ್ರಯಾಣ ದರವನ್ನು ಹೆಚ್ಚಳ ಮಾಡಿಲ್ಲ. ಆದರೆ, ಇದೀಗ ಸ್ವಲ್ಪ ಮಟ್ಟಿಗೆ ಹೆಚ್ಚಳ ಮಾಡುವ ಬಗ್ಗೆ ಚಿಂತನೆ ನಡೆದಿದೆ. ಈ ಹಿನ್ನೆಲೆಯಲ್ಲಿ ಎಷ್ಟು ಪ್ರಮಾಣದಲ್ಲಿ ಹೆಚ್ಚು ಮಾಡಬೇಕು ಎಂದು ಅಧಿಕಾರಿಗಳು ಲೆಕ್ಕಾಚಾರ ಮಾಡುತ್ತಿದ್ದಾರೆ ಎಂದು ಬೈರತಿ ಸುರೇಶ್ ತಿಳಿಸಿದರು.

# ಎಸ್‌ಐಆರ್: ಚಾಮರಾಜಪೇಟೆಯಲ್ಲಿ ಕಾಂಗ್ರೆಸ್ – ಬಿಜೆಪಿ ಏಜೆಂಟ್‌ಗಳ ಜಟಾಪಟಿ

**ಬೆಂಗಳೂರು,ಜೂ.30:** ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ಆರಂಭವಾಗುತ್ತಿದ್ದಂತೆ ರಾಜಕೀಯ ಪಕ್ಷಗಳ ನಡುವೆ ಜಟಾಪಟಿ ಆರಂಭವಾಗಿದೆ. ನಗರದ ಚಾಮರಾಜಪೇಟೆ ವಿಧಾನ ಸಭಾ ಕ್ಷೇತ್ರದಲ್ಲಿ ಎಸ್‌ಐಆರ್ ಕಾರ್ಯದ ವೇಳೆ ಕಾಂಗ್ರೆಸ್ ಹಾಗೂ ಬಿಜೆಪಿ ಏಜೆಂಟ್‌ಗಳ ನಡುವೆ ಗಲಾಟೆ ನಡೆದಿದೆ. ಅಧಿಕಾರಿಗಳು ಎಸ್‌ಐಆರ್ ಕಾರ್ಯ ಆರಂಭಿಸುತ್ತಿದ್ದಂತೆ ಕಾಂಗ್ರೆಸ್ ಏಜೆಂಟ್‌ಗಳು ಕಾರ್ಯಾಚರಣೆಗೆ ಅಡ್ಡಿಪಡಿಸಿದರು.ಕಾಂಗ್ರೆಸ್ ಪಕ್ಷವನ್ನು ನಿರ್ಲಕ್ಷಿಸಿ ಬಿಜೆಪಿ ಪ್ರತಿನಿಧಿಗಳೊಂದಿಗೆ ಮಾತ್ರ ಸಭೆ ನಡೆಸಲಾಗಿದೆ ಎಂದು ಕಾಂಗ್ರೆಸ್ ಮುಖಂಡರು ಆರೋಪಿಸಿದರು. ಎಸ್‌ಐಆರ್ ಕಾರ್ಯಕ್ಕೆ ಚಾಮರಾಜಪೇಟೆ ವಿಧಾನ ಸಭಾ ಕ್ಷೇತ್ರದಲ್ಲಿ ಒಟ್ಟು 31 ಬಿಎಲ್‌ಓಗಳು ಹಾಜರಾಗಬೇಕಿದ್ದರೂ, ಕೇವಲ 14 ಮಂದಿ ಮಾತ್ರ ಬಂದಿದ್ದಾರೆ. ಉಳಿದ ಸಿಬ್ಬಂದಿ ಬರುವವರೆಗೆ ಎಸ್‌ಐಆರ್ ಆರಂಭಿಸಲು ಅವಕಾಶ ನೀಡುವುದಿಲ್ಲ ಎಂದು ಕಾಂಗ್ರೆಸ್ ಏಜೆಂಟ್‌ಗಳು ಪಟ್ಟು ಹಿಡಿದರು. ಇನ್ನೊಂದೆಡೆ ಬಿಜೆಪಿಯ 11 ಮಂದಿ ಕಾರ್ಯಕರ್ತರು ಹಾಗೂ ಏಜೆಂಟ್‌ಗಳು ಆಗಮಿಸಿ, ಲಭ್ಯವಿರುವ ಸಿಬ್ಬಂದಿಯೊಂದಿಗೆ ಪ್ರಕ್ರಿಯೆ ಆರಂಭಿಸಬೇಕು ಎಂದು ಒತ್ತಾಯಿಸಿ ಪ್ರತಿಭಟನೆ ನಡೆಸಿದರು. ಇದರಿಂದ ಎರಡೂ ಪಕ್ಷಗಳ ನಡುವೆ ಮಾತಿನ ಚಕಮಕಿ ಉಂಟಾಗಿ ಕೆಲಕಾಲ ಉದ್ವಿಗ್ನ ವಾತಾವರಣ ನಿರ್ಮಾಣವಾಯಿತು. ನಂತರ ಹಿರಿಯ ಅಧಿಕಾರಿಗಳು ಉಭಯ ಪಕ್ಷದವರನ್ನು ಸಮಾಧಾನಪಡಿಸಿ ಎಸ್‌ಐಆರ್ ಪ್ರಕ್ರಿಯೆಗೆ ಚಾಲನೆ ನೀಡಿದರು.

# ಬಿಸಿಯು ಉತ್ಸವದಲ್ಲಿ ಸಂಭ್ರಮಿಸಿದ ವಿನಯ್-ಮೇಘಾ ಶೆಟ್ಟಿ ತಾರಾ ಜೋಡಿ

**ಬೆಂಗಳೂರು, ಜೂ.30:** ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ವಿದ್ಯಾರ್ಥಿ ಕಲ್ಯಾಣ ನಿರ್ದೇಶನಾಲಯದ ವತಿಯಿಂದ ಜ್ಞಾನಜ್ಯೋತಿ ಕ್ಯಾಂಪಸ್ ನಲ್ಲಿ ಪ್ರತಿ ವರ್ಷದಂತೆ ವಿದ್ಯಾರ್ಥಿಗಳ ಪ್ರತಿಭೆಯನ್ನು ಉತ್ತೇಜಿಸಿ ಪೋಷಿಸುವ ಉದ್ದೇಶದಿಂದ "ಬಿಸಿಯು ಉತ್ಸವ–3.0" ಆಯೋಜಿಸಲಾಗಿತ್ತು.

ಉತ್ಸವದ ಪ್ರಯುಕ್ತ ಸಂಗೀತ, ಸಮೂಹ ನೃತ್ಯ, ಗಾಯನ, ಭರತನಾಟ್ಯ, ರಸಪ್ರಶ್ನೆ, ಏಕಪಾತ್ರಾಭಿನಯ, ಕಿರುನಾಟಕ, ಮಿಮಿಕ್ರಿ, ಭಾಷಣ ಸ್ಪರ್ಧೆ, ಚರ್ಚಾಸ್ಪರ್ಧೆ, ರಂಗೋಲಿ, ಜಾನಪದ ಕಲೆ, ಚಿತ್ರ ರಚನೆ, ಪೋಸ್ಟರ್ ಪ್ರದರ್ಶನ, ಕಾರ್ಟೂನಿಂಗ್, ಫ್ಯಾಷನ್ ಷೋ ಮುಂತಾದ ಅನೇಕ ಸಾಂಸ್ಕೃತಿಕ ಸ್ಪರ್ಧೆಗಳನ್ನು ಹಾಗೂ ಅಂತರ ವಿಭಾಗ ಕ್ರೀಡಾಕೂಟವನ್ನು ಏರ್ಪಡಿಸಲಾಗಿತ್ತು.

ಜೂನ್ 30ರಂದು ಸೆಂಟ್ರಲ್ ಕಾಲೇಜಿನ ಜ್ಞಾನ ಜ್ಯೋತಿ ಸಭಾಂಗಣದಲ್ಲಿ ನಡೆದ ಬಿಸಿಯು ಉತ್ಸವದ ಸಮಾರೋಪ ಸಮಾರಂಭದಲ್ಲಿ ಕನ್ನಡ ಚಿತ್ರರಂಗದ ಉದಯೋನ್ಮುಖ ತಾರೆಯರಾದ ವಿನಯ್ ರಾಜ್ ಕುಮಾರ್ ಮತ್ತು ಮೇಘಾಶೆಟ್ಟಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ವಿಜೇತರಿಗೆ ಬಹುಮಾನಗಳನ್ನು ವಿತರಿಸಿದರು.




ಪ್ರಾಣಿಶಾಸ್ತ್ರ ವಿಭಾಗದ ತಂಡ ಅತ್ಯುತ್ತಮ ಸಾಧನೆಗಾಗಿ ಚಾಂಪಿಯನ್ ಟ್ರೋಫಿ ಪಡೆಯಿತು.

ಕಾಲೇಜು ದಿನಗಳ ನೆನಪುಗಳನ್ನು ಹಂಚಿಕೊಂಡ ಈರ್ವರೂ ತಾರೆಯರು ಬಿಡುಗಡೆಗೆ ಸಜ್ಜಾಗಿರುವ ತಮ್ಮ ಅಭಿನಯದ 'ಗ್ರಾಮಾಯಣ' ಚಿತ್ರದ ಗೀತೆಗಳಿಗೆ ವಿದ್ಯಾರ್ಥಿಗಳೊಂದಿಗೆ ಹೆಜ್ಜೆ ಹಾಕಿ ನರ್ತಿಸಿ ಸಭಿಕರಿಂದ ಶುಭಾಶೀರ್ವಾದ ಕೋರಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಕುಲಪತಿಗಳಾದ ಪ್ರೊ.ರಮೇಶ್.ಬಿ. ಮಾತನಾಡಿ ಮುಂದಿನ ಶೈಕ್ಷಣಿಕ ವರ್ಷದಿಂದ ಅಂತರ ಕಾಲೇಜು ಮಟ್ಟದ ಉತ್ಸವ ಆಯೋಜಿಸುವುದಾಗಿ ಪ್ರಕಟಿಸಿದರು. ವಿಜೇತ ವಿದ್ಯಾರ್ಥಿಗಳನ್ನು ಅಭಿನಂದಿಸಿದ ಅವರು ವಲಯ ಮತ್ತು ಅಖಿಲ ಭಾರತ ಮಟ್ಟದ ಸ್ಪರ್ಧೆಗಳಿಗೂ ಸನ್ನದ್ಧರಾಗುವಂತೆ ಉತ್ತೇಜಿಸಿದರು.

ಕುಲಸಚಿವರಾದ ಎ. ನವೀನ್ ಜೋಸೆಫ್. ಉತ್ಸವದ ಸಂಯೋಜಕರಾದ ಕುಲಸಚಿವ (ಮೌಲ್ಯಮಾಪನ) ಪ್ರೊ. ರಮೇಶ .ಬಿ.ಕುಡೇನಟ್ಟಿ, ವಿತ್ತಾಧಿಕಾರಿಗಳಾದ ಎಂ.ವಿ.ವಿಜಯಲಕ್ಷ್ಮಿ ಹಾಗೂ ಸಿಂಡಿಕೇಟ್ ಮತ್ತು ವಿದ್ಯಾವಿಷಯಕ ಪರಿಷತ್ತಿನ ಸದಸ್ಯರು ಸಮಾರಂಭದಲ್ಲಿ ಉಪಸ್ಥಿತರಿದ್ದರು.

# ಗೃಹಜ್ಯೋತಿ ಗ್ರಾಹಕರಲ್ಲಿ ಗೊಂದಲಬೇಡ: ಕೆ.ಜೆ.ಜಾರ್ಜ್




ಶಿವಮೊಗ್ಗ, ಜೂ.30: ಗೃಹಜ್ಯೋತಿ ಯೋಜನೆಯ ಗೊಂದಲದ ಬಗ್ಗೆ ಇಂಧನ ಸಚಿವ ಕೆಜೆ ಜಾರ್ಜ್ ಸ್ಪಷ್ಟನೆ ನೀಡಿದ್ದಾರೆ. ಗೃಹ ಜ್ಯೋತಿ ಸಂಪರ್ಕ ಪಡೆದಿರುವ ಗ್ರಾಹಕರಿಗೆ ಯಾವುದೇ ಗೊಂದಲವಿಲ್ಲ. ಈಗಾಗಲೇ ರಾಜ್ಯದ 1 ಕೋಟಿ 64 ಲಕ್ಷ ಅರ್ಹ ಫಲಾನುಭವಿಗಳಿಗೆ ಯಶಸ್ವಿಯಾಗಿ ಉಚಿತ ವಿದ್ಯುತ್ ಸಂಪರ್ಕ ನೀಡಿದ್ದೇವೆ. ಆದರೆ, ಸರ್ಕಾರ ನಿಗದಿಪಡಿಸಿರುವ ಮಿತಿಗಿಂತ ಅಂದರೆ 200 ಯೂನಿಟ್‌ಗಿಂತ ಹೆಚ್ಚು ವಿದ್ಯುತ್ ಬಳಸಿದರೆ ಮಾತ್ರ ನಿಯಮಾನುಸಾರ ಬಿಲ್ ಹೆಚ್ಚಾಗಲಿದೆಯೇ ಹೊರತು ಉಳಿದವರಿಗೆ ತೊಂದರೆಯಾಗಿಲ್ಲ ಎಂದು ಇಂಧನ ಮತ್ತು ಪ್ರವಾಸೋದ್ಯಮ ಸಚಿವ ಕೆ.ಜೆ. ಜಾರ್ಜ್ ಹೇಳಿದ್ದಾರೆ.

ಜಿಲ್ಲೆಯಲ್ಲಿ ಮಳೆ ಹಾನಿ ಪ್ರದೇಶಗಳ ಪರಿಶೀಲನೆ ಹಾಗೂ ಪ್ರಗತಿ ಪರಿಶೀಲನಾ ಸಭೆಗಾಗಿ ಆಗಮಿಸಿದ್ದ ಅವರು ಮಾಧ್ಯಮಗಳೊಂದಿಗೆ ಮಾತನಾಡಿದರು. ನಾನು ಇಲ್ಲಿಗೆ ಜಿಲ್ಲಾ ಉಸ್ತುವಾರಿ ಸಚಿವನಾಗಿ ಬಂದಿಲ್ಲ, ಕೇವಲ ಮಳೆ ಹಾನಿ ವಿಚಾರವಾಗಿ ಚರ್ಚಿಸಲು ಮತ್ತು ಪರಿಶೀಲಿಸಲು ಬಂದಿದ್ದೇನೆ, ಎಂದು ಸ್ಪಷ್ಟಪಡಿಸಿದರು.

ಲಿಂಗನಮಕ್ಕಿ ಭಾಗದಲ್ಲಿ ತೀವ್ರ ವಿರೋಧ ವ್ಯಕ್ತವಾಗುತ್ತಿರುವ ಶರಾವತಿ ಪಂಪ್ಡ್ ಸ್ಟೋರೇಜ್ ವಿದ್ಯುತ್ ಯೋಜನೆಗೆ ಸಚಿವರು ಬಲವಾದ ಸಮರ್ಥನೆ ನೀಡಿದರು. ಕೆಲವರು ಯೋಜನೆಯ ಸ್ವರೂಪವನ್ನು ಸರಿಯಾಗಿ ಅರ್ಥ ಮಾಡಿಕೊಳ್ಳದೆಯೇ ಕಣ್ಣುಮುಚ್ಚಿ ವಿರೋಧಿಸುತ್ತಿದ್ದಾರೆ. ಈ ಯೋಜನೆಯಿಂದ ಪರಿಸರಕ್ಕೆ ಯಾವುದೇ ಧಕ್ಕೆಯಾಗುವುದಿಲ್ಲ ಮತ್ತು ಗಣನೀಯ ಪ್ರಮಾಣದ ಕಾಡು ನಾಶವಾಗುವುದೇ ಇಲ್ಲ. ಅಲ್ಲದೆ, ಪ್ರತಿವರ್ಷ ಶರಾವತಿ ನದಿಯಿಂದ ಅಪಾರ ಪ್ರಮಾಣದ ನೀರು ವ್ಯರ್ಥವಾಗಿ ಸಮುದ್ರಕ್ಕೆ ಹೋಗಿ ಸೇರುತ್ತದೆ. ಹಾಗೆ ಸಮುದ್ರಕ್ಕೆ ಸೇರುವ ನೀರನ್ನೇ ಮರುಬಳಕೆ ಮಾಡಿಕೊಂಡು ಅತ್ಯಾಧುನಿಕ ತಂತ್ರಜ್ಞಾನದ ಮೂಲಕ ವಿದ್ಯುತ್ ಉತ್ಪಾದನೆ ಮಾಡುವುದು ಈ ಯೋಜನೆಯ ಉದ್ದೇಶ. ಇದರಿಂದ ರಾಜ್ಯಕ್ಕೆ ಬರೋಬ್ಬರಿ 2,000 ಮೆಗಾವ್ಯಾಟ್ ಹೆಚ್ಚುವರಿ ವಿದ್ಯುತ್ ಸಿಗಲಿದೆ. ಅರಣ್ಯ ಇಲಾಖೆಯ ಅಧಿಕೃತ ಅನುಮತಿ ಪಡೆದೇ ಈ ಯೋಜನೆ ಅನುಷ್ಠಾನ ಮಾಡಲಾಗುವುದು. ಪರಿಸರ ತಜ್ಞರ ಸಲಹೆಗಳನ್ನೂ ನಾವು ಪಡೆದುಕೊಳ್ಳಲಿದ್ದೇವೆ, ಎಂದರು.

# ವಿಜಯನಗರ ವಿಧಾನಸಭಾ ಕ್ಷೇತ್ರದಲ್ಲಿ ಎಸ್‌ಐಆರ್‌ಗೆ ವೇಗ

## ಎಚ್. ರವೀಂದ್ರ ಮುಂದಾಳತ್ವ, ಬಿಎಲ್‌ಎ-1 ಬಾಬಿ ವೆಂಕಟೇಶ್, ಬಿಜೆಪಿ ವಿಜಯನಗರ ಮಂಡಲ ಅಧ್ಯಕ್ಷರಾದ ವಿ. ರಾಮಂಜನಿ ನೇತೃತ್ವದಲ್ಲಿ ಮನೆ ಮನೆಗೆ ಜಾಗೃತಿ

**ಬೆಂಗಳೂರು:** ವಿಜಯನಗರ ವಿಧಾನಸಭಾ ಕ್ಷೇತ್ರದಲ್ಲಿ ವಿಶೇಷ ಮತದಾರರ ಪಟ್ಟಿಯ ತೀವ್ರ ಪರಿಷ್ಕರಣೆ (Special Intensive Revision – SIR) ಕಾರ್ಯ ಭರ್ಜರಿಯಾಗಿ ನಡೆಯುತ್ತಿದೆ. ಮತದಾರರ ಪಟ್ಟಿಯನ್ನು ನಿಖರ ಹಾಗೂ ದೋಷರಹಿತವಾಗಿಸುವ ಉದ್ದೇಶದಿಂದ ಚುನಾವಣಾ ಆಯೋಗ ಕೈಗೊಂಡಿರುವ ಈ ಅಭಿಯಾನಕ್ಕೆ ಬಿಜೆಪಿ ಮುಖಂಡ ಹೆಚ್. ರವೀಂದ್ರ ಅವರ ಮುಂದಾಳತ್ವ ದೊರೆತಿದ್ದು, ಕ್ಷೇತ್ರಾದ್ಯಂತ ಬೂತ್ ಮಟ್ಟದಲ್ಲಿ ಕಾರ್ಯಕರ್ತರು ಮನೆ ಮನೆಗೆ ತೆರಳಿ ಮತದಾರರಿಗೆ ಎಸ್‌ಐಆರ್ ಪ್ರಕ್ರಿಯೆಯ ಕುರಿತು ಜಾಗೃತಿ ಮೂಡಿಸುತ್ತಿದ್ದಾರೆ.



ವಿಜಯನಗರ ವಿಧಾನಸಭಾ ಕ್ಷೇತ್ರ ಗಾಳಿಆಂಜನೇಯ ದೇವಸ್ಥಾನ ವಾರ್ಡ್‌ನ ಬೂತ್ ಸಂಖ್ಯೆ 246 ರಲ್ಲಿ ಎಸ್‌ಐಆರ್ ಫಾರಂ ನೀಡುತ್ತಿರುವ ದೃಶ್ಯ ಬಿಎಲ್‌ಓ ವಸಂತ್ ಕುಮಾರ್ ಮತದಾರರ ಪಟ್ಟಿಯಲ್ಲಿ ಹೆಸರಿರುವ ಪದ್ಮಮ್ಮ ಬಿಜೆಪಿ ಪಕ್ಷದಿಂದ ಬಿಎಲ್‌ಓ–2 ಆನಂದ್ ಗೌಡ ಎ. ಜಿ. ರಾಜೇಶ್ವರಿ, ಗೀತಾ, ಸರಿತಾ, ಸುರೇಶ್ ರವರು ಎಸ್‌ಐಆರ್ ಪ್ರಕ್ರಿಯೆಯಲ್ಲಿ ಪಾಲ್ಗೊಂಡಿದ್ದರು.



ಈ ಅಭಿಯಾನದಲ್ಲಿ ಬಿಎಲ್‌ಎ–1 ಬಾಬಿ ವೆಂಕಟೇಶ್ ಅವರ ನೇತೃತ್ವದಲ್ಲಿ ಕಾರ್ಯಕರ್ತರ ತಂಡ ಅತ್ಯಂತ ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿದೆ. ಮತದಾರರ ಪಟ್ಟಿಯಲ್ಲಿರುವ ಹೆಸರುಗಳ ಪರಿಶೀಲನೆ, ಹೊಸ ಮತದಾರರ ಸೇರ್ಪಡೆ, ವಿಳಾಸ ಹಾಗೂ ಇತರ ವಿವರಗಳ ತಿದ್ದುಪಡಿ ಸೇರಿದಂತೆ ಎಸ್‌ಐಆರ್ ಪ್ರಕ್ರಿಯೆಯ ಪ್ರತಿಯೊಂದು ಹಂತದಲ್ಲೂ ಮತದಾರರಿಗೆ ಮಾರ್ಗದರ್ಶನ ನೀಡಲಾಗುತ್ತಿದೆ. ಯಾವುದೇ ಅರ್ಹ ಮತದಾರ ಮತದಾನದ ಹಕ್ಕಿನಿಂದ ವಂಚಿತರಾಗಬಾರದು ಎಂಬ ಉದ್ದೇಶದಿಂದ ಬಿಎಲ್‌ಎ–1 ಬಾಬಿ ವೆಂಕಟೇಶ್ ಅವರ ನೇತೃತ್ವದಲ್ಲಿ ಸಂಘಟಿತವಾಗಿ ಕಾರ್ಯ ನಡೆಯುತ್ತಿದೆ.


ವಿಜಯನಗರ ವಿಧಾನಸಭಾ ಕ್ಷೇತ್ರದ ಗಾಳಿ ಆಂಜನೇಯ ದೇವಸ್ಥಾನ ವಾರ್ಡ್‌ನ ಬೂತ್ ಸಂಖ್ಯೆ 246, 230,234,228,( ಒಟ್ಟು 284 ಬೂತ್ ನಲ್ಲಿ ಎಸ್‌ಐಆರ್ ಫಾರಂ ವಿತರಣೆ ಕಾರ್ಯಕ್ರಮ ನಡೆಯಿತು. ಈ ಸಂದರ್ಭದಲ್ಲಿ ಬೂತ್ ಮಟ್ಟದ ಅಧಿಕಾರಿ (BLO) ವಸಂತ್ ಕುಮಾರ್ ಮತದಾರರಿಗೆ ಫಾರಂಗಳನ್ನು ವಿತರಿಸಿ, ಚುನಾವಣಾ ಆಯೋಗದ ಮಾರ್ಗಸೂಚಿಗಳ ಕುರಿತು ಮಾಹಿತಿ ನೀಡಿದರು. ಮತದಾರರ ಪಟ್ಟಿಯಲ್ಲಿ ಹೆಸರಿರುವ ಪದ್ಮಮ್ಮ ಸೇರಿದಂತೆ ಹಲವರು ತಮ್ಮ ವಿವರಗಳನ್ನು ಪರಿಶೀಲಿಸಿಕೊಂಡು ಎಸ್‌ಐಆರ್ ಪ್ರಕ್ರಿಯೆಯಲ್ಲಿ ಭಾಗವಹಿಸಿದರು.

ಕಾರ್ಯಕ್ರಮದಲ್ಲಿ ಬಿಜೆಪಿ ಪರವಾಗಿ( ಎಂಟು ವಾರ್ಡ್ ನ ಮಾಜಿ ಪಾಲಿಕೆ ಸದಸ್ಯರುಗಳು ವಾರ್ಡ್ ಅಧ್ಯಕ್ಷರುಗಳು ಹಾಗೂ ಬಿಜೆಪಿ ಕಾರ್ಯಕರ್ತರುಗಳು ವಿಶೇಷವಾಗಿ ಭಾಗವಹಿಸಿದ್ದರು) ಬಿಎಲ್‌ಎ–2 ಮಾಜಿ ಪಾಲಿಕೆ ಸದಸ್ಯ ಬಿ.ಎಸ್. ಆನಂದ್, ಚಂದ್ರಶೇಖರಯ್ಯ, ಮಂಡಲ ಅಧ್ಯಕ್ಷರಾದ ವಿ. ರಾಮಾಂಜನಿ ನರಸಿಂಹಮೂರ್ತಿ,ಆನಂದ್ ಗೌಡ ಎ.ಜಿ. ವಿಜಯ ಕೃಷ್ಣ, ಗೋಪಿನಾಥ ರಾಜು, ರಾಧಾಬಾಯಿ, ಬಲರಾಮ್, ಹರೀಶ್ ಮುತ್ತಿ ಶ್ರೀನಿವಾಸ್, ಲಿಂಗೇಗೌಡರು, ಸಿದ್ದಣ್ಣ, ಕೃಷ್ಣ ಮೋಹನ್, ಗೋವಿಂದೇಗೌಡ, ರಾಜವರ್ಧನ, ಚಂದ್ರು ಎಂ ಸಿ ಟಿ, ಕಾಂತರಾಜ್,ವಿಜಯ್ ಕುಮಾರ್, ರಂಜಿತ್, ಸೋಮಶೇಖರ್, ರಾಜೇಶ್ವರಿ, ಗೀತಾ, ಸರಿತಾ, ಹಾಗೂ ಪಿ ನಾಗರಾಜ್, ಸುರೇಶ್ ಉಪಸ್ಥಿತರಿದ್ದು, ಮತದಾರರಿಗೆ ಅರ್ಜಿ ಭರ್ತಿ, ದಾಖಲೆಗಳ ಪರಿಶೀಲನೆ ಹಾಗೂ ಅಗತ್ಯ ಮಾಹಿತಿಯನ್ನು ನೀಡಿದರು. ಬಿಎಲ್‌ಎ–1 ಬಾಬಿ ವೆಂಕಟೇಶ್ ಅವರ ನೇತೃತ್ವದಲ್ಲಿ ಕಾರ್ಯಕರ್ತರು ಮನೆ ಮನೆಗೆ ತೆರಳಿ ಎಸ್‌ಐಆರ್ ಪ್ರಕ್ರಿಯೆಯ ಮಹತ್ವವನ್ನು ತಿಳಿಸುತ್ತಿರುವುದು ವಿಶೇಷವಾಗಿತ್ತು. ಎಸ್‌ಐಆರ್ ಪ್ರಕ್ರಿಯೆಯ ಪ್ರಮುಖ ಉದ್ದೇಶ ಮತದಾರರ ಪಟ್ಟಿಯನ್ನು ಸಂಪೂರ್ಣವಾಗಿ ನವೀಕರಿಸುವುದು. ಹೊಸದಾಗಿ ಅರ್ಹತೆ ಪಡೆದ ಮತದಾರರನ್ನು ಪಟ್ಟಿಗೆ ಸೇರಿಸುವುದು, ಮೃತಪಟ್ಟವರು ಅಥವಾ ಶಾಶ್ವತವಾಗಿ ಸ್ಥಳಾಂತರಗೊಂಡವರ ಹೆಸರುಗಳನ್ನು ನಿಯಮಾನುಸಾರ ತೆಗೆದುಹಾಕುವುದು, ಹೆಸರು, ವಿಳಾಸ ಹಾಗೂ ಇತರ ವಿವರಗಳ ತಿದ್ದುಪಡಿ ಮಾಡುವ ಮೂಲಕ ಮತದಾರರ ಪಟ್ಟಿಯನ್ನು ಪಾರದರ್ಶಕ ಹಾಗೂ ವಿಶ್ವಾಸಾರ್ಹವಾಗಿಸುವ ಕಾರ್ಯ ಇದಾಗಿದೆ. ವಿಜಯನಗರ ಕ್ಷೇತ್ರದಲ್ಲಿ ನಡೆಯುತ್ತಿರುವ ಈ ಅಭಿಯಾನಕ್ಕೆ ಸಾರ್ವಜನಿಕ ರಿಂದ ಉತ್ತಮ ಸ್ಪಂದನೆ ವ್ಯಕ್ತವಾಗಿದ್ದು, ಹೆಚ್. ರವೀಂದ್ರ ಅವರ ಮಾರ್ಗದರ್ಶನ ಮತ್ತು ಬಿಎಲ್‌ಎ–1 ಬಾಬಿ ವೆಂಕಟೇಶ್ ಅವರ ಸಂಘಟಿತ ನೇತೃತ್ವದಲ್ಲಿ ಎಸ್‌ಐಆರ್ ಕಾರ್ಯ ಯಶಸ್ವಿಯಾಗಿ ಸಾಗುತ್ತಿದೆ ಎಂದು ಕಾರ್ಯಕರ್ತರು ತಿಳಿಸಿದ್ದಾರೆ.

# ಪ್ರಿಯಾಂಕ್‌ಗೆ ಸಿಎಂ ಆಗುವ ಆಸೆ

## ಹೈ.ಕ. ಖುಷಿಪಡಿಸಲು ಆರ್‌ಎಸ್‌ಎಸ್ ಟೀಕೆ: ಡಾ.ಉಮೇಶ್ ಜಾಧವ ಪ್ರತಿಪಾದನೆ

ಕಲಬುರಗಿ, ಜೂ. 30: ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರನ್ನು ಮೆಚ್ಚಿಸಲು ಮತ್ತು ಆದಷ್ಟು ಬೇಗ ರಾಜ್ಯದ ಮುಖ್ಯಮಂತ್ರಿ ಯಾಗುವ ಉದ್ದೇಶದಿಂದ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಆರ್. ಎಸ್.ಎಸ್ ಬಗ್ಗೆ ಟೀಕಿಸುತ್ತಿದ್ದಾರೆ ಎಂದು ಮಾಜಿ ಸಂಸದ ಡಾ. ಉಮೇಶ ಜಾಧವ ಹೇಳಿದರು.



ಅಮಾಜಿ ಸಂಸದ ಡಾ.ಉಮೇಶ ಜಾಧವ

ನಗರದಲ್ಲಿ ಸುದ್ದಿಗಾರರ ಜತೆ ಮಾತನಾಡಿದ ಅವರು, ಐದು ದಶಕಗಳ ಕಾಲ ಅಧಿಕಾರದಲ್ಲಿದ್ದ ಅವರ ತಂದೆ ಮಲ್ಲಿಕಾರ್ಜುನ ಖರ್ಗೆ ಏಕೆ ಸಿಎಂ ಆಗಲಿಲ್ಲ? ಆರ್‌ಎಸ್‌ಎಸ್ ಟೀಕೆ ಮಾಡಿದ್ರೆ ಸಿಎಂ ಆಗ್ತಾರೆಂದು ಪ್ರಿಯಂಕ್ ತಿಳಿದಂತಿದೆ. ಆರ್‌ಎಸ್‌ಎಸ್ ಶಿಬಿರದಲ್ಲಿ ಎಂಟು ದಿನ ಉಳಿದರೆ ಸಾಕು, ಪ್ರಿಯಾಂಕ್ ಹೀಗೆ ಮಾತನಾಡುವುದಿಲ್ಲ. ಸಂಘದ ಚಟುವಟಿಕೆ ನೋಡಿಲ್ಲ. ಸಮಾಜ ಸೇವೆ ಗೊತ್ತಿಲ್ಲ. ಸಂಘದ ಬಗ್ಗೆ ಬಹಳಷ್ಟು ಹಿರಿಯ ಕಾಂಗ್ರೆಸ್ ಮುಖಂಡರಿಗೆ ಗೊತ್ತಿದೆ. ಆದ್ದರಿಂದ ಅವರೆಂದೂ ಸಂಘದ ಬಗ್ಗೆ ಲಘುವಾಗಿ ಮಾತನಾಡುವದಿಲ್ಲ. ಸಂಘದ ಯಾವುದೇ ಚಟುವಟಿಕೆಗಳು ಗುಪ್ತವಾಗಿ ನಡೆಯುವದಿಲ್ಲ. ಎಲ್ಲವೂ ಬಹಿರಂಗ ಮತ್ತು ಪಾರದರ್ಶಕ. ದೇಶದ ಪ್ರತಿಯೊಂದು ಆಪತ್ತಿನಲ್ಲೂ ಸಂಘವು ಸಕ್ರೀಯವಾಗಿ ಭಾಗವಹಿಸುತ್ತದೆ. ಪ್ರವಾಹ, ಭೂಕಂಪ, ಬರಗಾಲದಂಥ ಪ್ರಕೃತಿ ವಿಕೋಪದಂಥ ಸಂದರ್ಭಗಳಲ್ಲಿ ಸಂಘದ ಕಾರ್ಯಕರ್ತರು ನಿಸ್ವಾರ್ಥವಾಗಿ ಕಾರ್ಯನಿರ್ವಹಿಸುವದನ್ನು ಇಡೀ ದೇಶವೇ ನೋಡಿದೆ. ಯಾವುದೇ ಜಾತಿ–ಧರ್ಮಭೇದವಿಲ್ಲದೇ ಸಂಘವು ದೇಶದ ವಿಪತ್ತಿನ ಸಂದರ್ಭದಲ್ಲಿ ಸರ್ಕಾರಕ್ಕಿಂತ ಮೊದಲು ಜನರ ನೆರವಿಗೆ ಧಾವಿಸುತ್ತದೆ ಎಂದ ಅವರು, ಪ್ರಿಯಂಕ್ ಖರ್ಗೆ ಇನ್ನೂ ಹುಡುಗ. ಅವರಿಗೆ ಜಗತ್ತಿನ ಅರಿವಿಲ್ಲ. ಇನ್ನು ಸಂಘದ ಅರಿವು ಮೂಡಲು ಹೇಗೆ ಸಾಧ್ಯ? ಕೇವಲ ಗಾಂಧಿ ಕುಟುಂಬವನ್ನು ಖುಷಿಪಡಿಸಿ ಸಿಎಂ ಆಗಲು ಹೊರಟಿದ್ದಾರೆ. ಸಂಘದ ಬಗ್ಗೆ ಅವರು ಮಾಡುವ ಯಾವುದೇ ಟೀಕೆಗೆ ಕಾಂಗ್ರೆಸ್ಸಿನ ಯಾವ ಹಿರಿಯರೂ ಬೆಂಬಲಿಸುತ್ತಿಲ್ಲ. ಈ ವಿಷಯದಲ್ಲಿ ಅವರು ಏಕಾಂಗಿ ಎಂದು ಡಾ.ಜಾಧವ ಮೂದಲಿಸಿದರು.

ಚುನಾವಣಾ ಆಯೋಗವು ಎಸ್‌ಐಆರ್ ನಡೆಸುವುದು ಸಾಮಾನ್ಯ ಪ್ರಕ್ರಿಯೆ. ಈ ಸಂದರ್ಭದಲ್ಲಿ ಅನರ್ಹರು, ಮರಣಹೊಂದಿದವರು, ಎರಡು ಎರಡು ಕ್ಷೇತ್ರಗಳಲ್ಲಿ ಹೆಸರಿರುವದನ್ನು ತೆಗೆಯುವದು ಮತ್ತು ಅರ್ಹ ಮತದಾರರು ಕೈಬಿಟ್ಟು ಹೋಗದಂತೆ ದಾಖಲಿಸುವದು, ಹೊಸ ಮತದಾರರನ್ನು ನೋಂದಾಯಿಸುವ ಕೆಲಸ ಮಾಡುತ್ತದೆ. ಈ ಪ್ರಕ್ರಿಯೆ ಚುನಾವಣಾ ಆಯೋಗ ಹಿಂದಿನಿಂದಲೂ ನಡೆಸಿಕೊಂಡು ಬಂದಿದೆ. ಆದರೆ ಈ ಕಾಂಗ್ರೆಸ್ಸಿನವರು ಇದರಲ್ಲೂ ರಾಜಕೀಯ ಮಾಡುತ್ತಿದ್ದಾರೆ. ಗೆದ್ದರೆ ಗ್ಯಾರಂಟಿ ಅನ್ನುವುದು, ಸೋತರೆ ಎಸ್‌ಐಆರ್ ಎಂದು ಟೀಕೆ ಮಾಡುವುದು ಕಾಂಗ್ರೆಸ್ಸಿನ ರಾಜಕೀಯ. ಬೀದರ, ಕಲಬುರಗಿ ಜಿಲ್ಲೆಯಲ್ಲಿ ಶೇ. 15–20 ರಷ್ಟು ಬೋಗಸ್ ಮತದರರನ್ನು ದಾಖಲಿಸಲಾಗಿದೆ. ಪಟ್ಟಿಯಿಂದ ಅವರ ಹೆಸರುಗಳನ್ನು ತೆಗೆದರೆ ತಮ್ಮ ವೋಟು ಬ್ಯಾಂಕ್ ಹೋಗುತ್ತದೆ ಎಂದು ಕಾಂಗ್ರೆಸ್ಸಿನವರಿಗೆ ನಡುಕ ಶುರುವಾಗಿದೆ.

# ಚಿಗಟೇರಿ ಆಸ್ಪತ್ರೆ ಶಸ್ತ್ರಚಿಕಿತ್ಸಾ ಕೊಠಡಿಯಲ್ಲಿ ಆಕ್ಸಿಜನ್ ಸಿಲಿಂಡರ್ ಸ್ಫೋಟ: ಕೋಟ್ಯಂತರ ಮೌಲ್ಯದ ವೈದ್ಯಕೀಯ ಉಪಕರಣಗಳಿಗೆ ಹಾನಿ

ದಾವಣಗೆರೆ, ಜೂ.30: ಇಲ್ಲಿನ ಪ್ರಸಿದ್ಧ ಚಿಗಟೇರಿ ಜಿಲ್ಲಾಸ್ಪತ್ರೆಯ ಶಸ್ತ್ರಚಿಕಿತ್ಸಾ ಕೊಠಡಿಯಲ್ಲಿ ಮಂಗಳವಾರ ಬೆಳ್ಳಂಬೆಳಗ್ಗೆ ಭೀಕರ ಅಗ್ನಿ ಅವಘಡ ಸಂಭವಿಸಿದೆ. ಶಸ್ತ್ರಚಿಕಿತ್ಸೆಗೆ ಸಿದ್ಧತೆ ಮಾಡಿಕೊಳ್ಳುತ್ತಿದ್ದ ವೇಳೆ ಆಕ್ಸಿಜನ್ ಸಿಲಿಂಡರ್‌ಗಳು ಭೀಕರವಾಗಿ ಸ್ಫೋಟಗೊಂಡಿದ್ದು, ಪರಿಣಾಮ ಕೋಟ್ಯಂತರ ರೂಪಾಯಿ ಮೌಲ್ಯದ ಅತ್ಯಾಧುನಿಕ ವೈದ್ಯಕೀಯ ಉಪಕರಣಗಳು ಸುಟ್ಟು ಕರಕಲಾಗಿವೆ. ಅದೃಷ್ಟವಶಾತ್ ಯಾವುದೇ ರೋಗಿಗಳು ಆ ಸಮಯದಲ್ಲಿ ಕೊಠಡಿಯಲ್ಲಿ ಇಲ್ಲದ ಕಾರಣ ಸದ್ಯ ದೊಡ್ಡ ಮಟ್ಟದ ಪ್ರಾಣಾಪಾಯ ತಪ್ಪಿದೆ.ಆಸ್ಪತ್ರೆಯ ಇ ಅಂಡ್ ಟಿ (ಕಿವಿ, ಮೂಗು, ಗಂಟಲು) ಶಸ್ತ್ರಚಿಕಿತ್ಸಾ ವಿಭಾಗದಲ್ಲಿ ಪ್ರತಿದಿನದಂತೆ ಬೆಳಗ್ಗೆ 9 ಗಂಟೆಗೆ ಆಪರೇಷನ್‌ಗಳನ್ನು ನಿಗದಿಪಡಿಸಲಾಗಿತ್ತು. ಇದಕ್ಕಾಗಿ ಬೆಳಗ್ಗೆ 8:30ರ ಸುಮಾರಿಗೆ ವೈದ್ಯಕೀಯ ಸಿಬ್ಬಂದಿ ಕೊಠಡಿಯನ್ನು ಸಿದ್ಧಪಡಿಸುತ್ತಿದ್ದರು. 8:45ರ ವೇಳೆಗೆ ಅರಿವಳಿಕೆ ತಜ್ಞರು ಆಕ್ಸಿಜನ್ ಹಾಗೂ ಇತರೆ ಯಂತ್ರೋಪಕರಣಗಳನ್ನು ಪರಿಶೀಲಿಸುತ್ತಿದ್ದಾಗ ಏಕಾಏಕಿ ವರ್ಕ್ ಸ್ಟೇಷನ್ನಲ್ಲಿ ಸಣ್ಣದಾಗಿ ಕಿಡಿ (ಸ್ಪಾರ್ಕ್) ಕಾಣಿಸಿಕೊಂಡಿದೆ. ತಕ್ಷಣವೇ ಎಚ್ಚೆತ್ತ ಸಿಬ್ಬಂದಿ ಮತ್ತು ವೈದ್ಯರು ಹೊರಗೆ ಓಡಿ ಬಂದಿದ್ದಾರೆ. ಅವರು ಹೊರಬಂದ ಕೆಲವೇ ನಿಮಿಷಗಳಲ್ಲಿ ಕೊಠಡಿಯೊಳಗಿದ್ದ ಎರಡು ಆಕ್ಸಿಜನ್ ಸಿಲಿಂಡರ್‌ಗಳು ಭೀಕರ ಸದ್ದಿನೊಂದಿಗೆ ಸ್ಫೋಟಗೊಂಡಿವೆ.



ಆಕ್ಸಿಜನ್ ಮತ್ತು ನೈಟ್ರೋಜನ್ ಗ್ಯಾಸ್ ಇದ್ದ ಕಾರಣ ಬೆಂಕಿ ಇಡೀ ಕೊಠಡಿಗೆ ಅತ್ಯಂತ ವೇಗವಾಗಿ ವ್ಯಾಪಿಸಿತು. ಸ್ಫೋಟದ ತೀವ್ರತೆಗೆ ಆಪರೇಷನ್ ಥಿಯೇಟರ್ ಮಾತ್ರವಲ್ಲದೆ ಅದರ ಸುತ್ತಮುತ್ತಲಿನ ಇತರೆ ಕೊಠಡಿಗಳೂ ಜಖಂಗೊಂಡಿವೆ. ಘಟನೆಯ ಸಂದರ್ಭದಲ್ಲಿ ಸ್ಥಳದಲ್ಲಿದ್ದ ಆರೇಳು ಜನ ಸಿಬ್ಬಂದಿ ತಕ್ಷಣ ಮುನ್ನೆಚ್ಚರಿಕೆ ವಹಿಸಿ ಹೊರಗೆ ಓಡಿದ್ದರಿಂದ ಎಲ್ಲರೂ ಮರುಜೀವ ಪಡೆದಂತಾಗಿದೆ ಎಂದು ಆತಂಕ ಹಂಚಿಕೊಂಡಿದ್ದಾರೆ.ಅರಿವಳಿಕೆ ತಜ್ಞೆ ಡಾ. ಶಿಲ್ಪಾಶ್ರೀ ಅವರು ಮಾತನಾಡಿ, "ಸಾಮಾನ್ಯವಾಗಿ ರೋಗಿಗಳನ್ನು ಆಪರೇಷನ್ ಥಿಯೇಟರ್ ಪಕ್ಕದ ಸಿದ್ಧತಾ ಕೊಠಡಿಯಲ್ಲಿ ಇರಿಸಲಾಗಿರುತ್ತದೆ. ಈ ಘಟನೆ ಸಂಭವಿಸಿದಾಗ ರೋಗಿಗಳನ್ನು ಇನ್ನೂ ಮುಖ್ಯ ಆಪರೇಷನ್ ಟೇಬಲ್ಗೆ ಕರೆತಂದಿರಲಿಲ್ಲ. ಒಂದು ವೇಳೆ ರೋಗಿಗಳಿಗೆ ಅರಿವಳಿಕೆ (ಮದ್ದು) ನೀಡಿ ಶಸ್ತ್ರಚಿಕಿತ್ಸೆ ಆರಂಭಿಸಿದ್ದಿದ್ದರೆ ಇವತ್ತು ಊಹಿಸಲೂ ಸಾಧ್ಯವಾಗದ ಭೀಕರ ದುರಂತ ಸಂಭವಿಸುತ್ತಿತ್ತು" ಎಂದು ತಿಳಿಸಿದ್ದಾರೆ.ವಿಷಯ ತಿಳಿಯುತ್ತಿದ್ದಂತೆ ಸ್ಥಳಕ್ಕೆ ಧಾವಿಸಿದ ಅಗ್ನಿಶಾಮಕ ದಳದ ಸಿಬ್ಬಂದಿ ಕಾರ್ಯಾಚರಣೆ ನಡೆಸಿ ಬೆಂಕಿಯನ್ನು ಹತೋಟಿಗೆ ತಂದಿದ್ದಾರೆ. ಆಸ್ಪತ್ರೆಯ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ನಾಗೇಂದ್ರಪ್ಪ ಅವರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. "ಕಿಡಿ ಹೊತ್ತಿಕೊಂಡಿದ್ದರಿಂದ ಈ ಅನಾಹುತ ನಡೆದಿದೆ.

ಅದೃಷ್ಟವಶಾತ್ ಯಾರಿಗೂ ಗಾಯಗಳಾಗಿಲ್ಲ. ಆದರೆ ಒಳಗೆ ಇದ್ದ ಕೋಟ್ಯಂತರ ರೂಪಾಯಿ ಬೆಲೆಬಾಳುವ ವೈದ್ಯಕೀಯ ಸಾಮಗ್ರಿಗಳು ನಾಶವಾಗಿವೆ. ನಿಖರವಾಗಿ ಎಷ್ಟು ನಷ್ಟ ಸಂಭವಿಸಿದೆ ಎಂಬುದನ್ನು ಪರಿಶೀಲಿಸಬೇಕಿದೆ. ಇಂಜಿನಿಯರ್ಗಳ ತಂಡವು ಘಟನೆಗೆ ನಿಖರ ಕಾರಣವೇನು ಎಂಬುದರ ಬಗ್ಗೆ ತನಿಖೆ ನಡೆಸಲಿದೆ" ಎಂದು ಅವರು ತಿಳಿಸಿದ್ದಾರೆ. ಸದ್ಯ ಉನ್ನತ ಅಧಿಕಾರಿಗಳು ಹಾಗೂ ಆರೋಗ್ಯ ಇಲಾಖೆಯ ಸಿಬ್ಬಂದಿ ಸ್ಥಳದಲ್ಲಿದ್ದು, ಶಾರ್ಟ್ ಸರ್ಕ್ಯೂಟ್ ಅಥವಾ ತಾಂತ್ರಿಕ ದೋಷದ ಸಾಧ್ಯತೆಗಳ ಬಗ್ಗೆ ತನಿಖೆ ಮುಂದುವರಿಸಿದ್ದಾರೆ.

### ತನಿಖೆ ನಡೆಸುವಂತೆ ಸಚಿವ ಯು.ಟಿ. ಖಾದರ್ ಆದೇಶ

ಚಿಗಟೇರಿ ಜಿಲ್ಲಾಸ್ಪತ್ರೆಯ ಶಸ್ತ್ರಚಿಕಿತ್ಸಾ ಕೊಠಡಿಯಲ್ಲಿ ಆಕ್ಸಿಜನ್ ಸಿಲಿಂಡರ್ ಸ್ಫೋಟಗೊಂಡಿರುವ ಘಟನೆಯನ್ನು ರಾಜ್ಯ ಸರ್ಕಾರ ಅತ್ಯಂತ ಗಂಭೀರವಾಗಿ ಪರಿಗಣಿಸಿದೆ. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ.ಖಾದರ್ ಅವರು ಘಟನೆಗೆ ನಿಖರವಾದ ಕಾರಣಗಳನ್ನು ಪತ್ತೆ ಹಚ್ಚಲು ರಾಜ್ಯಮಟ್ಟದ ಉನ್ನತ ಅಧಿಕಾರಿಗಳ ತನಿಖಾ ತಂಡವನ್ನು ರಚಿಸಿ, ಕೂಲಂಕುಶವಾಗಿ ತನಿಖೆ ನಡೆಸಲು ಕಟ್ಟುನಿಟ್ಟಿನ ಆದೇಶ ಹೊರಡಿಸಿದ್ದಾರೆ. ಇದರ ಜೊತೆಗೆ ಸ್ಥಳೀಯ ಮಟ್ಟದಲ್ಲೂ ಸಹ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಪ್ರತ್ಯೇಕ ತನಿಖೆ ನಡೆಯಲಿದ್ದು, ಈ ಎರಡೂ ವರದಿಗಳು ಕೈಸೇರಿದ ನಂತರ ಇಲಾಖೆಯು ಪರಿಶೀಲನೆ ನಡೆಸಿ ನಿಯಮಾನುಸಾರ ಕಠಿಣ ಕ್ರಮ ಜರುಗಿಸಲಿದೆ ಎಂದು ಸಚಿವರು ತಿಳಿಸಿದ್ದಾರೆ.

# ಮಳೆಗಾಗಿ ಕಿಗ್ಗದ ಋಷ್ಯಶೃಂಗದಲ್ಲಿ ವಿಶೇಷ ಪೂಜೆಗೆ ಸಿಎಂ ಆದೇಶ



ಚಿಕ್ಕಮಗಳೂರು, ಜೂ.30: ರಾಜ್ಯದಲ್ಲಿ ಉತ್ತಮ ಮಳೆ ಮತ್ತು ಬೆಳೆ ಸುಭೀಕ್ಷೆಗಾಗಿ ಶೃಂಗೇರಿಯ ಕಿಗ್ಗದ ಶ್ರೀ ಋಷ್ಯಶೃಂಗಾ ದೇವಸ್ಥಾನ ದಲ್ಲಿ ಜು.3ರಂದು ವಿಶೇಷ ಪೂಜೆ ಹಮಿಕೊಳ್ಳಲಾಗಿದೆ. ಅನಾದಿಕಾಲ ದಿಂದಲೂ ನಡೆದು ಬಂದಿರುವ ಸಂಪ್ರದಾಯದಂತೆ ಜು.3 ರ ಶುಕ್ರವಾರ ಬೆಳಿಗ್ಗೆ ಮಳೆ ದೇವರು ಎಂದು ಪ್ರಸಿದ್ಧಿಯಾಗಿರುವ ಕಿಗ್ಗದ ಶ್ರೀ ಋಷ್ಯಶೃಂಗಾ ದೇವರ ಸನ್ನಿಧಿಯಲ್ಲಿ ನಾಡಿಗೆ ಉತ್ತಮ ಮಳೆ–ಬೆಳೆ ಸುಭೀಕ್ಷೆಗಾಗಿ ವಿಶೇಷ ಪೂಜೆ ನಡೆಯಲಿದೆ. ಮುಖ್ಯಮಂತ್ರಿ ಡಿ. ಕೆ.ಶಿವಕುಮಾರ್‌ರವರ ಆದೇಶದಂತೆ ಉಸ್ತುವಾರಿ ಸಚಿವರಾದ ಕೆ. ಜೆ.ಜಾರ್ಜ್ ಅವರ ಸಲಹೆ ಮೇರೆಗೆ ಕ್ಷೇತ್ರದ ಶಾಸಕರಾದ ಟಿ.ಡಿ. ರಾಜೇಗೌಡರ ನೇತೃತ್ವದಲ್ಲಿ ಪೂಜಾ ಕಾರ್ಯಕ್ರಮಗಳು ನಡೆಯಲಿವೆ. ಹೀಗಾಗಿ ಉತ್ತಮ ಮಳೆ–ಬೆಳೆ ಸುಭೀಕ್ಷೆಗಾಗಿ ಪ್ರತೀ ವರ್ಷ ಋಷ್ಯಶೃಂಗಾ ದೇಗುಲದಲ್ಲಿ ವಿಶೇಷ ಪೂಜೆ ನಡೆಯುತ್ತದೆ.ಜು.3 ರಂದು ನಡೆಯಲಿರುವ ವಿಶೇಷ ಪೂಜೆಯಲ್ಲಿ ನಾಡಿನ ಸದ್ಭಕ್ತರು, ಆಸ್ತಿಕರು ಪಾಲ್ಗೊಂಡು ಯಶಸ್ವಿಗೊಳಿಸಬೇಕೆಂದು ಶಾಸಕ ಟಿ.ಡಿ.ರಾಜೇಗೌಡ ಮನವಿ ಮಾಡಿದ್ದಾರೆ.

# 2 ತಿಂಗಳಲ್ಲಿ ರಾಜ್ಯ ಬಿಜೆಪಿ ಗೊಂದಲ, ಭಿನ್ನಾಭಿಪ್ರಾಯಕ್ಕೆ ಮುಕ್ತಿ: ಶಾಸಕ ಸುರೇಶ್‌ಗೌಡ ಭರವಸೆ

ತುಮಕೂರು, ಜೂ.30: ರಾಜ್ಯ ಬಿಜೆಪಿ ಘಟಕದಲ್ಲಿ ಸದ್ಯ ಉಂಟಾಗಿರುವ ಗೊಂದಲಗಳು ಮತ್ತು ನಾಯಕತ್ವದ ನಡುವಿನ ಭಿನ್ನಾಭಿಪ್ರಾಯಗಳು ಮುಂದಿನ ಎರಡು ತಿಂಗಳ ಒಳಗೆ ಸಂಪೂರ್ಣವಾಗಿ ಬಗೆಹರಿಯಲಿವೆ ಎಂದು ಬಿಜೆಪಿ ಶಾಸಕ ಸುರೇಶ್ ಗೌಡ ಭರವಸೆ ವ್ಯಕ್ತಪಡಿಸಿದ್ದಾರೆ.

ಪಕ್ಷದ ಆಂತರಿಕ ವಿದ್ಯಮಾನಗಳ ಕುರಿತು ಮಾತನಾಡಿದ ಅವರು, ಸದ್ಯದ ಗೊಂದಲಗಳು ತಾತ್ಕಾಲಿಕವಾಗಿದ್ದು, ಹೈಕಮಾಂಡ್ ನಾಯಕರು ಶೀಘ್ರದಲ್ಲೇ ಮಧ್ಯಪ್ರವೇಶಿಸಿ ಎಲ್ಲಾ ಸಮಸ್ಯೆಗಳನ್ನು ಇತ್ಯರ್ಥಪಡಿಸಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಇನ್ನು ಲೋಕಸಭಾ ಚುನಾವಣೆಯ ನಂತರ ರಾಜ್ಯ ನಾಯಕರಲ್ಲಿ ಉಂಟಾಗಿರುವ ಅಸಮಾಧಾನ ಮತ್ತು ಪಕ್ಷದೊಳಗಿನ ಕೆಲವು ಆಂತರಿಕ ಭಿನ್ನಮತಗಳು ಸಾರ್ವಜನಿಕವಾಗಿ ಚರ್ಚೆಯಾಗುತ್ತಿರುವುದನ್ನು ಒಪ್ಪಿಕೊಂಡ ಅವರು, ಇದು ಪಕ್ಷದ ಸಂಘಟನೆಯ ಮೇಲೆ ಯಾವುದೇ ಶಾಶ್ವತ ಪರಿಣಾಮ ಬೀರುವುದಿಲ್ಲ ಎಂದಿದ್ದಾರೆ. ನಮ್ಮ ಪಕ್ಷದ ವರಿಷ್ಠರು ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಗೊಂದಲಗಳನ್ನು ಪರಿಹರಿಸಲಿದ್ದಾರೆ. ವಿರೋಧ ಪಕ್ಷವಾಗಿ ಕಾರ್ಯನಿರ್ವಹಿಸಲು ಮತ್ತು ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಗಳನ್ನು ಒಗ್ಗಟ್ಟಿನಿಂದ ಎದುರಿಸಲು ಪಕ್ಷವು ಶೀಘ್ರದಲ್ಲೇ ಸಜ್ಜಾಗಲಿದೆ ಎಂದು ಅವರು ಸ್ಪಷ್ಟಪಡಿಸಿದರು.

# ನೇಹಾ ಹಿರೇಮಠ ಹತ್ಯೆ ಪ್ರಕರಣ: ಆರೋಪಿ ಫಯಾಜ್ ಜಾಮೀನು ಅರ್ಜಿ ವಜಾ

ಧಾರವಾಡ, ಜೂ.30: ಹುಬ್ಬಳ್ಳಿಯ ನೇಹಾ ಹಿರೇಮಠ ಹತ್ಯೆ ಪ್ರಕರಣದ ಆರೋಪಿ ಫಯಾಜ್‌ಗೆ ಮತ್ತೊಮ್ಮೆ ಮುಖಭಂಗವಾಗಿದೆ. ಆರೋಪಿ ಫಯಾಜ್ ಸಲ್ಲಿಸಿದ್ದ ಜಾಮೀನು ಅರ್ಜಿಯನ್ನು ಹೈಕೋರ್ಟ್‌ನ ಧಾರವಾಡ ಪೀಠವು ವಜಾಗೊಳಿಸಿದೆ.

ಈ ಹಿಂದೆ ಹುಬ್ಬಳ್ಳಿಯ ಜಿಲ್ಲಾ ಮತ್ತು ಸತ್ರ ನ್ಯಾಯಾಲಯವು ಆರೋಪಿ ಫಯಾಜ್ನ ಜಾಮೀನು ಅರ್ಜಿಯನ್ನು ವಜಾಗೊಳಿಸಿತ್ತು.ಜಿಲ್ಲಾ ನ್ಯಾಯಾಲಯದ ಆದೇಶ ಪ್ರಶ್ನಿಸಿ ಹಾಗೂ ತನಗೆ ಜಾಮೀನು ಮಂಜೂರು ಮಾಡಬೇಕು ಎಂದು ಕೋರಿ ಆರೋಪಿ ಹೈಕೋರ್ಟ್ ಧಾರವಾಡ ಪೀಠದ ಮೆಟ್ಟಿಲೇರಿದ್ದನು. ಹೈಕೋರ್ಟ್‌ನಲ್ಲಿ ವಾದ–ಪ್ರತಿವಾದಗಳನ್ನು ಆಲಿಸಿದ ನ್ಯಾಯಪೀಠವು, ಪ್ರಕರಣದ ಗಾಂಭೀರ್ಯತೆಯನ್ನು ಪರಿಗಣಿಸಿ ಆರೋಪಿಗೆ ಯಾವುದೇ ಕಾರಣಕ್ಕೂ ಜಾಮೀನು ನೀಡಲು ಸಾಧ್ಯವಿಲ್ಲ ಎಂದು ಸ್ಪಷ್ಟಪಡಿಸಿದ್ದು, ಅರ್ಜಿಯನ್ನು ವಜಾಗೊಳಿಸಿದೆ.ಕೊಲೆಯಾದ ವಿದ್ಯಾರ್ಥಿನಿ ನೇಹಾ ಹಿರೇಮಠ ಪರವಾಗಿ ಹಿರಿಯ ನ್ಯಾಯವಾದಿ ರಾಘವೇಂದ್ರ ಮುತ್ತಗಿ ಅವರು ವಾದ ಮಂಡಿಸಿದರು.


ಆರೋಪಿ ಮಾಡಿರುವ ಕೃತ್ಯ ಅತ್ಯಂತ ಕ್ರೂರವಾಗಿದ್ದು, ಆತನಿಗೆ ಜಾಮೀನು ನೀಡಿದರೆ ಸಮಾಜಕ್ಕೆ ತಪ್ಪು ಸಂದೇಶ ರವಾನೆಯಾಗುತ್ತದೆ ಮತ್ತು ಸಾಕ್ಷ್ಯ ನಾಶಪಡಿಸುವ ಸಾಧ್ಯತೆಯಿದೆ ಎಂದು ನ್ಯಾಯಾಲಯದ ಗಮನಕ್ಕೆ ತಂದರು. ಈ ವಾದವನ್ನು ಪುರಸ್ಕರಿಸಿದ ನ್ಯಾಯಾಲಯ ಜಾಮೀನು ಅರ್ಜಿಯನ್ನು ತಿರಸ್ಕರಿಸಿದೆ. ಮತ್ತೊಂದೆಡೆ ಕಾಲೇಜು ಆವರಣದಲ್ಲೇ ಸಾರ್ವಜನಿಕವಾಗಿ ನಡೆದಿದ್ದ ಈ ಭೀಕರ ಕೊಲೆ ಪ್ರಕರಣದ ತನಿಖೆಯನ್ನು ಸಿಐಡಿ ಚುರುಕುಗೊಳಿಸಿದೆ. 2024ರ ಏಪ್ರಿಲ್ 18 ರಂದು ಹುಬ್ಬಳ್ಳಿಯ ಬಿವಿಬಿ ಕಾಲೇಜು ಆವರಣದಲ್ಲಿ 24 ವರ್ಷದ ಎಂಸಿಎ ವಿದ್ಯಾರ್ಥಿನಿ, ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯ ಕಾಂಗ್ರೆಸ್ ಸದಸ್ಯ ನಿರಂಜನ ಹಿರೇಮಠ ಅವರ ಪುತ್ರಿ ನೇಹಾ ಹಿರೇಮಠ ಅವರನ್ನು ಆರೋಪಿ ಫಯಾಜ್ ಅಡ್ಡಗಟ್ಟಿ, ಪ್ರೀತಿಯನ್ನು ನಿರಾಕರಿಸಿದಳು ಎಂಬ ಕಾರಣಕ್ಕೆ ನೇಹಾಗೆ ಚಾಕುವಿನಿಂದ ಮನಬಂದಂತೆ ಇರಿದು ಹತ್ಯೆಗೈದಿದ್ದ. 10 ಕ್ಕೂ ಹೆಚ್ಚು ಬಾರಿ ಇರಿತಕ್ಕೊಳಗಾದ ನೇಹಾ ಕಾಲೇಜು ಆವರಣದಲ್ಲಿಯೇ ಸಾವನ್ನಪ್ಪಿದ್ದಳು. ಘಟನೆ ಬಳಿಕ ಸ್ಥಳದಿಂದ ಪರಾರಿಯಾಗಿದ್ದ ಫಯಾಜ್ ನನ್ನು ಕೆಲವೇ ಗಂಟೆಗಳಲ್ಲಿ ಕಾರ್ಯಾಚರಣೆ ನಡೆಸಿ ಹುಬ್ಬಳ್ಳಿ ಪೊಲೀಸರು ಬಂಧಿಸಿದ್ದರು.

# ಜಾಗತಿಕ ಕಲಾ ಪ್ರಪಂಚದ ಹೆಮ್ಮೆಯ ಹಿರಿಯ ಕಲಾವಿದ ಕೆ.ಟಿ. ಶಿವಪ್ರಸಾದ್ ನಿಧನ

ಹಾಸನ, ಜೂ.30: ಕಲಾ ಪ್ರಪಂಚದಲ್ಲಿ ಜಾಗತಿಕ ಐಕಾನ್ ಆಗಿ ಗುರುತಿಸಿಕೊಂಡಿದ್ದ, ಗ್ರಾಮೀಣ ಸೊಗಡಿನ ಜೊತೆಗೆ ಆಧುನಿಕ ಕಲೆಯನ್ನು ಬೆಸೆದ ಕರ್ನಾಟಕದ ಹೆಮ್ಮೆಯ ಹಿರಿಯ ಕಲಾವಿದ ಕೆ.ಟಿ. ಶಿವಪ್ರಸಾದ್ ನಿಧನರಾಗಿದ್ದಾರೆ.

ತಳಸಮುದಾಯಗಳ, ರೈತರ ಧ್ವನಿಯಾಗಿ ಕಲೆಯ ಮೂಲಕವೇ ಕ್ರಾಂತಿ ಸೃಷ್ಟಿಸಿದ್ದ ಈ ಅಪರೂಪದ ಪ್ರತಿಭೆಯ ನಿಧನದಿಂದಾಗಿ ಭಾರತೀಯ ಕಲಾ ರಂಗದ ಸುವರ್ಣ ಅಧ್ಯಾಯವೊಂದು ಕೊನೆಗೊಂಡಂತಾಗಿದೆ. ಚಿತ್ರಕಲೆಯ ಜೊತೆಗೆ ಸಮಾಜಮುಖಿ ಹೋರಾಟಗಳಲ್ಲಿ ಸಕ್ರಿಯರಾಗಿದ್ದ ಶಿವಪ್ರಸಾದ್ ಅವರ ಬದುಕು ಮತ್ತು ಕಲಾ ಪ್ರಪಂಚದ ಸಾಧನೆಗಳ ಒಂದು ನೋಟ ಹೀಗಿದೆ.

1947ರಲ್ಲಿ ಕೊಡಗಿನ ಮಡಿಕೇರಿ (ಮರ್ಕಾರ) ತಾಲೂಕಿನ ಬಡ ಕೃಷಿ ಕುಟುಂಬವೊಂದರಲ್ಲಿ ಜನಿಸಿದ ಶಿವಪ್ರಸಾದ್ ಅವರಿಗೆ ಬಾಲ್ಯದಿಂದಲೇ ಚಿತ್ರಕಲೆಯತ್ತ ಆಸಕ್ತಿ ಇತ್ತು. ಆದರೆ ಆ ಕಾಲದಲ್ಲಿ ಚಿತ್ರಕಲೆಗೆ ಅಷ್ಟಾಗಿ ಮನ್ನಣೆ ಇರದ ಕಾರಣ, ಕುಟುಂಬದ ಇಚ್ಛೆಯಂತೆ ಅವರು ಇಂಜಿನಿಯರಿಂಗ್ ಕಾಲೇಜು ಸೇರಬೇಕಾಯಿತು. ಆದರೆ ಕಲೆಯ ಮೇಲಿದ್ದ ಅದಮ್ಯ ಒಲವಿನಿಂದಾಗಿ ಇಂಜಿನಿಯರಿಂಗ್ ಅಧ್ಯಯನವನ್ನು ಅರ್ಧಕ್ಕೇ ಬಿಟ್ಟು, ಮುಂಬೈನ ಪ್ರತಿಷ್ಠಿತ 'ಸರ್ ಜೆ.ಜೆ. ಸ್ಕೂಲ್ ಆಫ್ ಆರ್ಟ್' ಸೇರಿದರು. ಅಲ್ಲಿ 1973ರಲ್ಲಿ ಚಿತ್ರಕಲೆಯಲ್ಲಿ ಡಿಪ್ಲೊಮಾ ಪದವಿ ಪಡೆದರು.ಪದವಿ ಮುಗಿದ ನಂತರ ಅವರು ಚಿತ್ರಕಲೆಯನ್ನು ತಮ್ಮ ಕರ್ಮಭೂಮಿಯನ್ನಾಗಿಸಿಕೊಂಡರು. ಕೇವಲ ಕನ್ವಾಸ್ ಮುಂದೆ ಕೂತು ಬಣ್ಣ ಹಚ್ಚುವ ಕಲಾವಿದರಾಗದೇ, ಕರ್ನಾಟಕದ ಶೋಷಿತ, ಬಡ ಕೃಷಿ ಕಾರ್ಮಿಕರ ಸಬಲೀಕರಣಕ್ಕಾಗಿ ಸೋಷಿಯಲಿಸ್ಟ್, ದಲಿತ ಮತ್ತು ರೈತ ಸಂಘಟನೆಗಳ ಮೂಲಕ ದೀರ್ಘಕಾಲ ಸಕ್ರಿಯ ಹೋರಾಟಗಳಲ್ಲಿ ತೊಡಗಿಸಿಕೊಂಡರು. ಅವರ ಈ ಸಾಮಾಜಿಕ ಕಳಕಳಿ ಅವರ ಕಲಾಕೃತಿಗಳಲ್ಲೂ ಪ್ರತಿಫಲಿಸುತ್ತಿತ್ತು. ಆರಂಭದಲ್ಲಿ ಯುರೋಪಿಯನ್ ಶೈಲಿಯ 'ಅಬ್ ರಾಕ್ಟ್ ಎಕ್ಸ್ಪ್ರೆಷನಿಸಂ' ನಿಂತ ಪ್ರಭಾವಿತರಾಗಿದ್ದ ಶಿವಪ್ರಸಾದ್, ನಂತರ ಅಮೆರಿಕದ ಪ್ರಸಿದ್ಧ ಕಲಾವಿದ ಆಂಡಿ ವಾರ್ಹೋಲ್ ಮತ್ತು 20ನೇ ಶತಮಾನದ 'ಪಾಪ್ ಆರ್ಟ್' ಚಳುವಳಿಯಿಂದ ಪ್ರೇರಿತರಾಗಿ ವಾಸ್ತವ ಮತ್ತು ಭ್ರಮೆಯ ನಡುವಿನ ಸಂಬಂಧಗಳನ್ನು ಅನ್ವೇಷಿಸಲು ತೊಡಗಿದರು. ಆದರೆ ಆರಂಭದಲ್ಲಿ ಅವರ ಈ ನವೀನ ಶೈಲಿಯನ್ನು ಅರ್ಥ ಮಾಡಿಕೊಳ್ಳಲು ಯಾರಿಂದಲೂ ಸಾಧ್ಯವಾಗದಿದ್ದಾಗ ತೀವ್ರ ನಿರಾಶೆಗೊಂಡು, ತಮ್ಮದೇ ಹಲವು ಕಲಾಕೃತಿಗಳನ್ನು ನಾಶಪಡಿಸಿದ್ದರು. ಬಳಿಕ ಸಾಂಪ್ರದಾಯಿಕ ಶೈಲಿಗೆ ಮರಳಿದ ಅವರು 1970ರ ದಶಕದ ಕೊನೆಯಲ್ಲಿ 'ಮೇಲ್ ನ್ಯೂಡ್ಸ್' ಸರಣಿ ಪೇಂಟಿಂಗ್ ಮಾಡಿದರು. ತದನಂತರ ಕರ್ನಾಟಕದ ಗ್ರಾಮೀಣ ಜನರ ನೈಸರ್ಗಿಕ ಜೀವನದ ಭಾವಚಿತ್ರ ಬಿಡಿಸಲು ಆರಂಭಿಸಿದರು. ಕೊನೆಗೆ ಛಾಯಾಗ್ರಹಣದ ರಿಯಾಲಿಟಿ, ಸಮಕಾಲೀನ ಅಮೂರ್ತತೆ ಸಾಂಪ್ರದಾಯಿಕ ಗ್ರಾಮೀಣ ಕಲೆ ಮತ್ತು ಜಾನಪದ ಮೋಟಿಫ್‌ಗಳನ್ನು ಸಮ್ಮಿಶ್ರಗೊಳಿಸಿ ತಮಗೆ ಒಪ್ಪುವ ವಿಶಿಷ್ಟ ದೃಶ್ಯ ಶಬ್ದಕೋಶವನ್ನು ಅವರು ರೂಪಿಸಿಕೊಂಡರು.



ಬ್ರಿಟನ್‌ನ ಶ್ರೇಷ್ಠ ಮಾಡರ್ನಿಸ್ಟ್ ಲುಸಿಯನ್ ಫ್ರಾಯ್ಡ್ ಅವರಿಗೆ ಹೋಲಿಸಲ್ಪಡುತ್ತಿದ್ದ ಕೆ.ಟಿ. ಶಿವಪ್ರಸಾದ್ ಅವರ ಕಲಾಕೃತಿಗಳು ದೇಶ–ವಿದೇಶಗಳಲ್ಲಿ ಅಪಾರ ಪ್ರಶಂಸೆಗಳಿಸಿವೆ. ಇಂಜಿನಿಯರಿಂಗ್‌ನ ಅಲ್ಪಾವಧಿಯ ಅನುಭವದಿಂದಾಗಿ ಅವರು ಅತ್ಯುತ್ತಮ ಛಾಯಾಗ್ರಾಹಕ ಹಾಗೂ ಆರ್ಕಿಟೆಕ್ಚರಲ್ ಕನ್ಸಲ್ಟೆಂಟ್ ಆಗಿಯೂ ಗುರುತಿಸಿಕೊಂಡಿದ್ದರು. 1976 ರಿಂದ ಬೆಂಗಳೂರು, ಮೈಸೂರು, ಮುಂಬೈ ಮತ್ತು ನವದೆಹಲಿಗಳಲ್ಲಿ ಇವರ ಹಲವು ಏಕವ್ಯಕ್ತಿ ಪ್ರದರ್ಶನಗಳು ನಡೆದಿವೆ. ಮುಂಬೈನ ಜಹಾಂಗೀರ್ ಆರ್ಟ್ ಗ್ಯಾಲರಿ, ಚೆನ್ನೈನ ಸಾಕ್ಷಿ ಗ್ಯಾಲರಿ ಹಾಗೂ ನವದೆಹಲಿಯ ಆರ್ಟ್ ಟುಡೇಗಳಲ್ಲಿ ಇವರ ಕಲಾ ಪ್ರದರ್ಶನಗಳು ಕಲಾ ರಸಿಕರ ಮನಗೆದ್ದಿದ್ದವು. ಜೊತೆಗೆ ಭೋಪಾಲ್ ಬಿನ್ನಾಲೆ (1988), ಬಾಂಬೆ ಆರ್ಟ್ ಸೊಸೈಟಿ ಶತಮಾನೋತ್ಸವ ಪ್ರದರ್ಶನ (1989) ಹಾಗೂ ಹಾಂಗ್ಕಾಂಗ್ ಗ್ಯಾಲರಿಗಳಲ್ಲೂ (1996) ಇವರ ಕಲಾಕೃತಿಗಳು ಪ್ರದರ್ಶನಗೊಂಡಿದ್ದವು. 1996ರಲ್ಲೇ ಜಹಾಂಗೀರ್ ಆರ್ಟ್ ಗ್ಯಾಲರಿಯಲ್ಲಿ ನಡೆದ ಸಮಕಾಲೀನ ಭಾರತೀಯ ಕಲಾವಿದರ ಪ್ರದರ್ಶನದಲ್ಲೂ ಭಾಗವಹಿಸಿದ್ದರು.

ಕಲಾ ಜಗತ್ತಿಗೆ ಇವರು ನೀಡಿದ ಮಹೋನ್ನತ ಕೊಡುಗೆಯನ್ನು ಗೌರವಿಸಿ ಕರ್ನಾಟಕ ಸರ್ಕಾರವು 2001ರಲ್ಲಿ ಇವರಿಗೆ ಪ್ರತಿಷ್ಠಿತ 'ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ' ನೀಡಿ ಗೌರವಿಸಿತ್ತು.ತಮ್ಮ ಕುಂಚದ ಲೀಲಾಜಾಲದ ರೇಖೆಗಳ ಮೂಲಕ ಮುಗ್ಧ ಮುಖಗಳಲ್ಲಿ ಆತ್ಮವಿಶ್ವಾಸದ ಭಾವನೆಗಳನ್ನು ತುಂಬುತ್ತಿದ್ದ ಮಹಾನ್ ಚೇತನ ಕೆ.ಟಿ. ಶಿವಪ್ರಸಾದ್ ಇಂದು ನಮ್ಮೊಂದಿಗಿಲ್ಲದೇ ಇರಬಹುದು, ಆದರೆ ಅವರು ಬಿಟ್ಟುಹೋದ ಅಮೂಲ್ಯ ಕಲಾಕೃತಿಗಳು ಹಾಗೂ ಸಮಾಜಮುಖಿ ಚಿಂತನೆಗಳು ಸದಾ ಜೀವಂತವಾಗಿವೆ.

## 371 (ಜೆ) ಸೌಲಭ್ಯ ಪಡೆದು ಶಿಕ್ಷಣದಲ್ಲಿ ಸಾಧಿಸಿ ವಿದ್ಯಾರ್ಥಿಗಳಿಗೆ ಶಾಸಕ ಅಲ್ಲಮಪ್ರಭು ಪಾಟೀಲ್ ಕರೆ



### ಡಿವೈನ್ ಇನ್ಸ್ಟಿಟ್ಯೂಟ್ ಆಫ್ ನರ್ಸಿಂಗ್ ಸಂಸ್ಥೆಯಿಂದ 200 ವಿದ್ಯಾರ್ಥಿಗಳಿಗೆ ಪದವಿ ಪ್ರದಾನ

ಕಲಬುರಗಿ, ಜೂ. 30: ಕಲ್ಯಾಣ ಕರ್ನಾಟಕದಲ್ಲಿ ಶಿಕ್ಷಣ ರಂಗದಲ್ಲಿ 371( ಜೆ) ಸೌಲಭ್ಯ ಪಡೆದು ವಿಶೇಷ ಸಾಧನೆ ಮಾಡಲು ವಿದ್ಯಾರ್ಥಿಗಳಿಗೆ ವಿಫುಲ ಅವಕಾಶವಿದೆ. ಈ ಭಾಗದ ಶೈಕ್ಷಣಿಕ ಕ್ಷೇತ್ರದ ಬೆಳವಣಿಗೆಗೆ ಈ ಸೌಲಭ್ಯವನ್ನು ಬಳಸಿಕೊಳ್ಳಬೇಕು ಮತ್ತು ಸಾಧನೆಯನ್ನು ಮಾಡಬೇಕು ಎಂದು ಶಾಸಕ ಅಲ್ಲಮಪ್ರಭು ಪಾಟೀಲ್ ತಿಳಿಸಿದರು.

ಕಲಬುರಗಿಯ ರಂಗಮಂದಿರದಲ್ಲಿ ಜೂ. 26ರಂದು ಡಿವೈನ್ ಇನ್ಸ್ಟಿಟ್ಯೂಟ್ ಆಫ್ ನರ್ಸಿಂಗ್ ನ 200ರಷ್ಟು ಪದವೀಧರರಿಗೆ ಪ್ರಮಾಣ ಪತ್ರ ಪ್ರದಾನ ಮಾಡಿ ಮಾತನಾಡಿ ಸಂವಿಧಾನದ 371 (ಜೆ) ಕಲಂ ನಲ್ಲಿ ಕಲ್ಯಾಣ ಕರ್ನಾಟಕ ಭಾಗದ ಸಾವಿರಾರು ವಿದ್ಯಾರ್ಥಿಗಳು ವೈದ್ಯಕೀಯ ಇಂಜಿನಿಯರಿಂಗ್ ಸೇರಿದಂತೆ ವೃತ್ತಿಪರ ಕೋರ್ಸ್‌ಗಳಲ್ಲಿ ಸೌಲಭ್ಯ ಪಡೆಯುತ್ತಿರುವುದು ಶ್ಲಾಘನೀಯವಾಗಿದೆ. ನರ್ಸಿಂಗ್ ಕೋರ್ಸ್ ಬಹುಬೇಡಿಕೆಯ ಕೋರ್ಸ್ ಆಗಿದ್ದು ಉದ್ಯೋಗ ಹೊಂದಲು ದೇಶವಿದೇಶಗಳಲ್ಲಿ ವ್ಯಾಪಕ ಬೇಡಿಕೆ ಇದೆ.ಡಿವೈನ್ ಸಂಸ್ಥೆಯ ಅಧ್ಯಕ್ಷರಾದ ಡಾ. ಕಿರಣ್ ಜಾರ್ಜ್ ನರ್ಸಿಂಗ್ ಸಂಸ್ಥೆಯನ್ನು ಪ್ರಾರಂಭಿಸಿ ಈ ಭಾಗದಲ್ಲಿ ಉತ್ತಮ ಕೆಲಸ ಮಾಡುತ್ತಿದ್ದಾರೆ.

ನರ್ಸಿಂಗ್ ಶಿಕ್ಷಣದ ಜೊತೆಗೆ ಮಾನವೀಯ ಮೌಲ್ಯದ ಸೇವೆಯ ಅಂಗವಾಗಿ ಬಡವರಿಗೆ ಅನ್ನದಾನ ಉಚಿತ ನರ್ಸಿಂಗ್ ಶಿಕ್ಷಣ 41 ಬಾರಿ ರಕ್ತದಾನ 33 ಬಾರಿ ರಕ್ತದಾನ ಶಿಬಿರ ಆಯೋಜನೆ ಕಂಬಳಿ ವಿತರಣೆ ಸೇರಿದಂತೆ ಸಮಾಜ ಸೇವೆ ಸಲ್ಲಿಸುತ್ತಿರುವುದು ಕೂಡ ಸ್ತುತ್ಯಾರ್ಹ ಎಂದರು.

ರಾಜ್ಯ ನರ್ಸಿಂಗ್ ಬೋರ್ಡಿನ ಕಾರ್ಯದರ್ಶಿ ಮಡಿವಾಳಪ್ಪ ನಾಗರಹಳ್ಳಿ ಆಕಾಶವಾಣಿಯ ನಿವೃತ್ತ ಕಾರ್ಯಕ್ರಮ ಮುಖ್ಯಸ್ಥರಾದ ಡಾ. ಸದಾನಂದ ಪೆರ್ಲ ಉಪಮೇಯರ್ ತೃಪ್ತಿ ಇಲಾಖೆ ಕೆಕೆಆರ್‌ಡಿಬಿ ಅಧ್ಯಕ್ಷರಾದ ಅರುಣ್ ಕುಮಾರ್ ಪಾಟೀಲ್, ನ್ಯಾಯವಾದಿ ವಸಂತ್ ಪ್ರತಿಪಥಿ, ಫಾ . ರಾಬರ್ಟ್ ರಾಡ್ರಿಗಸ್ ಫಾ.ಪ್ರವೀಣ್,ಫಾ. ರೊನಾಲ್ಡ್, ರವೀಂದ್ರ ಶಾಬಾದಿ, ಸಂಧ್ಯಾರಾಜ್ ಮತ್ತಿತರು ಉಪಸ್ಥಿತರಿದ್ದರು

## ಮಕ್ಕಳಿಗೆ ಕಡ್ಡಾಯವಾಗಿ ಲಸಿಕೆ ಹಾಕಿಸಿ: ಶಾಸಕ ಅಲ್ಲಮಪ್ರಭು ಪಾಟೀಲ್

ಕಲಬುರಗಿ, ಜೂ. 30: ಮಕ್ಕಳ ಆರೋಗ್ಯ ಕಾಪಾಡುವುದು ಪ್ರತಿಯೊಬ್ಬ ತಂದೆತಾಯಿಗಳ ಕರ್ತವ್ಯ. ಈ ಮಕ್ಕಳಿಗೆ ಬಾಲ್ಯದಲ್ಲಿ ಯೋಗ್ಯ ಆರೋಗ್ಯ ಸುರಕ್ಷೆ ನೀಡುವುದು ನಮ್ಮ ಸರ್ಕಾರದ ಕರ್ತವ್ಯವಾಗಿದ್ದು, ಈ ಹಿನ್ನೆಲೆಯಲ್ಲಿ ಪ್ರತಿ ಮಕ್ಕಳಿಗೂ ಪೋಲೀಯೋ ಲಸಿಕಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಆದ್ದರಿಂದ ಐದು ವರ್ಷದೊಳಗಿನ ಪ್ರತಿ ಮಗುವಿಗೆ ಕಡ್ಡಾಯವಾಗಿ ಪೋಲಿಯೋ ಲಸಿಕೆ ಹಾಕಿಸಬೇಕು ಎಂದು ದಕ್ಷಿಣ ಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ್ ಹೇಳಿದರು.

ನಗರದ ಆಳಂದ ಚೆಕ್ ಪೋಸ್ಟ್, ದುಬೈ ಕಾಲನಿ ಬಳಿಯ ಶಿವಾಜಿ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಜಿಲ್ಲಾ ಆರೋಗ್ಯಇಲಾಖೆ, ಜಿಲ್ಲಾ ಆರ್‌ಸಿಎಚ್ ಅಧಿಕಾರಿಗಳ ಕಚೇರಿಯಿಂದ ಆಯೋಜಿಸಿದ್ದ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಮೊದಲ ದಿನ ಬೂತ್ ಮಟ್ಟದ ಕಾರ್ಯಕ್ರಮ, ಉಳಿದ 3 ದಿನ ಮನೆ–ಮನೆಗಳಿಗೆ ಭೇಟಿ ನೀಡಿ ಲಸಿಕೆ ನೀಡಲಾಗುತ್ತದೆ ಎಂದರು.

ಪಾಲಕರು ಐದು ವರ್ಷದೊಳಗಿನ ಮಕ್ಕಳಿಗೆ ಲಸಿಕೆ ಹಾಕಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.ದೇಶಾದ್ಯಂತ ಭಾನುವಾರದಿಂದ ಜು.1ರವರೆಗೆ ಅಭಿಯಾನ ಹಮ್ಮಿಕೊಳ್ಳಲಾಗಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು. ಜಿಲ್ಲೆಯಲ್ಲಿ ಐದು ವರ್ಷದೊಳಗಿನ ಮಕ್ಕಳ ಸಂಖ್ಯೆ 3,51,716 ಇದ್ದು, ಒಟ್ಟು 1519 ಲಸಿಕೆ ಕೇಂದ್ರ ಸ್ಥಾಪಿಸಲಾಗಿದೆ. 1453 ತಂಡ, 132 ಟ್ರಾನ್ಸಿಟ್, 31 ಸಂಚಾರಿ ತಂಡಗಳು ಸೇರಿ ಒಟ್ಟು 1682 ತಂಡಗಳು ಕಾರ್ಯನಿರ್ವಹಿಸಲಿವೆ. ಮೇಲ್ವಿಚಾರಕರು 333 ಇದ್ದು, 3364 ಜನ ಲಸಿಕೆ ಹಾಕುವವರಿದ್ದಾರೆ ಎಂದು ಮಾಹಿತಿ ನೀಡಿದರು.



ಕಲಬುರಗಿಯ ದುಬೈ ಕಾಲನಿ ಬಳಿಯ ಶಿವಾಜಿ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಜಿಲ್ಲಾ ಆರೋಗ್ಯಇಲಾಖೆ, ಜಿಲ್ಲಾ ಆರ್‌ಸಿಎಚ್ ಅಧಿಕಾರಿಗಳ ಕಚೇರಿಯಿಂದ ಆಯೋಜಿಸಿದ್ದ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನದಲ್ಲಿ ಮಗುವಿಗೆ ಲಸಿಕೆ ಹಾಕುವ ಮೂಲಕ ಶಾಸಕ ಅಲ್ಲಮಪ್ರಭು ಪಾಟೀಲ್ ಚಾಲನೆ ನೀಡಿದರು.

ಶಾಸಕಿ ಕನೀಜ್ ಫಾತಿಮಾ ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕಿದರು. ಜಿಪಂ ಸಿಇಒ ರಾಹುಲ್ ಸಂಕನೂರ, ಅಪರ ನಿರ್ದೇಶಕಿ ಡಾ.ಪುಷ್ಪಾ ಎಚ್.ಆರ್., ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವಿಭಾಗೀಯ ಜಂಟಿ ನಿರ್ದೇಶಕ ಡಾ.ಶಂಕ್ರಪ್ಪ ಮೈಲಾರಿ, ಉಪ ನಿರ್ದೇಶಕ ಡಾ.ಶರಣಬಸಪ್ಪ ಗಣಜಲಖೇಡ, ಪೋಲಿಯೋ ಸರ್ವೇಕ್ಷಣಾ ಅಧಿಕಾರಿ ಡಾ.ಅನಿಲಕುಮಾರ ತಾಳಿಕೋಟಿ, ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ರಾಕೇಶ ಕಾಂಬಳೆ, ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಚಂದ್ರಕಾಂತ ನರಿಬೋಳ, ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ.ವಿವೇಕಾನಂದ ರಡ್ಡಿ, ಜಿಲ್ಲಾ ತರಬೇತಿ ಕೇಂದ್ರ ಪ್ರಾಂಶುಪಾಲ ಡಾ.ರವಿಕಾಂತಿ ಎಸ್. ಕ್ಯಾತನಾಳ, ಮಹಾನಗರ ಪಾಲಿಕೆ ಆರೋಗ್ಯಾಧಿಕಾರಿ ಡಾ.ರಾಜೇಂದ್ರ ಭಾಲ್ಕೆ, ಶಿವಾಜಿನಗರ ನಗರ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ.ಇಥೆಶಾಮ್, ಸಿಡಿಪಿಒ ಅಂಬಿಕಾ, ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕ ವೀರೇಶ ಜಾವಳಗೇರಿ, ನಗರ ಆರೋಗ್ಯ ಕಾರ್ಯಕ್ರಮದ ವ್ಯವಸ್ಥಾಪಕ ಶ್ರೀಕಾಂತ ಸ್ವಾಮಿ, ಜಿಲ್ಲಾ ಟಿಸಿಸಿ ಸೈಕ್ಯಾಟ್ರಿಕ್ ಕೌನ್ಸಲರ್ ಮಂಜುನಾಥ ಕಂಬಾಳಿಮಠ ಇತರರಿದ್ದರು.

ಜಿಲ್ಲಾ ಆರೋಗ್ಯಾಧಿಕಾರಿ ಡಾ.ಶರಣಬಸಪ್ಪ ಕ್ಯಾತನಾಳ ಪ್ರಾಸ್ತಾವಿಕ ಮಾತನಾಡಿದರು. ಜಿಲ್ಲಾ ಆರ್‌ಸಿಎಚ್ ಅಧಿಕಾರಿ ಡಾ.ಸಿದ್ದು ಪಾಟೀಲ್ ಸ್ವಾಗತಿಸಿದರು. ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಸೋಮು ರಾಠೋಡ್ ನಿರೂಪಣೆ ಮಾಡಿದರು. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಶಶಿಧರ ಬಳೆ ವಂದಿಸಿದರು.

> ಮಕ್ಕಳಿಗೆ ಭವಿಷ್ಯದಲ್ಲಿ ಸಂಭವಿಸಬಹುದಾದ ಆರೋಗ್ಯ ಸಮಸ್ಯೆಯನ್ನು ಪೋಲಿಯೋ ಲಸಿಕೆ ಹಾಕಿಸುವ ಮೂಲಕ ತಡೆಗಟ್ಟಬಹುದು. ಹೀಗಾಗಿ ಆರೋಗ್ಯ ಇಲಾಖೆ ಸಿಬ್ಬಂದಿ ಮನೆಗಳಿಗೆ ಲಸಿಕೆ ಹಾಕಲು ಬಂದಾಗ ತಾತ್ಸಾರ ತೋರಬಾರದು. ಮಕ್ಕಳಿಗೆ ಕಡ್ಡಾಯವಾಗಿ ಲಸಿಕೆ ಹಾಕಿಸಬೇಕು.
> – ಅಲ್ಲಮಪ್ರಭು ಪಾಟೀಲ್,

## ಬೀದರ್ 'ನಮ್ಮ ಕ್ಲಿನಿಕ್' ಸಿಬ್ಬಂದಿಗೆ ಮೂರು ತಿಂಗಳಿಂದ ವೇತನ ಪಾವತಿಯಾಗಿಲ್ಲ..!

**ಬೀದರ್, ಜೂ. 30:** ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಡಿ ಜಿಲ್ಲೆಯಾದ್ಯಂತ ಕೆಲಸ ನಿರ್ವಹಿಸುತ್ತಿರುವ 'ನಮ್ಮ ಕ್ಲಿನಿಕ್' ಸಿಬ್ಬಂದಿಗೆ ಕಳೆದ ಮೂರು ತಿಂಗಳಿಂದ ವೇತನ ಪಾವತಿಯಾಗಿಲ್ಲ. ಜಿಲ್ಲೆಯಾದ್ಯಂತ ಒಟ್ಟು 14 ನಮ್ಮ ಕ್ಲಿನಿಕ್‌ಗಳು ಕಾರ್ಯ ನಿರ್ವಹಿಸುತ್ತಿವೆ. ಯಾವ ಸಿಬ್ಬಂದಿಗಳಿಗೂ ವೇತನ ಪಾವತಿಯಾಗದೇ ಸಿಬ್ಬಂದಿಗಳು ಸಂಕಷ್ಟಕ್ಕೆ ಸಿಲುಕಿದ್ದಾರೆ. ಪ್ರತಿಯೊಂದು ಕ್ಲಿನಿಕ್‌ನಲ್ಲಿ ಒಬ್ಬ ವೈದ್ಯ, ಲ್ಯಾಬ್ ಟೆಕ್ನಿಶಿಯನ್, ಸ್ಟಾಫ್ ನರ್ಸ್, ಎಚ್‌ಐಒ ಒಳಗುತ್ತಿಗೆ ಆಧಾರದ ಮೇಲೆ ಕೆಲಸ ಮಾಡುತ್ತಿದ್ದರೆ, ಒಬ್ಬ ಗ್ರುಪ್ 'ಡಿ' ಸಿಬ್ಬಂದಿ ಹೊರಗುತ್ತಿಗೆ ಮೇಲೆ ಕೆಲಸ ನಿರ್ವಹಿಸುತ್ತಿದ್ದಾರೆ. ಆದರೆ, ಯಾರಿಗೂ ವೇತನ ಪಾವತಿಯಾಗಿಲ್ಲ.

ಈ ಹಿಂದೆ ಯಾವಾಗಲಾದರೂ ಒಮ್ಮೆ ಒಂದು ತಿಂಗಳು ವಿಳಂಬವಾಗಿ ಸಂಬಳವಾಗುತ್ತಿತ್ತು. ಈಗ ಮೂರು ತಿಂಗಳಿಂದ ವೇತನವೇ ಪಾವತಿಸಿಲ್ಲ. ಎಲ್ಲವೂ ಬಹಳ ದುಬಾರಿಯಾಗಿದೆ. ಮೊದಲೇ ಕಡಿಮೆ ಸಂಬಳ. ಅದು ಕೂಡ ಸಮಯಕ್ಕೆ ಸರಿಯಾಗಿ ಆಗದ ಕಾರಣ ಜೀವನ ನಡೆಸುವುದು ಕಷ್ಟವಾಗುತ್ತಿದೆ' ಎಂದು ಹೆಸರು ಹೇಳಲಿಚ್ಛಿಸದ 'ನಮ್ಮ ಕ್ಲಿನಿಕ್' ಸಿಬ್ಬಂದಿ ಗೋಳು ತೋಡಿಕೊಂಡಿದ್ದಾರೆ.

ನಮ್ಮ ಕ್ಲಿನಿಕ್‌ನಲ್ಲಿ ಕೆಲಸ ನಿರ್ವಹಿಸುತ್ತಿರುವವರಿಗೆ ಕೇಂದ್ರ ಸರ್ಕಾರದ ಶೇ. 60 ಹಾಗೂ ರಾಜ್ಯ ಸರ್ಕಾರದ ಶೇ 40ರಷ್ಟು ಪಾಲು ಸೇರಿಸಿ ವೇತನ ಬಿಡುಗಡೆ ಮಾಡಲಾಗುತ್ತದೆ. ಈ ರೀತಿ ಪಾಲು ಹಂಚಿಕೆ ಮಾಡಬೇಕಾಗಿರುವುದರಿಂದಲೂ ವೇತನ ಪಾವತಿಗೆ ಸಮಸ್ಯೆಯಾಗುತ್ತಿದೆ. ಇದು ದೂರವಾಗಬೇಕು ಎಂದು ಆಗ್ರಹಿಸಿದ್ದಾರೆ.

ಕಾಯಂ ನೌಕರರಿಗೆ ಕಾಲಕಾಲಕ್ಕೆ ಸರಿಯಾಗಿ ವೇತನ ಪಾವತಿಸಲಾಗುತ್ತದೆ. ಅವರಂತೆಯೇ ನಾವು ಕೂಡ ಕೆಲಸ ನಿರ್ವಹಿಸುತ್ತಿದ್ದೇವೆ. ನಮಗೂ ಪ್ರತಿ ತಿಂಗಳು ವೇತನ ಪಾವತಿಸಲು ಕ್ರಮ ಕೈಗೊಳ್ಳಬೇಕು. ಇಲ್ಲವಾದರೆ ಬೇರೆಯವರ ಬಳಿ ಸಾಲ ಮಾಡಬೇಕಾದ ಪರಿಸ್ಥಿತಿ ನಿರ್ಮಾಣವಾಗುತ್ತಿದೆ ಎಂದು ಅಳಲು ತೋಡಿಕೊಂಡಿದ್ದಾರೆ.

## ಬೆಸ್ಟ್ ಕಾಲೇಜಿನಲ್ಲಿ ಮಾದಕ ವ್ಯಸನ ವಿರೋಧಿ ದಿನಾಚರಣೆ ಕಾರ್ಯಕ್ರಮ



**ಬಳ್ಳಾರಿ ಜೂ 30**. ಬಳ್ಳಾರಿಯ ಬಳ್ಳಾರಿ ಸ್ವತಂತ್ರ ಪದವಿ ಪೂರ್ವ (ಬೆಸ್ಟ್) ಕಾಲೇಜಿನ ಕಲಾಕ್ಷೇತ್ರದಲ್ಲಿ ನಡೆದ ಮಾದಕ ವ್ಯಸನ ವಿರೋಧಿ ದಿನಾಚರಣೆಯನ್ನು ಹಮ್ಮಿಕೊಳ್ಳಲಾಯಿತು. ಬಳ್ಳಾರಿ ಗ್ರಾಮೀಣ ಡಿವೈಎಸ್‌ಪಿ ಮಾಲತೇಶ ಮತ್ತು ಸಿಪಿಐ ಗಾಯತ್ರಿ ಯವರು ಆಗಮಿಸಿ ವಿದ್ಯಾರ್ಥಿಗಳಿಗೆ ಮಾದಕ ವಸ್ತುಗಳನ್ನು ಕುರಿತು ಅರಿವು ಮೂಡಿಸಿದರು.

ಡಿವೈಎಸ್‌ಪಿ ಮಾಲತೇಶ ಅವರು ಆರೋಗ್ಯಯುತ ದೇಶದ ನಿರ್ಮಾಣದಲ್ಲಿ ವಿದ್ಯಾರ್ಥಿಗಳ ಸಹಕಾರ ತುಂಬಾ ಅಗತ್ಯವಿದೆ. ಸದೃಢವಾದ ಸಮಾಜವನ್ನು ನಿರ್ಮಾಣ ಮಾಡಬೇಕಾದರೆ ಮಾದಕ ವ್ಯಸನಗಳಿಂದ ಯುವಕ ಯುವತಿಯರು ದೂರವಿರಬೇಕು. ಸ್ವಸ್ಥ ಸಮಾಜದ ರೂವಾರಿಗಳಾಗಬೇಕು ಎಂದು ಹೇಳಿದರು. ಸಿಪಿಐ ಗಾಯತ್ರಿಯವರು ಮಾದಕ ವಸ್ತುಗಳ ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸಿದರು.

ಕಾರ್ಯಕ್ರಮದ ಬಳಿಕ ಡಿವೈಎಸ್‌ಪಿ ಮಾಲತೇಶ ಅವರನ್ನು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಚಾರ್ಯರಾದ ಕೆ. ವೆಂಕಟೇಶ್ವರರಾವ್ , ಉಪ ಪ್ರಾಚಾರ್ಯರಾದ ಜಿ. ಶ್ರೀನಿವಾಸರೆಡ್ಡಿ ಮತ್ತು ಸಿಬ್ಬಂದಿವರ್ಗದವರು, ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಪ್ರತಿಯೊಬ್ಬರಲ್ಲೂ ಆರೋಗ್ಯಕ್ಕೆ ಆದ್ಯತೆ ಹೆಚ್ಚಲಿ




ಬಳ್ಳಾರಿ, ಜೂ. 30: ಪ್ರತಿಯೊಬ್ಬರೂ ಆರೋಗ್ಯ ಸಂರಕ್ಷಣೆಗಾಗಿ ಆದ್ಯತೆ ನೀಡಬೇಕಾದ ಅನಿವಾರ್ಯತೆ ಬಂದಿದೆ ಎಂದು ಡಾ. ಬಿ.ಕೆ. ಸುಂದರ್ ಅವರು ತಿಳಿಸಿದ್ದಾರೆ. ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಸದಸ್ಯರುಗಳಿಗೆ 'ಆರೋಗ್ಯ ಮಹತ್ವ'ದ ಕುರಿತು ಅವರು ಮಂಗಳವಾರ ಮಾತನಾಡಿ, ಪ್ರತಿಯೊಬ್ಬರೂ ದೈಹಿಕ ಚಟುವಟಿಕೆಗಳಲ್ಲಿ ಕಡ್ಡಾಯವಾಗಿ ಪಾಲ್ಗೊಂಡು ಆರೋಗ್ಯವಂತರಾಗಲು ತಿಳಿಸಿದರು.

ಇತ್ತೀಚಿನ ದಿನಗಳಲ್ಲಿ ಆರೋಗ್ಯ ಕ್ಷೇತ್ರದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಸಮಯ – ಹಣ ಮತ್ತು ಜ್ಞಾನವನ್ನು ವಿನಿಯೋಗ ಮಾಡಲಾಗುತ್ತಿದೆ. ಆರೋಗ್ಯದ ಕಡೆ ಪ್ರತಿಯೊಬ್ಬರೂ ಗಮನ ನೀಡುತ್ತಿದ್ದಾರೆ ಎಂದರು. ಆರೋಗ್ಯ ಸುಧಾರಣೆಗಾಗಿ ಪ್ರೇರಣೆ ನೀಡುವ ವ್ಯವಸ್ಥೆ ನಿರ್ಮಾಣವಾಗಿದೆ. ಆಹಾರ ಪದ್ಧತಿಯೂ ಬದಲಾಗಿದೆ. ಆದರೆ, ಆರೋಗ್ಯ ಸುಧಾರಣೆಯಲ್ಲಿ ನಿರಂತರತೆಯ ಅಗತ್ಯವಿದೆ ಎಂದರು.

ಒತ್ತಡ, ಜೀವನಶೈಲಿ, ಆಹಾರ, ಇನ್ನಿತರೆಗಳ ಕಾರಣ 'ಒಬೆಸಿಟಿ' – ಹೃದ್ರೋಗ ; ಡಯಾಬಿಟಿಸ್ ಹೀಗೇ ಆರೋಗ್ಯ ಸಮಸ್ಯೆಗಳು ಅನೇಕರನ್ನು ಸಹಜವಾಗಿಯೇ ಕಾಡುತ್ತಿವೆ. ಈ ದಿನಗಳಲ್ಲಿ ಆರೋಗ್ಯ ಸುಧಾರಣೆಗೆ ದೈಹಿಕ ಶ್ರಮ ಅಗತ್ಯ ಎಂದರು.

ಬಳ್ಳಾರಿ ಸೈಕ್ಲಿಸ್ಟ್ ಅಂಡ್ ರನ್ನರ್ಸ್ ಫೌಂಡೇಶನ್ ಆಗಸ್ಟ್ 2ರ ಭಾನುವಾರ ಏರ್ಪಡಿಸಿರುವ 'ಸ್ಟೀಲ್ ಸಿಟಿ ರನ್'' ನಲ್ಲಿ ಪ್ರತಿಯೊಬ್ಬರೂ ಪಾಲ್ಗೊಳ್ಳಬೇಕು ಎಂದರು.

ಅಲ್ಲದೇ, ಡಾ.ಬಿ.ಕೆ. ಸುಂದರ್ ಅವರು, ಸಿಪಿಆರ್‌ನಲ್ಲಿ ಲುಕ್, ಲಿಸನ್ ಅಂಡ್ ಫೀಲ್ ಮಾಡಬೇಕು. ಎದೆಯ ಮಧ್ಯಭಾಗದಲ್ಲಿ ಎದೆಯನ್ನು ಒತ್ತುವ ಕುರಿತು ಜಾಗೃತಿ ಮೂಡಿಸಿದರು.

ಬಳ್ಳಾರಿ ಸೈಕ್ಲಿಸ್ಟ್ ಅಂಡ್ ರನ್ನರ್ಸ್ ಫೌಂಡೇಶನ್ ನ ಡಾ. ರವಿಶಂಕರ್ ಸಜ್ಜಲ್ ಅವರು, ದೈಹಿಕ ಚಟುವಟಿಕೆಗಳನ್ನು ನಡೆಸುವ ಮೂಲಕ ಪ್ರತಿಯೊಬ್ಬರೂ ಆರೋಗ್ಯ ಸುಧಾರಣೆ ಮಾಡಿಕೊಳ್ಳಬೇಕು ಎಂದರು. ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷ ಅವ್ವಾರು ಮಂಜುನಾಥ್, ಗೌರವ್, ಕಾರ್ಯ ದರ್ಶಿ ಕೆ.ಸಿ.ಸುರೇಶಬಾಬು ಅವರು ಡಾ. ಬಿ.ಕೆ. ಸುಂದರ್ ಅವರನ್ನು ಗೌರವಿಸಿದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಹಿರಿಯ ಉಪಾಧ್ಯಕ್ಷ ಎಸ್. ದೊಡ್ಡನಗೌಡ, ಉಪಾಧ್ಯಕ್ಷ ಸೊಂತ ಗಿರಿಧರ್, ಜಂಟಿ ಕಾರ್ಯದರ್ಶಿ ಡಾ. ಮರ್ಚೇಡ್ ಮಲ್ಲಿಕಾರ್ಜುನಗೌಡ ಹಾಗೂ ವಿ. ರಾಮಚಂದ್ರ, ಖಜಾಂಚಿಗಳಾದ ಸಿ.ಎಸ್. ಸತ್ಯನಾರಾಯಣ,

ಬಳ್ಳಾರಿ ಸೈಕ್ಲಿಸ್ಟ್ ಅಂಡ್ ರನ್ನರ್ಸ್ ಫೌಂಡೇಶನ್‌ನ ಪ್ರಶಾಂತ ಶಾರಡ, ಸಂದೀಪ್ ಶರ್ಮಾ, ಎ.ಕೆ. ವೆಂಕಟೇಶ್ ಹಾಗೂ ವಿವಿಧ ಕಮಿಟಿಗಳ ಚೇರ್ಮನ್‌ಗಳು, ಇನ್ನಿತರರು ಹಾಜರಿದ್ದರು.

## ಆಲಮಟ್ಟಿ–ಯಾದಗಿರಿ ರೈಲು ಮಾರ್ಗ ಶೀಘ್ರ: ಭರವಸೆ

**ಯಾದಗಿರಿ, ಜೂ. 30:** ನೂತನವಾಗಿ ಅಧಿಕಾರ ಸ್ವೀಕರಿಸಿದ ನೈರುತ್ಯ ರೈಲ್ವೆ ನಿರ್ಮಾಣ ವಿಭಾಗದ ಮುಖ್ಯ ಆಡಳಿತಾಧಿಕಾರಿ ಅಭಯ್ ಕುಮಾರ ಗುಪ್ತಾ ಅವರನ್ನು, ರಾಯಚೂರು–ಯಾದಗಿರಿ ಲೋಕಸಭಾ ಕ್ಷೇತ್ರದ ಸಂಸದ ಜಿ.ಕುಮಾರ ನಾಯಕ ಅವರು ಬೆಂಗಳೂರಿನಲ್ಲಿ ಭೇಟಿ ಮಾಡಿ, ತಮ್ಮ ಕ್ಷೇತ್ರಕ್ಕೆ ಸಂಬಂಧಿಸಿದ ಹಲವು ಮಹತ್ವದ ರೈಲ್ವೆ ಯೋಜನೆಗಳ ಪ್ರಗತಿ ಹಾಗೂ ಅನುಷ್ಠಾನದ ಕುರಿತು ಸವಿಸ್ತಾರವಾಗಿ ಚರ್ಚಿಸಿದರು.

ಪ್ರಸ್ತಾವಿತ ಅಲಮಟ್ಟಿ–ಯಾದಗಿರಿ, ಗದಗ–ವಾಡಿ ಮತ್ತು ರಾಯಚೂರು–ಗಿಣಿಗೇರಾ ರೈಲು ಮಾರ್ಗದ ಅಂತಿಮ ಮಾರ್ಗ ನಿರ್ಧಾರ ಸಮೀಕ್ಷೆಗೆ ಸಂಬಂಧಿಸಿದ ಟೆಂಡರ್ ಪ್ರಕ್ರಿಯೆ ಕುರಿತು ಮಾತನಾಡಿದ ಅವರು, ರೈಲ್ವೆ ಮೂಲ ಸೌಕರ್ಯಗಳ ಬಲವರ್ಧನೆ ಹಾಗೂ ಭವಿಷ್ಯದ ಸಂಪರ್ಕ ಜಾಲ ವಿಸ್ತರಣೆಯ ಅಗತ್ಯತೆ ಈ ಯೋಜನೆಗಳು ಕಲ್ಯಾಣ ಕರ್ನಾಟಕ ಭಾಗದ ಸಮಗ್ರ ಅಭಿವೃದ್ಧಿಗೆ ಅತ್ಯಂತ ಮಹತ್ವದ್ದಾಗಿದ್ದು,



ಪ್ರದೇಶದ ಕೈಗಾರಿಕೆ, ಕೃಷಿ, ವ್ಯಾಪಾರ–ವಹಿವಾಟು ಹಾಗೂ ಉದ್ಯೋಗಾವಕಾಶಗಳ ವೃದ್ಧಿಗೆ ಪೂರಕವಾಗಲಿವೆ ಎಂದು ತಿಳಿಸಿದರು.

ಅಲ್ಲದೆ, ಈ ರೈಲು ಮಾರ್ಗಗಳು ಜನರ ಸಂಚಾರವನ್ನು ಸುಗಮಗೊಳಿಸುವುದರ ಜತೆಗೆ ಸರಕು ಸಾಗಣೆ ವ್ಯವಸ್ಥೆಯನ್ನು ಮತ್ತಷ್ಟು ಪರಿಣಾಮಕಾರಿಯಾಗಿಸಿ, ಹೂಡಿಕೆ ಮತ್ತು ಆರ್ಥಿಕ ಚಟುವಟಿಕೆಗಳಿಗೆ ಹೊಸ ಅವಕಾಶಗಳನ್ನು ಸೃಷ್ಟಿಸಲಿವೆ ಎಂದು ಮನವರಿಕೆ ಮಾಡಿದರು.ವಿಶೇಷವಾಗಿ, ದಶಕಗಳಿಂದ ಈ ಭಾಗದ ಜನರು ನಿರೀಸುತ್ತಿರುವ ರೈಲ್ವೆ ಯೋಜನೆಗಳನ್ನು ಆದ್ಯತೆ ಮೇರೆಗೆ ಕೈಗೆತ್ತಿಕೊಂಡು, ಅಗತ್ಯ ಆಡಳಿತಾತ್ಮಕ ಹಾಗೂ ತಾಂತ್ರಿಕ ಪ್ರಕ್ರಿಯೆಗಳನ್ನು ಶೀಘ್ರ ಪೂರ್ಣಗೊಳಿಸುವಂತೆ ಮನವಿ ಮಾಡಿದರು. ರೈಲ್ವೆ ಯೋಜನೆಗಳ ಪ್ರಗತಿಗೆ ಅಗತ್ಯ ಸಹಕಾರ ಮತ್ತು ಬೆಂಬಲ ನೀಡುವುದಾಗಿ ಅಭಯ್ ಕುಮಾರ ಗುಪ್ತಾ ಕೂಡ ಭರವಸೆ ನೀಡಿದ್ದಾರೆ ಎಂದು ಅವರು ಹೇಳಿದರು. ಯೋಜನೆಗಳ ಅನುಷ್ಠಾನ ಪ್ರಕ್ರಿಯೆಯನ್ನು ವೇಗಗೊಳಿಸಲು ಇಲಾಖೆಯ ಮಟ್ಟದಲ್ಲಿ ಅಗತ್ಯ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು. ಅವುಗಳ ಶೀಘ್ರ ಪೂರ್ಣಗೊಳಿಸುವಿಕೆಗಾಗಿ ನಿರಂತರವಾಗಿ ಪ್ರಯತ್ನಿಸಲಾಗುವುದು ಎಂದು ತಿಳಿಸಿದರು.



ರಾಯಚೂರು ನಗರದ ಹೊರವಲಯದಲ್ಲಿರುವ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ಜಿಲ್ಲಾಡಳಿತ ಹಾಗೂ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಆಶ್ರಯದಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳ ಪೂರ್ವ ತಯಾರಿ ತರಬೇತಿಗಾಗಿ ವಿನೂತನ ಕಲ್ಯಾಣ ಕಿರಣ ತರಬೇತಿ ಕೇಂದ್ರದ ಕುರಿತು ಅಮೂಲ್ಯ ಸಲಹೆ–ಸಹಕಾರವನ್ನು ನೀಡಲು ವಾಲ್ಮೀಕಿ ವಿವಿಯ ಪ್ರಾಧ್ಯಾಪಕರು, ಸಹ–ಪ್ರಾಧ್ಯಾಪಕರು ಹಾಗೂ ಅತಿಥಿ ಉಪನ್ಯಾಸಕರ ಸಭೆಯಲ್ಲಿ ಕುಲಸಚಿವ ಡಾ.ಎ.ಚನ್ನಪ್ಪ ಅವರು ಮಾತನಾಡಿದರು.

## ಬಂಜಾರ ವೇಷಭೂಷಣದಲ್ಲಿ 'ಮನ್ ಕಿ ಬಾತ್' ವೀಕ್ಷಿಸಿದ ಶಾಸಕ



**ಬೀದರ, ಜೂ. 30:** ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ 'ಮನ್ ಕಿ ಬಾತ್' ಕಾರ್ಯಕ್ರಮದ ನೇರ ಪ್ರಸಾರವನ್ನು ಭಾನುವಾರ ದೇಶದ 17 ಆಯ್ದ ಸ್ಥಳಗಳಲ್ಲಿ ಆಯೋಜಿಸಿದ್ದು, ಕರ್ನಾಟಕದಲ್ಲಿ ಬೀದರ್ ಜಿಲ್ಲೆಯ ಕಮಲನಗರದಲ್ಲಿ ನಡೆಯಿತು.

ಕಮಲನಗರ ಪಟ್ಟಣದ ಎಂ.ಎ.ಬಿರಾದಾರ ಫಂಕ್ಷನ್ ಹಾಲ್‌ನಲ್ಲಿ ನಡೆದ ಕಾರ್ಯಕ್ರಮದಲ್ಲಿ ಶಾಸಕ ಪ್ರಭು ಬಿ.ಚವಾಣ್ ಅವರು ತಲೆಯ ಮೇಲೆ ವಿಶೇಷ ಪೇಟಾ, ಧೋತಿ ಹಾಗೂ ಸಾಂಪ್ರದಾಯಿಕ ಬಂಜಾರ ಉಡುಗೆಯಲ್ಲಿ ಭಾಗವಹಿಸಿ ಪ್ರಧಾನ ಮಂತ್ರಿಯವರ ಮನ್ ಕಿ ಬಾತ್ ಕಾರ್ಯಕ್ರಮವನ್ನು ವೀಕ್ಷಿಸಿದರು.

ಈ ವೇಳೆ ಮಾತನಾಡಿದ ಅವರು, 'ಮನ್ ಕಿ ಬಾತ್' ಕಾರ್ಯಕ್ರಮವು ದೇಶದ ಜನರೊಂದಿಗೆ ಪ್ರಧಾನಮಂತ್ರಿಯವರು ನೇರವಾಗಿ ಸಂವಾದ ನಡೆಸುವ ವಿಶಿಷ್ಟ ವೇದಿಕೆಯಾಗಿದೆ. ಪ್ರತಿ ತಿಂಗಳು ವಿಭಿನ್ನ ವಿಷಯಗಳ ಕುರಿತು ದೇಶವಾಸಿಗಳೊಂದಿಗೆ ತಮ್ಮ ವಿಚಾರಗಳನ್ನು ಹಂಚಿಕೊಳ್ಳುವ ಮೂಲಕ ಜನರಲ್ಲಿ ಸಕಾರಾತ್ಮಕ ಚಿಂತನೆ ಮತ್ತು ರಾಷ್ಟ್ರಭಕ್ತಿಯ ಮನೋಭಾವ ಬೆಳೆಸುತ್ತಿರುವ ಏಕೈಕ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಾಗಿದ್ದಾರೆ'ಎಂದು ಹೇಳಿದರು.

'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ 'ಏಕ್ ಪೇಡ್ ಮಾ ಕೆ ನಾಮ್' ಅಭಿಯಾನದ ಮೂಲಕ ಪರಿಸರ ಸಂರಕ್ಷಣೆಯ ಮಹತ್ವವನ್ನು ಮತ್ತೊಮ್ಮೆ ಒತ್ತಿ ಹೇಳಿದ ಪ್ರಧಾನಮಂತ್ರಿಯವರು, ಅಂತರರಾಷ್ಟ್ರೀಯ ಯೋಗ ದಿನಾಚರಣೆಯ ಯಶಸ್ಸು, ದೇಶದ ವಿವಿಧ ಭಾಗಗಳಲ್ಲಿ ಜನರು ನಡೆಸುತ್ತಿರುವ ಜಲ ಸಂರಕ್ಷಣೆ, ಸ್ವಚ್ಛತೆ, ಮಹಿಳಾ ಸಬಲೀಕರಣ, ಯುವಕರ ಸಾಧನೆಗಳು ಹಾಗೂ 'ವೋಕಲ್ ಫಾರ್ ಲೋಕಲ್' ಮೂಲಕ ಸ್ವದೇಶಿ ಉತ್ಪನ್ನಗಳಿಗೆ ಬೆಂಬಲ ನೀಡುವಂತೆ ಜನತೆಗೆ ಕರೆ ನೀಡಿದರು.

ಬಿಜೆಪಿ ಜಿಲ್ಲಾಧ್ಯಕ್ಷ ಸೋಮನಾಥ ಪಾಟೀಲ, ಬಸವಕಲ್ಯಾಣ ಶಾಸಕ ಶರಣು ಸಲಗರ, ಮಾಜಿ ಶಾಸಕ ಪ್ರಕಾಶ ಖಂಡ್ರೆ, ಈಶ್ವರಸಿಂಗ್ ಠಾಕೂರ, ಮಂಡಲ ಅಧ್ಯಕ್ಷ ರಾಮಶೆಟ್ಟಿ ಪನ್ನಾಳೆ, ಜಿಲ್ಲಾ ಉಪಾಧ್ಯಕ್ಷ ಅರಹಂತ ಸಾವಳೆ, ಪ್ರಧಾನ ಕಾರ್ಯದರ್ಶಿಗಳಾದ ಕಿರಣ ಪಾಟೀಲ, ಪೀರಪ್ಪ ಔರಾದೆ, ಮುಖಂಡರಾದ ರಾಜಶೇಖರ ನಾಗಮೂರ್ತಿ, ಬಾಬು ವಾಲಿ, ವಸಂತ ಬಿರಾದಾರ, ಬಸವರಾಜ ಪಾಟೀಲ, ಸತೀಷ ಪಾಟೀಲ, ಶಿವಾಜಿರಾವ ಪಾಟಿಲ ಮುಂಗನಾಳ ಸೇರಿದಂತೆ, ಬಿಜೆಪಿ ಕಾರ್ಯಕರ್ತರು ಇತರರು ಕಾರ್ಯಕ್ರಮವನ್ನು ವೀಕ್ಷಿಸಿದರು.

## ಜಿಲ್ಲಾಧಿಕಾರಿಗಳಿಂದ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆಗೆ ಚಾಲನೆ

**ಕಲಬುರಗಿ, ಜೂ. 30:** ನಗರದ ಬ್ರಹ್ಮಪುರ ಬಡಾವಣೆಯ ನ್ಯೂ ರಾಘವೇಂದ್ರ ಕಾಲೊನಿಯಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆಯ (ಎಸ್‌ಐಆರ್) ಕಾರ್ಯದ ಭಾಗವಾಗಿ ಬಿಎಲ್‌ಒಗಳು ಮನೆ ಮನೆಗೆ ತೆರಳಿ ಮತದಾರರ ಮಾಹಿತಿ ಸಂಗ್ರಹಿಸುವ ಕಾರ್ಯಕ್ಕೆ ಜಿಲ್ಲಾಧಿಕಾರಿ ಇಕ್ರಂ ಶರೀಫ್ ಅವರು ಚಾಲನೆ ನೀಡಿದರು.

ಕಾಷ್ಠ ಶಿಲ್ಪದಲ್ಲಿ ರಾಷ್ಟ್ರೀಯ ಕರಕುಶಲ ಪ್ರಶಸ್ತಿ ಪುರಸ್ಕೃತರ ಕಲಾವಿದರಾದ ಚಂದ್ರಶೇಖರ ವೈ. ಶಿಲ್ಪಿ ಅವರ ಕುಟುಂಬದ ನಾಲ್ವರು ಸದಸ್ಯರಿಗೆ ಎಸ್‌ಐಆರ್ ನಮೂನೆಗಳನ್ನು ವಿತರಿಸಿ, ಅವರಿಂದ ಮಾಹಿತಿ ಪಡೆಯಲಾಯಿತು.

ಬಳಿಕ ಮಾತನಾಡಿದ ಜಿಲ್ಲಾಧಿಕಾರಿ ಇಕ್ರಂ ಶರೀಫ್, ಚಂದ್ರಶೇಖರ ಶಿಲ್ಪಿ ಬಸವ ಮನೆಯಿಂದ ಬಿಎಲ್‌ಒಗಳ ಮನೆಮನೆ ಭೇಟಿ ಅಧಿಕೃತವಾಗಿ ಆರಂಭವಾಗಿದೆ. ಜಿಲ್ಲೆಯಲ್ಲಿ 2400 ಮತಗಟ್ಟೆಗಳಿದ್ದು, ಆ ಮತಗಟ್ಟೆಗಳ ಎಲ್ಲ ಬಿಎಲ್‌ಒಗಳಿಗೆ ಎರಡು ಹಂತದ ತರಬೇತಿ ನೀಡಲಾಗಿದೆ.

ಜೂನ್ 30ರಿಂದ ಬಿಎಲ್‌ಒಗಳು ಮನೆಮನೆಗೆ ಭೇಟಿ ನೀಡಿ ಎಸ್‌ಐಆರ್ ನಮೂನೆಗಳನ್ನು ವಿತರಿಸಿ, ಅವುಗಳನ್ನು ಭರ್ತಿ ಮಾಡಿಸಿಕೊಂಡು ಪಡೆಯುವ ಕೆಲಸ ಆರಂಭಿಸಿದ್ದಾರೆ.

ಮೊದಲಿಗೆ ಮನೆಮನೆಗೆ ಅರ್ಜಿಗಳನ್ನು ವಿತರಿಸಲು ಆದ್ಯತೆ ನೀಡಲಾಗುವುದು. ಬಳಿಕ ಭರ್ತಿ ಮಾಡಿದ ಅರ್ಜಿಗಳನ್ನು ಪಡೆದು ಆನ್ ಲೈನ್ ನಲ್ಲಿ ಅಪಲೋಡ್ ಮಾಡುವ ಕಾರ್ಯ ನಡೆಯಲಿದೆ. ಈ ಪ್ರಕ್ರಿಯೆಯು ಒಂದು ತಿಂಗಳ ಕಾಲ ನಡೆಯಲಿದೆ. ಜಿಲ್ಲೆಯಲ್ಲಿ ಹೊಸ ಮತದಾರರ ನೋಂದಣಿ ಎಂದಿನಂತೆ ಫಾರಂ ನಂಬರ್ 6 ತುಂಬುವ ಮೂಲಕ ನಡೆಯಲಿದೆ. ಜಿಲ್ಲೆಯ ಯಾವುದೇ ಅರ್ಹ ಮತದಾರರು ಮತದಾರರ ಪಟ್ಟಿಯಿಂದ ಹೊರಗೆ ಉಳಿದಂತೆ ಕ್ರಮವಹಿಸಲಾಗಿದೆ ಎಂದರು.

ಜಿಲ್ಲೆಯಲ್ಲಿ ಈಗಾಗಲೇ ಶೇ 95ರಷ್ಟು ಮ್ಯಾಪಿಂಗ್ ಕಾರ್ಯ ಮುಗಿದಿದೆ ಎಂದು ಪ್ರಶ್ನೆಯೊಂದಕ್ಕೆ ಜಿಲ್ಲಾಧಿಕಾರಿ ಉತ್ತರಿಸಿದರು.



ಕಲಬುರಗಿಯ ಬ್ರಹ್ಮಪುರ ಬಡಾವಣೆಯ ನ್ಯೂ ರಾಘವೇಂದ್ರ ಕಾಲೋನಿ ನಿವಾಸಿ ರಾಷ್ಟ್ರಪ್ರಶಸ್ತಿ ಪುರಸ್ಕೃತ ಕಾಷ್ಠಶಿಲ್ಪಿ ಚಂದ್ರಶೇಖರ ಅವರ ಕುಟುಂಬದ ಸದಸ್ಯರಿಗೆ ಎಸ್‌ಐಆರ್ ನಮೂನೆಗಳನ್ನು ನೀಡುವ ಮೂಲಕ ಮಾಹಿತಿ ಪಡೆದು ಜಿಲ್ಲಾಧಿಕಾರಿ ಇಕ್ರಂ ಶರೀಫ್ ಅವರು ಎಸ್‌ಐಆರ್‌ಗೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಸಿಇಒ ರಾಹುಲ್ ಸಂಕನೂರ, ಪಾಲಿಕೆ ಆಯುಕ್ತ ಅವಿನಾಶ ಶಿಂದೆ, ಹೆಚ್ಚುವರಿ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಕಲಬುರಗಿ ತಹಶೀಲ್ದಾರ್ ಆನಂದಶೀಲ್, ಪಾಲಿಕೆ ಉಪ ಆಯುಕ್ತೆ ಪ್ರಮಿಳಾ, ಬಿಎಲ್‌ಒ ಸಂಗೀತಾ, ಸೂಪರ್‌ವೈಸರ್ ಸೂರ್ಯಕಾಂತ ಸೇರಿದಂತೆ ಹಲವರು ಅಧಿಕಾರಿಗಳು ಇದ್ದರು.

# ನೀರು ತಡೆದರೆ ಕೈ ಕತ್ತರಿಸುತ್ತೇವೆ: ಭಾರತಕ್ಕೆ ಪಾಕ್ ಬೆದರಿಕೆ

**ಇಸ್ಲಾಮಾಬಾದ್, ಜೂ.30:** ಭಾರತದ ವಿರುದ್ಧ ಸದಾ ಕಿಡಿ ಕಾರುವ ಪಾಕಿಸ್ತಾನ ಇದೀಗ ಸಿಂಧೂನದಿ ನೀರು ಹಂಚಿಕೆ ಒಪ್ಪಂದದ ವಿಚಾರವಾಗಿ ಮತ್ತೊಮ್ಮೆ ಪ್ರಚೋದನಾಕಾರಿ ಹೇಳಿಕೆ ನೀಡಿದೆ. ಇಸ್ಲಾಮಾಬಾದ್‌ನಲ್ಲಿ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಪಾಕಿಸ್ತಾನದ ಹವಾಮಾನ ಬದಲಾವಣೆ ಸಚಿವ ಮುಸಾದಿಕ್ ಮಲಿಕ್, ಸಿಂಧೂನದಿ ನೀರು ಹಂಚಿಕೆ ಒಪ್ಪಂದದ ಅಡಿಯಲ್ಲಿ ಪಾಕಿಸ್ತಾನಕ್ಕೆ ಬರಬೇಕಾದ ನೀರಿನ ಪಾಲನ್ನು ಯಾರಾದರೂ ಕಸಿದುಕೊಳ್ಳಲು ಬಂದರೆ, ಅಂತಹವರ ಕೈಗಳನ್ನು ನಾವು ಕತ್ತರಿಸುತ್ತೇವೆ ಎಂದು ಭಾರತದ ಹೆಸರು ಉಲ್ಲೇಖಿಸದೆ ಬೆದರಿಕೆ ಹಾಕಿದ್ದಾರೆ.

ಕಳೆದ ವರ್ಷ (2025) ಜಮ್ಮು–ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭೀಕರ ಭಯೋತ್ಪಾದನಾ ದಾಳಿಯ ಬಳಿಕ ಭಾರತವು ಈ ಒಪ್ಪಂದವನ್ನು ಅಮಾನತುಗೊಳಿಸಿರುವುದಕ್ಕೆ ಪಾಕಿಸ್ತಾನ ಈ ರೀತಿ ಹತಾಶೆಯಿಂದ ಪ್ರತಿಕ್ರಿಯಿಸಿದೆ.

ಭಾರತದ ಪ್ರಧಾನಿ ನರೇಂದ್ರ ಮೋದಿ ಅವರ ನಿಲುವನ್ನು ಪರೋಕ್ಷವಾಗಿ ಟೀಕಿಸಿದ ಮುಸಾದಿಕ್ ಮಲಿಕ್, ನೆರೆ ದೇಶದ ಪ್ರಧಾನಿಯವರ ಕೈಯಲ್ಲಿ ಒಂದು ನಲ್ಲಿ (ಟ್ಯಾಪ್) ಇದೆ. ಅವರು ಪಾಕಿಸ್ತಾನಕ್ಕೆ ಒಂದು ಹನಿ ನೀರನ್ನೂ ಬಿಡುವುದಿಲ್ಲ



ಎಂದು ಹೇಳುತ್ತಿದ್ದಾರೆ. ನಮ್ಮ ದೇಶದ ಶೇ 40 ರಿಂದ 50 ರಷ್ಟು ಜನಸಂಖ್ಯೆ ಜೀವನಕ್ಕಾಗಿ ಕೃಷಿಯನ್ನೇ ಅವಲಂಬಿಸಿದೆ. ಯಾರೋ ಒಬ್ಬರು ನಮ್ಮ ದೇಶದ ಆಹಾರ ಭದ್ರತೆ, ಶೇ 50 ರಷ್ಟು ಉದ್ಯೋಗ ಮತ್ತು ಶೇ 25 ರಷ್ಟು ಆರ್ಥಿಕತೆಯನ್ನು ನಿಯಂತ್ರಿಸಲು ನೋಡುತ್ತಿದ್ದಾರೆ. ಜಾಗತಿಕವಾಗಿ ಕೆಳಮಟ್ಟದ ಜಲಾನಯನ ಪ್ರದೇಶದ ದೇಶಗಳ ಹಕ್ಕಿನ ಬಗ್ಗೆ ಅಂತಾರಾಷ್ಟ್ರೀಯ ವೇದಿಕೆಯಲ್ಲಿ ನಾವು ನಾಳೆ ಪ್ರಶ್ನೆ ಮಾಡಲಿದ್ದೇವೆ ಎಂದು ಕಿಡಿಕಾರಿದ್ದಾರೆ. ಇದೇ ವೇಳೆ, ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಪಾಕಿಸ್ತಾನದ ಮಾಹಿತಿ ಸಚಿವ ಅತಾವುಲ್ಲಾ ತರಾರ್, ಸಿಂಧೂನದಿ ನೀರು ಹಂಚಿಕೆ ಒಪ್ಪಂದವು ಕಾನೂನುಬದ್ಧವಾಗಿದೆ. ಇದನ್ನು ಭಾರತ ಏಕಪಕ್ಷೀಯವಾಗಿ ರದ್ದುಗೊಳಿಸಲು ಅಥವಾ ತಿದ್ದುಪಡಿ ಮಾಡಲು ಸಾಧ್ಯವಿಲ್ಲ ಎಂದು ವಾದಿಸಿದ್ದಾರೆ. ಅಲ್ಲದೆ, ಪಾಕಿಸ್ತಾನದ ಪ್ರಧಾನಿ ಮತ್ತು ಸೇನಾ ಮುಖ್ಯಸ್ಥ ಫೀಲ್ಡ್ ಮಾರ್ಷಲ್ ಆಸಿಮ್ ಮುನೀರ್ ನೀರು ನಮ್ಮ ಜೀವನಾಡಿ ಮತ್ತು ನಮ್ಮ ರೆಡ್ ಲೈನ್ ಎಂದು ಹಲವು ಬಾರಿ ಸ್ಪಷ್ಟಪಡಿಸಿದ್ದಾರೆ ಎಂದು ಅವರು ನೆನಪಿಸಿದ್ದಾರೆ.

ಇತ್ತೀಚೆಗಷ್ಟೇ ಭಾರತದ ಕೇಂದ್ರ ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್ ಸಿಂಧೂ ನದಿಯಲ್ಲಿ ಭಾರತದ ಪಾಲಿನ ಸಂಪೂರ್ಣ ನೀರನ್ನು ಮುಂದಿನ ಒಂದೂವರೆಯಿಂದ ಎರಡು ವರ್ಷಗಳಲ್ಲಿ ದೇಶದ ಜನರಿಗಾಗಿಯೇ ಪೂರ್ಣ ಪ್ರಮಾಣದಲ್ಲಿ ಬಳಸಿಕೊಳ್ಳಲಾಗುವುದು ಮತ್ತು ಭಾರತದ ಪಾಲಿನ ಒಂದು ಹನಿ ನೀರೂ ಪಾಕಿಸ್ತಾನಕ್ಕೆ ಹರಿಯದಂತೆ ತಡೆಯಲಾಗುವುದು ಎಂದು ಸ್ಪಷ್ಟಪಡಿಸಿದ್ದರು. 2025ರ ಏಪ್ರಿಲ್‌ನಲ್ಲಿ ಪಹಲ್ಗಾಮ್‌ನಲ್ಲಿ ನಡೆದ ಉಗ್ರರ ದಾಳಿಯಲ್ಲಿ 26 ಮಂದಿ ನಾಗರಿಕರು ಹತರಾದ ನಂತರ, ಭಾರತವು 1960ರ ಸಿಂಧೂ ನದಿ ನೀರು ಹಂಚಿಕೆ ಒಪ್ಪಂದವನ್ನು ಅಮಾನತುಗೊಳಿಸಿದೆ. ಪಾಕಿಸ್ತಾನ ತನ್ನ ನೆಲದಲ್ಲಿರುವ ಭಯೋತ್ಪಾದನಾ ಜಾಲವನ್ನು ಸಂಪೂರ್ಣವಾಗಿ ಧ್ವಂಸಗೊಳಿಸುವವರೆಗೂ ಈ ಒಪ್ಪಂದವನ್ನು ಪುನರಾರಂಭಿಸುವುದಿಲ್ಲ ಎಂದು ಭಾರತ ಕಠಿಣ ನಿಲುವು ತಳೆದಿದೆ.

# ದೋಹಾ ಮಾತುಕತೆ ಕುರಿತು ಅಮೆರಿಕ, ಇರಾನ್ ಸಂಘರ್ಷದ ಸಂಕೇತ

**ದೋಹಾ/ಟೆಹ್ರಾನ್, ಜೂಮ30:** ಅಮೆರಿಕ ಮತ್ತು ಇರಾನ್ ನಡುವಿನ ಮಾತುಕತೆಗಳು ಮಂಗಳವಾರ ಕತಾರ್‌ನಲ್ಲಿ ನಡೆಯಲಿವೆ ಎಂದು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ, ಆದರೆ ಮುಂಬರುವ ದಿನಗಳಲ್ಲಿ ವಾಷಿಂಗ್ಟನ್ ಜೊತೆ ಯಾವುದೇ ಮಾತುಕತೆಗಳನ್ನು ನಿಗದಿಪಡಿಸಲಾಗಿಲ್ಲ ಎಂದು ಟೆಹ್ರಾನ್ ಒತ್ತಾಯಿಸಿದ್ದಾರೆ. ಟ್ರಂಪ್ ತಮ್ಮ ವಿಶೇಷ ರಾಯಭಾರಿ ಸ್ಟೀವ್ ವಿಟ್ಕಾಫ್ ಮತ್ತು ಮಾಜಿ ಹಿರಿಯ ಸಲಹೆಗಾರ ಜೇರೆಡ್ ಕುಶ್ನರ್ ಚರ್ಚೆಗಾಗಿ ಕತಾರ್ ರಾಜಧಾನಿಗೆ ಪ್ರಯಾಣಿಸುತ್ತಿದ್ದಾರೆ ಎಂದು ಹೇಳಿದರು, ಆದರೆ ತಾಂತ್ರಿಕ ಮಟ್ಟದ ಮಾತುಕತೆಗಳು ಪಕ್ಕಕ್ಕೆ ಮುಂದುವರಿಯುತ್ತವೆ. ಸೋಮವಾರ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಇರಾನ್ ಸಭೆಯನ್ನು ಕೋರಿದೆ ಮತ್ತು ಅದು ಯಾವುದೇ ವಿವರಗಳನ್ನು ನೀಡದೆ ಕತಾರ್ ರಾಜಧಾನಿಯಲ್ಲಿ ನಡೆಯಲಿದೆ ಎಂದು ಟ್ರಂಪ್ ಹೇಳಿದ್ದಾರೆ. ದುರ್ಬಲವಾದ ಕದನ ವಿರಾಮವನ್ನು ವಿಶಾಲ ಒಪ್ಪಂದವನ್ನಾಗಿ ಪರಿವರ್ತಿಸುವ ಗುರಿಯನ್ನು ಹೊಂದಿರುವ ಮಾತುಕತೆಗಳನ್ನು ಮುಂದುವರಿಸಲು ವಾಷಿಂಗ್ಟನ್ ಪ್ರಯತ್ನಿಸುತ್ತಿರುವಾಗ ವಿಟ್ಕಾಫ್ ಮತ್ತು ಕುಶ್ನರ್ ದೋಹಾಗೆ ತೆರಳುತ್ತಿದ್ದಾರೆ ಎಂದು ಅಮೆರಿಕದ ಇಬ್ಬರು ಅಧಿಕಾರಿಗಳು ದೃಢಪಡಿಸಿದರು. ಆದಾಗ್ಯೂ, ಇರಾನ್ನ ವಿದೇಶಾಂಗ ಸಚಿವಾಲಯದ ವಕ್ತಾರ ಎಸ್ಮಾಯಿಲ್ ಬಘೈ ಅವರು ಸನ್ನಿಹಿತ ಮಾತುಕತೆಗಳ ವರದಿಗಳನ್ನು ತಿರಸ್ಕರಿಸಿದರು, ಮುಂಬರುವ ದಿನಗಳಲ್ಲಿ ಅಮೆರಿಕದೊಂದಿಗೆ ಯಾವುದೇ ಮಟ್ಟದಲ್ಲಿ ಯಾವುದೇ ಮಾತುಕತೆಗಳನ್ನು



ನಿಗದಿಪಡಿಸಲಾಗಿಲ್ಲ ಎಂದು ಹೇಳಿದರು. "ಅಮೆರಿಕದ ಪ್ರತಿನಿಧಿಗಳು ಕತಾರ್ಗೆ ಪ್ರಯಾಣಿಸುವ ವಿಷಯವು ನೆರೆಯ ದೇಶಕ್ಕೆ ಇರಾನ್ ನಿಯೋಗದ ಭೇಟಿಗೆ ಯಾವುದೇ ಸಂಬಂಧವನ್ನು ಹೊಂದಿಲ್ಲ" ಎಂದು ಬಘೈ ಟೆಹ್ರಾನ್‌ನಲ್ಲಿ ವರದಿಗಾರರಿಗೆ ತಿಳಿಸಿದರು. ಸಂಘರ್ಷದ ಹೇಳಿಕೆಗಳು ಎರಡೂ ಕಡೆಯ ನಡುವಿನ ಆಳವಾದ ಅಪನಂಬಿಕೆಯನ್ನು ಒತ್ತಿಹೇಳುತ್ತವೆ ಮತ್ತು ಈಗಾಗಲೇ ದುರ್ಬಲವಾಗಿರುವ ಕದನ ವಿರಾಮವನ್ನು ತಗ್ಗಿಸಿದ ಇತ್ತೀಚಿನ ಮಿಲಿಟರಿ ವಿನಿಮಯದ ನಂತರ ವಿಶಾಲ ಒಪ್ಪಂದಕ್ಕಾಗಿ 60 ದಿನಗಳ ಗಡುವನ್ನು ಪೂರೈಸುವ ಸಾಧ್ಯತೆಗಳ ಬಗ್ಗೆ ಪ್ರಶ್ನೆಗಳನ್ನು ಹುಟ್ಟುಹಾಕಿದವು. ಇರಾನ್ ಮತ್ತು ಅಮೆರಿಕ ಇನ್ನೂ ಅಂತಿಮ ಒಪ್ಪಂದದ ಹಂತವನ್ನು ತಲುಪಿಲ್ಲ ಮತ್ತು ಇತ್ತೀಚಿನ ಮಧ್ಯಸ್ಥಿಕೆ ಪ್ರಯತ್ನಗಳ ನಂತರ ತಲುಪಿದ ತಿಳುವಳಿಕೆ ಪತ್ರದಲ್ಲಿ ಈಗಾಗಲೇ ವಿವರಿಸಿರುವ ಬದ್ಧತೆಗಳ ಅನುಷ್ಠಾನವನ್ನು ಖಚಿತಪಡಿಸಿಕೊಳ್ಳುವುದು ಟೆಹ್ರಾನ್‌ನ ತಕ್ಷಣದ ಆದ್ಯತೆಯಾಗಿದೆ ಎಂದು ಬಘೈ ಹೇಳಿದರು. "ಜ್ಞಾಪಕ ಪತ್ರದ ಷರತ್ತು 13 ರ ಅಡಿಯಲ್ಲಿ, ಷರತ್ತು 1, 4, 5, 10 ಮತ್ತು 11 ರ ಅನುಷ್ಠಾನ ಪ್ರಾರಂಭವಾದ

> **ಅಮೆರಿಕ ತನ್ನ ಬಾಧ್ಯತೆಗಳನ್ನು ಪೂರೈಸಿದರೆ, ಇರಾನ್ ಒಪ್ಪಂದಕ್ಕೆ ಬದ್ಧವಾಗಿರುತ್ತದೆ" ಎಂದು ಪೆಜೆಶ್ಕಿಯಾನ್ ಹೇಳಿದರು, ಟೆಹ್ರಾನ್ ತನ್ನ ಹಿತಾಸಕ್ತಿಗಳನ್ನು ಕಾಪಾಡಿಕೊಳ್ಳಲು ಹಿಂಜರಿಯುವುದಿಲ್ಲ ಎಂದು ಒತ್ತಿ ಹೇಳಿದರು. – ಅಧ್ಯಕ್ಷ ಮಸೌದ್ ಪೆಜೆಶ್ಕಿಯಾನ್. ಕತಾರ್ನಲ್ಲಿ ಇರಿಸಲಾಗಿರುವ ಇರಾನ್‌ನ 12 ಶತಕೋಟಿ ಹೆಪ್ಪುಗಟ್ಟಿದ ಆಸ್ತಿಗಳಲ್ಲಿ ಅರ್ಧದಷ್ಟು ಭಾಗವನ್ನು ಟೆಹ್ರಾನ್‌ಗೆಹಿಂತಿರುಗಿಸಲಾಗುವುದು ಎಂದು ಇರಾನಿನ ಅಧ್ಯಕ್ಷರು ಹೇಳಿದರು, ಇದು ನಡೆಯುತ್ತಿರುವ ರಾಜತಾಂತ್ರಿಕ ಪ್ರಯತ್ನಗಳ ಪ್ರಮುಖ ಅಂಶವಾಗಿದೆ ಮತ್ತು ಅಮೆರಿಕ ಅಧಿಕಾರಿಗಳು ವಿಭಿನ್ನ ಮೌಲ್ಯಮಾಪನ ನೀಡಿದ್ದಾರೆ.**

ನಂತರವೇ ಅಂತಿಮ ಒಪ್ಪಂದದ ಕುರಿತು ಮಾತುಕತೆಗಳು ಪ್ರಾರಂಭವಾಗಬಹುದು" ಎಂದು ಅವರು ಹೇಳಿದರು. ಬಘೈ ಪ್ರಕಾರ, ವಾಷಿಂಗ್ಟನ್ ಇರಾನಿನ ತೈಲ ಮಾರಾಟಕ್ಕೆ ಸಂಬಂಧಿಸಿದ ಷರತ್ತು 10ಗೆ ಸಂಬಂಧಿಸಿದ ಪರವಾನಗಿಗಳನ್ನು ನೀಡಿದೆ, ಆದರೆ ಟೆಹ್ರಾನ್ ಹೆಪ್ಪುಗಟ್ಟಿದ ಇರಾನಿನ ಸ್ವತ್ತುಗಳ ಬಿಡುಗಡೆಗೆ ಸಂಬಂಧಿಸಿದ ಷರತ್ತು 11 ರ ಅನುಷ್ಠಾನವನ್ನು ಸಹ ಅನುಸರಿಸುತ್ತಿದೆ. "ಈ ಸಂದರ್ಭದಲ್ಲಿ, ಈ ವಾರದ ಕೊನೆಯಲ್ಲಿ ಇರಾನಿನ ಪರಿಣಿತ ನಿಯೋಗವು ದೋಹಾಕ್ಕೆ ಪ್ರಯಾಣಿಸಲಿದೆ" ಎಂದು ಅವರು ಹೇಳಿದರು, ಕತಾರ್‌ಗೆ ಅಮೆರಿಕದ ಯಾವುದೇ ಭೇಟಿಯು ಇರಾನಿನ ತಂಡದ ಪ್ರವಾಸಕ್ಕೆ ಸಂಬಂಧಿಸಿಲ್ಲ ಎಂದು ಪುನರುಚ್ಚರಿಸಿದರು.

ಕರ್ನಾಟಕ ಮಾಧ್ಯಮ ಅಕಾಡೆಮಿ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ
ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ
ಸಂಯುಕ್ತ ಆಶ್ರಯದಲ್ಲಿ

ಪತ್ರಿಕಾ ದಿನಾಚರಣೆ 2026

1 ಜುಲೈ 2026 । ಸಮಯ: ಬೆಳಗ್ಗೆ 11:00 ಗಂಟೆಗೆ । ಮಹಾದೇವ ದೇಸಾಯಿ ಸಭಾಂಗಣ, ಗಾಂಧೀ ಭವನ, ಬೆಂಗಳೂರು.

ಉದ್ಘಾಟನೆ ಹಾಗೂ ಅಕಾಡೆಮಿಯ ವಾರ್ಷಿಕ ವರದಿ ಬಿಡುಗಡೆ
ಶ್ರೀ ಡಿ.ಕೆ. ಶಿವಕುಮಾರ್
ಮಾನ್ಯ ಮುಖ್ಯಮಂತ್ರಿಗಳು । ಕರ್ನಾಟಕ ಸರ್ಕಾರ

ಮುಖ್ಯ ಅತಿಥಿಗಳು
ಶ್ರೀ ಪಿ. ಸಿ. ಮೋಹನ್, ಮಾನ್ಯ ಸಂಸದರು । ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರ
ಶ್ರೀ ಕೆ. ಶ್ರೀನಿವಾಸ ರೆಡ್ಡಿ, ಅಧ್ಯಕ್ಷರು, ತೆಲಂಗಾಣ ಮಾಧ್ಯಮ ಅಕಾಡೆಮಿ, ತೆಲಂಗಾಣ

ಅಧ್ಯಕ್ಷತೆ: ಶ್ರೀ ದಿನೇಶ್ ಗುಂಡೂ ರಾವ್
ಮಾನ್ಯ ಶಾಸಕರು । ಗಾಂಧಿ ನಗರ ವಿಧಾನಸಭಾ ಕ್ಷೇತ್ರ

ಪ್ರಧಾನ ಭಾಷಣ: ಶ್ರೀ ಅಬ್ದುಸ್ಸಲಾಂ ಪುತ್ತಿಗೆ
ಹಿರಿಯ ಪತ್ರಕರ್ತರು । ವಾರ್ತಾ ಭಾರತಿ

ಪ್ರಾಸ್ತಾವಿಕ ನುಡಿ : ಶ್ರೀಮತಿ ಆಯೇಶಾ ಖಾನಂ
ಅಧ್ಯಕ್ಷರು । ಕರ್ನಾಟಕ ಮಾಧ್ಯಮ ಅಕಾಡೆಮಿ

ಗೌರವ ಉಪಸ್ಥಿತಿ
ಶ್ರೀ ಎಂ.ಎನ್. ಅನುಚೇತ್ ಭಾ.ಪೊ.ಸೇ
ಮಾನ್ಯ ಆಯುಕ್ತರು । ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ಶ್ರೀ ವೂಡೇ ಪಿ. ಕೃಷ್ಣ
ಅಧ್ಯಕ್ಷರು । ಗಾಂಧಿ ಸ್ಮಾರಕ ನಿಧಿ, ಬೆಂಗಳೂರು
ಶ್ರೀ ಶಿವಾನಂದ ತಗಡೂರು
ರಾಜ್ಯಾಧ್ಯಕ್ಷರು । ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ
ಡಾ. ಆರ್. ಪೂರ್ಣಿಮಾ
ಅಧ್ಯಕ್ಷರು । ಕರ್ನಾಟಕ ಪತ್ರಕರ್ತೆಯರ ಸಂಘ

ಸರ್ವರಿಗೂ ಆದರದ ಸ್ವಾಗತ

ಜಿ. ಸಿ. ಲೋಕೇಶ
ಪ್ರಧಾನ ಕಾರ್ಯದರ್ಶಿ
ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ

ಸಹನಾ ಎಂ.
ಕಾರ್ಯದರ್ಶಿ
ಕರ್ನಾಟಕ ಮಾಧ್ಯಮ ಅಕಾಡೆಮಿ

# ಭಾರತ, ಥೈಲ್ಯಾಂಡ್ ಕಾರ್ಯತಂತ್ರದ ಪಾಲುದಾರಿಕೆ ಬಲವರ್ಧನೆ

**ಬ್ಯಾಂಕಾಕ್, ಜೂ.30:** ಭಾರತ ಮತ್ತು ಥೈಲ್ಯಾಂಡ್ ಮಂಗಳವಾರ ತಮ್ಮ ಕಾರ್ಯತಂತ್ರದ ಪಾಲುದಾರಿಕೆಯನ್ನು ಬಲಪಡಿಸುವ ಮಾರ್ಗಗಳನ್ನು ಚರ್ಚಿಸಿದವು, ದ್ವಿಪಕ್ಷೀಯ ವ್ಯಾಪಾರ ಮತ್ತು ಹೂಡಿಕೆಯನ್ನು ವಿಸ್ತರಿಸುವುದು, ಸಂಪರ್ಕ ಉಪಕ್ರಮಗಳು ಮತ್ತು ಪ್ರಾದೇಶಿಕ ವಿಷಯಗಳ ಕುರಿತು ಹೆಚ್ಚಿನ ಸಮನ್ವಯವನ್ನು ಕೇಂದ್ರೀಕರಿಸಿದವು. ಥೈಲ್ಯಾಂಡ್‌ನ ಭಾರತದ ರಾಯಭಾರಿ ಪುನೀತ್ ಅಗರ್ವಾಲ್ ಬ್ಯಾಂಕಾಕ್ನಲ್ಲಿ ಥಾಯ್ ಉಪ ಪ್ರಧಾನ ಮಂತ್ರಿ ಮತ್ತು ವಿದೇಶಾಂಗ ಸಚಿವ ಸಿಹಾಸಕ್ ಫುವಾಂಗ್ಕೆಟ್ಕಿಯೋವ್ ಅವರೊಂದಿಗೆ ಸಭೆ ನಡೆಸಿದರು, ಅಲ್ಲಿ ಎರಡೂ ಕಡೆಯವರು ದ್ವಿಪಕ್ಷೀಯ ಸಂಬಂಧಗಳಲ್ಲಿನ ಪ್ರಗತಿಯನ್ನು ಪರಿಶೀಲಿಸಿದರು ಮತ್ತು ಆರ್ಥಿಕ ಸಹಕಾರವನ್ನು ಗಾಢಗೊಳಿಸುವ ಮಾರ್ಗಗಳನ್ನು ಅನ್ವೇಷಿಸಿದರು. "ಧಾರ್ಮಿಕ, ಸಾಂಸ್ಕೃತಿಕ ಮತ್ತು ಜನರಿಂದ ಜನರ ಸಂಪರ್ಕಗಳು, ಸಂಪರ್ಕ ಉಪಕ್ರಮಗಳು ಮತ್ತು ಪ್ರಾದೇಶಿಕ ವಿಷಯಗಳ ಕುರಿತು ಹೆಚ್ಚಿನ ಸಮನ್ವಯದೊಂದಿಗೆ ಸಮತೋಲಿತ ರೀತಿಯಲ್ಲಿ ದ್ವಿಪಕ್ಷೀಯ ವ್ಯಾಪಾರ ಮತ್ತು ಹೂಡಿಕೆ ಸಂಬಂಧಗಳನ್ನು ಹೆಚ್ಚಿಸುವ ಮೂಲಕ ಭಾರತ–ಥೈಲ್ಯಾಂಡ್ ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವತ್ತ ಚರ್ಚೆಗಳು ಗಮನಹರಿಸಿದವು" ಎಂದು ರಾಯಭಾರ ಕಚೇರಿ ತಿಳಿಸಿದೆ. ಕಳೆದ ವರ್ಷ ಏಪ್ರಿಲ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿಯವರ



ಬ್ಯಾಂಕಾಕ್ ಭೇಟಿಯ ಸಮಯದಲ್ಲಿ ಭಾರತ ಮತ್ತು ಥೈಲ್ಯಾಂಡ್ ತಮ್ಮ ಸಂಬಂಧವನ್ನು ಕಾರ್ಯತಂತ್ರದ ಪಾಲುದಾರಿಕೆಗೆ ಏರಿಸಿದವು. ನವದೆಹಲಿ ಮತ್ತು ಬ್ಯಾಂಕಾಕ್ ವ್ಯಾಪಾರ, ರಕ್ಷಣೆ, ಸಂಪರ್ಕ, ಪ್ರವಾಸೋದ್ಯಮ, ಶಿಕ್ಷಣ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ ಸೇರಿದಂತೆ ಕ್ಷೇತ್ರಗಳಲ್ಲಿ ಸಹಕಾರವನ್ನು ಕಾಯ್ದುಕೊಂಡಿವೆ. ಥೈಲ್ಯಾಂಡ್‌ನ "ಆಕ್ಟ್ ವೆಸ್ಟ್" ನೀತಿಯು ಭಾರತದ "ಆಕ್ಟ್ ಈಸ್ಟ್" ನೀತಿಗೆ ಪೂರಕವಾಗಿದೆ ಎಂದು ರಾಯಭಾರ ಕಚೇರಿ ಹೇಳಿದೆ. ಪ್ರಧಾನಿ ನರೇಂದ್ರ ಮೋದಿ ಅವರು ಥೈಲ್ಯಾಂಡ್ ಪ್ರಧಾನಿ ಅನುತಿನ್ ಚಾರ್ನ್ವಿರಕುಲ್ ಅವರನ್ನು ಆಯ್ಕೆ ಮಾಡಿದ್ದಕ್ಕಾಗಿ ಅಭಿನಂದಿಸಿದ್ದರು ಮತ್ತು ಐತಿಹಾಸಿಕ ಮತ್ತು ಸಾಂಸ್ಕೃತಿಕ ಸಂಪರ್ಕಗಳಲ್ಲಿ ಬೇರೂರಿರುವ ದ್ವಿಪಕ್ಷೀಯ ಸಂಬಂಧಗಳನ್ನು ಮತ್ತಷ್ಟು ಬಲಪಡಿಸಲು ನಿಕಟವಾಗಿ ಕೆಲಸ ಮಾಡಲು ಸಿದ್ಧತೆಯನ್ನು ವ್ಯಕ್ತಪಡಿಸಿದರು. ಇತ್ತೀಚೆಗೆ, ಜೂನ್ 16 ರಂದು ಬ್ಯಾಂಕಾಕ್‌ನಲ್ಲಿ 10 ನೇ ಥೈಲ್ಯಾಂಡ್–ಭಾರತ ರಕ್ಷಣಾ ಸಂವಾದವು ಬ್ಯಾಂಕಾಕ್‌ನಲ್ಲಿ ನಡೆಯಿತು, ಇದು ದ್ವಿಪಕ್ಷೀಯ ರಕ್ಷಣಾ ಸಹಕಾರದ ಸಂಪೂರ್ಣ ವರ್ಣಪಟಲವನ್ನು ಪರಿಶೀಲಿಸಲು ಮತ್ತು ಪರಸ್ಪರ ಆಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ಭದ್ರತಾ ವಿಷಯಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲು ನಡೆಯಿತು. ಈ ಸಂವಾದವನ್ನು ಥೈಲ್ಯಾಂಡ್ನ ರಕ್ಷಣಾ ಉಪ ಕಾಯಂ ಕಾರ್ಯದರ್ಶಿ ಅಡ್ಮಿರಲ್ ನಟ್ಟಪೋಲ್ ಡೀವ್ವಾನಿಚ್ ಮತ್ತು ಭಾರತ ಸರ್ಕಾರದ ರಕ್ಷಣಾ ಸಚಿವಾಲಯದ ಜಂಟಿ ಕಾರ್ಯದರ್ಶಿ ಸತ್ಯಜಿತ್ ಮೊಹಾಂತಿ ಅವರು ಸಹ ಅಧ್ಯಕ್ಷತೆ ವಹಿಸಿದ್ದರು. ಇಂಡೋ–ಪೆಸಿಫಿಕ್ ಪ್ರದೇಶದಲ್ಲಿ ವಿಕಸನಗೊಳ್ಳುತ್ತಿರುವ ಭದ್ರತಾ ಪರಿಸರದ ಬಗ್ಗೆ ಎರಡೂ ಕಡೆಯವರು ಚರ್ಚಿಸಿದರು ಮತ್ತು ಪ್ರಾದೇಶಿಕ ಬೆಳವಣಿಗೆಗಳ ಕುರಿತು ದೃಷ್ಟಿಕೋನಗಳನ್ನು ವಿನಿಮಯ ಮಾಡಿಕೊಂಡರು.

ಈ ಪ್ರದೇಶದಲ್ಲಿ ಶಾಂತಿ, ಸ್ಥಿರತೆ ಮತ್ತು ಸಮೃದ್ಧಿಯನ್ನು ಉತ್ತೇಜಿಸಲು ಸಹಕಾರವನ್ನು ಬಲಪಡಿಸುವ ಮಹತ್ವವನ್ನು ಅವರು ಪುನರುಚ್ಚರಿಸಿದರು. ಹಿಂದಿನ ಸಂವಾದದ ನಂತರ ದ್ವಿಪಕ್ಷೀಯ ರಕ್ಷಣಾ ಸಹಕಾರದಲ್ಲಿ ಆಗಿರುವ ಪ್ರಗತಿಯನ್ನು ನಿಯೋಗಗಳು ಪರಿಶೀಲಿಸಿದವು. ನಡೆಯುತ್ತಿರುವ ಮಿಲಿಟರಿ–ಮಿಲಿಟರಿ ತೊಡಗಿಸಿಕೊಳ್ಳುವಿಕೆ, ಸಾಮರ್ಥ್ಯ–ನಿರ್ಮಾಣ ಉಪಕ್ರಮಗಳು, ತರಬೇತಿ ವಿನಿಮಯ, ಕಡಲ ಸಹಕಾರ ಮತ್ತು ಪರಸ್ಪರ ಆಸಕ್ತಿಯ ಇತರ ಕ್ಷೇತ್ರಗಳನ್ನು ಚರ್ಚೆಗಳು ಒಳಗೊಂಡಿವೆ.

# ಬ್ರಿಟನ್ ದೇಶದ ರಕ್ಷಣಾ ವಿಸ್ತರಣೆ ಅನಾವರಣ


**ಲಂಡನ್, ಜೂ.30:** ಬ್ರಿಟಿಷ್ ಪ್ರಧಾನಿ ಕೀರ್ ಸ್ಟಾರ್ಮರ್ ಮಂಗಳವಾರ 2029 ರ ವೇಳೆಗೆ ವಾರ್ಷಿಕ ಮಿಲಿಟರಿ ವೆಚ್ಚವನ್ನು 80 ಶತಕೋಟಿ ಪೌಂಡ್‌ಗೆ ಹೆಚ್ಚಿಸುವ ವ್ಯಾಪಕ ರಕ್ಷಣಾ ಹೂಡಿಕೆ ಯೋಜನೆಯನ್ನು ಘೋಷಿಸಿದರು, ಇದು ಹೆಚ್ಚುತ್ತಿರುವ ಜಾಗತಿಕ ಉದ್ವಿಗ್ನತೆಗಳು, ಉಕ್ರೇನ್‌ನಲ್ಲಿ ರಷ್ಯಾದ ಯುದ್ಧ ಮತ್ತು ವೇಗವಾಗಿ ವಿಕಸನಗೊಳ್ಳುತ್ತಿರುವ ಮಿಲಿಟರಿ ತಂತ್ರಜ್ಞಾನದಿಂದ ಗುರುತಿಸಲ್ಪಟ್ಟ "ಹೆಚ್ಚು ಅಪಾಯಕಾರಿ ಮತ್ತು ಅಸ್ಥಿರ ಜಗತ್ತಿಗೆ" ಅಗತ್ಯವಾದ ಪ್ರತಿಕ್ರಿಯೆ ಎಂದು ವಿವರಿಸಿದರು. ಮೇಡನ್ಹೆಡ್‌ನಲ್ಲಿರುವ ರಕ್ಷಣಾ ಉತ್ಪಾದನಾ ಸೌಲಭ್ಯವೊಂದರಲ್ಲಿ ಮಾತನಾಡಿದ ಸ್ಟಾರ್ಮರ್, ಬ್ರಿಟನ್ ರಕ್ಷಣಾ ವೆಚ್ಚವನ್ನು ಹೆಚ್ಚುವರಿ 15 ಶತಕೋಟಿ ಪೌಂಡ್ ಹೆಚ್ಚಿಸಲಿದೆ, ಮುಂದಿನ ನಾಲ್ಕು ವರ್ಷಗಳಲ್ಲಿ ಒಟ್ಟು ರಕ್ಷಣಾ ವೆಚ್ಚವನ್ನು 300 ಶತಕೋಟಿ ಪೌಂಡ್‌ಗೆ ತೆಗೆದುಕೊಳ್ಳುತ್ತದೆ ಎಂದು ಹೇಳಿದರು. "ಜಗತ್ತು ಶಸ್ತ್ರಾಸ್ತ್ರಗಳನ್ನು ಸಂಗ್ರಹಿಸುತ್ತಿರುವಾಗ ಮತ್ತು ಆಕ್ರಮಣಶೀಲತೆ ಹೆಚ್ಚುತ್ತಿರುವಾಗ, ಯುದ್ಧವನ್ನು ತಪ್ಪಿಸಲು ಉತ್ತಮ ಮಾರ್ಗವೆಂದರೆ ಅದಕ್ಕೆ ಸಿದ್ಧತೆ ಮಾಡಿಕೊಳ್ಳುವುದು" ಎಂದು ಸ್ಟಾರ್ಮರ್ ಹೇಳಿದರು. "ರಕ್ಷಿಸಲು ಉತ್ತಮ ಮಾರ್ಗವೆಂದರೆ ತಡೆಯುವುದು, ನಿಮ್ಮ ವಿರೋಧಿಗಳು ಕಾರ್ಯನಿರ್ವಹಿಸುವ ಮೊದಲು ಮತ್ತೊಮ್ಮೆ ಯೋಚಿಸುವಂತೆ ಮಾಡುವ ಶಕ್ತಿಯನ್ನು ಹೊಂದಿರುವುದು." 2024 ರಲ್ಲಿ ಬ್ರಿಟನ್ GDP ಯ 2.3% ರಿಂದ 2029 ರ ವೇಳೆಗೆ 2.7%ಕ್ಕೆ ರಕ್ಷಣಾ ವೆಚ್ಚವನ್ನು ಹೆಚ್ಚಿಸಲಿದೆ ಎಂದು ಪ್ರಧಾನಿ ಹೇಳಿದರು, ಇದು ಮುಂದಿನ ಸಂಸತ್ತಿನಲ್ಲಿ ಉಆಕ ಯ 3% ತಲುಪುವ ಹಾದಿಯಲ್ಲಿ ದೇಶವನ್ನು ಇರಿಸುತ್ತದೆ, ಆದರೆ ವಿಶಾಲವಾದ ರಾಷ್ಟ್ರೀಯ ಭದ್ರತಾ ವೆಚ್ಚವು NATO ಗುರಿಗಳ ಕಡೆಗೆ ಹೆಚ್ಚಾಗುತ್ತದೆ. ಹೂಡಿಕೆಯು ಮಿಲಿಟರಿ ಸನ್ನದ್ಧತೆಯನ್ನು ಪುನರ್ನಿರ್ಮಿಸುವುದು, ಮದ್ದುಗುಂಡುಗಳ ದಾಸ್ತಾನುಗಳನ್ನು ಮರುಪೂರಣ ಮಾಡುವುದು ಮತ್ತು ಉಕ್ರೇನ್ನಲ್ಲಿನ ಯುದ್ಧಭೂಮಿಯಿಂದ ಕಲಿತ ಸುಧಾರಿತ ತಂತ್ರಜ್ಞಾನಗಳ ಮೂಲಕ ಬ್ರಿಟನ್‌ನ ಸಶಸ್ತ್ರ ಪಡೆಗಳನ್ನು ಪರಿವರ್ತಿಸುವುದರ ಮೇಲೆ ಕೇಂದ್ರೀಕರಿಸುತ್ತದೆ ಎಂದು ಸ್ಟಾರ್ಮರ್ ಹೇಳಿದರು. "ನಾವು 5 ಶತಕೋಟಿ ಪೌಂಡ್‌ಗಿಂತ ಹೆಚ್ಚಿನ ಹಣವನ್ನು ಡ್ರೋನ್‌ಗಳು ಮತ್ತು ಸ್ವಾಯತ್ತ ಶಸ್ತ್ರಾಸ್ತ್ರಗಳಾಗಿ ಹೂಡಿಕೆ ಮಾಡುವ ಮೂಲಕ ಇದನ್ನು ಬೆಂಬಲಿಸುತ್ತಿದ್ದೇವೆ,



ಇದು ಈ ತಂತ್ರಜ್ಞಾನದಲ್ಲಿ ಇದುವರೆಗಿನ ಅತಿದೊಡ್ಡ ಗಖ ಹೂಡಿಕೆಯಾಗಿದೆ" ಎಂದು ಅವರು ಹೇಳಿದರು. ಯೋಜನೆಯಡಿಯಲ್ಲಿ, ಬ್ರಿಟನ್ ಹೊಸ ಪೀಳಿಗೆಯ ಂಖ–ಸಕ್ರಿಯಗೊಳಿಸಿದ ಮಿಲಿಟರಿ ಸಾಮರ್ಥ್ಯಗಳನ್ನು ಅಭಿವೃದ್ಧಿಪಡಿಸುತ್ತದೆ, ಇದರಲ್ಲಿ ಯುದ್ಧನೌಕೆಗಳ ಜೊತೆಗೆ ಕಾರ್ಯನಿರ್ವಹಿಸುವ ಸ್ವಾಯತ್ತ ನೌಕಾ ಹಡಗುಗಳು, ಸೈನ್ಯಕ್ಕಾಗಿ ಸುಧಾರಿತ ಡ್ರೋನ್ ವ್ಯವಸ್ಥೆಗಳು ಮತ್ತು ಮಾನವರಹಿತ ವಿಂಗ್‌ಮನ್‌ಗಳೊಂದಿಗೆ ಕೆಲಸ ಮಾಡುವ ಮುಂದಿನ ಪೀಳಿಗೆಯ ಯುದ್ಧ ವಿಮಾನಗಳು ಸೇರಿವೆ. ಸರ್ಕಾರವು ದೀರ್ಘ–ಶ್ರೇಣಿಯ ಕ್ಷಿಪಣಿಗಳು, ಶಸ್ತ್ರಸಜ್ಜಿತ ವಾಹನಗಳು, ಪ್ರತಿ–ಡ್ರೋನ್ ವ್ಯವಸ್ಥೆಗಳು ಮತ್ತು ವಿಶೇಷ ಪಡೆಗಳ ಸಾಮರ್ಥ್ಯಗಳಲ್ಲಿಯೂ ಹೂಡಿಕೆ ಮಾಡುತ್ತದೆ, ಆದರೆ ಂಖ–ಸಂಬಂಧಿತ ಬೆದರಿಕೆಗಳ ವಿರುದ್ಧ ರಕ್ಷಣೆಯನ್ನು ಬಲಪಡಿಸಲು 115 ದಶಲಕ್ಷ ಪೌಂಡ್ ಅನ್ನು ನಿಗದಿಪಡಿಸುತ್ತದೆ. ಹೊಸ ಜಲಾಂತರ್ಗಾಮಿ ನೌಕೆಗಳಿಗೆ ಹಣಕಾಸು, ಸಾರ್ವಭೌಮ ಪರಮಾಣು ಸಿಡಿತಲೆ ಕಾರ್ಯಕ್ರಮ ಮತ್ತು 12 F-35A ಯುದ್ಧ ವಿಮಾನಗಳ ಖರೀದಿ ಸೇರಿದಂತೆ ಬ್ರಿಟನ್‌ನ ಪರಮಾಣು ನಿರೋಧಕ ವೆಚ್ಚವನ್ನು ನ64 ಶತಕೋಟಿಗೆ ಹೆಚ್ಚಿಸುವುದಾಗಿ ಸ್ಟಾರ್ಮರ್ ಘೋಷಿಸಿದರು. ಕಾರ್ಯಕ್ರಮದ ಆರ್ಥಿಕ ಪ್ರಯೋಜನಗಳನ್ನು ಎತ್ತಿ ತೋರಿಸುತ್ತಾ, ಯೋಜನೆಯು ಸುಮಾರು 60,000 ಉದ್ಯೋಗಗಳನ್ನು ಸೃಷ್ಟಿಸುತ್ತದೆ ಮತ್ತು ವಿದೇಶಿ ಒಪ್ಪಂದಗಳನ್ನು ಪಡೆದುಕೊಳ್ಳುವಲ್ಲಿ ಬ್ರಿಟಿಷ್ ರಕ್ಷಣಾ ತಯಾರಕರನ್ನು ಬೆಂಬಲಿಸಲು ಹೊಸ 50 ಶತಕೋಟಿ ರಕ್ಷಣಾ ರಫ್ತು ಸೌಲಭ್ಯವನ್ನು ಒಳಗೊಂಡಿದೆ ಎಂದು ಸ್ಟಾರ್ಮರ್‌ಹೇಳಿದರು.

# ಇರಾನ್ ತನ್ನ ಯಾವುದೇ ಸ್ಥಗಿತಗೊಂಡ ನಿಧಿಯನ್ನು ಪ್ರಸ್ತುತ ಸ್ವೀಕರಿಸುವುದಿಲ್ಲ: ಕತಾರ್ ಅಧಿಕಾರಿಗಳು ಸ್ಪಷ್ಟನೆ

**ದೋಹಾ, ಜೂನ್ 30:** ಇರಾನ್ ತನ್ನ ಯಾವುದೇ ಸ್ಥಗಿತಗೊಂಡ ನಿಧಿಯನ್ನು ಇನ್ನೂ ಸ್ವೀಕರಿಸುವುದಿಲ್ಲ ಎಂದು ಕತಾರ್ ಮಂಗಳವಾರ ಇರಾನ್ ಅಧ್ಯಕ್ಷ ಮಸೌದ್ ಪೆಜೆಶ್ಕಿಯಾನ್ ಅವರ ಪ್ರಕಟಣೆಯ ನಂತರ ತಿಳಿಸಿದೆ. ಎರಡು ವಾರಗಳ ಹಿಂದೆ ಅಮೆರಿಕದೊಂದಿಗೆ ಸಹಿ ಹಾಕಿದ ಒಡಂಬಡಿಕೆ ಭಾಗವಾಗಿ ಟೆಹ್ರಾನ್ 6 ಶತಕೋಟಿ ಡಾಲರ್ ಮೌಲ್ಯದ ಹಣವನ್ನು ಪಡೆಯಲಿದೆ. ಈ ವಿಷಯದ ಕುರಿತು ಮಾತನಾಡಿದ ಕತಾರ್ನ ವಿದೇಶಾಂಗ ಸಚಿವಾಲಯದ ವಕ್ತಾರ ಮಜೀದ್ ಅಲ್ ಅನ್ಸಾರಿ, ಇರಾನ್‌ಗೆ ಯಾವುದೇ ಹಣವನ್ನು ವರ್ಗಾಯಿಸಲಾಗಿಲ್ಲ ಎಂದು ಹೇಳಿದರು. "ಇಲ್ಲಿಯವರೆಗೆ ಯಾವುದೇ ಹಣವನ್ನು ವರ್ಗಾಯಿಸಲಾಗಿಲ್ಲ" ಎಂದು ಅಲ್ ಅನ್ಸಾರಿ ವರದಿಗಾರರಿಗೆ ತಿಳಿಸಿದರು. ಕತಾರ್ ಸ್ವತ್ತುಗಳನ್ನು ನಿಯಂತ್ರಿಸುವುದಿಲ್ಲ ಮತ್ತು ವಾಷಿಂಗ್ಟನ್ ಮತ್ತು ಟೆಹ್ರಾನ್ ನಡುವೆ ಒಪ್ಪಿಕೊಂಡ ವ್ಯವಸ್ಥೆಗಳ ಅಡಿಯಲ್ಲಿ ಕೇವಲ ಮಧ್ಯವರ್ತಿಯಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಅವರು ಒತ್ತಿ ಹೇಳಿದರು. "ಕತಾರ್ ಈ ನಿಧಿಗಳ ಮಾಲೀಕರಲ್ಲ" ಎಂದು ಅವರು ಹೇಳಿದರು. "ಪಕ್ಷಗಳ ನಡುವಿನ ಈ ಒಪ್ಪಂದದ ಚೌಕಟ್ಟಿನೊಳಗೆ ಈ ಖಾತೆಗಳನ್ನು ನಿರ್ವಹಿಸುವ ಹಣಕಾಸು



ಮಧ್ಯವರ್ತಿಯ ಪಾತ್ರವನ್ನು ಮಾತ್ರ ಇದು ವಹಿಸುತ್ತದೆ." ಯಾವುದೇ ನಿಧಿಯ ವರ್ಗಾವಣೆಯು ಅಮೆರಿಕ ಮತ್ತು ಇರಾನ್ ನಡುವಿನ ಪರಸ್ಪರ ಒಪ್ಪಂದ ಮತ್ತು ನಡೆಯುತ್ತಿರುವ ಮಾತುಕತೆಗಳಲ್ಲಿನ ಪ್ರಗತಿಯನ್ನು ಅವಲಂಬಿಸಿರುತ್ತದೆ ಎಂದು ಅಲ್ ಅನ್ಸಾರಿ ಹೇಳಿದರು. "ನಿಧಿಯನ್ನು ವರ್ಗಾಯಿಸಬೇಕೇ ಅಥವಾ ಬೇಡವೇ ಎಂಬ ವಿಷಯವನ್ನು ಎರಡೂ ಪಕ್ಷಗಳ ನಡುವಿನ ಪರಸ್ಪರ ಒಪ್ಪಂದದ ಪ್ರಕಾರ ಮತ್ತು ಮಾತುಕತೆಗಳ ಪ್ರಗತಿಯ ಪ್ರಕಾರ ನಡೆಸಲಾಗುತ್ತದೆ, ಅದು ಇನ್ನೂ ನಡೆದಿಲ್ಲ" ಎಂದು ಅವರು ಹೇಳಿದರು. ಈ ವಿಷಯವು ಮಾತುಕತೆಗಳ ಅತ್ಯಂತ ಸೂಕ್ಷ್ಮ ಮತ್ತು ಪ್ರಮುಖ ಅಂಶಗಳಲ್ಲಿ ಒಂದಾಗಿದೆ, ಇರಾನ್ಗೆ ಲಭ್ಯವಿರುವ ಯಾವುದೇ ಹಣವನ್ನು ಕಟ್ಟುನಿಟ್ಟಾದ ಮೇಲ್ವಿಚಾರಣೆಗೆ ಒಳಪಡಿಸಬೇಕು ಎಂದು ಯುಎಸ್ ಅಧಿಕಾರಿಗಳು ಒತ್ತಾಯಿಸಿದ್ದಾರೆ. ನಡೆಯುತ್ತಿರುವ ಮಾತುಕತೆಗಳ ಪರಿಣಾಮವಾಗಿ ಬಿಡುಗಡೆಯಾಗುವ ಯಾವುದೇ ಇರಾನಿನ ನಿಧಿಗಳು ಭಯೋತ್ಪಾದನೆಗೆ ಹಣಕಾಸು ಒದಗಿಸುವುದಿಲ್ಲ ಎಂದು ವಾಷಿಂಗ್ಟನ್ ಖಚಿತಪಡಿಸುತ್ತದೆ ಎಂದು ಉಪಾಧ್ಯಕ್ಷ ಜೆಡಿ ವ್ಯಾನ್ಸ್ ಕಳೆದ ವಾರ ಹೇಳಿದರು. "ನಾವು ಎಂದಾದರೂ ಇರಾನಿನ ಸ್ವತ್ತುಗಳನ್ನು ಸ್ಥಗಿತಗೊಳಿಸಿದರೆ, ಇರಾನಿನ ಹಣವು ಇರಾನ್ ಜನರಿಗೆ ಸಹಾಯ ಮಾಡಲು ಹೋಗುತ್ತದೆ ಮತ್ತು ಭಯೋತ್ಪಾದನೆಗೆ ಹಣಕಾಸು ಒದಗಿಸಲು ಅಲ್ಲ ಎಂದು ನಾವು ಖಚಿತಪಡಿಸಿಕೊಳ್ಳಬಹುದು" ಎಂದು ಅವರು ಒಪ್ಪಂದದ ಪರಿಣಾಮವಾಗಿ ಇರಾನ್ ಜೊತೆಗೆ ನಡೆದ ಮೊದಲ ಮತ್ತು ಇಲ್ಲಿಯವರೆಗೆ ಏಕೈಕ ಸುತ್ತಿನ ನೇರ ಮಾತುಕತೆಯ ಒಂದು ದಿನದ ನಂತರ ತಿಳಿಸಿದರು.

# ಜರ್ಮನಿಗೆ ಅಂತಿಮವಾಗಿ ಪರಾಗ್ವೆ ವಿರುದ್ಧ ವಿಶ್ವಕಪ್ ಪೆನಾಲ್ಟಿ ನಿರ್ಗಮನ

**ನ್ಯೂಯಾರ್ಕ್, ಜೂ.30:** ಜರ್ಮನಿ ಪರಾಗ್ವೆ ವಿರುದ್ಧದ ನಿರ್ಗಮನವು ವಿಶೇಷವಾಗಿ ಮಹತ್ವದ್ದಾಗಿದೆ. ಜರ್ಮನಿ ಪೆನಾಲ್ಟಿ ಶೂಟೌಟ್‌ನಲ್ಲಿ ಎಂದಿಗೂ ಸೋತಿಲ್ಲ ಎಂಬ ಹೆಮ್ಮೆಯ ವಿಶ್ವಕಪ್ ದಾಖಲೆಯನ್ನು ಹೊಂದಬಹುದು, ಜರ್ಮನ್‌ನರು ತಾವು ಭಾಗವಹಿಸಿದ್ದ ನಾಲ್ಕು ವಿಶ್ವಕಪ್ ಪೆನಾಲ್ಟಿ ಶೂಟೌಟಗಳಲ್ಲಿ ಗೆದ್ದಿದ್ದರು, ಅಂತಹ ಕ್ಲಿನಿಕಲ್ ದಕ್ಷತೆಯನ್ನು ತೋರಿಸಿದರು, ಸೋಮವಾರದವರೆಗೆ, ವಿಶ್ವಕಪ್ ಶೂಟೌಟ್‌ನಲ್ಲಿ ಪೆನಾಲ್ಟಿ ತಪ್ಪಿಸಿಕೊಂಡ ಏಕೈಕ ಜರ್ಮನ್ 1982 ರ ಫ್ರಾನ್ಸ್ ವಿರುದ್ಧದ ಸೆಮಿಫೈನಲ್‌ನಲ್ಲಿ ಉಲಿ ಸ್ಟೀಲೈಕ್. ಬೋಸ್ಟನ್‌ನಲ್ಲಿ ನಡೆದ ಬಿಸಿ, ಆರ್ದ್ರ ಸಂಜೆ ಜರ್ಮನಿ ವಿಶ್ವಕಪ್‌ನಿಂದ ಹೊರಗುಳಿದ ನೋವನ್ನು ಅತ್ಯಂತ ಕ್ರೂರ ರೀತಿಯಲ್ಲಿ ಕಂಡುಕೊಂಡಾಗ ಇದೆಲ್ಲವೂ ಬದಲಾಯಿತು. ಕೈ ಹ್ಯಾವರ್ಟ್ಜ್, ನಿಕ್ ವೋಲ್ಟೆಮೇಡ್ ಮತ್ತು ಜೊನಾಥನ್ ತಾಹ್ ಸೋಮವಾರ ರಾತ್ರಿ ತಮ್ಮ ಪೆನಾಲ್ಟಿಗಳನ್ನು ತಪ್ಪಿಸಿಕೊಂಡರು, ಏಕೆಂದರೆ ಜರ್ಮನಿಯು ಪಂದ್ಯದ ಬಹುಪಾಲು ಪ್ರಾಬಲ್ಯ ಹೊಂದಿದ್ದ ಪರಾಗ್ವೆ ತಂಡಕ್ಕೆ ಸ್ಪರ್ಧೆಯಿಂದ ಹೊರಬಿತ್ತು. ಮತ್ತೊಂದು ವಿಶ್ವಕಪ್ ನಿರಾಶೆಯ ಮರಣೋತ್ತರ ಪರೀಕ್ಷೆ ಈಗಾಗಲೇ ಪ್ರಾರಂಭವಾಗಿದೆ, ಕೋಚ್ ಜೂಲಿಯನ್ ನಾಗೆಲ್ಸ್ಮನ್ ಅವರ ಭವಿಷ್ಯವು ಈಗಾಗಲೇ ಅನುಮಾನದಲ್ಲಿದೆ, ಆದರೂ ಅವರು 2018 ಮತ್ತು 2022 ರಲ್ಲಿ ಜರ್ಮನಿ ಗುಂಪು ಹಂತದಲ್ಲಿ ಬಿದ್ದಾಗ ಅವರು ಸುಧಾರಿಸಿದರು.